ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜನವರಿ 9 ಶುಕ್ರವಾರ 2026

46

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್.ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸಂಪುಟ: 46 | ಸಂಚಿಕೆ: 262 | ಪುಟಗಳು: 12
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4

ಸಂಕ್ರಾಂತಿ ಪ್ರಯುಕ್ತ ಮೈಸೂರು–ಟ್ಯುಟಿಕಾರನ್‌ಗೆ ಎರಡು ವಿಶೇಷ ರೈಲು

ಮೈಸೂರು,ಜ.8(ಪಿಎಂ)– ಸಂಕ್ರಾಂತಿ ಹಬ್ಬದ ಪ್ರಯುಕ್ತ ಮೈಸೂರು–ಟ್ಯುಟಿಕಾರನ್ ನಡುವೆ ಎರಡು ವಿಶೇಷ ರೈಲು ಸಂಚಾರಕ್ಕೆ ವ್ಯವಸ್ಥೆ ಮಾಡಲಾಗಿದೆ ಮುಂದಿನ ವಾರ ಸಂಕ್ರಾಂತಿ, ಪೊಂಗಲ್ ಹಬ್ಬದ ಹಿನ್ನೆಲೆಯಲ್ಲಿ ತಮಿಳುನಾಡಿಗೆ ಹೆಚ್ಚು ಜನರು ಮೈಸೂರಿನಿಂದ ಪ್ರಯಾಣಿಸುವುದರಿಂದ ಈ ಸೌಲಭ್ಯ ಕಲ್ಪಿಸಲಾಗಿದೆ. ಮೈಸೂರು–ಕೊಡಗು ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಈ ವಿಷಯ ತಿಳಿಸಿದ್ದು, ನೈರುತ್ಯ ರೈಲ್ವೆ ಅಧಿಕಾರಿಗಳೊಂದಿಗೆ ಚರ್ಚಿಸಿ ಈ ವ್ಯವಸ್ಥೆ ಮಾಡಲಾಗಿದೆ.



ವಿಶೇಷ ರೈಲುಗಳ ವಿವರ: 06283 ಮೈಸೂರು–ಟ್ಯುಟಿಕಾರನ್ ಎಕ್ಸ್‌ಪ್ರೆಸ್ ವಿಶೇಷ ರೈಲು ಇದೇ ಜ.9 ಮತ್ತು 13ರಂದು (ಶುಕ್ರವಾರ ಮತ್ತು ಮಂಗಳವಾರ) ಮೈಸೂರಿನಿಂದ ■6ನೇ ಪುಟಕ್ಕೆ

ಗೌರಿ ಲಂಕೇಶ್ ಹತ್ಯೆ ಆರೋಪಿ ಮಹಾರಾಷ್ಟ್ರದಲ್ಲಿ ಚುನಾವಣೆಗೆ ಸ್ಪರ್ಧೆ

ಮುಂಬೈ: ಕರ್ನಾಟಕದ ಖ್ಯಾತ ಪತ್ರಕರ್ತೆ–ಕಾರ್ಯಕರ್ತೆ ಗೌರಿ ಲಂಕೇಶ್ ಹತ್ಯೆಯ ಆರೋಪಿಯೊಬ್ಬರು ಇದೀಗ ಮಹಾರಾಷ್ಟ್ರದ ಮುನ್ಸಿಪಲ್ ಕಾರ್ಪೊರೇಷನ್ ಚುನಾವಣೆಯಲ್ಲಿ ಸ್ಪರ್ಧೆ ಮಾಡುತ್ತಿದ್ದಾರೆ.



ಶ್ರೀಕಾಂತ್

ಜನವರಿ 15ರಂದು ಮಹಾರಾಷ್ಟ್ರದ ಜಲ್ನಾ ಮುನ್ಸಿಪಲ್ ಕಾರ್ಪೊರೇಷನ್ ಚುನಾವಣೆಯಲ್ಲಿ ವಾರ್ಡ್ 13 ರಿಂದ ಆರೋಪಿ ಶ್ರೀಕಾಂತ್ ಪಂಗಾರ್ಕರ್ ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧಿಸುತ್ತಿದ್ದಾರೆ. ಬಿಜೆಪಿ ಸೇರಿದಂತೆ ಹಲವು ಪಕ್ಷಗಳ ಅಭ್ಯರ್ಥಿಗಳೂ ಕಣದಲ್ಲಿದ್ದು, ಏಕನಾಥ್ ಶಿಂಧೆ ನೇತೃತ್ವದ ಶಿವಸೇನೆಯು ಮಾತ್ರ ಸ್ಪರ್ಧಿಯನ್ನು ಕಣಕ್ಕಿಳಿಸಿಲ್ಲ.

ಪ್ರಾಸಂಗಿಕವಾಗಿ, ಕಳೆದ ನವೆಂಬರ್‌ನಲ್ಲಿ ವಿಧಾನಸಭಾ ಚುನಾವಣೆಗೆ ಮುನ್ನ, ಪಂಗಾರ್ಕರ್ ಶಿವಸೇನೆಗೆ ■6ನೇ ಪುಟಕ್ಕೆ

ಮೈಸೂರಲ್ಲಿ ರೇಷ್ಮೆ ಮಾರುಕಟ್ಟೆ

● ಆಡಳಿತಾತ್ಮಕ ಅನುಮೋದನೆಗೆ ಸಂಪುಟ ಸಮ್ಮತಿ ● ಚಾ.ನಗರ ಜಿಲ್ಲೆಯಲ್ಲಿ ಬಹುಗ್ರಾಮ ಕುಡಿಯುವ ನೀರು ಕಾಮಗಾರಿಗೆ ಅನುಮೋದನೆ ● ಮಂಡ್ಯ ಕೃಷಿ ವಿವಿ ಆಡಳಿತ ಭವನ ಕಾಮಗಾರಿಗೆ ಅನುಮತಿ ● ಕೊಡಗು ಗೌಡ ಸಮಾಜಕ್ಕೆ ಭೂಮಿ ಮಂಜೂರಾತಿಗೆ ಒಪ್ಪಿಗೆ ● ಸನ್ನಡತೆ ಮೇಲೆ ಜೀವಾವಧಿ ಶಿಕ್ಷಿತರ ಬಿಡುಗಡೆ



ಸಾಂದರ್ಭಿಕ ಚಿತ್ರ

ಬೆಂಗಳೂರು, ಜ.8– ಮೈಸೂರಿನಲ್ಲಿ ರೇಷ್ಮೆ ಗೂಡಿನ ಮಾರುಕಟ್ಟೆ ಸ್ಥಾಪಿಸಲು ಆಡಳಿತಾತ್ಮಕ ಅನುಮೋದನೆ ನೀಡಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ.

ಮೈಸೂರು ಮತ್ತು ಸುತ್ತಮುತ್ತಲಿನ ಭಾಗದ ರೇಷ್ಮೆ ಬೆಳೆಗಾರರಿಗೆ ಅನುಕೂಲವಾಗುವಂತೆ ನಬಾರ್ಡ್ ಸಹಯೋಗದಲ್ಲಿ 20 ಕೋಟಿ ಅಂದಾಜು ಮೊತ್ತದಲ್ಲಿ ರೇಷ್ಮೆ ಮಾರುಕಟ್ಟೆ ನಿರ್ಮಿಸಲು ಉದ್ದೇಶಿಸಲಾಗಿದ್ದು, ಈ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ನೀಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಗುರುವಾರ ನಡೆದ 2026ನೇ ಸಾಲಿನ 2ನೇ ಸಚಿವ ಸಂಪುಟ ಸಭೆಯಲ್ಲಿ ನಿರ್ಧರಿಸಲಾಗಿದೆ.

ಬಹುಗ್ರಾಮ ಕುಡಿಯುವ ನೀರು: ಚಾಮರಾಜನಗರ ಜಿಲ್ಲೆ ಹಾಗೂ ತಾಲೂಕಿನ 166 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ 3 ವರ್ಷಗಳ ಕಾರ್ಯಾಚರಣೆ ಮತ್ತು ನಿರ್ವಹಣೆಯ ಕಾಮಗಾರಿಯನ್ನು 33.04 ಕೋಟಿಗಳ ಅಂದಾಜು ಮೊತ್ತದಲ್ಲಿ, ಗುಂಡ್ಲುಪೇಟೆ ತಾಲೂಕಿನ 131 ಗ್ರಾಮಗಳ ಹಾಗೂ ಮಾರ್ಗ ಮಧ್ಯದ 32 ಗ್ರಾಮಗಳ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯ 3 ವರ್ಷಗಳ ಕಾರ್ಯಾಚರಣೆ ಮತ್ತು ನಿರ್ವಹಣೆಯ ಕಾಮಗಾರಿಯನ್ನು 27.38 ಕೋಟಿ ಅಂದಾಜು ಮೊತ್ತದಲ್ಲಿ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.



ಸಿದ್ದರಾಮಯ್ಯ

ಕೃಷಿ ಆಡಳಿತ ಭವನ ಕಾಮಗಾರಿ: ನಬಾರ್ಡ್ ಪ್ರಾಯೋಜಿತ ಆರ್.ಐ.ಡಿ.ಎಫ್ ಟ್ರಾಂಚ್ 31ರಡಿ ಮಂಡ್ಯದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ಆಡಳಿತ ಭವನ ನಿರ್ಮಾಣದ ಕಾಮಗಾರಿಯನ್ನು ಲೋಕೋಪಯೋಗಿ ಇಲಾಖೆಯ ಮೂಲಕ ಅನುಷ್ಠಾನಗೊಳಿಸಲು ಅನುಮೋದನೆಯಾಗಿರುವ 70.70 ಕೋಟಿ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಲು ಸಚಿವ ಸಂಪುಟ ನಿರ್ಧರಿಸಿದೆ.

ಹಾಗೆಯೇ ಭಾರತಿ ಎಜುಕೇಷನ್ ಟ್ರಸ್ಟ್(ರಿ)ಗೆ ಮಂಜೂರು ಮಾಡಿರುವ ಮದ್ದೂರು ತಾಲೂಕಿನ ಮೆಳ್ಳಹಳ್ಳಿ ಗ್ರಾಮದ 17 ಎಕರೆ 06 ಗುಂಟೆ ಜಮೀನಿಗೆ ವಿಧಿಸಿರುವ ಮೊತ್ತವನ್ನು ಪರಿಷ್ಕರಿಸಲು ಸಚಿವ ಸಂಪುಟ ಒಪ್ಪಿದೆ.

ಕೊಡಗು ಗೌಡ ಸಮಾಜಕ್ಕೆ ಭೂಮಿ: ಕೊಡಗು ಜಿಲ್ಲೆ, ಮಡಿಕೇರಿ ತಾಲೂಕು, ಸಂಪಾಜೆ ಹೋಬಳಿ, ಮದೆ ಗ್ರಾಮದ ಸ.ನಂ.98/1 ರಲ್ಲಿನ 2–3 ಎಕರೆ ಜಮೀನನ್ನು ಅರೆಭಾಷಿಕ ಗೌಡ ಜನಾಂಗಕ್ಕೆ ಸಾಂಸ್ಕೃತಿಕ, ಶೈಕ್ಷಣಿಕ ಮತ್ತು ಕ್ರೀಡಾ ಕೇಂದ್ರ ಸ್ಥಾಪನೆ ಉದ್ದೇಶಕ್ಕೆ 'ಕೊಡಗು ಗೌಡ ಸಮಾಜ'ಕ್ಕೆ ಮಂಜೂರು ಮಾಡಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ. ಹಾಸನ ಜಿಲ್ಲೆ ಹೊಳೆನರಸೀಪುರ ಪಟ್ಟಣದಲ್ಲಿ ತಾಲೂಕು ಪಂಚಾಯಿತಿ ಕಚೇರಿ ಕಟ್ಟಡ ನಿರ್ಮಾಣ ಕಾಮಗಾರಿಯ 12.30 ಕೋಟಿಗಳ ಪರಿಷ್ಕೃತ ಅಂದಾಜು ಮೊತ್ತಕ್ಕೆ ಅನುಮೋದನೆ ದೊರೆತಿದೆ.

ಜೀವಾವಧಿ ಶಿಕ್ಷಿತರ ಬಿಡುಗಡೆ: ರಾಜ್ಯದ ವಿವಿಧ ಕೇಂದ್ರ ಕಾರಾಗೃಹಗಳಲ್ಲಿರುವ ■6ನೇ ಪುಟಕ್ಕೆ

ನಗರ ಸ್ಥಳೀಯ ಸಂಸ್ಥೆ ವ್ಯಾಪಿ ಬಿ ಖಾತಾಗೆ ಎ ಖಾತಾ ನೀಡಲು ತೀರ್ಮಾನ

ಬೆಂಗಳೂರು, ಜ.8– ರಾಜ್ಯ ಸರ್ಕಾರ, ರಾಜಧಾನಿ ಬೆಂಗಳೂರಿನ ನಂತರ ಇದೀಗ ರಾಜ್ಯಾದ್ಯಂತ ಆಸ್ತಿ ಮಾಲೀಕರಿಗೆ ಸಿಹಿ ಸುದ್ದಿ ನೀಡಿದೆ. ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲೂ 'ಬಿ' ಖಾತಾಗೆ 'ಎ' ಖಾತಾ ಮಾನ್ಯತೆ ನೀಡಲು ಗುರುವಾರ ಸಚಿವ ಸಂಪುಟ ಸಭೆಯಲ್ಲಿ ಮಹತ್ವದ ತೀರ್ಮಾನ ಕೈಗೊಳ್ಳಲಾಗಿದೆ.



ಹೆಚ್.ಕೆ. ಪಾಟೀಲ್

ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯ ನಂತರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಸಚಿವ ಹೆಚ್.ಕೆ. ಪಾಟೀಲ್ ಈ ವಿಷಯ ತಿಳಿಸಿ, ರಾಜ್ಯದ ಮಹಾನಗರ ಪಾಲಿಕೆಗಳು, ನಗರಸಭೆ ವ್ಯಾಪ್ತಿಯ ಅಕ್ರಮ ಬಡಾವಣೆಗಳಲ್ಲಿರುವ ಬಿ ಖಾತಾ ಆಸ್ತಿಗಳಿಗೆ ಎ ಖಾತಾ ನೀಡಲು ಸಂಪುಟ ಸಭೆ ಅನುಮೋದನೆ ನೀಡಿದೆ ಎಂದರು. ಗ್ರೇಟರ್ ಬೆಂಗಳೂರು ಅಥಾರಿಟಿ ಮಾದರಿಯಲ್ಲೇ ■6ನೇ ಪುಟಕ್ಕೆ

ಅರಸು ದಾಖಲೆ ಮುರಿದಾಯ್ತು...! ಇನ್ನು ಅಧಿಕಾರ ಹಸ್ತಾಂತರ ಕುತೂಹಲ!!

ಜ.16ರ ಬಳಿಕ ಸಿಎಂ, ಡಿಸಿಎಂಗೆ ವರಿಷ್ಠರ ಬುಲಾವ್!?

ಬೆಂಗಳೂರು, ಜ.8(ಕೆಎಂಶಿ)– ದೇವರಾಜ ಅರಸು ದಾಖಲೆ ಮುರಿಯುತ್ತಿದ್ದಂತೆ ಅಧಿಕಾರ ಹಸ್ತಾಂತರ ವಿಚಾರಕ್ಕೆ ಅಂತಿಮ ಸ್ವರೂಪ ನೀಡಲು ಕಾಂಗ್ರೆಸ್ ವರಿಷ್ಠರು ಜನವರಿ 16ರ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರಿಗೆ ದೆಹಲಿಗೆ ಬುಲಾವ್ ಮಾಡಲಿದ್ದಾರೆನ್ನಲಾಗಿದೆ.



ಅನಾರೋಗ್ಯದಿಂದ ಆಸ್ಪತ್ರೆಗೆ ದಾಖಲಾಗಿರುವ ಪಕ್ಷದ ಅಧಿನಾಯಕಿ ಸೋನಿಯಾ ಗಾಂಧಿ ಬಿಡುಗಡೆ ಆಗುತ್ತಿದ್ದಂತೆ ಇದೇ ತಿಂಗಳ 16 ಇಲ್ಲವೇ 17 ರಂದೇ ಎಐಸಿಸಿ ಸಭೆ ಕರೆಯಲು ನಿರ್ಧರಿಸಿದ್ದಾರೆ. ಅರಸು ದಾಖಲೆ ಮುರಿಯುವವರೆಗೂ ಸಿದ್ದರಾಮಯ್ಯ ಅವರಿಗೆ ಮುಖ್ಯಮಂತ್ರಿಯಾಗಿ ಮುಂದುವರೆಯಲು ವರಿಷ್ಠರು ಅವಕಾಶ ಮಾಡಿಕೊಟ್ಟಿದ್ದರಂತೆ. ಇದಕ್ಕೆ ಶಿವಕುಮಾರ್ ಒಪ್ಪಿಗೆಯೂ ಇತ್ತಂತೆ. ಮುಖ್ಯಮಂತ್ರಿ ಅಧಿಕಾರಾವಧಿ ದಾಖಲೆ ಮುರಿದ ನಂತರವೂ ■6ನೇ ಪುಟಕ್ಕೆ

ಡಿಕೆಶಿ ಅಸ್ಸಾಂ ಉಸ್ತುವಾರಿ; ಅಧಿಕಾರ ಹಸ್ತಾಂತರ ವಿಳಂಬ?!

ಬೆಂಗಳೂರು, ಜ.8– ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಅಸ್ಸಾಂ ವಿಧಾನಸಭಾ ಚುನಾವಣೆ ಉಸ್ತುವಾರಿಯಾಗಿ ನೇಮಕ ಮಾಡಿರುವ ಕಾಂಗ್ರೆಸ್ ಹೈಕಮಾಂಡ್ ನಡೆಯಿಂದ ರಾಜ್ಯದಲ್ಲಿ ಅಧಿಕಾರ ಹಸ್ತಾಂತರ ಪ್ರಕ್ರಿಯೆ ವಿಳಂಬವಾಗುವ ಸಾಧ್ಯತೆ ಇದೆ ಎಂದು ಉನ್ನತ ಮೂಲಗಳು ಅಭಿಪ್ರಾಯಪಟ್ಟಿವೆ.

ಬೇರೆ ಆಯ್ಕೆಗಳಿಲ್ಲ: ಡಿಸಿಎಂ ಡಿಕೆಶಿ

ಅಸ್ಸಾಂ, ತಮಿಳುನಾಡು, ಪಶ್ಚಿಮ ಬಂಗಾಲ ಸೇರಿ ಐದು ರಾಜ್ಯಗಳ ಚುನಾವಣೆ ಮಾರ್ಚ್ ವೇಳೆಗೆ ನಡೆಯಲಿದೆ. ಡಿಸಿಎಂ ಡಿ.ಕೆ.ಶಿವಕುಮಾರ್ ಅವರನ್ನು ಅಸ್ಸಾಂ ಕಾಂಗ್ರೆಸ್ ಚುನಾವಣಾ ಉಸ್ತುವಾರಿಯಾಗಿ ನೇಮಿಸಿರುವುದರಿಂದ ಸದ್ಯಕ್ಕೆ ಅಧಿಕಾರ ಹಸ್ತಾಂತರ ಪ್ರಶ್ನೆಯೇ ಉದ್ಭವಿಸುವುದಿಲ್ಲ. ಇನ್ನೇನಿದ್ದರೂ ಈ ರಾಜ್ಯಗಳ ಚುನಾವಣೆ ಮುಗಿದು ಫಲಿತಾಂಶ ಪ್ರಕಟವಾದ ನಂತರವೇ ಹೈಕಮಾಂಡ್ ಇತ್ತ ಗಮನಹರಿಸುವ ಸಾಧ್ಯತೆಗಳಿವೆ. ಅಲ್ಲಿವರೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯರ ಸ್ಥಾನವೂ ಭದ್ರ. ಜೊತೆಗೆ ಸದ್ಯಕ್ಕೆ ತಲೆನೋವು ತಪ್ಪುತ್ತದೆ ಎಂಬ ಲೆಕ್ಕಾಚಾರವೂ ವರಿಷ್ಠರದ್ದಾಗಿದೆ ಎಂದು ಹೇಳಲಾಗುತ್ತಿದೆ.

ಈ ಮಧ್ಯೆ ತಮ್ಮನ್ನು ಅಸ್ಸಾಂಗೆ ಪಕ್ಷದ ಉಸ್ತುವಾರಿಯಾಗಿ ನೇಮಿಸಿರುವುದರ ಬಗ್ಗೆ ಪ್ರತಿಕ್ರಿಯಿಸಿರುವ ಡಿ.ಕೆ.ಶಿವಕುಮಾರ್, ಬೇರೆ ಆಯ್ಕೆಗಳಿಲ್ಲ. ಕಾಂಗ್ರೆಸ್ಸಿಗನಾಗಿ, ಪಕ್ಷಕ್ಕಾಗಿ ಕೆಲಸ ಮಾಡಬೇಕಿದೆ ಎಂದು ಹೇಳಿದ್ದಾರೆ.

ದತ್ತು ಪುತ್ರಿ ಮೇಲೆ ಕ್ರೌರ್ಯ

ಖಾಸಗಿ ಅಂಗಕ್ಕೆ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿದ ಮಹಿಳೆ

ಗುಂಡ್ಲುಪೇಟೆ, ಜ.8 (ಸೋಮ್.ಜಿ)– ದತ್ತು ಪುತ್ರಿ ಮೇಲೆ ಮಹಿಳೆಯೊಬ್ಬರು ದೌರ್ಜನ್ಯ ನಡೆಸಿ, ಆಕೆಯ ಖಾಸಗಿ ಅಂಗಕ್ಕೆ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿ ಕ್ರೌರ್ಯ ಮೆರೆದಿರುವ ಘಟನೆ ಪಟ್ಟಣದ ಕೆ.ಎಸ್. ನಾಗರತ್ನಮ್ಮ ಬಡಾವಣೆಯಲ್ಲಿ ಗುರುವಾರ ಬೆಳಗ್ಗೆ ನಡೆದಿದೆ.

ತಾಲೂಕಿನ ನೇನೇಕಟ್ಟೆ ಗ್ರಾಮದ ನಿವಾಸಿ, ಮೈಸೂರಿನಲ್ಲಿ ಟೈಲರ್ ವೃತ್ತಿ ಮಾಡುವ ಪುಟ್ಟರಾಜಾಚಾರಿ ಅವರ ಪತ್ನಿ ಸೌಮ್ಯ ಈ ಅಮಾನವೀಯ ಕೃತ್ಯ ಎಸಗಿದವರು.

ವಿವರ: ಪುಟ್ಟರಾಜಾಚಾರಿ, ತಮ್ಮ ಮೊದಲ ಹೆಂಡತಿ ತೊರೆದ ಬಳಿಕ ಸೌಮ್ಯಳನ್ನು ವಿವಾಹವಾಗಿದ್ದರು. ಇಬ್ಬರಿಗೂ ಮಕ್ಕಳಾಗಿರಲಿಲ್ಲ. ಹೀಗಾಗಿ ಪುಟ್ಟರಾಜಾಚಾರಿ, ಕಳೆದ 12 ವರ್ಷದ ಹಿಂದೆ ಹೆಣ್ಣು ಮಗುವನ್ನು ದತ್ತು ಪಡೆದು ಸಾಕುತ್ತಿದ್ದರು. ಪುಟ್ಟರಾಜಾಚಾರಿ ಮೈಸೂರಿನಲ್ಲಿ ಟೈಲರ್ ವೃತ್ತಿ ಮಾಡಿಕೊಂಡಿದ್ದು, ಪತ್ನಿ ಸೌಮ್ಯ ಹಾಗೂ ಬಾಲಕಿಯೊಂದಿಗೆ ಗುಂಡ್ಲುಪೇಟೆಯಲ್ಲಿ ವಾಸವಾಗಿದ್ದರು.

ಈಗ 6ನೇ ತರಗತಿ ಓದುತ್ತಿರುವ ಬಾಲಕಿಗೆ ಸೌಮ್ಯ ವಿನಾಕಾರಣ ನಿಂದಿಸುವುದು, ಥಳಿಸುವುದು ಸೇರಿದಂತೆ ಹಿಂಸೆ ನೀಡಲಾರಂಭಿಸಿದ್ದಾಳೆ. ಇದು ಮಿತಿ ಮೀರಿ ಬಾಲಕಿಯ ಖಾಸಗಿ ಅಂಗದ ಮೇಲೂ ಹಾಗಾಗ ಹಲ್ಲೆ ನಡೆಸಿ ವಿಕೃತಿ ಮೆರೆದಿದ್ದಾಳೆ. ಗುರುವಾರ ಬೆಳಗ್ಗೆಯೂ ಸೌಮ್ಯ, ಬಾಲಕಿಯ ಮೇಲೆ ಹಲ್ಲೆ ನಡೆಸಿ, ಆಕೆಯ ಖಾಸಗಿ ಅಂಗಕ್ಕೆ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿದ್ದಾಳೆ. ಈ ವೇಳೆ ಬಾಲಕಿ ಚೀರಾಟ ಗಮನಿಸಿದ ಅಕ್ಕಪಕ್ಕದ ಮನೆಯವರು ಧಾವಿಸಿ ಬಾಲಕಿಯನ್ನು ರಕ್ಷಿಸಿ, ಪಟ್ಟಣದ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿದ್ದಾರೆ. ಈ ವೇಳೆ ಸಣ್ಣಪುಟ್ಟದಾಗಿ ಗಾಯಗೊಂಡಿದ್ದ ಬಾಲಕಿ ಚಿಕಿತ್ಸೆ ಪಡೆಯುತ್ತಿದ್ದಾಳೆ. ಈ ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಗುಂಡ್ಲುಪೇಟೆ ಠಾಣೆ ಪೊಲೀಸರು ಅಕ್ಕಪಕ್ಕದ ನಿವಾಸಿಗಳಿಂದ ಮಾಹಿತಿ ಪಡೆದು ಬಾಲಕಿ ತಾಯಿ ಸೌಮ್ಯಳನ್ನು ವಿಚಾರಣೆಗೆ ಒಳಪಡಿಸಿದ್ದಾರೆ.

ಈ ಸಂಬಂಧ ಬಾಲಕಿ ತಂದೆ ಪುಟ್ಟರಾಜಾಚಾರಿ ವಿಚಾರಿಸಲಾಗಿ ನನಗೇನೂ ಮಾಹಿತಿ ಇಲ್ಲ ಎಂದು ಹೇಳುತ್ತಿದ್ದು, ಸಾರ್ವಜನಿಕರ ಅನುಮಾನಕ್ಕೆ ಕಾರಣವಾಗಿದೆ. ಗುಂಡ್ಲುಪೇಟೆ ■6ನೇ ಪುಟಕ್ಕೆ

ಕೇರಳದ ಕನ್ನಡ ಶಾಲೆಯಲ್ಲಿ ಮಲಯಾಳಂ ಕಲಿಕೆ ಕಡ್ಡಾಯ

● ಮುಖ್ಯಮಂತ್ರಿ ಸಿದ್ದರಾಮಯ್ಯ ಖಂಡನೆ ● ಗಡಿ ಜಿಲ್ಲೆಗಳ ಕನ್ನಡಿಗರು ಮಾತೃಭಾಷೆಯಿಂದ ವಂಚಿತರಾಗುವ ಆತಂಕ

ಬೆಂಗಳೂರು, ಜ.8– ಕೇರಳದ ಕನ್ನಡ ಮಾಧ್ಯಮ ಶಾಲೆಗಳಲ್ಲಿ ಪ್ರಥಮ ಭಾಷೆಯಾಗಿ ಮಲಯಾಳಂ ಕಲಿಕೆಯನ್ನು ಕಡ್ಡಾಯಗೊಳಿಸಲು ಮುಂದಾಗಿರುವ ಕೇರಳ ಸರ್ಕಾರದ ನಡೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಖಂಡಿಸಿದ್ದಾರೆ.

ಪ್ರಸ್ತಾಪಿತ ಮಲೆಯಾಳಿ ಭಾಷಾ ಮಸೂದೆ–2025, ಸಂವಿಧಾನ ಖಾತರಿ ಮಾಡಿರುವ ಭಾಷಾ ಸ್ವಾತಂತ್ರ್ಯದ ಮೇಲಿನ ಪ್ರಹಾರವಾಗಿದೆ ಎಂದು ಹೇಳಲು ವಿಷಾದಿಸುತ್ತೇನೆ. ಇಂತಹದ್ದೊಂದು ಕಾನೂನು ಜಾರಿಗೆ ಬಂದರೆ ಕೇರಳದ ಗಡಿಜಿಲ್ಲೆಗಳಲ್ಲಿ ಮುಖ್ಯವಾಗಿ ಕಾಸರಗೋಡಿನಲ್ಲಿ ವಾಸಿಸುತ್ತಿರುವ ಕನ್ನಡಿಗರು ಮಾತೃಭಾಷೆಯನ್ನು ಕಲಿಯುವ ಅವಕಾಶದಿಂದ ವಂಚಿತರಾಗಲಿದ್ದಾರೆ. ಭಾಷಾ ಅಲ್ಪಸಂಖ್ಯಾತರ ಮೂಲಭೂತ ಹಕ್ಕನ್ನು ದಮನ ಮಾಡುವ ಇಂತಹ ನಡೆಯನ್ನು ಕೇರಳದ ಕಮ್ಯುನಿಸ್ಟ್ ಸರ್ಕಾರದಿಂದ ನಾವು ನಿರೀಕ್ಷಿಸಿರಲಿಲ್ಲ ಎಂದು ಸಾಮಾಜಿಕ ಮಾಧ್ಯಮ ಜಾಲತಾಣದಲ್ಲಿ ಬೇಸರ ವ್ಯಕ್ತಪಡಿಸಿದ್ದಾರೆ.



ಕಾಸರಗೋಡು ಇಂದು ಆಡಳಿತಾತ್ಮಕವಾಗಿ ಕೇರಳ ರಾಜ್ಯಕ್ಕೆ ಸೇರಿದ್ದರೂ ಅದು ಭಾವನಾತ್ಮಕವಾಗಿ ಕರ್ನಾಟಕ ರಾಜ್ಯಕ್ಕೆ ಸೇರಿದ್ದಾಗಿದೆ. ಅಲ್ಲಿನ ಜನ ಕನ್ನಡ ಭಾಷೆ, ಸಂಸ್ಕೃತಿ, ಸಾಹಿತ್ಯದ ಜೊತೆ ಮಿಳಿತವಾಗಿದ್ದಾರೆ. ಅವರು ಕರ್ನಾಟಕದ ಕನ್ನಡಿಗರಿಗಿಂತ ಕಡಿಮೆ ಕನ್ನಡಿಗರೇನಲ್ಲ. ಅವರ ಹಿತವನ್ನು ರಕ್ಷಿಸುವುದು ನಮ್ಮ ಸರ್ಕಾರದ ಕರ್ತವ್ಯವಾಗಿದೆ. ವೈವಿಧ್ಯತೆಯಲ್ಲಿ ಏಕತೆಯನ್ನು ಕಾಣುವ ಭಾರತದ ಪ್ರತಿಯೊಬ್ಬ ಪ್ರಜೆಗೂ ಅವರ ಮಾತೃಭಾಷೆಯಲ್ಲಿ ಕಲಿಯುವ ಸ್ವಾತಂತ್ರ್ಯ ಇದೆ. ಈ ಹಿನ್ನೆಲೆಯಲ್ಲಿ ಕೇರಳ ವಿಧಾನಸಭೆ ಅಂಗೀಕರಿಸಿರುವ ಮಲೆಯಾಳಿ ಭಾಷಾ ಮಸೂದೆ–2025 ಅನ್ನು ತಕ್ಷಣ ಹಿಂದೆಗೆದುಕೊಳ್ಳಬೇಕೆಂದು ಕೇರಳದ ಮುಖ್ಯಮಂತ್ರಿ ಪಿಣರಾಯ್ ವಿಜಯನ್ ಅವರನ್ನು ಆಗ್ರಹಿಸುತ್ತೇನೆ.

ಭಾಷಾ ಅಲ್ಪಸಂಖ್ಯಾತರಿಗೆ ಮಾತೃಭಾಷೆ ಎನ್ನುವುದು ಕೇವಲ ಭಾಷೆ ಅಲ್ಲ, ಅದು ಅವರಿಗೆ ಘನತೆಯ ಬದುಕು ನೀಡುವ ಅಸ್ಮಿತೆಯಾಗಿರುತ್ತದೆ. ಮಾತೃಭಾಷೆಯಲ್ಲಿ ಕಲಿಯುವ ಮಕ್ಕಳು ಸುಲಭದಲ್ಲಿ ವಿಷಯಗಳನ್ನು ಗ್ರಹಿಸುತ್ತಾರೆ ಎನ್ನುವುದು ವೈಜ್ಞಾನಿಕವಾಗಿ ಸಾಬೀತಾಗಿದೆ. ಅವರ ಮೇಲೆ ಅನ್ಯಭಾಷೆಯನ್ನು ಹೇರುವುದರಿಂದ ಅವರ ಕಲಿಕಾ ಸಾಮರ್ಥ್ಯವನ್ನು ಕುಂದಿಸುವುದು ಮಾತ್ರವಲ್ಲ, ಒಂದು ಸ್ವತಂತ್ರಭಾಷೆಯ ಅವಸಾನಕ್ಕೆ ದಾರಿ ■6ನೇ ಪುಟಕ್ಕೆ

ನಟಿ ಜಯಮಾಲಾ, ಸಾರಾ ಗೋವಿಂದ್‌ಗೆ ಡಾ.ರಾಜ್‌ಕುಮಾರ್ ಪ್ರಶಸ್ತಿ



ಡಾ.ಜಯಮಾಲಾ



ಸಾ.ರಾ.ಗೋವಿಂದ್

ಬೆಂಗಳೂರು, ಜ.8– ರಾಜ್ಯ ಸರ್ಕಾರ 2020 ಮತ್ತು 2021ನೇ ಸಾಲಿನ ಡಾ.ರಾಜ್‌ಕುಮಾರ್, ಪುಟ್ಟಣ್ಣ ಕಣಗಾಲ್ ಹಾಗೂ ಡಾ.ವಿಷ್ಣುವರ್ಧನ್ ಪ್ರಶಸ್ತಿಗಳನ್ನು ಗುರುವಾರ ಪ್ರಕಟಿಸಿದೆ.

2020ನೇ ಸಾಲಿನ ಡಾ.ರಾಜ್‌ಕುಮಾರ್ ಪ್ರಶಸ್ತಿಯನ್ನು ಹಿರಿಯ ನಟಿ ಡಾ.ಜಯಮಾಲಾ, 2021ನೇ ಸಾಲಿನ ಪ್ರಶಸ್ತಿಯನ್ನು ಹಿರಿಯ ನಿರ್ಮಾಪಕ ಸಾ.ರಾ.ಗೋವಿಂದ್ ಅವರಿಗೆ ಘೋಷಿಸಲಾಗಿದೆ. 2020ನೇ ಸಾಲಿನ ಪುಟ್ಟಣ್ಣ ಕಣಗಾಲ್ ಪ್ರಶಸ್ತಿಯನ್ನು ಹಿರಿಯ ನಿರ್ದೇಶಕ ಹಾಗೂ ರಂಗಭೂಮಿ ಕಲಾವಿದ ಎಂ.ಎಸ್.ಸತ್ಯು, 2021ನೇ ಸಾಲಿನ ಈ ಪ್ರಶಸ್ತಿಗೆ ನಿರ್ದೇಶಕ ಶಿವರುದ್ರಯ್ಯ ಭಾಜನರಾಗಿದ್ದಾರೆ. ಇನ್ನು ಜೀವಮಾನದ ಸಾಧನೆಗಾಗಿ ರಾಜ್ಯ ಸರ್ಕಾರ ನೀಡುವ ಡಾ.ವಿಷ್ಣುವರ್ಧನ್ ■6ನೇ ಪುಟಕ್ಕೆ

12 ವರ್ಷದಿಂದ ತಲೆಮರೆಸಿಕೊಂಡಿದ್ದ ಮರಿವೀರಪ್ಪನ್ ಮೈಸೂರಲ್ಲಿ ಬಂಧನ

■ ಚಾಮರಾಜಪುರಂ ರೈಲ್ವೆ ನಿಲ್ದಾಣದಲ್ಲಿ ಸಿನಿಮೀಯ ರೋಚಕ ಕಾರ್ಯಾಚರಣೆಯಲ್ಲಿ ಸೆರೆ ಹಿಡಿದ ಅರಣ್ಯ ಸಂಚಾರಿ ದಳ
■ ಮೂರು ಹುಲಿಗಳ ಕೊಂದು ತಲೆಮರೆಸಿಕೊಂಡಿದ್ದ 'ಶಿಕಾರಿ' ಗೋವಿಂದ ■ ಈತನ ವಿರುದ್ಧ ಕೊಲೆ ಪ್ರಕರಣಗಳೂ ದಾಖಲಾಗಿವೆ

ಮೈಸೂರು, ಜ.8(ಎಂಟಿವೈ)– ಮೂರು ಹುಲಿ ಬೇಟೆಯಾಡಿ, ಹಲವು ವರ್ಷಗಳಿಂದ ತಲೆ ಮರೆಸಿಕೊಂಡಿದ್ದ ನಟೋರಿಯಸ್ ಬೇಟೆಗಾರನೊಬ್ಬನನ್ನು ಅರಣ್ಯ ಸಂಚಾರಿ ದಳದ ಸಿಬ್ಬಂದಿ ಸಿನಿಮೀಯ ರೋಚಕ ಕಾರ್ಯಾಚರಣೆ ಮೂಲಕ ಬಂಧಿಸಿರುವ ಘಟನೆ ಕಳೆದ ರಾತ್ರಿ ಚಾಮರಾಜಪುರಂ ರೈಲ್ವೆ ನಿಲ್ದಾಣದ ಬಳಿ ನಡೆದಿದೆ.

ಮಲೆ ಮಹದೇಶ್ವರ ವನ್ಯಧಾಮದಲ್ಲಿ ವಿವಿಧ ಅರಣ್ಯ ಅಪರಾಧ ಕೃತ್ಯಗಳಲ್ಲಿ ಪಾಲ್ಗೊಂಡು 'ಮರಿ ವೀರಪ್ಪನ್' ಕುಖ್ಯಾತಿಯ ಚಾಮರಾಜನಗರ ಜಿಲ್ಲೆ ಹನೂರು ತಾಲೂಕು ಗಂಗನದೊಡ್ಡಿ ಗ್ರಾಮದ ಮುನಿಸ್ವಾಮಿ ಮಗ ಗೋವಿಂದ ಅಲಿಯಾಸ್ ಮರಿವೀರಪ್ಪನ್(32) ಬಂಧಿತ ಕುಖ್ಯಾತ ಬೇಟೆಗಾರನಾಗಿದ್ದು, ಕಳೆದ 12 ವರ್ಷದಿಂದಲೂ ಅರಣ್ಯ ಇಲಾಖೆ ಅಧಿಕಾರಿಗಳಿಗೆ ಚಳ್ಳೆಹಣ್ಣು ತಿನ್ನಿಸಿ ತಲೆ ಮರೆಸಿಕೊಂಡಿದ್ದ. ಕೊನೆಗೂ ರೋಚಕ ಕಾರ್ಯಾಚರಣೆ ಮೂಲಕ ಮೈಸೂರು ಅರಣ್ಯ ಸಂಚಾರಿ ದಳ ಸಿಬ್ಬಂದಿ ಗೋವಿಂದನನ್ನು ಬಂಧಿಸುವಲ್ಲಿ ಯಶಸ್ವಿಯಾಗಿದೆ.

ವಿಚಾರಣೆಗೆ ಬಂದು ಕಣ್ಣಾಮುಚ್ಚಾಲೆ ಆಡಿದ್ದ: 2023ರ ವಿಧಾನಸಭಾ ಚುನಾವಣೆ ವೇಳೆ ಮೈಸೂರು ವಿಜಯನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಕಾರೊಂದನ್ನು ಅಡ್ಡಗಟ್ಟಿ, ಅದರೊಳಗಿದ್ದ ಮೂವರ ಮೇಲೆ ಹಲ್ಲೆ ಮಾಡಿ 2.5 ಕೋಟಿ ರೂ. ದೋಚಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಚಾರಣೆಗೆ ಹಾಜರಾಗಲು ಗೋವಿಂದ ಮೈಸೂರು ನ್ಯಾಯಾಲಯಕ್ಕೆ ಸ್ನೇಹಿತರೊಂದಿಗೆ ಬಂದಿದ್ದ. ನ್ಯಾಯಾಲಯದ ಹೊರಗೆ ಅರಣ್ಯ ಸಿಬ್ಬಂದಿಗಳಿರುವ ವಿಚಾರ ತಿಳಿದು, ವಿಚಾರಣೆ ಮುಗಿದರೂ ಕೋರ್ಟ್ ಆವರಣದಿಂದ ಹೊರಗೆ ಬರದೇ ರಾತ್ರಿ 8 ಗಂಟೆವರೆಗೂ ಅಲ್ಲೇ ಬಚ್ಚಿಟ್ಟುಕೊಂಡಿದ್ದ. ಈತನಿಗಾಗಿ ಅರಣ್ಯ ಸಂಚಾರಿ ದಳ ರಾತ್ರಿವರೆಗೂ ಕೋರ್ಟ್ ಮುಂದೆ ಕಾದು ಕುಳಿತಿತ್ತು.

ರೈಲು ಹತ್ತಿ, ಮತ್ತೆ ಜಿಗಿದ: ನ್ಯಾಯಾಲಯದ ಗೇಟ್ ಬಾಗಿಲು ಹಾಕಿದ್ದರೂ ಗೋವಿಂದ ಪತ್ತೆ ಇಲ್ಲ. ರಾತ್ರಿ 8 ಗಂಟೆಗೆ ಮೈಸೂರಿನಿಂದ ಚಾಮರಾಜನಗರಕ್ಕೆ ಹೋಗುವ ರೈಲು ಚಾಮರಾಜ ರೈಲು ನಿಲ್ದಾಣದಲ್ಲಿ ಬಂದು ನಿಂತಿತ್ತು. ನ್ಯಾಯಾಲಯದ ಕಾಂಪೌಂಡ್ ಬಳಿ ಪೊದೆಯೊಂದರಲ್ಲಿ ಅಡಗಿದ್ದ ಆರೋಪಿ ಗೋವಿಂದ ಕೊನೆಗೆ ಕಾಂಪೌಂಡ್ ಹಾರಿ ಹೋಗಿ ರೈಲು ಹತ್ತಿದ್ದಾನೆ. ನಿಲ್ದಾಣದ ಗೇಟ್ ಬಳಿ ಮಫ್ತಿಯಲ್ಲಿದ್ದ ಅರಣ್ಯ ಸಿಬ್ಬಂದಿ, ಗೋವಿಂದ ರೈಲಿಗೆ ಹತ್ತಿದ್ದನ್ನು ಗಮನಿಸಿ, ಕೋರ್ಟ್ ಮುಂದೆ ಕಾಯುತ್ತಿದ್ದ ಸಿಬ್ಬಂದಿ ಕರೆಸಿಕೊಂಡು ರೈಲಿನಲ್ಲಿ ತಲಾಷೆಗೆ ಮುಂದಾಗಿದ್ದಾರೆ. ಅಷ್ಟರಲ್ಲಾಗಲೇ ರೈಲು ಚಲಿಸಲಾರಂಭಿಸಿದೆ. ಅರಣ್ಯ ಸಿಬ್ಬಂದಿ ರೈಲಿಗೆ ಹತ್ತಿದ್ದನ್ನು ಕಂಡ ಆರೋಪಿ ಮತ್ತೆ ರೈಲಿನಿಂದ ಹೊರ ಜಿಗಿದಿದ್ದಾನೆ. ಅರಣ್ಯ ಸಿಬ್ಬಂದಿಯೂ ರೈಲಿನಿಂದ ಹೊರ ಜಿಗಿದು ಬೆನ್ನತ್ತಿ ಕೊನೆಗೂ ಆತನನ್ನು ಹಿಡಿದಿದ್ದಾರೆ.



ಮೂರು ಹುಲಿ ಕೊಂದ ಆರೋಪದಲ್ಲಿ ತಲೆ ಮರೆಸಿಕೊಂಡಿದ್ದ ನಟೋರಿಯಸ್ ಶಿಕಾರಿ ಗೋವಿಂದ ಅಲಿಯಾಸ್ ಮರಿವೀರಪ್ಪನ್‌ನನ್ನು ಅರಣ್ಯ ಸಂಚಾರಿ ದಳ ಬಂಧಿಸಿ ಕರೆದೊಯ್ಯುತ್ತಿರುವುದು.

3 ಹುಲಿ ಕೊಂದವ: ಕಾಡುಗಳ್ಳ ವೀರಪ್ಪನ್ ಹತ್ಯೆ ನಂತರ ಮಲೆ ಮಹದೇಶ್ವರ ವನ್ಯಧಾಮ ಪ್ರದೇಶವನ್ನು ತನ್ನ ಕಾರ್ಯಕ್ಷೇತ್ರ ಮಾಡಿಕೊಳ್ಳುವ ಯತ್ನದಲ್ಲಿದ್ದ ಗೋವಿಂದ, ತನ್ನನ್ನು ಸ್ವಯಂ 'ಮರಿ ವೀರಪ್ಪನ್' ಎಂದು ಕರೆದುಕೊಳ್ಳುತ್ತಿದ್ದ. ಸಣ್ಣಪುಟ್ಟ ಅರಣ್ಯ ಅಪರಾಧ ಕೃತ್ಯಗಳಲ್ಲಿ ಪಾಲ್ಗೊಳ್ಳುತ್ತಿದ್ದವ, ಕ್ರಮೇಣ ಹುಲಿ ಬೇಟೆಗೆ ಮುಂದಾಗಿದ್ದ. ಈಗಾಗಲೇ ಮೂರು ಹುಲಿಗಳ ಬೇಟೆಯಾಡಿ ತಲೆ ಮರೆಸಿಕೊಂಡಿದ್ದ. 2025ರ ಅಕ್ಟೋಬರ್ 2ರಂದು ಮಲೆಮಹದೇಶ್ವರ ವನ್ಯಜೀವಿ ವಿಭಾಗದ ಹನೂರು ವಲಯದ ಪಚ್ಚೆದೊಡ್ಡಿ ಬಳಿ ಹುಲಿಯೊಂದನ್ನು ಕೊಂದು ದೇಹವನ್ನು ಮೂರು ತುಂಡಾಗಿ ಕತ್ತರಿಸಿದ ಪ್ರಕರಣದಲ್ಲೂ ಭಾಗಿಯಾಗಿದ್ದ. ಅ.26ರಂದು ಆತನನ್ನು ನಾಲಾ ರಸ್ತೆಯಲ್ಲಿ ಅರಣ್ಯ ಸಿಬ್ಬಂದಿ ಬಂಧಿಸಲು ಮುಂದಾದಾಗ, ಆತನ ಸಹಚರರು ಅರಣ್ಯ ಸಿಬ್ಬಂದಿಯ ವಾಹನಕ್ಕೆ ಮತ್ತೊಂದು ವಾಹನದಿಂದ ಡಿಕ್ಕಿ ಹೊಡಿಸಿ ಗೋವಿಂದ ಪರಾರಿಯಾಗಲು ಸಹಕರಿಸಿದ್ದರು.

ಕೊಲೆ ಪ್ರಕರಣವೂ ಇದೆ: ಬಂಧಿತ ಗೋವಿಂದನ ವಿರುದ್ಧ ಬೆಂಗಳೂರಿನ ವಿವಿಧ ಠಾಣೆ ವ್ಯಾಪ್ತಿ ಎರಡು ಕೊಲೆ ಪ್ರಕರಣ ದಾಖಲಾಗಿದ್ದು, ಅವು ವಿಚಾರಣೆ ಹಂತದಲ್ಲಿವೆ. ಅಲ್ಲದೆ, ಹನೂರು ಠಾಣೆಯಲ್ಲಿ ಅಕ್ರಮ ಶಸ್ತ್ರಾಸ್ತ್ರ(ಗನ್) ಹೊಂದಿರುವ ಕೇಸ್ ಕೂಡ ಇದೆ. ಈತನ ವಿರುದ್ಧ ಅರಣ್ಯ ಅಪರಾಧ ಕೃತ್ಯದ ಪ್ರಕರಣಗಳು ಇವೆ ಎಂದು ಅರಣ್ಯಾಧಿಕಾರಿಗಳು ತಿಳಿಸಿದ್ದಾರೆ.

ಕಾರ್ಯಾಚರಣೆಯಲ್ಲಿ ಮೈಸೂರು ಅರಣ್ಯ ಸಂಚಾರಿ ದಳದ ಡಿಸಿಎಫ್ ಜಿ.ರುದ್ರೇಶ, ಆರ್‌ಎಫ್‌ಒಗಳಾದ ಕೆ.ಸುರೇಂದ್ರ, ಸಚಿನ್, ಮಲೆ ಮಹದೇಶ್ವರ ಬೆಟ್ಟ ವನ್ಯಧಾಮದ ಎಸಿಎಫ್ ವಿರಾಜ್ ಹೊಸೂರ್, ಆರ್‌ಎಫ್‌ಒಗಳಾದ ನಾಗರಾಜು, ಜಿತೇಂದ್ರ ಮತ್ತು ಎಲ್‌ಟಿಪಿಎಫ್ ಸಿಬಂದಿ ಸೇರಿದಂತೆ 25ಕ್ಕೂ ಹೆಚ್ಚು ಮಂದಿ ಪಾಲ್ಗೊಂಡಿದ್ದರು.

ನಿವೃತ್ತ 'ಹಿಂದೂ' ಪತ್ರಿಕೆಯ ಆರ್.ಕೃಷ್ಣಕುಮಾರ್‌ಗೆ ಬೀಳ್ಕೊಡುಗೆ



ವಿಧಾನಪರಿಷತ್ ಸದಸ್ಯ ಕೆ.ಶಿವಕುಮಾರ್, ಹಿರಿಯ ಪತ್ರಕರ್ತರಾದ ಆರ್.ಕೃಷ್ಣಕುಮಾರ್, ಎಂ.ಬಿ.ಮರಮ್‌ಕಲ್, ಕೂಡ್ಲಿ ಗುರುರಾಜ ಅವರನ್ನು ಸಮಾನ ಮನಸ್ಕ ಪತ್ರಕರ್ತರ ಬಳಗದಿಂದ ಗುರುವಾರ ಆತ್ಮೀಯವಾಗಿ ಸನ್ಮಾನಿಸಲಾಯಿತು.

ಮೈಸೂರು,ಜ.8-'ಹಿಂದೂ' ಪತ್ರಿಕೆಯಲ್ಲಿ ಸುದೀರ್ಘ ಮೂರು ದಶಕಗಳ ಕಾಲ ಸೇವೆ ಸಲ್ಲಿಸಿ ನಿವೃತ್ತರಾದ ಆರ್.ಕೃಷ್ಣಕುಮಾರ್ ಅವರಿಗೆ ಸಮಾನ ಮನಸ್ಕ ಪತ್ರಕರ್ತರ ಬಳಗದಿಂದ ಗುರುವಾರ ಬೀಳ್ಕೊಡುಗೆ ನೀಡಲಾಯಿತು.

'ಲಾಗೈಡ್' ಮಾಸಪತ್ರಿಕೆ ಸಂಪಾದಕ ಎಚ್.ಎನ್.ವೆಂಕಟೇಶ್, ಹಿರಿಯ ವಕೀಲ ಹಾಗೂ ಉದ್ಯಮಿ ಹರೀಶ ಕುಮಾರ್ ಹೆಗ್ಡೆ ಕೆ.ಪಿ.ನಾಗರಾಜ್, ರಾಮ್, ಲಾರೆನ್ಸ್ ಮಿಲ್ಟನ್ ಅವರ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕೃಷ್ಣಕುಮಾರ್ ಅವರಿಗೆ ಶಾಲು ಹೊದಿಸಿ, ಕನ್ನಡಪೇಟ ಹಾಕಿ, ಫಲ-ತಾಂಬೂಲ ನೀಡಿ ಸನ್ಮಾನಿಸಲಾಯಿತು.

ವಿಧಾನಪರಿಷತ್ ಸದಸ್ಯರಾಗಿ ನೇಮಕವಾಗಿರುವ ಕೆ.ಶಿವಕುಮಾರ್, ನಿವೃತ್ತರಾಗಿರುವ ಹಿರಿಯ ಪತ್ರಕರ್ತರಾದ ಎಂ.ಬಿ. ಮರಮ್‌ಕಲ್ ಹಾಗೂ ಕೂಡ್ಲಿ ಗುರುರಾಜ ಅವರನ್ನು ಸಹ ಅಭಿನಂದಿಸಲಾಯಿತು.

ನಂತರ ಕೆ.ಶಿವಕುಮಾರ್ ಮಾತನಾಡಿ, ಮುಂಬರುವ ದಿನಗಳಲ್ಲಿ ಎಲ್ಲಾ ನಿವೃತ್ತ ಪತ್ರಕರ್ತರು ಹಾಗೂ ಅವರ ಕುಟುಂಬದವರನ್ನು ಆಹ್ವಾನಿಸಿ, ಸನ್ಮಾನಿಸುವಂತೆ ಸಲಹೆ ನೀಡಿದರು. ಕೃಷ್ಣಕುಮಾರ್ ಅವರು ಯಾವುದೇ ಒತ್ತಡವಿಲ್ಲದೇ ತಮ್ಮ ಇಡೀ ವೃತ್ತಿ ಜೀವನವನ್ನು ನಿರ್ವಹಿಸಿದ್ದಾರೆ. ಆ ಮೂಲಕ ಪತ್ರಕರ್ತರಿಗೆ ಮಾದರಿಯಾಗಿದ್ದಾರೆ ಎಂದು ಪ್ರಶಂಸಿಸಿದರು.

ಹಿರಿಯ ಪತ್ರಕರ್ತರಾದ ಎಂ.ಬಿ. ಮರಮ್‌ಕಲ್, ಅಂಶಿ ಪ್ರಸನ್ನಕುಮಾರ್, ಕೂಡ್ಲಿ ಗುರುರಾಜ, ಶಂಕರ್ ಬೆನ್ನೂರು, ಬಿ.ರಾಘವೇಂದ್ರ, ಛಾಯಾಗ್ರಾಹಕರಾದ ಅನುರಾಗ್ ಬಸವರಾಜ್, ಲಕ್ಷ್ಮೀ ನಾರಾಯಣ ಯಾದವ್ ಇತರರು ಮಾತನಾಡಿ, ಕೃಷ್ಣಕುಮಾರ್ ಅವರ ಸರಳತೆ, ಸುದ್ದಿಗಳ ನಿಖರತೆ, ವಿಶ್ವಾಸಾರ್ಹತೆ, ಪುರಾತತ್ವ, ಪರಿಸರ, ವನ್ಯಜೀವಿ ಮೊದಲಾದ ವಿಷಯಗಳಲ್ಲಿ ಅವರಿಗಿರುವ ಬದ್ಧತೆ ಮತ್ತು ಕಾಳಜಿಯನ್ನು ಶ್ಲಾಘಿಸಿದರು.

ಈ ಸಂದರ್ಭದಲ್ಲಿ ಹಿರಿಯ ಪತ್ರಕರ್ತರಾದ ಎಂ.ಆರ್.ಸತ್ಯನಾರಾಯಣ, ಎಚ್.ಎಂ.ಅರವಿಂದ್, ಕೆ.ಬಿ.ರಮೇಶ ನಾಯಕ್, ಆರ್.ಕೃಷ್ಣ, ಎಂ.ಸುಬ್ರಹ್ಮಣ್ಯ, ಮಂಜಿತ್, ಛಾಯಾಗ್ರಾಹಕರಾದ ಅನೂಪ್ ರಾಘ್, ಎಸ್.ಉದಯಶಂಕರ್, ರವಿ ಗವಿಮಠ, ನಂದನ್ ಮೊದಲಾದವರು ಉಪಸ್ಥಿತರಿದ್ದರು. ಎಚ್.ಎನ್.ವೆಂಕಟೇಶ್ ಕಾರ್ಯಕ್ರಮ ನಿರೂಪಿಸಿದರು.

ಬಾಕಿಯಿರುವ ಮೂರು ತಿಂಗಳ ಪ್ರೋತ್ಸಾಹ ಧನ ಬಿಡುಗಡೆಗೆ ಆಗ್ರಹಿಸಿ ಮೈಸೂರಲ್ಲಿ

ಆಶಾ ಕಾರ್ಯಕರ್ತೆಯರ ಪ್ರತಿಭಟನೆ

ಮೈಸೂರು,ಜ.8(ಜಿಎ)-ಬಾಕಿಯಿರುವ ಮೂರು ತಿಂಗಳ ಪ್ರೋತ್ಸಾಹಧನ ಬಿಡುಗಡೆ ಮಾಡುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘದಿಂದ ಜಿಲ್ಲಾ ಪಂಚಾಯತ್ ಮುಂಭಾಗ ಪ್ರತಿಭಟನೆ ನಡೆಸಲಾಯಿತು.



ಪ್ರೋತ್ಸಾಹಧನ ಬಿಡುಗಡೆ ಮಾಡುವಂತೆ ಒತ್ತಾಯಿಸಿ ಗುರುವಾರ ಕರ್ನಾಟಕ ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘದಿಂದ ಜಿಲ್ಲಾ ಪಂಚಾಯತ್ ಮುಂಭಾಗ ಪ್ರತಿಭಟನೆ ನಡೆಸಲಾಯಿತು.

ಮೈಸೂರು ಜಿಲ್ಲೆಯಾದ್ಯಂತ 1800 ಆಶಾ ಕಾರ್ಯಕರ್ತೆಯರು ಹಗಲಿರುಳು ಎನ್ನದೆ ಸಾರ್ವಜನಿಕರ ಆರೋಗ್ಯ ರಕ್ಷಣೆಯಲ್ಲಿ ತೊಡಗಿಸಿಕೊಂಡಿದ್ದಾರೆ. ತಾಯಿ-ಮಗು ಆರೈಕೆ, ಲಸಿಕಾ ಅಭಿಯಾನ, ಸರ್ಕಾರದ ವಿವಿಧ ಆರೋಗ್ಯ ಯೋಜನೆಗಳನ್ನು ಮನೆ ಮನೆಗೆ ತಲುಪಿಸುವಲ್ಲಿ ಆಶಾ ಕಾರ್ಯಕರ್ತೆಯರ ಪಾತ್ರ ಅತ್ಯಂತ ದೊಡ್ಡದು. ಆದರೆ, ಕಳೆದ ಮೂರು ತಿಂಗಳಿಂದ ಆಶಾ ಕಾರ್ಯಕರ್ತೆಯರಿಗೆ ಬರಬೇಕಾದ ಪ್ರೋತ್ಸಾಹಧನ ಬಿಡುಗಡೆಯಾಗಿಲ್ಲ ಎಂದು ಪ್ರತಿಭಟನಾಕಾರರು ದೂರಿದರು.

ಈ ಅಲ್ಪ ಸಂಭಾವನೆಯನ್ನೇ ನಂಬಿಕೊಂಡಿರುವ ಆಶಾ ಕಾರ್ಯಕರ್ತೆಯರಿಗೆ ಕಳೆದ 3 ತಿಂಗಳಿಂದ ಹಣ ಬಾರದೆ ಇರುವುದರಿಂದ ದೈನಂದಿನ ಜೀವನ ನಡೆಸುವುದು, ಮನೆ ಬಾಡಿಗೆ ಕಟ್ಟುವುದು, ಮಕ್ಕಳ ಶಾಲಾ ಶುಲ್ಕ ಪಾವತಿಸುವುದು ಅಸಾಧ್ಯವಾಗಿದೆ. ನಿರಂತರ ಕೆಲಸದ ನಡುವೆಯೂ ನಮ್ಮ ದುಡಿತದ ಪ್ರೋತ್ಸಾಹ ಧನ ಇದುವರೆಗೂ ಬಾರದೆ ಆಶಾ ಕಾರ್ಯಕರ್ತೆಯರು ಸಾಲದ ಸುಳಿಗೆ ಸಿಲುಕುತ್ತಿದ್ದಾರೆ ಎಂದು ಬೇಸರ ಹೊರ ಹಾಕಿದರು. ಅನೇಕ ಬಾರಿ ಈ ಕುರಿತು ಸಂಬಂಧಪಟ್ಟ ಅಧಿಕಾರಿಗಳ ಗಮನಕ್ಕೆ ತಂದಿದ್ದರೂ ಯಾವುದೇ ಪ್ರಯೋಜನವಾಗಿಲ್ಲ. ಹೀಗಾಗಿ ಈ ಕೂಡಲೇ ನಮ್ಮ ನ್ಯಾಯಯುತವಾದ ಮೂರು ತಿಂಗಳ ಬಾಕಿ ಪ್ರೋತ್ಸಾಹ ಧನವನ್ನು ಒಂದೇ ಕಂತಿನಲ್ಲಿ ಬಿಡುಗಡೆ ಮಾಡಬೇಕೆಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಜಿಲ್ಲಾ ಗೌರವಾಧ್ಯಕ್ಷೆ ಸಂಧ್ಯಾ ಪಿಎಸ್, ಕಾರ್ಯದರ್ಶಿ ಮಂಜುಳಾ, ಜಂಟಿ ಕಾರ್ಯದರ್ಶಿ ಕೋಮಲ, ರಾಜ್ಯ ಉಪಾಧ್ಯಕ್ಷೆ ಎಂ.ಉಮಾದೇವಿ, ಮಾಣಿಲಾ, ಮಂಗಳಮ್ಮ, ತುಳಸಿ, ರೇಣುಕಾ, ಸಿದ್ದಮ್ಮ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

ಫೆಲೋಶಿಪ್ ವೇತನಕ್ಕಾಗಿ ಅರ್ಜಿ ಆಹ್ವಾನ

ಮೈಸೂರು,ಜ.8-ಕರ್ನಾಟಕ ಜಾನಪದ ಅಕಾಡೆಮಿ ವತಿಯಿಂದ ಕರ್ನಾಟಕ ಜಾನಪದ ಆಕಾಡೆಮಿಯು ಫೆಲೋಶಿಪ್‌ಗಾಗಿ ಸಾಮಾನ್ಯ ವರ್ಗ-1 ಪರಿಶಿಷ್ಟ ಜಾತಿ-5 ಪರಿಶಿಷ್ಟ ಪಂಗಡ-9 ಸೇರಿದಂತೆ ಒಟ್ಟು 15 ಅಭ್ಯರ್ಥಿಗಳಿಂದ ಫೆಲೋಶಿಪ್ ಅರ್ಜಿ ಆಹ್ವಾನಿಸಲಾಗಿದೆ. ಅಕಾಡೆಮಿಯ ವೆಬ್‌ಸೈಟ್‌ನಲ್ಲಿ ತಿಳಿಸಿರುವ ಶೀರ್ಷಿಕೆಗಳನ್ನು ಆಧರಿಸಿ ಕ್ಷೇತ್ರ ಕಾರ್ಯ ನಡೆಸಿದ ಅಧ್ಯಯನ ಕೃತಿಗಳನ್ನು ಸಿದ್ಧಪಡಿಸಿಕೊಡಲು ಆಸಕ್ತ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದ್ದು, ನಿಗದಿಪಡಿಸಿರುವ ಒಂದು ಶೀರ್ಷಿಕೆಯನ್ನು ಆಯ್ಕೆ ಮಾಡಿ 5 ಪುಟಗಳ ಸಾರಾಲೇಖ (Synopsis)ವನ್ನು ಬರೆದು ಜ.23ರ ಒಳಗೆ ರಿಜಿಸ್ಟ್ರಾರ್, ಕರ್ನಾಟಕ ಜಾನಪದ ಅಕಾಡೆಮಿ ಎರಡನೇ ಮಹಡಿ, ಕನ್ನಡ ಭವನ, ಜೆ.ಸಿ.ರಸ್ತೆ ಬೆಂಗಳೂರು 560002 ಇವರಿಗೆ ಕಳುಹಿಸಿಕೊಡಬಹುದಾಗಿದ್ದು, ಆಯ್ಕೆಯಾದ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುತ್ತದೆ. ಸಂದರ್ಶನದಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ಫೆಲೋಶಿಪ್ ನೀಡಲಾಗುತ್ತದೆ. ಹೆಚ್ಚಿನ ವಿವರಗಳಿಗಾಗಿ https://janapada.karnataka.gov.in ನಿಂದ ಮಾಹಿತಿ ಪಡೆಯಬಹುದಾಗಿದೆ ಎಂದು ಕರ್ನಾಟಕ ಜಾನಪದ ಆಕಾಡೆಮಿ ರಿಜಿಸ್ಟ್ರಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪೊಲೀಸ್ ಕಾನ್‌ಸ್ಟೇಬಲ್ ಮೇಲೆ ಹಲ್ಲೆ; ಮೂವರು ಆರೋಪಿಗಳ ಬಂಧನ



ಭರತ್



ಕಾರ್ತಿಕ್



ರವಿ

ಮೈಸೂರು, ಜ.8 (ಎಂಕೆ)-ಹಾಡ ಹಗಲೇ ಕರ್ತವ್ಯದಲ್ಲಿದ್ದ ಪೊಲೀಸ್ ಕಾನ್‌ಸ್ಟೇಬಲ್ ಮೇಲೆ ಹಲ್ಲೆ ನಡೆಸಿದ್ದ ಮೂವರು ಆರೋಪಿಗಳನ್ನು ಬಂಧಿಸಿರುವ ಎನ್.ಆರ್. ಠಾಣೆ ಪೊಲೀಸರು, ಅವರನ್ನು ನ್ಯಾಯಾಂಗ ಬಂಧನಕ್ಕೊಳಪಡಿಸಿದ್ದಾರೆ.

ಎನ್.ಆರ್.ಮೊಹಲ್ಲಾ ಕುರಿಮಂಡಿ ನಿವಾಸಿಗಳಾದ ಸಿ.ಕಾರ್ತಿಕ್(24), ಪಿ.ಭರತ್(25) ಹಾಗೂ ಪಿ.ರವಿ ಅಲಿಯಾಸ್ ಪಿಪಿ(29) ಬಂಧಿತ ಆರೋಪಿಗಳು. ಬುಧವಾರ(ಜನವರಿ7) ಬೆಳಗ್ಗೆ 10 ಗಂಟೆ ಸುಮಾರಿಗೆ ನಾರ್ಥ್ ಈಸ್ಟ್ ಆಫ್ ಎನ್.ಆರ್. ಮೊಹಲ್ಲಾದ ಗ್ರೀಮ್ ಕಾಟನ್ ಶಾಪ್ ಬಳಿ ಬೈಕ್‌ನಲ್ಲಿ ಹೋಗುತ್ತಿದ್ದ ಮೈಸೂರಿನ ಉದಯಗಿರಿ ಪೊಲೀಸ್ ಠಾಣೆ ಎಸ್‌ಬಿ ಕಾನ್‌ಸ್ಟೇಬಲ್, ಕೆಸರೆ ನಿವಾಸಿ ಸಿ.ಚಂದ್ರಶೇಖರ್(51) ಅವರ ಮೇಲೆ ಏಕಾಏಕಿ ಹಲ್ಲೆ ನಡೆಸಿ ಪರಾರಿಯಾಗಿದ್ದರು. ಪ್ರಕರಣ ದಾಖಲಿಸಿಕೊಂಡು ಕಾರ್ಯಾಚರಣೆ ನಡೆಸಿದ ಎನ್.ಆರ್.ಠಾಣೆ ಪೊಲೀಸರು ಮೂವರು ಆರೋಪಿಗಳನ್ನು ಬಂಧಿಸಿ, ವಿಚಾರಣೆಗೊಳಿಸಿದ ಬಳಿಕ ನ್ಯಾಯಾಂಗ ಬಂಧನಕ್ಕೊಳಪಡಿಸಿದ್ದಾರೆ.

ಸಾಲೂರು ಶ್ರೀಗಳಿಂದ ದಿನದರ್ಶಿಕೆ ಬಿಡುಗಡೆ



ಹನೂರು ತಾಲೂಕಿನ ಸಾಲೂರು ಬೃಹನ್ಮಠದಲ್ಲಿ ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹಶಿಕ್ಷಕರ ಸಂಘದ ಹನೂರು ತಾಲೂಕು ಘಟಕ ಹೊರತಂದಿರುವ 2026 ನೇ ಸಾಲಿನ ದಿನದರ್ಶಿಕೆಯನ್ನು ಮಲೈ ಮಹದೇಶ್ವರ ಬೆಟ್ಟದ ಸಾಲೂರು ಮಠದ ಡಾ.ಶ್ರೀ ಶ್ರೀ ಶಾಂತಮಲ್ಲಿಕಾರ್ಜುನ ಸ್ವಾಮೀಜಿ ಬಿಡುಗಡೆ ಮಾಡಿದರು. ಈ ವೇಳೆ ಪ್ರೌಢಶಾಲಾ ಸಹಶಿಕ್ಷಕರ ಸಂಘದ ತಾಲೂಕು ಘಟಕದ ಅಧ್ಯಕ್ಷ ಎಂ.ಸಿ.ಚಂದ್ರಶೇಖರ್ ಜಿಲ್ಲಾ ಸಹ ಕಾರ್ಯದರ್ಶಿ ಚಂದ್ರಶೇಖರ್, ಸಂಘದ ಕಾರ್ಯದರ್ಶಿ ಚಂದ್ರಶೇಖರಯ್ಯ, ಖಜಾಂಚಿ ಪ್ರದೀಪ್, ನಿರ್ದೇಶಕರಾದ ಸ್ವಾಮಿ, ಶ್ರೀನಿವಾಸ್, ಹನೂರು ಕಸಾಪ ಅಧ್ಯಕ್ಷ ಮಲ್ಲೇಶ್ ಮಾಲಿಂಗಕಟ್ಟೆ ಉಪಸ್ಥಿತರಿದ್ದರು.



ಡಾ.ರಾಜ್ ಶಿವಸೈನ್ಯ ಶಿವರಾಜ್‌ಕುಮಾರ್ ಅಭಿಮಾನಿಗಳ ಸಂಘದ 2026ನೇ ವರ್ಷದ ಕ್ಯಾಲೆಂಡರ್ ಅನ್ನು ಹ್ಯಾಟ್ರಿಕ್ ಹೀರೊ ಡಾ.ಶಿವರಾಜ್‌ಕುಮಾರ್ ಮೈಸೂರಲ್ಲಿ ಬಿಡುಗಡೆಗೊಳಿಸಿದರು. ಈ ವೇಳೆ ಚಿತ್ರ ನಟ ಸೋಮಣ್ಣ, ಬಿ.ಎಸ್.ರವಿ, ಬಿ.ಎಸ್.ಮಹೇಶ್, ದೊರೆ, ಮೂರ್ತಿ, ಗೋಪಿ ಇನ್ನಿತರರಿದ್ದರು.

ಇಂದು, ನಾಳೆ ವಿದ್ಯುತ್ ವ್ಯತ್ಯಯ

ಮೈಸೂರು: ನರಸಿಂಹಸ್ವಾಮಿ ವಿದ್ಯುತ್ ಮಾರ್ಗದಲ್ಲಿ ಜ.9 ಮತ್ತು ಮುಡಾ ಗ್ರೌಂಡ್ ವಿದ್ಯುತ್ ಮಾರ್ಗದಲ್ಲಿ ಜ.10ರಂದು ತುರ್ತು ಕಾರ್ಯ ನಿಮಿತ್ತ ಬೆಳಗ್ಗೆ 10ರಿಂದ ಸಂಜೆ 5.30ರವರೆಗೆ ಹುಣಸೂರು ಮುಖ್ಯರಸ್ತೆ, ವಿಜಯನಗರ 1ನೇ ಹಂತ, ಮಿನಿ ವಾಟರ್ ಟ್ಯಾಂಕ್ ಏರಿಯಾ, ಕೆ.ಡಿ ರಸ್ತೆ ಹಾಗೂ ಸುತ್ತಮುತ್ತ. ಮುಡಾಗ್ರೌಂಡ್ ವಿದ್ಯುತ್ ಮಾರ್ಗದ ವ್ಯಾಪ್ತಿಯ ವಿಜಯನಗರ 2ನೇ ಹಂತದಲ್ಲಿ ವಿದ್ಯಾವರ್ಧಕ ಕಾಲೇಜು ಹಿಂಭಾಗ, ಸಪ್ತಪದಿ ಚೌಲ್ಟ್ರಿ ಆಯಿಸ್ಟರ್ ಬೇ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಸೆಸ್ಕ್ ಪ್ರಕಟಣೆ ತಿಳಿಸಿದೆ.

ಇಂದಿನಿಂದ ಡಬ್ಲ್ಯೂಪಿಎಲ್-2026

ಉದ್ಘಾಟನಾ ಪಂದ್ಯದಲ್ಲಿ ಬೆಂಗಳೂರು-ಮುಂಬೈ ಮುಖಾಮುಖಿ



ಟ್ರೋಫಿಯೊಂದಿಗೆ ಸ್ಮೃತಿ ಮಂದನಾ ಹಾಗೂ ಹರ್ಮನ್ ಪ್ರೀತ್ ಕೌರ್.

ಮೈಸೂರು, ಜ.8(ವಿವಿಹೆಚ್)-ಬಹುನಿರೀಕ್ಷಿತ ನಾಲ್ಕನೇ ಆವೃತ್ತಿಯ ಮಹಿಳಾ ಪ್ರೀಮಿಯರ್ ಲೀಗ್-2026 (ಡಬ್ಲ್ಯೂಪಿಎಲ್) ಶುಕ್ರವಾರದಿಂದ ಆರಂಭವಾಗಲಿದ್ದು, ಉದ್ಘಾಟನಾ ಪಂದ್ಯದಲ್ಲಿ ಹಾಲಿ ಚಾಂಪಿಯನ್ ಮುಂಬೈ ಇಂಡಿಯನ್ಸ್ (ಎಂಐ) ಹಾಗೂ ನಮ್ಮ ರಾಯಲ್ ಚಾಲೆಂಜರ್ಸ್ ಬೆಂಗಳೂರು (ಆರ್‌ಸಿಬಿ) ಮುಖಾಮುಖಿಯಾಗಲಿವೆ.

ಶುಕ್ರವಾರ ಸಂಜೆ 7.30 ಗಂಟೆಗೆ ನವಿ ಮುಂಬೈನ ಡಿವೈ ಪಾಟೀಲ್ ಕ್ರೀಡಾಂಗಣದಲ್ಲಿ ಈ ಪಂದ್ಯ ನಡೆಯಲಿದ್ದು, ನಮ್ಮ ಆರ್‌ಸಿಬಿ ಗೆಲುವಿನ ಶುಭಾರಂಭ ಮಾಡಲು ಮುಂದಾಗಿದೆ.

ಬ್ಯಾಟಿಂಗ್ ಅನುಕೂಲಕರವಾದ ಪಿಚ್ ಇದಾಗಿದ್ದು, ಇತ್ತಂಡಗಳ ಕಾದಾಟದಲ್ಲಿ ರನ್ ಹೊಳೆ ಹರಿಸುವ ಸಾಧ್ಯತೆಗಳು ಹೆಚ್ಚಿವೆ. ಟಾಸ್ ಗೆದ್ದ ತಂಡಕ್ಕೆ ಭಾಗಶಃ ಅನುಕೂಲವಾಗಲಿದೆ. ಚೇಸಿಂಗ್ ಸರಾಗವಾಗಿ ಮಾಡಬಹುದಾದ ಈ ಕ್ರೀಡಾಂಗಣದಲ್ಲಿ ಆರ್‌ಸಿಬಿ ಹೇಗೆ ಕಾರ್ಯತಂತ್ರ ರೂಪಿಸಲಿದೆ ಎಂಬುದನ್ನು ಕಾದು ನೋಡಬೇಕಿದೆ. ಇನ್ನು ಉದ್ಘಾಟನಾ ಪಂದ್ಯವನ್ನು ಸ್ಟಾರ್ ಸ್ಪೋರ್ಟ್ಸ್ ನೆಟ್‌ವರ್ಕ್‌ನಲ್ಲಿ ಹಾಗೂ ಲೈವ್ ಸ್ಟ್ರೀಮಿಂಗ್ ಅನ್ನು ಜಿಯೋಸ್ಟಾರ್ ಅಪ್ಲಿಕೇಶನ್‌ನಲ್ಲಿ ವೀಕ್ಷಿಸಬಹುದಾಗಿದೆ.

ಉದ್ಘಾಟನಾ ಸಮಾರಂಭದಲ್ಲಿ ಹನಿ ಸಿಂಗ್ ಮೋಡಿ: ಈ ಬಾರಿಯ ಡಬ್ಲ್ಯೂಪಿಎಲ್-2026 ಉದ್ಘಾಟನಾ ಸಮಾರಂಭದಲ್ಲಿ ಬಾಲಿವುಡ್‌ನ ಖ್ಯಾತ ತಾರೆಯರಾದ ಯೋ-ಯೋ ಹನಿ ಸಿಂಗ್ ತಮ್ಮ ಗಾಯನ ಮೋಡಿ ಮಾಡಲಿದ್ದಾರೆ. ಇವರಿಗೆ ಜೊತೆಯಾಗಿ ನಟಿ ಜಾಕ್ವೆಲಿನ್ ಫರ್ನಾಂಡೀಸ್ ನೃತ್ಯ ಪ್ರದರ್ಶನ ಮಾಡಲಿದ್ದು, 2021ರ ಮಿಸ್ ಯೂನಿವರ್ಸ್ ಹರ್ನಾಜ್ ಸಂಧು ಅವರೂ ವೇದಿಕೆಯಲ್ಲಿರಲಿದ್ದಾರೆ. ಪಂದ್ಯಾವಳಿಗೂ ಮುನ್ನಾ ನಡೆಯಲಿರುವ ಈ ಉದ್ಘಾಟನಾ ಸಮಾರಂಭ ಅಂದು ಸಂಜೆ 6.45 ಕ್ಕೆ ಆರಂಭವಾಗಲಿದೆ.

ಡಬ್ಲ್ಯೂಪಿಎಲ್ ಗೆದ್ದ ತಂಡಕ್ಕೆ ಸಿಗಲಿದೆ 6 ಕೋಟಿ: ಇನ್ನು ಪ್ರಸಕ್ತ ಸಾಲಿನಲ್ಲಿ ನಡೆಯಲಿರುವ ಡಬ್ಲ್ಯೂಪಿಎಲ್-20226ನ್ನು ಗೆಲ್ಲುವ ತಂಡ ಟ್ರೋಫಿಯೊಂದಿಗೆ ಬರೋಬ್ಬರಿ 6 ಕೋಟಿ ರೂ.ಗಳನ್ನು ತನ್ನದಾಗಿಸಿಕೊಳ್ಳಲಿದೆ. ಇನ್ನು ರನ್ನರ್‌ಅಪ್ ಆಗುವ ತಂಡ 3 ಕೋಟಿ ಪಡೆಯಲಿದೆ. ಇನ್ನು ಪ್ರತಿ ಪಂದ್ಯದ ಪಂದ್ಯಶ್ರೇಷ್ಠ ಪ್ರಶಸ್ತಿ ವಿಜೇತರಿಗೆ ರೂ. 1 ಲಕ್ಷ ನಗದು ಬಹುಮಾನ ಸಿಕ್ಕರೆ, ಫೈನಲ್ ಪಂದ್ಯದ ಪಂದ್ಯಶ್ರೇಷ್ಠ ವಿಜೇತರಿಗೆ 2.5 ಲಕ್ಷ ರೂ. ಸಿಗಲಿದೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

09.1.2026 ಶುಕ್ರವಾರ, ಮಳೆ ನಕ್ಷತ್ರ: ಮೂಲ, 29.12.2025ರಿಂದ 10.01.2026
ವಿಶ್ವಾವಸು ನಾಮ ಸಂವತ್ಸರ, ದಕ್ಷಿಣಾಯನ, ಹೇಮಂತ ಋತು, ಪುಷ್ಯ ಮಾಸ, ಕೃಷ್ಣ ಪಕ್ಷ,
ತಿಥಿ: ಷಷ್ಠಿ, ನಕ್ಷತ್ರ: ಉತ್ತರ, ರಾಹುಕಾಲ: ಬೆಳಗ್ಗೆ 10.30ರಿಂದ 12ರವರೆಗೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಸ್ವಾತಂತ್ರ್ಯ ದೀಪ ಸ್ವರಾಜ್ಯ ಸೇನಾನಿಗಳ ಕುರಿತ ಬಾನುಲಿ ಸರಣಿ, ಪ್ರಸ್ತುತಿ : ನಿತೀಶ್ ಡಂಬಳ್, 6.40 ಅರಿವಿನ ಶಿಖರ-ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ – ಎಂ.ಆರ್.ಸುಧಾ, ವ್ಯಾಖ್ಯಾನ-ಪ್ರೊ. ಮ.ವರದರಾಜು, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 8.30 ಕನ್ನಡ ಚಿತ್ರಗೀತೆಗಳು, 9.00 ನಮ್ಮ ಆರೋಗ್ಯ-ವೈದ್ಯಕೀಯ ಶಿಕ್ಷಣ ಮತ್ತು ಆರೋಗ್ಯ ಸೇವೆ ಕುರಿತು ಸಂವಾದ, ಭಾಗವಹಿಸುತ್ತಾರೆ-ಚಾಮರಾಜನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಡೀನ್ ಮತ್ತು ನಿರ್ದೇಶಕರಾದ ಡಾ. ಹೆಚ್.ಜಿ.ಮಂಜುನಾಥ್ ಮತ್ತು ಸಹಾಯಕ ಪ್ರಾಧ್ಯಾಪಕರಾದ ಡಾ. ಹರ್ಷ ಬಿ.ಬಿ., ಸಂದರ್ಶಕರು-ಎನ್.ಕೇಶವಮೂರ್ತಿ, 9.30 ಗಾಂಧೀ ಸ್ಮೃತಿ, 9.35 ಕನ್ನಡ ಚಿತ್ರಗೀತೆಗಳು, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ, ಡಿ. ಬಾಲಕೃಷ್ಣ –ವೀಣಾವಾದನ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ-ಸಂಗೀತ ಸಂಭ್ರಮ ನಾದಲಯ ಸಂಗಮ, ಪ್ರಸ್ತುತಿ: ಹೆಚ್.ಎಲ್. ಶಿವಶಂಕರಸ್ವಾಮಿ

ಮಧ್ಯಾಹ್ನ : 12.05 ವನಿತಾ ವಿಹಾರ, 12.35 ದೇವರನಾಮ, 12.45 ಕಾದಂಬರಿ ವಿಹಾರ, 1.00 ಪ್ರಗತಿ ಪಥ- ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಭಾವಗೀತೆಗಳು, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 2.40 ದಾರಿ ದೀಪ, ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು: FEBA India, 2.55 ಸಿರಿಗನ್ನಡಂ ಗೆಲ್ಗೆ, ಪ್ರಸ್ತುತಿ : ಜಿ.ಕೆ. ರವೀಂದ್ರಕುಮಾರ್, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ, ಮಧುರವಿ ಕಶ್ಯಪ್ – ಹಾಡುಗಾರಿಕೆ, 4.00 ಮಹಿಳಾರಂಗ, 4.30 ವೃತ್ತಿ ಮಾರ್ಗದರ್ಶನ ಕಾನೂನು ಅಂದರೆ ಲಾ ವಿಷಯದಲ್ಲಿ ಇರುವ ಅಧ್ಯಯನ, ಸಂಶೋಧನೆ ಮತ್ತು ವೃತ್ತಿಪರ ಅವಕಾಶಗಳು ಕುರಿತು ಮೈಸೂರಿನ ವಿದ್ಯಾವರ್ಧಕ ಕಾನೂನು ಕಾಲೇಜಿನ ಸಹಾಯಕ ಪ್ರಾಧ್ಯಪಕಿ ಇಂದುಮತಿ ಎಂ.ಜೆ. ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ-ಬೇದ್ರೆ ಮಂಜುನಾಥ, 6.50 ಕೃಷಿರಂಗ-ಹವಾಮಾನ ಮಿತ್ರ, ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು : ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನಾ ಸಂಸ್ಥೆ, ಬೆಂಗಳೂರು, ಸಂಶೋಧನಾ ಸಾರ-ಕೃಷಿ ಕ್ಷೇತ್ರದ ಹೊಸ ಅವಿಷ್ಕಾರ, ಪ್ರಸ್ತುತಿ : ಆರ್. ಲೋಕೇಶ್ವರಿ, 7.45 ಕನ್ನಡದಲ್ಲಿ ಭಾಷಣ, 8.00 ಕನ್ನಡ ಭಾರತಿ, 9.30 ಕರ್ನಾಟಕ ಶಾಸ್ತ್ರೀಯ ಸಂಗೀತ, ಡಾ. ಪದ್ಮಾಮೂರ್ತಿ ಅವರ ನಿರ್ದೇಶನದಲ್ಲಿ ನಿಲಯದ ಕಲಾವಿದರಿಂದ ಹಾಡುಗಾರಿಕೆ, 10.00 ಆಕಾಶವಾಣಿ ಸಂಗೀತ್ ಸಮ್ಮೇಳನ್- 2025, ಶುಭಾಂಕರ್ ಡೇ – ಖಯಾಲ್

- **ಪಾಳ್ಯಂ ಶ್ರೀ ಶಾಸ್ತಾ ಪೀಠಂ, ಅಭಯದಾಯಕ ಶ್ರೀ ಅಯ್ಯಪ್ಪಸ್ವಾಮಿ ದೇವಸ್ಥಾನಂ :** ಬೆಳಗ್ಗೆಯಿಂದ ಧನುರ್ಮಾಸದ ವಿಶೇಷ ಪೂಜಾ, ಲಕ್ಷಾರ್ಚನಾ, ವಾರ್ಷಿಕ ಕುಂಭಾಭಿಷೇಕ ಪೂಜಾ ಮಹೋತ್ಸವ, ಮಹತೋಭಾರ ಶ್ರೀ ಧರ್ಮಶಾಸ್ತಾ ಸ್ವಾಮಿಯವರಿಗೆ, ಮಹಾಭಿಷೇಕ, ಅಲಂಕಾರ ಸೇವೆ, ನಾಮಾರ್ಚನೆ, ಮಹಾನಿವೇದನೆ, ಮಂಗಳಾರತಿ, ತೀರ್ಥಪ್ರಸಾದ ವಿನಿಯೋಗ, ಸ್ಥಳ: ಶ್ರೀ ಅಯ್ಯಪ್ಪಸ್ವಾಮಿ ದೇವಸ್ಥಾನ, ರಾಘವೇಂದ್ರನಗರ.
- **ಇಂಡಿಯನ್ ಸೋಲಾರ್ ಅಸೋಸಿಯೇಷನ್ :** ಸೋಲಾರ್ ರೂಫ್ ಟಾಪ್ ಡೆವಲಪರ್ಸ್ ಮೀಟ್, ಮುಖ್ಯ ಅತಿಥಿಗಳು : ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಜಿಲ್ಲಾಧಿಕಾರಿ ಲಕ್ಷ್ಮೀಕಾಂತರೆಡ್ಡಿ, ನಗರ ಪಾಲಿಕೆ ಆಯುಕ್ತ ಶೇಕ್ ತನ್ವೀರ್ ಆಸಿಫ್, ಸೆಸ್ಕಾಂ ಮ್ಯಾನೇಜಿಂಗ್ ಡೈರೆಕ್ಟರ್ ಮುನಿಗೋಪಾಲ್ ರಾಜ್, ಪ್ರಾಸ್ತಾವಿಕ ನುಡಿ : ಇಂಡಿಯನ್ ಸೋಲಾರ್ ಅಸೋಸಿಯೇಷನ್ ಅಧ್ಯಕ್ಷ ಸಿ. ನರಸಿಂಹನ್, ಸ್ಥಳ: ಹೋಟೆಲ್ ಸಿದ್ಧಾರ್ಥ, ಬೆಳಗ್ಗೆ 10 ರಿಂದ.
- **ಕಾವೇರಿ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್ಸ್ :** ಎನ್‌ಹಾನ್ಸಿಂಗ್ ರಿಸರ್ಚ್ ವಿಸಿಬಿಲಿಟಿ ಇನ್ ಇಂಟರ್ ಡಿಸಿಪ್ಲಿನರಿ ಕುರಿತು ಕಾರ್ಯಾಗಾರ, ಉದ್ಘಾಟನೆ : ಮೈಸೂರು ವಿವಿ ಕುಲಪತಿ ಪ್ರೊ. ಕೆ.ಎಸ್. ರಂಗಪ್ಪ, ಅಧ್ಯಕ್ಷತೆ : ಇನ್‌ಸ್ಟಿಟ್ಯೂಷನ್ಸ್ ಛೇರ್ಮನ್ ಡಾ. ಜಿ.ಆರ್. ಚಂದ್ರಶೇಖರ್, ಮುಖ್ಯ ಅತಿಥಿಗಳು : ಡಾ. ಸರಳಾ ಚಂದ್ರಶೇಖರ್, ಪ್ರೊ. ಸುನೀಲ್ ನೌಟಿಯಾಲ, ಡಾ. ಪ್ರಕಾಶ್ ಎಲ್. ಹಲಾಮಿ, ಸ್ಥಳ: ಸಿಜಿಒಎಲ್ ಸಭಾಂಗಣ, ಬೆಳಗ್ಗೆ 10ಕ್ಕೆ.
- **ರಾಷ್ಟ್ರೀಯ ಕೈಮಗ್ಗ ಅಭಿವೃದ್ಧಿ ನಿಗಮ :** ಸಿಲ್ಕ್ ಫ್ಯಾಬ್, ಕೈಮಗ್ಗ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟ, ಸ್ಥಳ: ಜೆಎಸ್‌ಎಸ್ ಅರ್ಬನ್ ಹಾತ್, ಹೆಬ್ಬಾಳು ರಿಂಗ್ ರಸ್ತೆ, ಬೆಳಗ್ಗೆ 11 ರಿಂದ.
- **ಸಹಜ ಸಮೃದ್ಧಿ :** ದೇಸಿ ಎಣ್ಣೆ ಮೇಳ, ಉದ್ಘಾಟನೆ : ಶ್ರೀ ಮಂಟೇಸ್ವಾಮಿ ಮಠದ ಪೀಠಾಧಿಪತಿ ಎಂ.ಎಲ್. ವರ್ಚಸ್ವೀ ಶ್ರೀಕಂಠ ಸಿದ್ದಲಿಂಗ ರಾಜೇ ಅರಸ್, ಎಣ್ಣೆ ಗಾಣಕ್ಕೆ ಚಾಲನೆ : ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಮುಖ್ಯ ಅತಿಥಿಗಳು : ಸಿಎಸ್‌ಐಆರ್ ನಿರ್ದೇಶಕ ಡಾ. ಗಿರಿಧರ್ ಪರ್ವತಮ್, ಕರ್ನಾಟಕ ರಾಜ್ಯ ಬೀಜ ಮತ್ತು ಸಾವಯವ ಪ್ರಮಾಣನ ಸಂಸ್ಥೆ ಅಧ್ಯಕ್ಷೆ ಶ್ರೀಮತಿ ಲಾವಣ್ಯ ಬಲ್ಲಾಳ್ ಜೈನ್, ಡಾ. ಮಮತ ಶೇಖರ್, ಡಿ. ರವಿಶಂಕರ್, ಮೈಸೂರು ಕಲ್ಯಾಣ ಮಂಟಪ ಸಂಘದ ಅಧ್ಯಕ್ಷ ಲಯನ್ ಎಸ್. ಮೂರ್ತಿ, ಸಹಜ ಸಮೃದ್ಧ ನಿರ್ದೇಶಕ ಜಿ. ಕೃಷ್ಣಪ್ರಸಾದ್, ಹೆಚ್.ಆರ್.ನವೀನ್ ಕುಮಾರ್, ಎಂ.ಮಹೇಶ್, ಎನ್. ಯೋಗೀಶ್, ಕೆ.ಎಸ್. ಮಂಜು, ಸ್ಥಳ: ನಂಜರಾಜ ಬಹದ್ದೂರ್ ಛತ್ರ, ಬೆಳಗ್ಗೆ 11.30ಕ್ಕೆ.
- **ಶ್ರೀ ರಾಜರಾಜೇಶ್ವರಿ ಅಕ್ಕನ ಬಳಗ :** ವಾರ್ಷಿಕೋತ್ಸವ ಸಮಾರಂಭ, ಸಾನ್ನಿಧ್ಯ : ಚಾಮುಂಡಿ ಬೆಟ್ಟದ ತಪ್ಪಲಿನ ವಿರಕ್ತ ಮುಡಿಗುಂಡ ಮಠದ ಶ್ರೀಕಂಠಸ್ವಾಮಿಗಳು ಅರಮನೆ ಪಂಚಗವಿ ಮಠ, ಉದ್ಘಾಟನೆ : ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್, ಮೈಸೂರು ನಗರ ಘಟಕ ಅಧ್ಯಕ್ಷ ಡಾ. ಜಯಪ್ಪ ಹೊನ್ನಾಳಿ, ಸನ್ಮಾನಿತರು : ಶೈಕ್ಷಣಿಕ ಅಧಿಕಾರಿ ಶ್ರೀಮತಿ ಮಂಗಳಾ ಮುದ್ದುಮಾದಪ್ಪ, ಕದಳಿ ಮಹಿಳಾ ವೇದಿಕೆ ಅಧ್ಯಕ್ಷೆ ಶ್ರೀಮತಿ ಶೋಭಾರಾಣಿ ಜೈಪ್ರಕಾಶ್, ಶ್ರೀರಾಜರಾಜೇಶ್ವರಿ ಅಕ್ಕನ ಬಳಗದ ಗೌರವಾಧ್ಯಕ್ಷೆ ಶ್ರೀಮತಿ ಮಾದಲಾಂಬಿಕ ನಿರಂಜನಮೂರ್ತಿ, ಅಧ್ಯಕ್ಷತೆ : ಬಳಗದ ಅಧ್ಯಕ್ಷೆ ಶ್ರೀಮತಿ ವೀಣಾ ನಂದೀಶ್, ಸ್ಥಳ: ಜೆಎಸ್‌ಎಸ್ ಕಾನೂನು ಕಾಲೇಜು, ಸಂಜೆ 4ಕ್ಕೆ.
- **ಡಾ. ವಸಂತಕುಮಾರ್ ತಿಮಕಾಪುರ ಅಭಿನಂದನಾ ಸಮಿತಿ, ವಿಸ್ಮಯ ಬುಕ್ ಹೌಸ್ :** ಡಾ. ವಸಂತ ಕುಮಾರ್ ತಿಮಕಾಪುರ ವಿರಚಿತ ಕೃತಿಗಳ ಲೋಕಾರ್ಪಣೆ ಮತ್ತು ವಸಂತೋತ್ಸವ ಅಭಿನಂದನಾ ಸಮಾರಂಭ, ಸಾನ್ನಿಧ್ಯ : ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ವಿಶ್ವ ಒಕ್ಕಲಿಗರ ಮಹಾ ಸಂಸ್ಥಾನ ಮಠದ ಡಾ. ನಿಶ್ಚಲಾನಂದ ಮಹಾಸ್ವಾಮೀಜಿ, ಅಧ್ಯಕ್ಷತೆ : ಹೈದರಾಬಾದ್ ಇಕ್ರಿಸ್ಯಾಟ್ ನಿವೃತ್ತ ಉಪ ಮಹಾನಿರ್ದೇಶಕ ಡಾ. ಸಿ.ಆರ್. ಲಕ್ಷ್ಮೀಪತಿಗೌಡ, ಉದ್ಘಾಟನೆ : ಕೃಷಿ ಸಚಿವ ಎನ್. ಚೆಲುವರಾಯಸ್ವಾಮಿ, ಕೃತಿ ಬಿಡುಗಡೆ : ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಕೃತಿ ಕುರಿತು: ಲೇಖಕ ಪ್ರೊ. ಸಿ. ನಾಗಣ್ಣ, ಉಪಸ್ಥಿತರು : ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಅಧ್ಯಕ್ಷ ಪ್ರೊ. ಎ.ಹೆಚ್. ರಾಜಾಸಾಬ್, ಪ್ರಾಧ್ಯಾಪಕ ಪ್ರೊ. ಎಸ್. ಉಮೇಶ್, ಮೈಸೂರು ವಿವಿ ಕುಲಸಚಿವ ಪ್ರೊ.ಎನ್. ನಾಗರಾಜ, ನೈಪುಣ್ಯ ಸ್ಕೂಲ್ ಆಫ್ ಎಕ್ಸಲೆನ್ಸ್ ಅಧ್ಯಕ್ಷ ಆರ್. ರಘು ಕೌಟಿಲ್ಯ, ಅಭಿನಂದನಾ ಸಮಿತಿ ಅಧ್ಯಕ್ಷ ಪ್ರೊ. ಹೆಚ್.ಎಂ. ವಸಂತಮ್ಮ, ಕೃಷಿ ವಿಜ್ಞಾನಿ ಡಾ. ವಸಂತಕುಮಾರ್ ತಿಮಕಾಪುರ, ವಿಸ್ಮಯ ಬುಕ್ ಹೌಸ್‌ನ ಪ್ರಕಾಶ್ ಚಿಕ್ಕಪಾಳ್ಯ, ಸ್ಥಳ: ವಿಜ್ಞಾನ ಭವನ, ಮಾನಸಗಂಗೋತ್ರಿ, ಸಂಜೆ 4ಕ್ಕೆ.
- **ರೋಟರಿ ಮೈಸೂರು ಉತ್ತರ, ಕದಂಬ ರಂಗ ವೇದಿಕೆ :** ರೋಟರಿ-ಕದಂಬ ರಂಗ ಪ್ರಶಸ್ತಿ ಪ್ರದಾನ ಸಮಾರಂಭ, ಪ್ರಶಸ್ತಿ ಪುರಸ್ಕೃತರು : ಹಿರಿಯ ರಂಗ ಕಲಾವಿದೆ ಶ್ರೀಮತಿ ಹರಿಪ್ರಸಾದ್, ಹಿರಿಯ ರಂಗ ಕಲಾವಿದ ಸುಬ್ಬನರಸಿಂಹ, ಗಾಯಕ ದಿನೇಶ್ ಚಮ್ಮಾಳಿಗೆ, ಸಾಹಿತಿ ಕೃಷ್ಣ ಜನಮನ, ಪ್ರಶಸ್ತಿ ಪ್ರದಾನ : ಪ್ರಗತಿಪರ ಚಿಂತಕ ಪ್ರೊ. ಕಾಳೇಗೌಡ ನಾಗವಾರ, ಮುಖ್ಯ ಅತಿಥಿಗಳು : ರಂಗಭೂಮಿ ಕಲಾವಿದೆ ಶ್ರೀಮತಿ ರಾಮೇಶ್ವರಿ ವರ್ಮ, ಉಪಸ್ಥಿತರು : ಕದಂಬ ರಂಗ ವೇದಿಕೆ ಅಧ್ಯಕ್ಷ ಡಾ. ರಾಜಶೇಖರ ಕದಂಬ, ಅಧ್ಯಕ್ಷತೆ : ರೋಟರಿ ಮೈಸೂರು ಉತ್ತರ ಅಧ್ಯಕ್ಷ ಎಂ. ಚಂದ್ರಶೇಖರ್, ಸ್ಥಳ: ಇನ್‌ಸ್ಟಿಟ್ಯೂಟ್ ಆಫ್ ಇಂಜಿನಿಯರ್ಸ್ ಸಭಾಂಗಣ, ಜೆಎಲ್‌ಬಿ ರಸ್ತೆ, ಸಂಜೆ 6ಕ್ಕೆ.
- **ಸಾಧನ ಮಂದಿರ, ಮೈಸೂರು :** ವಿಶೇಷ ತರಬೇತಿ ಶಿಬಿರ ಹಾಗೂ ಸರಸ್ವತಿ ಪೂಜೆ, ಸಾನ್ನಿಧ್ಯ: ಪೂಜ್ಯ ಸ್ವಾಮಿ ಹಂಸಾನಂದ, ಸಂಜೆ 4 ರಿಂದ ಶ್ರೀ ವೆಂಕಟೇಶ್ವರ ದೇವಸ್ಥಾನ, ಸಿದ್ಧಾರ್ಥನಗರ; ಸಂಜೆ 5.15 ರಿಂದ ಬಲಮುರಿ ವಿನಾಯಕ ದೇವಸ್ಥಾನ, ಸಿದ್ಧಾರ್ಥ ಬಡಾವಣೆ, ಸಂಜೆ 6.30 ರಿಂದ ಗೀತಾ ಶಿಶು ಶಿಕ್ಷಣ ಸಂಘ, ಸಿದ್ಧಾರ್ಥ ಬಡಾವಣೆ.
- **ಗಾನಭಾರತೀ :** ಬೆಳತ್ತೂರು ಲಕ್ಷ್ಮಮ್ಮ, ತುಪ್ಪೂರು ನರಸಿಂಹಾಚಾರ್ ಸ್ಮರಣಾರ್ಥ ಸಂಗೀತ ಕಾರ್ಯಕ್ರಮ, ವಿದ್ವಾನ್ ಸುಮಂತ್ ಮಂಜುನಾಥ್ ಮತ್ತು ಕುಮಾರಿ ಮಾಳವಿ ಮಂಜುನಾಥ್ ಅವರಿಂದ ದ್ವಂದ್ವ ಪಿಟೀಲು ವಾದನ, ವಿದ್ವಾನ್ ಅರ್ಜುನ್‌ಕುಮಾರ್-ಮೃದಂಗ, ವಿದ್ವಾನ್ ಶಮಿತ್‌ಗೌಡ-ಘಟಂ, ಸ್ಥಳ: ವೀಣೆ ಶೇಷಣ್ಣ ಭವನ, ಆದಿಚುಂಚನಗಿರಿ ರಸ್ತೆ, ಕುವೆಂಪುನಗರ, ಸಂಜೆ 6ಕ್ಕೆ.
- **ವ್ಯವಸ್ಥಾಪಕರು :** ಶ್ರೀಚಾಮುಂಡೇಶ್ವರಿ ಅಮ್ಮನವರ ಕೊಠಾರೋತ್ಸವ ವೈಭವ, ವಿದ್ವಾನ್ ಎ.ವಿ.ವಿಶ್ವನಾಥ್, ಚಿಂತಾಮಣಿ, ಚಿಕ್ಕಬಳ್ಳಾಪುರ ಅವರಿಂದ ಕರ್ನಾಟಕ ಶಾಸ್ತ್ರೀಯ ಹಾರ್ಮೋನಿಯಂ ವಾದನ, ಸ್ಥಳ: ಚಾಮುಂಡಿಬೆಟ್ಟದ ದೇವಸ್ಥಾನದ ಒಳಗೆ, ಸಂಜೆ 6 ರಿಂದ.
- **ಶ್ರೀ ಮಹಾಜನ ಸಭಾ ಟ್ರಸ್ಟ್:** ತಿರುಪ್ಪಾವೈ ಪಾರಾಯಣ, ಆಧ್ಯಾತ್ಮಿಕ ಪ್ರವಚನಕಾರರಾದ ಡಾ.ಎನ್.ಕೆ. ರಾಮಶೇಷನ್ ಅವರಿಂದ ಶ್ರೀ ಗೋದಾವರಿ ವಿರಚಿತ ತಿರುಪ್ಪಾವೈ ಪ್ರವಚನ, ಸ್ಥಳ: ಶ್ರೀ ಮಹಾಜನ ಸಭಾ ಟ್ರಸ್ಟ್, ಶ್ರೀರಾಮಮಂದಿರ, ಕಾಂತರಾಜ ರಸ್ತೆ, ಕೃಷ್ಣಮೂರ್ತಿಪುರಂ. ಸಂಜೆ 6.30ಕ್ಕೆ

ಸುತ್ತೂರಿನಲ್ಲಿಂದು, ನಂಜನಗೂಡು ತಾಲೂಕು

- **ಜಗದ್ಗುರು ಶ್ರೀ ವೀರಸಿಂಹಾಸನ ಮಹಾ ಸಂಸ್ಥಾನ ಮಠ:** ಧನುರ್ಮಾಸದ ವಿಶೇಷ ಪೂಜೆ, ಸ್ಥಳ: ಆದಿ ಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿಗಳವರ ಕರ್ತೃ ಗದ್ದುಗೆ, ಶ್ರೀ ಮಹೇಶ್ವರ ಸನ್ನಿಧಿ, ಶ್ರೀ ವೀರಭದ್ರೇಶ್ವರ, ಶ್ರೀ ಸೋಮೇಶ್ವರ, ಶ್ರೀ ನಾರಾಯಣಸ್ವಾಮಿ ದೇವಸ್ಥಾನ, ಸುತ್ತೂರು ಶ್ರೀಕ್ಷೇತ್ರ, ಬೆಳಗ್ಗೆಯಿಂದ.

ಬಡಗಲಹುಂಡಿಯಲ್ಲಿಂದು

- **ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್, ಸಾಮೂಹಿಕ ಶ್ರೀ ಸತ್ಯನಾರಾಯಣಸ್ವಾಮಿ ಪೂಜಾ ಸಮಿತಿ :** ಸಾಮೂಹಿಕ ಶ್ರೀ ಸತ್ಯನಾರಾಯಣಸ್ವಾಮಿ ಪೂಜೆ ಮತ್ತು ಧಾರ್ಮಿಕ ಸಭಾ ಕಾರ್ಯಕ್ರಮ, ಸಾನ್ನಿಧ್ಯ : ದಂಡಿಕೆರೆ ಮಠದ ಶ್ರೀ ಮಹಾಂತ ಬಸವಲಿಂಗ ಸ್ವಾಮೀಜಿ, ಉದ್ಘಾಟನೆ : ವಿಧಾನ ಪರಿಷತ್ ಸದಸ್ಯ ಡಾ. ಯತೀಂದ್ರ ಸಿದ್ದರಾಮಯ್ಯ, ಮುಖ್ಯ ಅತಿಥಿಗಳು : ಕರ್ನಾಟಕ ರಾಜ್ಯ ಪರಿಷತ್ತಿನ ಸಹಕಾರ ಸಂಘಗಳ ಮಹಾಮಂಡಲಿ ಅಧ್ಯಕ್ಷ ಎಸ್. ಚಂದ್ರಶೇಖರ್, ಅಧ್ಯಕ್ಷತೆ : ವರಕೂಡು ಗ್ರಾಪಂ ಅಧ್ಯಕ್ಷ ಶಿವಣ್ಣ, ಸ್ಥಳ: ಬನ್ನಿಮಹಾಕಾಳೇಶ್ವರಿ ದೇವಸ್ಥಾನ, ಬೆಳಗ್ಗೆ 10.30ಕ್ಕೆ.






ನನಗೆ ಬೇಕು... ನನಗೂ ಬೇಕು... ನನಗೂ ಸಹ ಬೇಕು

ಚಾಮರಾಜ ಕ್ಷೇತ್ರದ ಬಿಜೆಪಿ ಟಿಕೆಟ್‌ಗೆ ಈಗಲೇ ತೀವ್ರ ಪೈಪೋಟಿ

ಮೈಸೂರು, ಜ.8(ಬಿಸಿಟಿ, ಬಿಎಲ್‌ಯು)– ರಾಜ್ಯ ವಿಧಾನಸಭೆ ಸಾರ್ವತ್ರಿಕ ಚುನಾವಣೆಗೆ ಇನ್ನೂ ಎರಡು ಕಾಲು ವರ್ಷವಿರುವಾಗಲೇ ಮೈಸೂರಿನ ಚಾಮರಾಜ ಕ್ಷೇತ್ರದ ಬಿಜೆಪಿ ಟಿಕೆಟ್‌ಗೆ ತೀವ್ರ ಪೈಪೋಟಿ ಶುರುವಾಗಿದೆ.



ಕಳೆದ ಲೋಕಸಭಾ ಚುನಾವಣೆಯಲ್ಲಿ ಟಿಕೆಟ್ ವಂಚಿತರಾದ ಮಾಜಿ ಸಂಸದ ಪ್ರತಾಪ್ ಸಿಂಹ ಹೇಳಿಕೆ ಚಾಮರಾಜ ಕ್ಷೇತ್ರದಲ್ಲಿ ಹೊಸ ಸಂಚಲನ ಸೃಷ್ಟಿಸಿದೆ. ಮಾಜಿ ಶಾಸಕರೂ ಆದ ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ, ಪ್ರತಾಪ್ ಸಿಂಹ ವಿರುದ್ಧ ಹರಿಹಾಯ್ದು ಕ್ಷೇತ್ರವನ್ನು ಬಿಟ್ಟುಕೊಡುವ ಪ್ರಶ್ನೆಯೇ ಇಲ್ಲ ಎಂದು ಸವಾಲೆಸೆದಿದ್ದಾರೆ. ಮತ್ತೋರ್ವ ಆಕಾಂಕ್ಷಿ ಖ್ಯಾತ ನರರೋಗ ತಜ್ಞ ಡಾ.ಶುಶ್ರುತ್ ಗೌಡರೂ ಕೂಡ ಈ ಸಂಬಂಧ ಬಹಿರಂಗವಾಗಿ ಹೇಳಿಕೆ ನೀಡಲಾರಂಭಿಸಿದ್ದಾರೆ. ಮುಂದಿನ ದಿನಗಳಲ್ಲಿ ಆಕಾಂಕ್ಷಿತರ ಸಂಖ್ಯೆ ಇನ್ನು ಹೆಚ್ಚಾಗುವ ಸಾಧ್ಯತೆಯೂ ಇದೆ.

ನಾನೂ ಪ್ರಬಲ ಆಕಾಂಕ್ಷಿ: ಮಾಜಿ ಶಾಸಕ ನಾಗೇಂದ್ರ ಹಾಗೂ ಮಾಜಿ ಸಂಸದ ಪ್ರತಾಪ್ ಸಿಂಹ ಅವರ ಹೆಸರೇಳದೆ ಕಿವಿಮಾತು ಹೇಳಿರುವ ನರರೋಗತಜ್ಞ ಡಾ.ಶುಶ್ರುತ್‌ಗೌಡ, ನಾನೇನು ರಾಜಕೀಯ ಸನ್ಯಾಸಿಯಲ್ಲ, ನಾನೂ ಕೂಡ ಚಾಮರಾಜ ಕ್ಷೇತ್ರದ ಪ್ರಬಲ ಬಿಜೆಪಿ ಟಿಕೆಟ್ ಆಕಾಂಕ್ಷಿ ಎಂದಿದ್ದಾರೆ.

ನಾನೇ ಅಭ್ಯರ್ಥಿ ಎಂಬ ಸ್ವಯಂ ಘೋಷಣೆ ಮಾಡಿಕೊಳ್ಳುವುದು, ನಾನು ಇದೇ ಊರಿನವನು ಹೊರಗಿನಿಂದ ಬಂದವನಲ್ಲ ಎನ್ನುವುದು ಸರಿಯಲ್ಲ. ಕೆಲ ದಿನಗಳಿಂದಾಗುತ್ತಿರುವ ಕೆಟ್ಟ ಬೆಳವಣಿಗೆಯಿಂದ ಕಾರ್ಯಕರ್ತರು ಹಾಗೂ ಕ್ಷೇತ್ರದ ಜನರಲ್ಲಿ ಗೊಂದಲ ಮೂಡಿದೆ. ಜೊತೆಗೆ ಬಿಜೆಪಿ ಜೊತೆಗಿರುವ ಜೆಡಿಎಸ್ ಕಾರ್ಯಕರ್ತರಿಗೂ ಮುಜುಗರವಾಗುತ್ತಿದೆ. ಚುನಾವಣೆಗೆ ಇನ್ನೂ ಎರಡೂಕಾಲು ವರ್ಷ ಇದೆ. ನಮ್ಮ ಜನಪರ ಕೆಲಸಗಳತ್ತ ಗಮನ ಕೊಡಬೇಕು. ಸಂಸದರು, ಶಾಸಕರೊಂದಿಗೆ ಸೇರಿಕೊಂಡು ಕೆಲಸ ಮಾಡಬೇಕು. ಗ್ರೇಟರ್ ಮೈಸೂರು, ಮೂಲ ಸೌಕರ್ಯ, ಕಾಂಗ್ರೆಸ್ ಹಗರಣದ ಬಗ್ಗೆ ಮಾತನಾಡಬೇಕು. ಟಿಕೆಟ್ ಸಿಗುವುದಕ್ಕೆ ಜನ, ಪಕ್ಷ, ಹೈಕಮಾಂಡ್, ದೇವರ ಆಶೀರ್ವಾದ ಬೇಕು. ರಾಜಕಾರಣದಲ್ಲಿ ಏನಾಗುತ್ತೋ ಗೊತ್ತಿಲ್ಲ. ಕಳೆದ ಬಾರಿ ಲೋಕಸಭೆ ಟಿಕೆಟ್ ಕೈತಪ್ಪಿತು ಎಂದು ನಾನು ಜನಪರ ಕೆಲಸಗಳನ್ನು ನಿಲ್ಲಿಸಿಲ್ಲ. ಈ ಬೆಳವಣಿಗೆಯನ್ನು ಪಕ್ಷ ಸೂಕ್ಷ್ಮವಾಗಿ ಗಮನಿಸುತ್ತಿದೆ. ಯಾರಿಗಾದರೂ ಟಿಕೆಟ್ ಸಿಗಲಿ, ತಲೆಕೆಡಿಸಿಕೊಳ್ಳುವುದು ಬೇಡ. ಯಾರಿಗೇ ಸಿಕ್ಕರೂ ಉಳಿದವರು ಜೊತೆಯಲ್ಲಿ ನಿಂತು ಕೆಲಸ ಮಾಡೋಣ. ನನಗೆ ಪಕ್ಷ ಹಾಗೂ ಕಾರ್ಯಕರ್ತರೇ ಗಾಡ್‌ಫಾದರ್. ಚುನಾವಣೆ ಸಂದರ್ಭದಲ್ಲಿ ತಂತ್ರಗಾರಿಕೆ ಇದ್ದೇ ಇರುತ್ತದೆ. ಆದರೆ ಈ ಸಂದರ್ಭದಲ್ಲಿ ಇಂತಹ ಬೆಳವಣಿಗೆ ಸರಿಯಲ್ಲ ಎಂದು ಕಿವಿಮಾತು ಹೇಳಿದ್ದಾರೆ.

ದಿಢೀರ್ ಗೋಷ್ಠಿಯಲ್ಲಿ ಸಿಂಹ ಕಿಡಿ: ಮಾಜಿ ಸಂಸದ ಪ್ರತಾಪ್ ಸಿಂಹ ಜ.5ರಂದು ನಡೆಸಿದ ದಿಢೀರ್ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡುವುದರೊಂದಿಗೆ ಚಾಮರಾಜ ಕ್ಷೇತ್ರದ ಟಿಕೆಟ್ ದಂಗಲ್ ಶುರುವಾಯಿತು. ಕೇಂದ್ರ ರಾಜಕಾರಣ ಮುಗಿದ ನಂತರ ರಾಜ್ಯ ರಾಜಕಾರಣಕ್ಕೆ ಬರುವುದು ಸಹಜ ಅಲ್ಲವೆ, ನಾನು ಈಗ ರಾಜ್ಯ ರಾಜಕಾರಣಕ್ಕೆ ಬರಲು ಬಯಸಿದ್ದು, ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಮೈಸೂರು ಚಾಮರಾಜ ಕ್ಷೇತ್ರದಿಂದ ಸ್ಪರ್ಧೆ ಬಯಸಿದ್ದೇನೆ. ಎಲ್ಲಾ ದೃಷ್ಟಿಯಿಂದಲೂ ಚಾಮರಾಜ ಕ್ಷೇತ್ರ ನನಗೆ ಅನುಕೂಲಕರವಾಗಿರುವ ಹಿನ್ನೆಲೆಯಲ್ಲಿ ನಾನು ಈ ಕ್ಷೇತ್ರ ಆಯ್ಕೆ ಮಾಡಿಕೊಂಡಿದ್ದೇನೆ. ಈ ಹಿಂದೆ ಬಿಜೆಪಿಯಿಂದ ಹೆಚ್.ಎಸ್.ಶಂಕರಲಿಂಗೇಗೌಡರು ನಾಲ್ಕು ಬಾರಿ ಆಯ್ಕೆಯಾಗಿದ್ದರು. ಬಿಜೆಪಿಯ ಭದ್ರ ಕೋಟೆಯಾಗಿರುವ ಈ ಕ್ಷೇತ್ರದಿಂದಲೇ ನಾನು ಸ್ಪರ್ಧಿಸಬಯಸಿ, ಚಟುವಟಿಕೆ ಆರಂಭಿಸಿದ್ದೇನೆ. ಪ್ರಜ್ಞಾವಂತರಾದ ಈ ಕ್ಷೇತದ ಮತದಾರರು ಅಭಿವೃದ್ಧಿ ನೋಡಿ ಪ್ರೀತಿ ತೋರಿಸುತ್ತಾರೆಯೇ ಹೊರತು ಹಣದ ಪ್ಯಾಕೆಟ್‌ನಿಂದಲ್ಲ. ಅಭಿವೃದ್ಧಿಯ ನಿರಂತರತೆಯನ್ನು ಕಾಯ್ದುಕೊಂಡು ಸತತ ನಾಲ್ಕೈದು ಬಾರಿ ಶಾಸಕರನ್ನು ಆಯ್ಕೆ ಮಾಡಲು ಕ್ಷೇತ್ರದ ಜನ ಬಯಸಿದ್ದಾರೆ. ಇದಕ್ಕೆ ಶಂಕರಲಿಂಗೇಗೌಡರೇ ಸ್ಪಷ್ಟ ನಿದರ್ಶನ ಎಂದಿದ್ದರು.

ನಾಗೇಂದ್ರ ನೇರ ಸವಾಲು: ಇದಕ್ಕೆ ಮರುದಿನ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿದ ಮಾಜಿ ಶಾಸಕ ಎಲ್.ನಾಗೇಂದ್ರ, ಮುಂಬರುವ ವಿಧಾನಸಭೆ ಚುನಾವಣೆಯಲ್ಲಿ ಚಾಮರಾಜ ಕ್ಷೇತ್ರದಿಂದ ಪಕ್ಷ ನನಗೇ ಟಿಕೆಟ್ ನೀಡುತ್ತದೆ, ನಾನೇ ಮತ್ತೆ ಎಂಎಲ್‌ಎ ಆಗುತ್ತೇನೆ ಎಂದು ಅಬ್ಬರಿಸಿದ್ದರು. ನಾನು ಮೂರು ದಶಕಗಳಿಂದ ಸಾರ್ವಜನಿಕ ಜೀವನದಲ್ಲಿದ್ದು, ಕ್ಷೇತ್ರದ ಸೇವೆ ಮಾಡುತ್ತಾ ಬಂದಿದ್ದೇನೆ. ಪಕ್ಷ, ಜನರ ಬೆಂಬಲ ಹಾಗೂ ಆಶೀರ್ವಾದ ನನ್ನ ಮೇಲಿದೆ. ಯಾವುದೇ ಕಾರಣಕ್ಕೂ ಕ್ಷೇತ್ರವನ್ನು ಬಿಟ್ಟುಕೊಡುವ ಪ್ರಶ್ನೆಯೇ ಇಲ್ಲ. ಕಳೆದ ಲೋಕಸಭಾ ಚುನಾವಣೆ ಸಂದರ್ಭದಲ್ಲೂ ಪ್ರತಾಪ್ ಸಿಂಹ ಹೀಗೆಯೇ ಹೇಳಿದ್ದರು. ಮೊದಲು, ಆಗ ಟಿಕೆಟ್ ತಪ್ಪಿದ್ದಕ್ಕೆ

> **“ ಬಿಜೆಪಿ ಮತ್ತು ಜೆಡಿಎಸ್ ನಡುವೆ ಮೈತ್ರಿ ಏರ್ಪಟ್ಟಿರುವ ಹಿನ್ನೆಲೆಯಲ್ಲಿ ಮೈತ್ರಿ ಕೂಟದ ಅಭ್ಯರ್ಥಿ ಕಣಕ್ಕಿಳಿಸಲು ಎರಡು ಪಕ್ಷದ ವರಿಷ್ಟರು ನಿರ್ಧರಿಸಿದರೆ ಗೊಂದಲವೇ ಬೇಡ ಎಂದು ಈ ಮೂವರ ಬಿಟ್ಟು ಅಚ್ಚರಿಯ ಅಭ್ಯರ್ಥಿ ಸ್ಪರ್ಧಿಗಿಳಿದರೂ ಆಶ್ಚರ್ಯವಿಲ್ಲ. ಇಬ್ಬರ ಕಿತ್ತಾಟದಲ್ಲಿ ಮೂರನೇಯವರಿಗೆ ಲಾಭ ಎಂಬ ಮಾತೇ ಇದೆಯಲ್ಲ! ಆದರೆ, ಈಗ ಮೂವರ ಕಿತ್ತಾಟದಲ್ಲಿ ಬೇರೊಬ್ಬರಿಗೆ ಲಾಭವಾಗಬಹುದೇ!**

ಕಾರಣವೇನೆಂದು ಬಹಿರಂಗವಾಗಿ ಹೇಳಲಿ ಎಂದು ಹರಿಹಾಯ್ದಿದ್ದರು.

ಪ್ರತಾಪ್ ಸಿಂಹ ಅವರಂತಹ 25 ಆಕಾಂಕ್ಷಿಗಳು ಸೃಷ್ಟಿಯಾಗಬಹುದು. ಆದರೆ ಅಂತಿಮವಾಗಿ ಟಿಕೆಟ್ ಯಾರಿಗೆ ನೀಡಬೇಕು ಎಂಬುದನ್ನು ಪಕ್ಷದ ಹೈಕಮಾಂಡ್ ಹಾಗೂ ರಾಜ್ಯ ನಾಯಕರು ಚರ್ಚೆ ಮಾಡಿ, ತೀರ್ಮಾನಿಸುತ್ತಾರೆ. ಕಳೆದ ಲೋಕಸಭಾ ಚುನಾವಣೆ ವೇಳೆ ಕೆಲಸ ಮಾಡದೆ ವಿಧಾನಸಭೆ ಚುನಾವಣೆ ಟಿಕೆಟ್ ಬಗ್ಗೆ ಮಾತನಾಡಲು ಯಾವ ನೈತಿಕತೆ ಇದೆ. ನಾನು ಹೀಗೆ ಯೂಟರ್ನ್ ಹೊಡೆಯುವ ರಾಜಕಾರಣಿಯಲ್ಲ. ನಾನು ಯಾವ ವಿಚಾರಕ್ಕೂ ಕೋರ್ಟ್ ತಡೆ ತಂದು ರಾಜಕಾರಣ ಮಾಡುತ್ತಿಲ್ಲ. ಇದೇ ಊರಲ್ಲಿ ಹುಟ್ಟಿದವನು, ಚಾಮರಾಜ ಕ್ಷೇತ್ರ ನನ್ನ ಧರ್ಮಭೂಮಿ ಹಾಗೂ ಕರ್ಮಭೂಮಿ. ಯಾವುದೋ ಊರಿಂದ ಬಂದವರಿಗೆ ನಾನೇಕೆ ಬಿಟ್ಟುಕೊಡಲಿ. 2028ಕ್ಕೆ ಚಾಮರಾಜ ಕ್ಷೇತ್ರಕ್ಕೆ ಯಾರು ಶಾಸಕರಾಗುತ್ತಾರೆ ಎಂದು ನೋಡಿ. ಇದು ನನ್ನ ಓಪನ್ ಚಾಲೆಂಜ್ ಎಂದು ಸವಾಲೆಸೆದಿದ್ದರು.

ಕಚೇರಿ ತೆರೆಯಲು ಸಿದ್ಧತೆ: ಈ ಮಧ್ಯೆ ಎಲ್.ನಾಗೇಂದ್ರ ಅವರ ಹೇಳಿಕೆಗಳಿಗೆ ಪ್ರತಿಕ್ರಿಯಿಸಿರುವ ಪ್ರತಾಪ್ ಸಿಂಹ, ಕವರ್‌ನಲ್ಲಿ ಹಣ ಕೊಡುವ ಹಾಗೂ ಐದು ವರ್ಷಕ್ಕೆ ಬದಲಾಗುವ ನಾಯಕರನ್ನು ಕ್ಷೇತ್ರದ ಜನ ಆಯ್ಕೆ ಮಾಡುವುದಿಲ್ಲ. ಅವರು ಶಂಕರಲಿಂಗೇಗೌಡರಂತಹ ನಾಲ್ಕೈದು ಬಾರಿ ನಿರಂತರವಾಗಿ ಆಯ್ಕೆಯಾಗುವವರನ್ನು ಬಯಸುತ್ತಾರೆ. ಹಾಗಾಗಿ ನಾನು ಈ ಕ್ಷೇತ್ರದಲ್ಲೇ ಮನೆ, ಕಚೇರಿ ತೆರೆಯುತ್ತೇನೆ. ಟಿಕೆಟ್ ಕೊಡು ವುದು ಹೈಕಮಾಂಡ್‌ಗೆ ಬಿಟ್ಟ ವಿಚಾರ ಎಂದಿದ್ದಾರೆ.

ಬಿಜೆಪಿಯ ಭದ್ರ ಕೋಟೆಯಾಗಿರುವ ಚಾಮರಾಜ ಕ್ಷೇತ್ರದಲ್ಲಿ ನಾಲ್ಕು ಬಾರಿ ಬಿಜೆಪಿ ಅಭ್ಯರ್ಥಿಯಾಗಿ ಹೆಚ್.ಎಸ್.ಶಂಕರಲಿಂಗೇಗೌಡರು ಆಯ್ಕೆಗೊಂಡಿದ್ದರು. ತರುವಾಯ ಬಿಜೆಪಿ ಅಭ್ಯರ್ಥಿಯಾಗಿ ಎಲ್.ನಾಗೇಂದ್ರ ಒಂದು ಬಾರಿ ಜಯಶಾಲಿಯಾಗಿದ್ದರು. ಆದರೆ ಕಳೆದ ಬಾರಿಯ 2023ರ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಕೆ.ಹರೀಶ್ ಗೌಡ ಅವರು ಎಲ್.ನಾಗೇಂದ್ರ ವಿರುದ್ಧ 4,094 ಮತಗಳ ಅಂತರದಿಂದ ಗೆಲುವು ಸಾಧಿಸಿದ್ದಾರೆ. ಆದರೆ ದೂರದ ಚುನಾವಣೆಗೆ ಬಿಜೆಪಿ ಮನೆಯ ರಾಜಕಾರಣ ಈಗಲೇ ರಂಗು ಪಡೆದಿದೆ. ಚುನಾವಣೆ ಹತ್ತಿರವಾಗುತ್ತಿದ್ದಂತೆ ಮತ್ತಷ್ಟು ಕಾವೇರುವುದಂತೂ ನಿಶ್ಚಿತ. ಬಿಜೆಪಿಗೆ ಈಗ ಕಾಂಗ್ರೆಸ್ ಪೈಪೋಟಿಯಲ್ಲ, ಬಿಜೆಪಿಗೆ ಬಿಜೆಪಿಯಲ್ಲಿರುವವರೇ ಪೈಪೋಟಿ ಜೊತೆಗೆ ತಲೆ ನೋವಾಗಿರುವುದು ಕಾಂಗ್ರೆಸ್ ಮನೆಯಲ್ಲಿ ಸಂತಸ ಹೆಚ್ಚಿಸಿದೆ.

ಸೋಮಣ್ಣನನ್ನು ಬ್ರೈನ್ ಮ್ಯಾಪಿಂಗ್‌ಗೆ ಒಳಪಡಿಸಿದರೆ ಬಳ್ಳಾರಿ ಗಲಾಟೆ ಷಡ್ಯಂತ್ರ ಬಯಲಾಗಲಿದೆ

ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ

- ಅಮಿತ್ ಶಾ ಸಂದೇಶ ಹೊತ್ತು ತಂದ ಸೋಮಣ್ಣ
- ಪ್ರೆಸ್‌ಮೀಟ್ ಮಾಡಿದರೆ ಪ್ರಯೋಜನವಿಲ್ಲ
- ಹೆಣ ಬೀಳಿಸಿ ರಾಜಕಾರಣ ಮಾಡುವ ಹುನ್ನಾರ
- ಹೆಚ್.ಡಿ.ಕುಮಾರಸ್ವಾಮಿಗೆ ದೆಹಲಿಯಲ್ಲಿ ಕೆಲಸವಿಲ್ಲ

ಮೈಸೂರು, ಜ.8(ಬಿಎಲ್‌ಯು)– ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಚಿತಾವಣೆಯಿಂದ ಬಳ್ಳಾರಿಯಲ್ಲಿ ಗಲಾಟೆ ನಡೆದು ಕಾಂಗ್ರೆಸ್ ಕಾರ್ಯಕರ್ತನ ಹೆಣ ಬಿದ್ದಿದೆ. ಅಮಿತ್ ಶಾ ಅವರ ಸಂದೇಶ ಹೊತ್ತು ತಂದ ಕೇಂದ್ರ ಸಚಿವ ಸೋಮಣ್ಣ ಅವರನ್ನು ಬ್ರೈನ್ ಮ್ಯಾಪಿಂಗ್‌ಗೆ ಒಳಪಡಿಸಿದರೆ ಷಡ್ಯಂತ್ರ ಬಯಲಾಗಲಿದೆ ಎಂದು ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ ಆರೋಪಿಸಿದ್ದಾರೆ.

ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಸೋಮಣ್ಣ ಅವರು ಬಳ್ಳಾರಿಗೆ ಭೇಟಿ ನೀಡಿ ಜನಾರ್ಧನ ರೆಡ್ಡಿ ಹಾಗೂ ಶ್ರೀರಾಮುಲು ಜೊತೆ ಚರ್ಚೆ ನಡೆಸಿದ ನಂತರ ಗಲಾಟೆಯಾಗಿದೆ ಎಂದು ದೂರಿದರು. ಕೆಲಸಕ್ಕೆ ಬಾರದ ಮಾತಾಡಿಕೊಂಡು, ಪ್ರೆಸ್‌ಮೀಟ್ ಮಾಡಿಕೊಂಡಿದ್ದರೆ ಯಾವುದೇ ಪ್ರಯೋಜನವಿಲ್ಲ, ಒಂದು ಹೆಣ ಬೀಳಿಸಿ ರಾಜಕಾರಣ ಮಾಡಿ ಎಂದು ಅಮಿತ್ ಶಾ ಅವರ ಸಂದೇಶವನ್ನು ಸೋಮಣ್ಣ ಅವರು ಜನಾರ್ಧನ ರೆಡ್ಡಿ ಹಾಗೂ ಶ್ರೀರಾಮುಲುಗೆ ತಲುಪಿಸಿದ್ದಾರೆ ಎಂದು ಆರೋಪಿಸಿದರು. ಈಗ ಸೋಮಣ್ಣ ಅವರನ್ನು ಬ್ರೈನ್ ಮ್ಯಾಪಿಂಗ್‌ಗೆ ಒಳಪಡಿಸಿದರೆ ಬಳ್ಳಾರಿ ಗಲಾಟೆ ಷಡ್ಯಂತ್ರ ಬಯಲಾಗಲಿದೆ ಎಂದು ಲಕ್ಷ್ಮಣ್ ಆಗ್ರಹಿಸಿದ್ದಾರೆ.

ಹೈ ಡ್ರಾಮಾ: ಹುಬ್ಬಳ್ಳಿಯಲ್ಲಿ ಸುಜಾತ ಹಂಡಿ ಎಂಬಾಕೆ ನನ್ನನ್ನು ವಿವಸ್ತ್ರಗೊಳಿಸಿದ್ದಾರೆ ಎಂದು ಹೈಡ್ರಾಮಾ ಮಾಡಿದ್ದಾಳೆ. ಪೊಲೀಸರ ವ್ಯಾನ್‌ಗೆ ಹತ್ತುತ್ತಿದ್ದಂತೆ ಸುಜಾತ ಹಂಡಿ ಸ್ವತಃ ತಾನೆ ವಿವಸ್ತ್ರಗೊಳಿಸಿಕೊಂಡು ಅದನ್ನು ಸಹೋದರ ನಿಂದ ಮೊಬೈಲ್‌ನಲ್ಲಿ ರೆಕಾರ್ಡ್ ಮಾಡಿಸಿ ಕೊಂಡಿದ್ದಾಳೆ. ಇದಕ್ಕೆ ಸಂಬಂಧಿಸಿದಂತೆ ಪೊಲೀಸರ ಬಳಿ ಎಲ್ಲಾ ಸಾಕ್ಷ್ಯಗಳಿದ್ದು, ಪೊಲೀಸರು ಕಾನೂನಾತ್ಮಕ ಕ್ರಮ ಕೈಗೊಳ್ಳುತ್ತಾರೆ ಎಂದು ತಿಳಿಸಿದರು.

ಸುಜಾತ ಹಂಡಿ ವಿರುದ್ಧ 9 ಪೊಲೀಸ್ ಠಾಣೆಗಳಲ್ಲಿ 47 ವಿವಿಧ ಪ್ರಕರಣಗಳು ದಾಖಲಾಗಿವೆ. ಕೊಲೆಯತ್ನ, ಹನಿಟ್ರ್ಯಾಪ್ ಸೇರಿದಂತೆ ಇತರೆ ಆರೋಪಗಳನ್ನು ಆಕೆ ಎದುರಿಸುತ್ತಿದ್ದಾಳೆ. ಈಕೆಯನ್ನು ಬಿಜೆಪಿಯವರು ಬೆಂಬಲಿಸುತ್ತಿರುವುದು ನಾಚಿಕೆಗೇಡಿನ ಸಂಗತಿ ಎಂದು ಕಿಡಿಕಾರಿದರು. ಕುಮಾರಸ್ವಾಮಿ ಅವರನ್ನು ನಾಮಕಾವಸ್ಥೆಗೆ ಕೇಂದ್ರ ಮಂತ್ರಿ ಮಾಡಿದ್ದು, ಒಂದೇ ಒಂದು ಫೈಲ್ ಅನ್ನು ಅವರ ಬಳಿ ಕಳುಹಿಸುವುದಿಲ್ಲ. ದೆಹಲಿಯಲ್ಲಿ ಕೆಲಸವಿಲ್ಲದ ಕಾರಣ ಕರ್ನಾಟಕದಲ್ಲಿ ರೈತರ ಆತ್ಮಹತ್ಯೆ ಆಗುತ್ತಿದೆ ಎಂದು ಆಧಾರ ರಹಿತ ಆರೋಪ ಮಾಡುತ್ತಿದ್ದಾರೆ ಎಂದರು.



ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಗುರುವಾರ ಕೆಪಿಸಿಸಿ ವಕ್ತಾರ ಎಂ.ಲಕ್ಷ್ಮಣ್ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

ಪ್ರತಾಪ್ ಸಿಂಹನದು ಅತಿ ವೇಗದ ಸುಳ್ಳು; ಯದುವೀರ್‌ರಿಂದ ನಿಧಾನಗತಿ ಸುಳ್ಳು

ಮಾಜಿ ಸಂಸದ ಪ್ರತಾಪ್ ಸಿಂಹ ಅತಿ ವೇಗದ ಸುಳ್ಳು ಹೇಳುತ್ತಿದ್ದರು, ಹಾಲಿ ಸಂಸದ ಯದುವೀರ್ ನಿಧಾನಗತಿಯಲ್ಲಿ ಸುಳ್ಳು ಹೇಳುತ್ತಿದ್ದಾರೆ ಎಂದು ಲಕ್ಷ್ಮಣ್ ಗೇಲಿ ಮಾಡಿದರು.

ಸಂಸದ ಯದುವೀರ್ ಅವರು 20 ತಿಂಗಳ ಅಧಿಕಾರಾವಧಿಯಲ್ಲಿ ಕೇಂದ್ರ ಸರ್ಕಾರದಿಂದ ನಯಾ ಪೈಸೆ ಅನುದಾನ ತಂದಿಲ್ಲ. ಯೂನಿಟಿ ಮಾಲ್‌ಗೆ ಯದುವೀರ್ ಶಂಕು ಸ್ಥಾಪನೆ ಮಾಡಿದರೆ, ಅವರ ತಾಯಿ ಯೋಜನೆಯನ್ನೆ ಮುಗಿಸಿ ಬಿಡುವ ಕಲ್ಲು ಹಾಕಿದ್ದಾರೆ ಎಂದು ತಿಳಿಸಿದರು. ಹುಣಸೂರಿನಲ್ಲಿ ತಂಬಾಕಿಗೆ 250 ಕೆ.ಜಿ. ದೊರೆಯುತ್ತಿದ್ದರೆ, ಆಂಧ್ರಪ್ರದೇಶದಲ್ಲಿ 450 ರೂಪಾಯಿ ದೊರೆಯುತ್ತಿದೆ. ಕಂಪನಿ ಹಾಗೂ ದಲ್ಲಾಳಿಗಳು ಸೇರಿ ರೈತರನ್ನು ವಂಚಿಸುತ್ತಿದ್ದಾರೆ. ಸಂಸದರಾದ ಯದುವೀರ್ ಇದನ್ನು ಪರಿಹಾರ ಮಾಡುವ ಕಿಂಚಿತ್ತೂ ಪ್ರಯತ್ನ ಮಾಡಿಲ್ಲ ಎಂದು ಲಕ್ಷ್ಮಣ್ ಆರೋಪಿಸಿದರು.

2018ರಿಂದ 2023ರವರೆಗೆ ಕರ್ನಾಟಕದಲ್ಲಿ 5,341 ರೈತರು ಆತ್ಮಹತ್ಯೆ ಮಾಡಿಕೊಂಡಿದ್ದು, ಹೆಚ್.ಡಿ.ಕುಮಾರಸ್ವಾಮಿ ಅವರ ಅಧಿಕಾರಾವಧಿಯಲ್ಲಿ 1,084 ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಇನ್ನು ಸಿದ್ದರಾಮಯ್ಯ ಅವರ ಅಧಿಕಾರಾವಧಿಯಲ್ಲಿ 2,809 ರೈತರ ಆತ್ಮಹತ್ಯೆಯಾಗಿದೆ. ಈ ದಾಖಲಾತಿಯನ್ನು ಕುಮಾರಸ್ವಾಮಿ ಅವರು ಒಮ್ಮೆ ತೆಗೆದು ನೋಡಬೇಕು ಎಂದು ಲಕ್ಷ್ಮಣ ಅವರು ಸಲಹೆ ನೀಡಿದರು.

ನಗರ ಕಾಂಗ್ರೆಸ್ ಅಧ್ಯಕ್ಷ ಆರ್.ಮೂರ್ತಿ, ಜಿಲ್ಲಾಧ್ಯಕ್ಷ ಡಾ.ಬಿ.ಜೆ.ವಿಜಯಕುಮಾರ್, ಜಿಪಂ ಮಾಜಿ ಅಧ್ಯಕ್ಷ ಬಿ.ಎಂ.ರಾಮು, ಮಾಧ್ಯಮ ವಕ್ತಾರ ಮಹೇಶ್ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ಕೆ.ಎಸ್.ಗಿರೀಶ್‌ಗೆ ಪಿಹೆಚ್.ಡಿ



ಮೈಸೂರು, ಜ.8– ಗಿರೀಶ್ ಕೆ.ಎಸ್. ಅವರು ಡಾ. ಎಂ ಪುಷ್ಪಾವತಿ ಅವರ ಮಾರ್ಗದರ್ಶನದಲ್ಲಿ ಸಾದರ ಪಡಿಸಿದ speech language pathology ವಿಷಯದಲ್ಲಿ ಸಂಶೋಧನೆ ನಡೆಸಿದ ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾಲಯ ಪಿಹೆಚ್.ಡಿ ಪದವಿಗೆ ಅಂಗೀಕರಿಸಿದೆ.

ರಮ್ಮನಹಳ್ಳಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯ

ಮಹದೇವಪುರ ಮುಖ್ಯರಸ್ತೆಯ ಬೀದಿಬದಿ ಅಂಗಡಿಗಳ ತೆರವು

ಪೊಲೀಸ್ ಭದ್ರತೆಯೊಂದಿಗೆ ಪಂಚಾಯಿತಿಯಿಂದ ಕಾರ್ಯಾಚರಣೆ



ಮಹದೇವಪುರ ಮುಖ್ಯರಸ್ತೆ ಬದಿಯ ಅನಧಿಕೃತ ಅಂಗಡಿಗಳ ತೆರವು ಕಾಯಾಚರಣೆ.

ಮೈಸೂರು, ಜ.8(ಪಿಎಂ)– ರಮ್ಮನಹಳ್ಳಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಮಹದೇವಪುರ ಮುಖ್ಯರಸ್ತೆಯ ಬೀದಿಬದಿಯಲ್ಲಿ ತಲೆ ಎತ್ತಿದ್ದ ಅನಧಿಕೃತ ಅಂಗಡಿಗಳನ್ನು ಗುರುವಾರ ಪಂಚಾಯಿತಿ ವತಿಯಿಂದ ಕಾರ್ಯಾಚರಣೆ ನಡೆಸಿ ತೆರವುಗೊಳಿಸಲಾಯಿತು.

ರಮ್ಮನಹಳ್ಳಿ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಎಸ್.ಎನ್.ರವಿಕೀರ್ತಿ ನೇತೃತ್ವದಲ್ಲಿ ಪೊಲೀಸ್ ಭದ್ರತೆಯೊಂದಿಗೆ ತೆರವು ಕಾರ್ಯಾಚರಣೆ ನಡೆಸಲಾಯಿತು. ಸಾತಗಳ್ಳಿ ಬಸ್ ಡಿಪೋ ಬಳಿಯಿಂದ ರಮ್ಮನಹಳ್ಳಿಯವರೆಗೆ ಮಹದೇವಪುರ ಮುಖ್ಯರಸ್ತೆಯಲ್ಲಿ ಗುಜರಿ, ಸಣ್ಣ ಹೋಟೆಲ್‌ಗಳು ಸೇರಿದಂತೆ ನಾನಾ ರೀತಿಯ ಸಣ್ಣಪುಟ್ಟ ಅಂಗಡಿಗಳನ್ನು ನೆಲಸಮ ಮಾಡಲಾಯಿತು.

ಕಬ್ಬಿಣದ ತಗಡು ಸೇರಿದಂತೆ ಇನ್ನಿತರ ವಿಧದಲ್ಲಿ ನಿರ್ಮಾಣಗೊಂಡಿದ್ದ ನಾನಾ ರೀತಿಯ ಸುಮಾರು 15 ಅಂಗಡಿಗಳನ್ನು ಜೆಸಿಬಿ ಮೂಲಕ ತೆರವು ಮಾಡಲಾಯಿತು. ಮಧ್ಯಾಹ್ನ 12.30ರಿಂದ ರಾತ್ರಿ 8.30ರವರೆಗೂ ಕಾರ್ಯಾಚರಣೆ ನಡೆಯಿತು.

ಕಾರ್ಯಾಚರಣೆ ವೇಳೆ ಮಾಧ್ಯಮದವರೊಂದಿಗೆ ಮಾತನಾಡಿದ ಎಸ್.ಎನ್.ರವಿಕೀರ್ತಿ, ಮಹದೇವಪುರ ಮುಖ್ಯ ರಸ್ತೆಯಲ್ಲಿ ಅಧಿಕೃತವಾಗಿ ಅಂಗಡಿಗಳು ತಲೆ ಎತ್ತುವ ಮೂಲಕ ಸುಗಮ ಸಂಚಾರಕ್ಕೆ ಅಡಚಣೆ ಉಂಟಾಗಿತ್ತು. ಈ ಹಿನ್ನೆಲೆಯಲ್ಲಿ ಸಾರ್ವಜನಿಕರಿಂದ ದೂರುಗಳು ಸಹ ಬಂದಿದ್ದವು ಎಂದರು. ಜೊತೆಗೆ ಅಪಘಾತಗಳು ಸಂಬಂಧವಿ ಸುತ್ತಿದ್ದವು. ಆದ್ದರಿಂದ ಇಂದು ತೆರವು ಕಾರ್ಯಾಚರಣೆ ನಡೆಸುತ್ತಿದ್ದು, ಕೆಲವರು ತಾವೇ ತೆರವು ಮಾಡುತ್ತೇವೆ ಎಂದು ಕಾಲವಕಾಶಕ್ಕೆ ಮನವಿ ಮಾಡಿದ್ದಾರೆ. ಅವರಿಗೆ ಒಂದು ದಿನದ ಕಾಲಾವಕಾಶ ನೀಡಿದ್ದು, ಆ ಬಳಿಕವೂ ಅವರು ತೆರವು ಮಾಡಿಲ್ಲವೆಂದರೆ ನಾವೇ ತೆರವುಗೊಳಿಸಲಿದ್ದೇವೆ ಎಂದು ತಿಳಿಸಿದರು. ಪಂಚಾಯಿತಿಯ ಇಂಜಿನಿಯರ್ ರಾಮಚಂದ್ರು, ಬಿಲ್ ಕಲೆಕ್ಟರ್ ಸಿದ್ದಯ್ಯ, ಆರೋಗ್ಯಾಧಿಕಾರಿ ಚನ್ನನಾಯಕ ಸೇರಿದಂತೆ ಸಿಬ್ಬಂದಿ ವರ್ಗದವರು ಹಾಜರಿದ್ದರು.

ನಕ್ಕರೆ ಅದೇ ಸ್ವರ್ಗ

ಹೆಂಡತಿ (ತನ್ನ ಕುಡುಕ ಗಂಡನಿಗೆ) : ನನ್ನ ಮೇಲೆ ಆಣೆ ಮಾಡು. ಇನ್ಮುಂದೆ ಕುಡಿಯಲ್ಲಾ ಅಂತ.
ಗಂಡ : ನಿನ್ನ ಮೇಲೆ ಆಣೆಯಾಗು ಇನ್ಮುಂದೆ ಕುಡಿಯೊಲ್ಲಾ.
ಹೆಂಡತಿ : ಇನ್ನೊಂದ್ಸಾರಿ ಕುಡಿದ್ರೆ...?
ಗಂಡ : ಮತ್ತೆ ಆಣೆ ಮಾಡ್ತೀನಿ!

ಮೈಸೂರು ಮಿತ್ರ

ಶುಕ್ರವಾರ, ಜನವರಿ 9, 2026

ಸತ್ಯೇನೋತ್ತಭಿತಾ ಭೂಮಿಃ ನ ಹಿ ಸತ್ಯಾತ್ಪರೋ ಧರ್ಮಃ
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತ ವಾಹಿನಿ.........

ಹುಡುಕುತ್ತಾ ಹೋದ ಧರ್ಮರಾಯನಿಗೆ ಕೆಟ್ಟವರು ಸಿಗಲಿಲ್ಲ..!!
ಎಷ್ಟು ಹುಡುಕಿದರೂ ದುರ್ಯೋಧನನಿಗೆ ಒಳ್ಳೆಯವರ ದರ್ಶನವಾಗಲಿಲ್ಲ.
ನೋಡುವ ದೃಷ್ಟಿ ನಮ್ಮ ವ್ಯಕ್ತಿತ್ವವನ್ನು ರೂಪಿಸುತ್ತದೆ.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ರಾವಣನ ಮಾತಿಗೆ ಮನಸೋತವ, ರಾಮನ ಮಾತಿಗೆ ಜಾಣನಾಗುವನೇ?

ನಿಮ್ಮ ಪತ್ರಗಳು

ರಸ್ತೆ ಸಮಸ್ಯೆ ಬಗೆಹರಿಸಿ

ಮಾನ್ಯರೆ,

ಮೈಸೂರಿನ ಶಿವರಾಂಪೇಟೆ ರಸ್ತೆಯಲ್ಲಿರುವ ನಂಜರಾಜ ಬಹದ್ದೂರ್ ಛತ್ರ ಹಾಗೂ ರಾಜಕಮಲ್ ಥಿಯೇಟರ್ ನಡುವೆ ಬರುವ ವೃತ್ತ (ಸರ್ಕಲ್). ಈ ವೃತ್ತವನ್ನು ಹೋಟೆಲ್ ಶೃಂಗಾರ ಸರ್ಕಲ್ ಅಥವಾ ದಿವಾನ್ ರೋಡ್ ಸರ್ಕಲ್ ಅಂತ ಕರೆಯುತ್ತಾರೆ. ಈ ವೃತ್ತದಲ್ಲಿ ದಿನನಿತ್ಯ ಸಾಕಷ್ಟು ವಾಹನಗಳು ಸಂಚರಿಸುತ್ತವೆ. ಆದರೆ ಈ ಸರ್ಕಲ್‌ನಲ್ಲಿ ಕೆಲವು ಸಂದರ್ಭಗಳಲ್ಲಿ ವಾಹನ ಚಾಲಕರು ಅಡ್ಡಾದಿಡ್ಡಿ ಓಡಿಸುತ್ತಾರೆ. ಯಾವುದೇ ವಾಹನ ಸವಾರ ರಸ್ತೆಯಲ್ಲಿ ಹೋಗಬೇಕಾದರೆ ಒಂದು ವೃತ್ತ ಕಂಡ ಕೂಡಲೇ ಅದನ್ನು ಬಳಸಿಕೊಂಡು ಹೋಗುವುದು ಒಂದು ನಿಯಮ. ಆದರೆ ಇಲ್ಲಿ ಅದು ತದ್ವಿರುದ್ಧವಾಗಿದೆ. ಅದು ಎಷ್ಟರ ಮಟ್ಟಿಗೆ ಎಂದರೆ ವೃತ್ತವನ್ನು ಬಳಸದೆ ಯದ್ವಾತದ್ವಾ ನುಗ್ಗುವ ಪ್ರಸಂಗ ಎದುರಾಗಿದೆ. ಇದರಿಂದ ಸಾಕಷ್ಟು ಪ್ರಮಾಣದಲ್ಲಿ ಟ್ರಾಫಿಕ್ ಜಾಮ್ ಉಂಟಾಗುತ್ತಿದೆ. ಅಲ್ಲದೆ ಈ ಸರ್ಕಲ್ ಕೆ.ಆರ್.ಆಸ್ಪತ್ರೆ ಹತ್ತಿರದಲ್ಲೇ ಇರುವುದರಿಂದ ದಿನಕ್ಕೆ ಲೆಕ್ಕವಿರದಷ್ಟು ಅಂಬುಲೆನ್ಸ್‌ಗಳು ರೋಗಿಗಳನ್ನು ಕರೆದುಕೊಂಡು ಅದೇ ರಸ್ತೆ ಮಾರ್ಗದಲ್ಲಿ ಹೋಗುತ್ತವೆ. ಈ ಸರ್ಕಲ್‌ನಲ್ಲಿ ಇತ್ತೀಚೆಗೆ ಸಿಗ್ನಲ್ ಅಳವಡಿಸಲಾಗಿದೆ. ಆದರೆ ಅದು ಕಾರ್ಯ ನಿರ್ವಹಿಸುತ್ತಿಲ್ಲ. ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು ಇದರ ಬಗ್ಗೆ ಗಮನ ಹರಿಸಬೇಕಾಗಿ ಮನವಿ.

–ಬಿ.ಎಸ್.ಸಾಯಿ ಸಂದೇಶ್, ಮೈಸೂರು

ಪಾಲಿಕೆ ಚುನಾವಣೆ ಯಾವಾಗ?

ಮಾನ್ಯರೆ,

ಮೈಸೂರು ಮಹಾನಗರ ಪಾಲಿಕೆ ಚುನಾವಣೆ ಹಾಗೂ ಜನಪ್ರತಿನಿಧಿಗಳ ಸದಸ್ಯರ ಅವಧಿ ಮುಗಿದು ಎರಡು ವರ್ಷಗಳೇ ಕಳೆದಿವೆ. ಆದರೆ ಸರ್ಕಾರ ಚುನಾವಣೆ ನಡೆಸಲು ಮುಂದಾಗುತ್ತಿಲ್ಲ. ದಿನಾಂಕವನ್ನು ಪ್ರಕಟಿಸುತ್ತಿಲ್ಲ. ವಾರ್ಡ್‌ಗಳಲ್ಲಿ ಆಗಬೇಕಾದ ಕೆಲಸಗಳಿಗೆ ಜನಸಾಮಾನ್ಯರು ತಮ್ಮ ಕುಂದುಕೊರತೆಗಳನ್ನು ದೂರವಾಣಿ ಮೂಲಕ ಪಾಲಿಕೆ ಸದಸ್ಯರಿಗೆ ಕರೆ ಮಾಡಿ ಸಮಸ್ಯೆಗಳನ್ನು ಪರಿಹರಿಸಿಕೊಳ್ಳುತ್ತಿದ್ದರು. ಈಗ ಪಾಲಿಕೆ ಕಚೇರಿಗೆ ಬಂದು ಅಧಿಕಾರಿಗಳನ್ನೇ ಭೇಟಿ ಮಾಡಬೇಕಾಗಿದೆ. ಪಾಲಿಕೆ ಚುನಾವಣೆ ನಡೆಸಲು ಈ ವಿಳಂಬವೇಕೆ? ಗ್ರೇಟರ್ ಮೈಸೂರು ನಗರ ಪಾಲಿಕೆಯಾಗಿ ಮಾರ್ಪಡಲು ಮುಂದಾಗಿರುವ ಕಾರಣಕ್ಕೆ ಈ ವಿಳಂಬವೇ?

–ಪಿ.ಸಿ.ಕಂಗಾಣಿಸೋಮು, ಕ್ಯಾತಮಾರನಹಳ್ಳಿ, ಮೈಸೂರು

ಪ್ರಶ್ನೆ ಪತ್ರಿಕೆ ಸೋರಿಕೆ ಎಂಬ 'ನಿರಂತರ ಶಾಪ'

ಮಾನ್ಯರೆ,

ರಾಜ್ಯದಲ್ಲಿ ಪರೀಕ್ಷೆಗಳೆಂದರೆ 'ಸೋರಿಕೆಗಳ ಸರಣಿ' ಎಂಬಂತಾಗಿರುವುದು ದುರದೃಷ್ಟಕರ. ಈ ಬಾರಿ ದ್ವಿತೀಯ ಪಿಯುಸಿ ಪೂರ್ವ ಸಿದ್ಧತಾ ಪರೀಕ್ಷೆಯ 80 ಅಂಕಗಳ 47 ಪ್ರಶ್ನೆಗಳೂ ಪರೀಕ್ಷೆಗೆ ಒಂದು ದಿನ ಮುಂಚಿತವಾಗಿಯೇ ವಾಟ್ಸಾಪ್‌ನಲ್ಲಿ ಲಭ್ಯವಿದ್ದವು ಎಂದರೆ, ಮಂಡಳಿಯ ಗೌಪ್ಯತೆಯ ಮಟ್ಟ ಎಷ್ಟು ನಗಣ್ಯವಾಗಿದೆ ಎಂಬುದು ತಿಳಿಯುತ್ತದೆ. ಕಳೆದ ದಶಕದಲ್ಲಿ ಕೆಪಿಎಸ್‌ಸಿಯಿಂದ ಹಿಡಿದು ಪೊಲೀಸ್ ನೇಮಕಾತಿವರೆಗೆ ನಡೆದ ಹಗರಣಗಳ ಅಂಕಿ–ಅಂಶಗಳನ್ನು ನೋಡಿದರೆ, ಶೇ. 90ರಷ್ಟು ಪ್ರಕರಣಗಳಲ್ಲಿ ವ್ಯವಸ್ಥೆಯ ಒಳಗಿನವರೇ ಭಾಗಿಯಾಗಿರುವುದು ಸಾಬೀತಾಗಿದೆ.ಲಕ್ಷಾಂತರ ರೂಪಾಯಿ ವೆಚ್ಚ ಮಾಡಿ ಏಕರೂಪದ ಪ್ರಶ್ನೆ ಪತ್ರಿಕೆ ಸಿದ್ಧಪಡಿಸುವ ಸರ್ಕಾರ, ಅದನ್ನು ರಕ್ಷಿಸಲು ವಿಫಲವಾಗುತ್ತಿರುವುದು ಕೇವಲ ಆಡಳಿತಾತ್ಮಕ ಲೋಪವಲ್ಲ, ಇದು ವ್ಯವಸ್ಥಿತ ಭ್ರಷ್ಟಾಚಾರ. ಪ್ರತಿ ಬಾರಿ 90% ಕ್ಕೂ ಹೆಚ್ಚು ಅಂಕ ಪಡೆಯಲು ಶ್ರಮಿಸುವ ಬಡ ಮತ್ತು ಪ್ರತಿಭಾವಂತ ವಿದ್ಯಾರ್ಥಿಗಳ ಬೆನ್ನಿಗೆ ಸರ್ಕಾರ ಚೂರಿ ಹಾಕುತ್ತಿದೆ. ಕೇವಲ ತನಿಖೆಯ ನಾಟಕವಾಡುವ ಬದಲು, ಪರೀಕ್ಷಾ ಮಂಡಳಿಯನ್ನು ಸಂಪೂರ್ಣವಾಗಿ ನವೀಕರಿಸಿ, ತಪ್ಪಿತಸ್ಥರ ಮೇಲೆ ಗೂಂಡಾ ಕಾಯ್ದೆಯಡಿ ಕ್ರಮ ಜರುಗಿಸದಿದ್ದರೆ ಇಡೀ ಶಿಕ್ಷಣ ವ್ಯವಸ್ಥೆ ಹರಾಜಾಗುವುದು ನಿಶ್ಚಿತ.

–ಡಾ.ಎಚ್.ಕೆ.ವಿಜಯಕುಮಾರ, ಮೈಸೂರು.

ಬೀದಿಗೆ ಬಂದ ಮಾಜಿ ಜನಪ್ರತಿನಿಧಿಗಳ ಜಗಳ

ಮಾನ್ಯರೆ,

ರಾಜ್ಯದಲ್ಲಿ ಮುಂದಿನ ವಿಧಾನಸಭಾ ಚುನಾವಣೆ ನಡೆಯುವುದು 2028 ಏಪ್ರಿಲ್, ಮೇ ತಿಂಗಳಲ್ಲಿ, ಅಂದರೆ ಸುಮಾರು, ಇನ್ನು ಎರಡೂವರೆ ವರ್ಷಗಳ ಬಳಿಕ, ಆದರೆ ಮೈಸೂರಿನ ಚಾಮರಾಜ ಕ್ಷೇತ್ರದಲ್ಲಿ ಈಗಾಗಲೇ ಬಿಜೆಪಿ ಟಿಕೆಟ್‌ಗೆ ಮಾಜಿ ಲೋಕಸಭಾ ಸದಸ್ಯ ಮತ್ತು ಮಾಜಿ ವಿಧಾನಸಭಾ ಸದಸ್ಯರ ಜಗಳ ಮಾಧ್ಯಮಗಳ ಮೂಲಕ ಬೀದಿಗೆ ಬಂದಿದೆ. ಇದು ಇಬ್ಬರಿಗೂ ಗೌರವ ತರುವ ವಿಷಯವಲ್ಲ. ಕಳೆದ 20 ವರ್ಷಗಳ ಕಾಲ ಬಿಜೆಪಿ ವಶದಲ್ಲಿದ್ದ ಈ ಕ್ಷೇತ್ರವು ಕಳೆದ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಾಲಾಗಿತ್ತು. ಈ ಕ್ಷೇತ್ರ ಬಿಜೆಪಿಗೆ ಆಶಾದಾಯಕವಾಗಿದೆ ಎಂದು ಭಾವಿಸಿ ಇಬ್ಬರು ಮಾಜಿ ಅನುಭವಿ ರಾಜಕಾರಣಿಗಳು ಈಗಲೇ ಈ ಕ್ಷೇತ್ರದ ಮೇಲೆ ಕಣ್ಣಿಟ್ಟು ಅದನ್ನು ಬಹಿರಂಗವಾಗಿ ಮಾಧ್ಯಮಗಳ ಮುಂದೆ ಹೇಳುವ ಅಗತ್ಯವಿಲ್ಲ?

–ಬೂಕನಕೆರೆ ವಿಜೇಂದ್ರ, ಕುವೆಂಪುನಗರ, ಮೈಸೂರು


ಇಂದಿರಾ ಗಾಂಧಿಯವರು ತೋರಿದ ದಿಟ್ಟತನ ಮೋದಿಯವರಿಗಿಲ್ಲವೇ?

ಸನ್ಮಾನ್ಯರೆ,

ಬಾಂಗ್ಲಾ ದೇಶದಲ್ಲಿ ಹಿಂದೂಗಳ ಬರ್ಬರ ಹತ್ಯೆ ದಿನನಿತ್ಯ ವರದಿಯಾಗುತ್ತಿದ್ದು, ಅಲ್ಲಿನ ಹಿಂದೂಗಳ ಜೀವನ ನರಕ ಸದೃಶ್ಯವಾಗುತ್ತಿದೆ. ಬಾಂಗ್ಲಾದಿಂದ ಹಿಂದೂಗಳನ್ನು ಸಂಪೂರ್ಣ ನಿರ್ಮೂಲನೆ ಮಾಡುವವರೆಗೆ ಅವರು ಈ ಹತ್ಯಾಕಾಂಡವನ್ನು ನಿಲ್ಲಿಸುವುದಿಲ್ಲ ಎಂಬ ಅತಂಕ ಕಾಡುತ್ತಿದೆ. ಅಲ್ಲಿನ ಆಡಳಿತ ಪರೋಕ್ಷವಾಗಿ ನರಹಂತಕರಿಗೆ ಬೆಂಬಲವಾಗಿದ್ದು, ನರಹಂತಕರನ್ನು ಹೀರೋಗಳಂತೆ ಬಿಂಬಿಸಿಕೊಂಡು ಅವರನ್ನು ಮೆಚ್ಚಿಕೊಳ್ಳುತ್ತಿದೆ. ಈ ಸನ್ನಿವೇಶದಲ್ಲಿ ಭಾರತ ಸರ್ಕಾರ ಕೈಕಟ್ಟಿ ಕುಳಿತುಕೊಂಡಿರುವುದು ನಮ್ಮ ಮತ್ತು ಅಲ್ಲಿರುವ ಹಿಂದೂಗಳ ಆತಂಕವನ್ನು ಇನ್ನಷ್ಟು ಹೆಚ್ಚಿಸುತ್ತಿದೆ. ಭಾರತ ಸರ್ಕಾರ ಈ ವಿಷಯದಲ್ಲಿ ತುರ್ತು ನಿರ್ಧಾರಗಳನ್ನು ತೆಗೆದುಕೊಳ್ಳುವುದು ಅಗತ್ಯವಾಗಿದ್ದು ವೆನಿಜುವೆಲಾದಲ್ಲಿ ಟ್ರಂಪ್ ಸರಕಾರ ಮಾಡಿದಂತೆ ನಮ್ಮ ಸೈನಿಕರನ್ನು ಬಾಂಗ್ಲಾದೇಶಕ್ಕೆ ನುಗ್ಗಿಸಿ ಅಲ್ಲಿನ ಸರಕಾರದ ಹೆಡೆಮುರಿ ಕಟ್ಟಿ ಅಲ್ಲಿನ ಆಡಳಿತವನ್ನು ತಾತ್ಕಾಲಿಕವಾಗಿ ತನ್ನ ಕೈಗೆ ತೆಗೆದುಕೊಂಡು ಅಲ್ಲೀ ಶಾಂತಿ ಬರುವಂತೆ ನೋಡಿಕೊಳ್ಳಬೇಕಿದೆ. ಅಷ್ಟು ಮಾತ್ರವಲ್ಲ ಹಿಂದೂಗಳ ಹತ್ಯೆ ಮಾಡಿದವರನ್ನು ಪತ್ತೇ ಹಚ್ಚಿ ಅವರನ್ನು ಮುಗಿಸುವುದರೊಂದಿಗೆ ನಮ್ಮವರ ಮಾರಣ ಹೋಮವನ್ನು ಕೈ ಕಟ್ಟಿ ನೋಡುತ್ತ ಕುಳಿತುಕೊಳ್ಳುವ ಹೇಡಿಗಳು ನಾವಲ್ಲ ಎಂದು ತೋರಿಸಬೇಕಿದೆ.

1971ರಲ್ಲಿ ನಾವಾರು ಎಂಬುದನ್ನು ಅಂದು ಇದ್ದ ಪಾಕಿಸ್ಥಾನ ಸರಕಾರಕ್ಕೆ ತೋರಿಸಿರುವ ನಾವು ಇಂದಿನ ಸರಕಾರಕ್ಕೂ ಮತ್ತು ಅಲ್ಲಿನ ಜಿಹಾದಿಗಳಿಗೂ ಮತ್ತೊಮ್ಮೆ ಚುರುಕು ಮುಟ್ಟಿಸಬೇಕಿದೆ. ಆಗ ಮಾತ್ರ ಅಲ್ಲಿನ ಹಿಂದುಗಳ ತಂಟೆಗೆ ಜಿಹಾದಿಗಳು ಬರುವುದಿಲ್ಲ ಮತ್ತು ಅಲ್ಲಿನ ಹಿಂದುಗಳು ನೆಮ್ಮದಿಯಿಂದಿರಲು ಸಾಧ್ಯ. ಇಂದಿರಾ ಗಾಂಧಿಯವರು ತೋರಿದ ದಿಟ್ಟತನ ಮೋದಿಯವರಿಗಿಲ್ಲವೇ?

–ದೊಡ್ಡಕಮರವಳ್ಳಿ ಲಯನ್ ಸಿದ್ದಲಿಂಗಪ್ಪ, ಜೆ.ಪಿ.ನಗರ, ಮೈಸೂರು



ಸದ್ಗುರು
ಸಂಸ್ಥಾಪಕರು,
ಇಶಾ ಫೌಂಡೇಷನ್

ಅನುಭಾವದ ಚಿಂತನೆಗಳು

ನಾಯಕತ್ವ ಎಂಬುದು ಒಂದು ವಿಧದ ತ್ಯಾಗ



"ಆಧ್ಯಾತ್ಮಿಕ ಪ್ರಕ್ರಿಯೆ ಎಂದರೆ ಜೀವನದ ಆಳಕ್ಕೆ ಇಳಿಯುವುದು; ಮೇಲೆಮೇಲಲ್ಲ, ಅದರ ಅಗಾಧತೆ ಅರಿಯಲು ಬಯಸುವುದು. ಇದು ನಾಯಕರಾಗುವವರಿಗೆ ಬಹಳ ಅಗತ್ಯವಾದ ಗುಣ. ಅವರು ಸಮಸ್ಯೆಗಳನ್ನು ಎದುರಿಸಬೇಕಾಗುವುದು, ಸಾಲದೆ ತಮ್ಮ ಅತ್ಯುತ್ತಮ ಯೋಗ್ಯತೆಯಲ್ಲಿ ಅವರು ಕೆಲಸ ಮಾಡಬೇಕಾಗುವುದು. ಅವರು ಒತ್ತಡ, ತವಕ ಅಥವಾ ಕೋಪ ಅನುಭವಿಸುತ್ತಿದ್ದರೆ, ಅವರ ಮನಸ್ಸು ದೇಹ ಮತ್ತು ಭಾವನೆಗಳು ಅತ್ಯುತ್ತಮ ಮಟ್ಟದಲ್ಲಿ ಕೆಲಸ ಮಾಡಲಾರವು. ವ್ಯಕ್ತಿಯು ನೆಮ್ಮದಿ ಮತ್ತು ಸಂತೋಷದಿಂದ ಇದ್ದಾಗ ಮಾತ್ರ ಆಂತರ್ಯದ ಪ್ರತಿಯೊಂದೂ ಅತ್ಯುತ್ತಮವಾಗಿ ಕಾರ್ಯಭಾರ ನಿರ್ವಹಿಸುವುದು ರುಜುವಾತ್ತಾಗಿರುವ ವೈದ್ಯಕೀಯ ಸತ್ಯ.

ದೇಹಕ್ಕೆ ಅದರದ್ದೇ ಆದ ನೆನಪುಗಳಿವೆ. ನಾಯಕತ್ವ ಎಂದರೆ ಮೇಲುಗೈ ಎಂದಲ್ಲ; ಅದೊಂದು ರೀತಿಯ ತ್ಯಾಗ. ಇದು ಮತ್ತೊಬ್ಬರನ್ನು ಆಳುವುದಲ್ಲ, ಅವರ ಜೀವನ ಸುಧಾರಿಸುವುದು. ನಾಯಕತ್ವದ ಅರ್ಥ ಜನರು ತಾವು ನಿರ್ಮಿಸಿಕೊಂಡ ಮಿತಿಗಳನ್ನು ದಾಟಿಹೋಗುವಂತೆ ಸೂಕ್ತ ಪರಿಸರ ನಿರ್ಮಿಸಿಕೊಡುವ ಸಾಮರ್ಥ್ಯ ನಿಮ್ಮಲ್ಲಿ ಇರುವುದು. ನಿಮ್ಮ ಉಪಸ್ಥಿತಿಯಲ್ಲಿ ಜನ ತಾವು ಊಹಿಸದಿರುವ ಮಟ್ಟಕ್ಕೇರಿ ಕಾರ್ಯ ನಿರ್ವಹಿಸಲು ಸಮರ್ಥರಾಗಬೇಕು.

ನಾಯಕತ್ವದ ಮೂಲಗುಣವೆಂದರೆ ನಿಮ್ಮದೊಂದು ನಿಶ್ಚಿತ ಮಹೋದ್ದೇಶ ಅಥವಾ ಒಂದು ದೃಷ್ಟಿಕೋನ ಸಾಧಿಸುವ ಹೆಬ್ಬಯಕೆ ಇರುವ ನೀವು, ಅದರೆಡೆಗೆ ಇತರರನ್ನೂ ಕರೆದೊಯ್ಯುವ ಯತ್ನದಲ್ಲಿರುವುದು. ಯಾವುದೇ ಕಾರಣಕ್ಕೆ ಆ ಗುರಿ ಸಾಧಿಸಲಾಗದಿದ್ದರೆ, ಅದರಿಂದ ಎದೆಗುಂದದೆ ಮತ್ತಾವ ರೀತಿಯಲ್ಲಿ ಅದನ್ನು ಸಾಧಿಸುವುದೆಂದು ನೋಡುವುದು. ಇವು ನಾಯಕತ್ವಕ್ಕೆ ಅಗತ್ಯ ವಾದ ಗುಣಗಳು. ನಿಮಗೆ ನಿಮ್ಮದೇ ದುಃಖ: ದುಮ್ಮಾನ, ಒತ್ತಡಗಳು ಅಂಜಿಕೆ ಭಯಗಳಿದ್ದರೆ ನೀವು ಪೂರ್ಣ ರೂಪದಲ್ಲಿ ಕೆಲಸ ಮಾಡಲು ಸಾಧ್ಯವಿಲ್ಲ. ಜಗತ್ತಿನಲ್ಲಿ ಅತ್ಯಂತ ಮುಖ್ಯವಾದ ಅವಶ್ಯಕತೆಯೆಂದರೆ, ನಾಯಕತ್ವವು ಸಂಪೂರ್ಣ ಸಾಮರ್ಥ್ಯದೊಂದಿಗೆ ನಡೆಯ ಬೇಕಿರುವುದು; ಸ್ವಯಂ ಕುಂಠಿತ ಅರ್ಹತೆಯಲ್ಲಿ ನಡೆಸುವುದಲ್ಲ.

ನಾನು ನಾಯಕತ್ವ ಎಂದಾಗ ಕೇವಲ ಅಧ್ಯಕ್ಷರನ್ನು ಅಥವ ಪ್ರಧಾನಿಗಳನ್ನು ಉದ್ದೇಶಿಸುತ್ತಿಲ್ಲ. ವ್ಯಕ್ತಿಯು ಯಾವುದೇ ಕ್ಷೇತ್ರದಲ್ಲಿರಲಿ, ರಾಜಕೀಯ, ಆಧ್ಯಾತ್ಮ, ವಾಣಿಜ್ಯ, ಸಾಮಾಜಿಕ ಅಥವ ಕುಟುಂಬದೊಳಗೇ ಇರಬಹುದು, ಪ್ರತಿಯೊಬ್ಬರೂ ತಮ್ಮದೇ ಯೋಗ್ಯತೆಯಲ್ಲಿ ನಾಯಕತ್ವ ವಹಿಸುತ್ತಿರುವರು. ಒಂದೆರಡು ವ್ಯಕ್ತಿಗಳನ್ನು ಮುನ್ನಡೆಸುವವರಿದ್ದಂತೆ ಸಹಸ್ರಾರು ಜನರನ್ನು ನಡೆಸುವವರೂ ಇದ್ದಾರೆ. ಪ್ರತಿಯೊಬ್ಬರೂ ಒಂದು ವಿಧದಲ್ಲಿ ನಾಯಕರೇ! ನಾಯಕರಾದವರಲ್ಲಿ ಒಳಗೊಳ್ಳುವಿಕೆಯ ಆಳವಾದ ಭಾವವಿಲ್ಲದಿದ್ದರೆ, ತನ್ನ ಸುತ್ತಲಿರುವವರು ತಮ್ಮದೇ ಭಾಗವೆಂದು ಅನುಭವಿಸಿ ಕಾಣದಿದ್ದರೆ, ಅವರ ಆಂತರ್ಯವನ್ನು ಅನುಭವಾತ್ಮಕವಾಗಿ ಅರಿತುಕೊಂಡು ಒಂದಾಗದಿದ್ದರೆ, ಅವರು ನಿಜವಾದ ನಾಯಕರಾಗಲು ಸಾಧ್ಯವಿಲ್ಲ. ಸನ್ನಿವೇಶಗಳನ್ನು ಒಳಿತಿಗೆ ಅಥವ ಕೆಡುಕಿಗೆ ಬದಲಿಸಬಹುದಷ್ಟೇ.

ಒಳಗೊಳ್ಳುವಿಕೆಯನ್ನು ಅನುಭವಾತ್ಮಕವಾಗಿ ಅರಿಯಲು ಜಾತ್ಯಾತೀತವಾದ ಆಧ್ಯಾತ್ಮಿಕ ಪ್ರಕ್ರಿಯೆ ಬಹಳ ಪ್ರಮುಖ ಪಾತ್ರ ವಹಿಸಿ, ವ್ಯಕ್ತಿಯು ನಾಯಕನಾಗಲು ಅರ್ಹತೆ ಕೊಡಬಲ್ಲದು. ಆಧ್ಯಾತ್ಮಿಕ ಪ್ರಕ್ರಿಯೆ ಎಂದರೆ ಜೀವನದ ಆಳಕ್ಕೆ ಇಳಿಯುವುದು; ಮೇಲೆಮೇಲಲ್ಲ, ಅದರ ಅಗಾಧತೆಯನ್ನು ಅರಿಯಲು ಬಯಸುವುದು. ಇದು ನಾಯಕರಾಗುವವರಿಗೆ ಬಹಳ ಅಗತ್ಯವಾದ ಗುಣ. ಅವರು ಸಮಸ್ಯೆಗಳನ್ನು ಎದುರಿಸಬೇಕಾಗುವುದು, ಸಾಲದೆ ತಮ್ಮ ಅತ್ಯುತ್ತಮ ಯೋಗ್ಯತೆಯಲ್ಲಿ ಅವರು ಕೆಲಸ ಮಾಡಬೇಕಾಗುವುದು. ಅವರು ಒತ್ತಡ, ತವಕ ಅಥವಾ ಕೋಪ ಅನುಭವಿಸುತ್ತಿದ್ದರೆ, ಅವರ ಮನಸ್ಸು ದೇಹ ಮತ್ತು ಭಾವನೆಗಳು ಅತ್ಯುತ್ತಮ ಮಟ್ಟದಲ್ಲಿ ಕೆಲಸ ಮಾಡಲಾರವು. ವ್ಯಕ್ತಿಯು ನೆಮ್ಮದಿ ಮತ್ತು ಸಂತೋಷದಿಂದ ಇದ್ದಾಗ ಮಾತ್ರ ಅಂತರ್ಯದ ಪ್ರತಿಯೊಂದೂ ಅತ್ಯುತ್ತಮವಾಗಿ ಕಾರ್ಯಭಾರ ನಿರ್ವಹಿಸುವುದು ರುಜುವಾತ್ತಾಗಿರುವ ವೈದ್ಯಕೀಯ ಸತ್ಯ.

'ಇನ್ನರ್ ಇಂಜಿನಿಯರಿಂಗ್' ಎನ್ನುವ ಪ್ರಕ್ರಿಯೆಯ ಇಡೀ ವಿಜ್ಞಾನ ಮತ್ತು ಬುದ್ಧಿಮತ್ತೆಯ ಉದ್ದೇಶವೆಂದರೆ ಸಂತೋಷವನ್ನು ನಮ್ಮ ಜೀವನದಲ್ಲಿ ಸಾಧಿಸುವ ಗುರಿಯಾಗದೆ ನಮ್ಮ ಜೀವನದ ತಳಹದಿಯಾಗಿ ಕಾಣುವುದು. ಅದೇ ಜೀವನದ ಬುನಾದಿಯೆಂದು ಅರಿಯುವುದು. ಇದಾದರೆ ಮಾತ್ರ ಮಿಕ್ಕೆಲ್ಲ ಅದ್ಭುತ ಸಂಗತಿಗಳೂ ಸಾಧ್ಯವಾಗುವುದು.

ನೀವು ಯಾರು ಎಂದು ನಿಮ್ಮ ಆಂತರ್ಯದ ಸ್ವಭಾವವನ್ನು ಶೋಧಿಸುವುದೇ 'ಇನ್ನರ್ ಇಂಜಿನಿಯರಿಂಗ್' ಎಂಬ ವಿಧಾನ. ನಾವು ಮನಸ್ಸು ಅಥವಾ ದೇಹವನ್ನು ಅಂತರ್ಯವೆಂದು ಪರಿಗಣಿಸುವುದಿಲ್ಲ. ಇವೆರಡನ್ನೂ ನಾವು ಹೊರಗಿನಿಂದ ಸಂಗ್ರಹಿಸಿದ್ದು, ನಿಮ್ಮ ದೇಹದೊಳಗೆ ಒಂದು ಆಂತರಿಕ ಬುದ್ಧಿಮತ್ತೆ ಮತ್ತು ಕ್ಷಮತೆಯಿದೆ. ಅದು ನೀವು ತಿಂದ ರೊಟ್ಟಿಯ ಚೂರನ್ನು 2–3 ಗಂಟೆಗಳಲ್ಲಿ ಮಾನವನಾಗಿ ಪರಿವರ್ತಿಸಬಲ್ಲದು. ಈ ಬುದ್ಧಿಮತ್ತೆಯ ಒಂದು ಹನಿಯಾದರೂ ಪ್ರಜ್ಞಾಪೂರ್ವಕ ಪ್ರಕ್ರಿಯೆಯಾದರೆ ನಿಮ್ಮ ಜೀವನ ಎಲ್ಲ ರೀತಿಯಲ್ಲಿ ಚಮತ್ಕಾರಿಕವಾಗಿ ನಡೆಯುವುದು. ನೀವು ಉದ್ದಿಮೆದಾರರೋ ಅಥವಾ ನಾಯಕರೋ ಆದರೆ ನಿಮ್ಮ ಜೀವನ ಅದ್ಭುತವಾಗುತ್ತದೆ.

ಜನತೆಗೆ ಉತ್ತಮ ಮಟ್ಟದ ನಾಯಕರನ್ನು ಕೊಡುವುದು ನಮ್ಮ ಆದ್ಯ ಕರ್ತವ್ಯ. ಸಹಸ್ರಾರು ವರ್ಷಗಳ ಹಿಂದೆ ಜನಕ ಎಂಬ ರಾಜನಿದ್ದನು. ತನ್ನ ಆಧ್ಯಾತ್ಮಿಕ ಬೆಳವಣಿಗೆ ಬಯಸಿದ ಜನಕನಿಗೆ ಗುರುವಾಗಿ ಅಷ್ಟವಕ್ರ ದೊರೆತು ಬಹಳ ಸಾಧನೆಯ ನಂತರ ಜ್ಞಾನೋದಯವಾಯಿತು. ರಾಜನು ಜ್ಞಾನೋದಯದ ನಂತರ ಗುರುವಿನ ಆಶ್ರಮದಲ್ಲೇ ಇರಲು ಬಯಸಿದ. ಆದರೆ ಅಷ್ಟವಕ್ರನು 'ನೀನು ಇಲ್ಲಿ ಇರಬಾರದು ನೀನು ರಾಜನಾಗಿ ಇರಬೇಕು.' ಎಂದನು. ರಾಜನು 'ಮತ್ತೆ ಏಕೆ? ಈ ಭೋಗ ಭಾಗ್ಯ ಅರಮನೆ, ರಾಜನ ಅಧಿಕಾರದ ಜೊತೆಗೆ ಬರುವ ಎಲ್ಲ ಸೌಲಭ್ಯ ನನಗೆ ಅರ್ಥವಿಲ್ಲದ್ದಾಗಿದೆ. ನನಗೆ ಬೇಕಾಗಿರುವುದು ನಿಮ್ಮ ಪದತಲದಲ್ಲಿರುವ ಅನುಮತಿ.' ಎಂದು ಉತ್ತರಿಸಿದ. ಅದಕ್ಕೆ ಗುರು ಅಷ್ಟವಕ್ರ 'ನಿನಗೆ ಏನು ಬೇಕೆಂಬುದು ಈಗ ಮುಖ್ಯವಲ್ಲ. ನಿನಗೆ ಬೇಕಾದುದನ್ನು ನಿನ್ನೊಳಗೇ ಕಂಡುಕೊಂಡಿದ್ದೀಯೆ. ಈಗ ಜನತೆಗೆ ಒಬ್ಬ ಜ್ಞಾನಿ ರಾಜನ ಅವಶ್ಯಕತೆಯಿದೆ. ಅದು ಮುಖ್ಯ.' ಎಂದನು.

ಪ್ರತಿಯೊಂದು ರಾಷ್ಟ್ರವೂ ಏಕಾಗ್ರಚಿತ್ತದ ಜ್ಞಾನಿಯಾದ ನಾಯಕನನ್ನು ಹೊಂದುವ ಅಗತ್ಯವಿದೆ; ಗೊಂದಲದ ಗೂಡಾದ ನಾಯಕನನ್ನಲ್ಲ. ಸಮಾಜದ ಕೆಲವೇ ಆಧ್ಯಾತ್ಮಿಕ ಜ್ಞಾನಿಗಳಲ್ಲಿಗೆ ಜನರು ಹೋಗಿ ಆಶೀರ್ವಾದ ಪಡೆದು ಜೀವನ ಸಾಗಿಸುತ್ತಿದ್ದ ಕಾಲವೊಂದಿತ್ತು. ಇವತ್ತು, ವಿಜ್ಞಾನ ಮತ್ತು ತಂತ್ರಗಾರಿಕೆಯ ಸಾಧನಗಳಿಂದ ಎಂತಹ ಆತ್ಮಘಾತಿಕ ಹಂತಕ್ಕೆ ಬಂದಿದ್ದೇವೆ ಎಂದರೆ ಎಲ್ಲರೂ ಆಧ್ಯಾತ್ಮಿಗಳಾಗುವ ಅನಿವಾರ್ಯತೆ ಬಂದಿದೆ. ಜನತೆ ಆಧ್ಯಾತ್ಮಿಗಳಾಗದಿದ್ದರೆ ಜಗತ್ತಿಗೆ ಉಳಿಗಾಲವಿಲ್ಲ. ನಮ್ಮಲ್ಲಿರುವ ತಂತ್ರಗಾರಿಕೆ ಮತ್ತು ಸಾಮರ್ಥ್ಯ ಎಂತಹುದೆಂದರೆ, ಒಬ್ಬ ಮೂರ್ಖ ಇಡೀ ಜಗತ್ತನ್ನೇ ಉಡಾಯಿಸಿ ಬಿಡಬಲ್ಲ. ಅಂತಹ ಮೂರ್ಖರು ಸಾಲುಗಟ್ಟಿ ಮೇಲೇರಲು ಸಜ್ಜಾಗಿದ್ದಾರೆ. ಈಗ, ಆಧ್ಯಾತ್ಮ ಶೋಕಿಯ ಶೋಧನೆಯಾಗಿ ಉಳಿದಿಲ್ಲ. ನಮ್ಮ ಮತ್ತು ಜಗತ್ತಿನ ಉಳಿವಿಗಾಗಿ ಆಧ್ಯಾತ್ಮ ಅತ್ಯಂತ ಅವಶ್ಯಕವಾಗಿದೆ. ಒಂದು ಮಟ್ಟದ ಒಳಗೊಳ್ಳುವಿಕೆಯ ಪರಿಜ್ಞಾನ ಜನರಲ್ಲಿ ಅದರಲ್ಲೂ ನಾಯಕರಾದವರಲ್ಲಿ ಬರದಿದ್ದರೆ ನಮ್ಮ ವಿನಾಶ ಕಟ್ಟಿಟ್ಟದ್ದು.

ಸಂಶಯವಾದಿಗಳು ಬೇಗನೆ 'ಇದು ಸಾಧ್ಯವಾಗುವ ಸಂಗತಿಯೇ?' ಎಂದು ಪ್ರಶ್ನಿಸುವರು. ಇವತ್ತಿನ ಸತ್ಯಗಳ ಆಧಾರದಲ್ಲಿ ಭವಿಷ್ಯವನ್ನು ಚರ್ಚಿಸುವುದು ಬೇಡ. ಇವತ್ತಿನ ಅಸತ್ಯಗಳು ಕೇವಲ ಅಂಕಿ–ಅಂಶಗಳಲ್ಲಿ ಇಂದು ಸತ್ತವರೆಷ್ಟು ಜನ, ಜಗತ್ತಿನಲ್ಲಿರುವ ಬಾಂಬುಗಳು ಎಷ್ಟೆಂದು ವರದಿ ನೀಡುತ್ತವೆ. ಗಣನೆಗಳು ಮಾನವ ಹೃದಯದಲ್ಲಿ ಮಿಡಿಯುತ್ತಿರುವುದನ್ನು ಅಳೆಯಲಾರವು. ಇವತ್ತಿರುವ ವರದಿಗಳು ಜನರ ದೃಢತೆ ಮತ್ತು ಬದ್ಧತೆಯನ್ನು ಅವರಲ್ಲಿರುವ ಪ್ರೇಮವನ್ನು ಪರಿಗಣಿಸುವುದಿಲ್ಲ. ಇವನ್ನು ನಾವು ಪ್ರಚೋದಿಸಿದರೆ ಪ್ರತಿ ವ್ಯಕ್ತಿಯ ಮನದಾಳದಲ್ಲಿ ಇರುವುದನ್ನು ಎಚ್ಚರಿಸಿದರೆ ಚಮತ್ಕಾರಗಳೇ ಸಾಧ್ಯವಾಗುವುದು.

ಮೈಸೂರು ತಾಲೂಕು ಕಚೇರಿಗೆ ಸಂಸದ ಯದುವೀರ್ ದಿಢೀರ್ ಭೇಟಿ

ಅಧಿಕಾರಿಗಳು ಬೇಕಾಬಿಟ್ಟಿ ಕೆಲಸ ಮಾಡುವುದು ಸರಿಯಲ್ಲ; ಎಚ್ಚರಿಕೆ

- ಜನ ಸಾಮಾನ್ಯರ ಬಳಿ ಲಂಚಕ್ಕೆ ಬೇಡಿಕೆಗೆ ಕಿಡಿ
- ಭ್ರಷ್ಟ ಅಧಿಕಾರಿಗಳು, ಸಿಬ್ಬಂದಿಯ ಅವಶ್ಯಕತೆ ಇಲ್ಲ
- ಜನಪ್ರತಿನಿಧಿಗಳಿದ್ದರೆ ಇಂತಹ ಪರಿಸ್ಥಿತಿ ಇರುತ್ತಿರಲಿಲ್ಲ
- ಇತ್ತ ಗ್ರೇಟರ್ ಮೈಸೂರು ಇಲ್ಲ, ಅತ್ತ ಚುನಾವಣೆಯೂ ನಡೆಯುತ್ತಿಲ್ಲ!



ಮೈಸೂರಿನ ಮಿನಿ ವಿಧಾನ ಸೌಧದಲ್ಲಿರುವ ತಾಲೂಕು ಕಚೇರಿಗೆ ಗುರುವಾರ ದಿಢೀರ್ ಭೇಟಿ ನೀಡಿದ ಸಂಸದ ಯದುವೀರ್ ಅಲ್ಲಿನ ಅಧಿಕಾರಿಗಳ ಕಾರ್ಯ ವೈಖರಿ ಪರಿಶೀಲಿಸಿದರು.

ಮೈಸೂರು, ಜ.8(ಐಎಲ್‌ಯು)– ಮೈಸೂರಿನ ತಾಲೂಕು ಕಚೇರಿಗೆ ಇಂದು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ದಿಢೀರ್ ಭೇಟಿ ನೀಡಿ, ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು.

ನಿನ್ನೆ ಮೈಸೂರಿನ ಹಲವು ಗ್ರಾಮಗಳಲ್ಲಿ ಜನ ಸಂಪರ್ಕ ಸಭೆ ನಡೆಸಿದ ಯದುವೀರ್ ಅವರು ಇಂದು ನಗರದ ನಜರ್‌ಬಾದ್‌ನ ಮಿನಿ ವಿಧಾನಸೌಧದಲ್ಲಿನ ತಾಲೂಕು ಕಚೇರಿಗೆ ದಿಢೀರ್ ಭೇಟಿ ನೀಡಿ, ಅಧಿಕಾರಿಗಳು ಹಾಗೂ ಸಿಬ್ಬಂದಿಯ ಕಾರ್ಯ ನಿರ್ವಹಣೆಯನ್ನು ಖುದ್ದು ಪರಿಶೀಲನೆ ನಡೆಸಿದರು.

ತಾಲೂಕು ಕಚೇರಿಯ ಕಂದಾಯ, ಭೂ ದಾಖಲೆ, ಆದಾಯ ದೃಢೀಕರಣ ಪತ್ರ ವಿತರಣೆ ಕೇಂದ್ರ ಸೇರಿದಂತೆ ಹಲವು ವಿಭಾಗಗಳಿಗೆ ಭೇಟಿ ನೀಡಿ, ಜನರನ್ನು ಅಲೆದಾಡಿಸದೆ ಅವರಿಗೆ ಅವಶ್ಯವಿರುವ ದಾಖಲೆಗಳನ್ನು ತಕ್ಷಣ ನೀಡುವಂತೆ ತಾಕೀತು ಮಾಡಿದರು.

ತರುವಾಯ ಪತ್ರಕರ್ತರ ಜೊತೆ ಮಾತನಾಡಿದ ಅವರು, ವಿಧವಾ ವೇತನ, ವೃದ್ಧಾಪ್ಯ ವೇತನ, ಆದಾಯ ಪ್ರಮಾಣ ಪತ್ರ, ಜಾತಿ ಪ್ರಮಾಣ ಪತ್ರ ಸೇರಿದಂತೆ ಇತರೆ ದಾಖಲಾತಿ ನೀಡಲು ಲಂಚಕ್ಕೆ ಬೇಡಿಕೆ ಇಡುತ್ತಿರುವ ಬಗ್ಗೆ ಆರೋಪವಿದೆ. ಈ ಹಿನ್ನೆಲೆಯಲ್ಲಿ ಖುದ್ದು ಭೇಟಿ ನೀಡಿ ಪರಿಶೀಲನೆ ನಡೆಸಿದ್ದೇನೆ ಎಂದು ಹೇಳಿದರು.

ರೆವಿನ್ಯೂ ಇಲಾಖೆಯಲ್ಲಿ ನಡೆಯುತ್ತಿರುವ ಅಕ್ರಮಗಳ ಬಗ್ಗೆ ಹಿರಿಯ ಅಧಿಕಾರಿಗಳ ಗಮನಕ್ಕೆ ತಂದಿರುವೆ. ಇಂತಹ ಭ್ರಷ್ಟ ಅಧಿಕಾರಿಗಳ ಅವಶ್ಯಕತೆ ಇಲ್ಲ ಎಂದು ತಿಳಿಸಿರುವೆ. ಮುಂದೆ ಇಂತಹ ಬೆಳವಣಿಗೆ ನಡೆಯದಂತೆ ಎಚ್ಚರ ವಹಿಸುವಂತೆ ಸೂಚನೆ ನೀಡಿದ್ದೇನೆ ಎಂದು ಯದುವೀರ್ ತಿಳಿಸಿದರು.

ಪೊಲೀಸರೆದುರೇ ವ್ಹೀಲಿಂಗ್, ಪೊಲೀಸರ ಮೇಲೆಯೇ ಹಲ್ಲೆ...

ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ತೀವ್ರ ಹದಗೆಟ್ಟಿದೆ ಎಂದು ಸಂಸದ ಯದುವೀರ್ ಇದೇ ವೇಳೆ ಆಪಾದಿಸಿದರು.

ಮೈಸೂರಿನ ನರಸಿಂಹರಾಜ ಕ್ಷೇತ್ರದಲ್ಲಿ ರಾಜಾರೋಷವಾಗಿ ಗಾಂಜಾ ಮಾರಾಟವಾಗುತ್ತಿದ್ದು, ಪೊಲೀಸರ ಎದುರೇ ಯುವಕರು ವ್ಹೀಲಿಂಗ್ ಮಾಡುತ್ತಾ ಬೇರೆಯವರ ಜೀವಕ್ಕೆ ಸಂಚಕಾರ ತಂದೊಡ್ಡುತ್ತಿದ್ದಾರೆ. ಉದಯಗಿರಿ ಪೊಲೀಸ್ ಠಾಣೆ ಮೇಲೆ ದಾಳಿ ಮಾಡಿದ್ದಾರೆ. ಮೈಸೂರು ಹಾಗೂ ಬೆಂಗಳೂರಿನಲ್ಲಿ ಡ್ರಗ್ಸ್ ಫ್ಯಾಕ್ಟರಿಗಳ ಮೇಲೆ ಮುಂಬೈ ಪೊಲೀಸರು ದಾಳಿ ಮಾಡಿ, ಪತ್ತೆ ಹಚ್ಚಿದ್ದಾರೆ. ಕಾನೂನು ಮತ್ತು ಸುವ್ಯವಸ್ಥೆ ಹದಗೆಡಲು ಇದಕ್ಕಿಂತ ಸ್ಪಷ್ಟ ನಿದರ್ಶನ ಬೇಕೇ ಎಂದು ಪ್ರಶ್ನಿಸಿದರು.

ಪೊಲೀಸರ ಮೇಲೆಯೇ ಹಲ್ಲೆ ಮಾಡುವಂತಹ ಪರಿಸ್ಥಿತಿ ಎದುರಾಗಿದೆ. ಪೊಲೀಸರಿಗೆ ಈ ಗತಿಯಾದರೆ ಇನ್ನು ಜನ ಸಾಮಾನ್ಯರ ಪರಿಸ್ಥಿತಿ ಏನು ಎಂದು ಆತಂಕದಿಂದಲೇ ಪ್ರಶ್ನಿಸಿದ ಯದುವೀರ್ ಅವರು, ಬಹಳಷ್ಟು ಅಕ್ರಮಗಳು ನಡೆಯುತ್ತಿದ್ದರೂ ಕಡಿವಾಣ ಹಾಕುವ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ. ಇಷ್ಟೆಲ್ಲಾ ನಡೆಯುತ್ತಿದ್ದರೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇದನ್ನು ಗಂಭೀರವಾಗಿ ಪರಿಗಣಿಸಿಲ್ಲ ಎಂದು ಆರೋಪಿಸಿದರು. ಹುಬ್ಬಳ್ಳಿಯಲ್ಲಿ ಮಹಿಳೆಯನ್ನು ಪೊಲೀಸ್ ಠಾಣೆಗೆ ಕರೆದೊಯ್ಯುವಾಗ ವಿವಸ್ತ್ರಗೊಳಿಸಿ ಅವಮಾನಿಸಲಾಗಿದೆ. ಆದರೆ ಹಲ್ಲೆಗೊಳಗಾದ ಮಹಿಳೆಯ ಮೇಲೆಯೇ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ. ಈ ಬಗ್ಗೆ ಸಮಗ್ರ ತನಿಖೆಯಾಗಬೇಕು, ಯಾರು ತಪ್ಪು ಮಾಡಿದ್ದಾರೆಂಬ ಸತ್ಯಾಂಶ ಬಯಲಿಗೆ ಬರಬೇಕು ಎಂದು ಆಗ್ರಹಿಸಿದರು. ಕಾವೇರಿ, ಕಪಿಲ, ಲಕ್ಷ್ಮಣ ತೀರ್ಥ ಸೇರಿದಂತೆ ಇತರೆ ನದಿಗಳು ಕಲುಷಿತಗೊಳ್ಳುತ್ತಿರುವ ಬಗ್ಗೆ ಪ್ರತಿಕ್ರಿಯೆ ನೀಡಿದ ಯದುವೀರ್, ನದಿಗಳ ಉಳಿವಿಗಾಗಿ ಪ್ರತಿಯೊಬ್ಬರು ಶ್ರಮಿಸಬೇಕು ಎಂದು ಸಲಹೆ ನೀಡಿದರು.

ಪ್ರಾಯಶಃ ಸ್ಥಳೀಯ ಸಂಸ್ಥೆ ಚುನಾವಣೆ ನಡೆದು ಜನಪ್ರತಿನಿಧಿಗಳಿದ್ದಿದ್ದರೆ ಇಂತಹ ಸಮಸ್ಯೆ ಎದುರಾಗುತ್ತಿರಲಿಲ್ಲ. ಜನ ಪ್ರತಿನಿಧಿಗಳ ಆಡಳಿತ ಇಲ್ಲದ ಕಾರಣ ಇಂತಹ ಅಕ್ರಮಗಳು ಹೆಚ್ಚಾಗಿವೆ. ಅಲ್ಲದೆ ಅಭಿವೃದ್ಧಿ ಕೆಲಸ ಮಾಡಲು ಸಾಕಷ್ಟು ತೊಡಕು ಕೂಡ ಎದುರಾಗಿದೆ ಎಂದು ಹೇಳಿದರು.

ಗ್ರೇಟರ್ ಮೈಸೂರು ರಚನೆ ಮಾಡುವ ನೆಪ ಮಾಡಿಕೊಂಡು ಇನ್ನು ಕೂಡ ನಗರ ಪಾಲಿಕೆಯ ಚುನಾವಣೆ ನಡೆಸಿಲ್ಲ. ಇತ್ತ ಗ್ರೇಟರ್ ಮೈಸೂರು ರಚನೆ ಕೂಡ ಮಾಡುತ್ತಿಲ್ಲ, ಹೋಗಲಿ ಚುನಾವಣೆಯನ್ನು ಕೂಡ ನಡೆಸುತ್ತಿಲ್ಲ. ಇದರಿಂದ ಪಾಲಿಕೆ ಹಾಗೂ ತಾಲೂಕು ಕಚೇರಿಯ ಆಡಳಿತದಲ್ಲಿ ಸಮಸ್ಯೆಗಳ ಆಗರವೇ ಇದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಸ್ಥಳೀಯ ಸಂಸ್ಥೆ ಚುನಾವಣೆ ಘೋಷಣೆಯಾದರೆ ಅರ್ಹರಿಗೆ ಟಿಕೆಟ್ ನೀಡಲಾಗುವುದು. ಆದರೆ ಯಾರಿಗೆ ಟಿಕೆಟ್ ನೀಡಲಾಗುತ್ತದೆ ಎಂದು ಈಗಲೇ ಹೇಳಲು ಸಾಧ್ಯವಿಲ್ಲ ಎಂದು ಸಂಸದ ಯದುವೀರ್ ತಿಳಿಸಿದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com

ಮೈಸೂರು ಮಿತ್ರ ಶುಕ್ರವಾರ 9 ಜನವರಿ 2026

ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಸ್ಪರ್ಧೆಗೆ ಆಹ್ವಾನವಿದ್ದರೆ ಚಾಮರಾಜವನ್ನೇ ಆಯ್ಕೆ ಮಾಡಿಕೊಂಡಿದ್ದೇಕೆ!?

● ಮಾಜಿ ಸಂಸದ ಪ್ರತಾಪ್ ಸಿಂಹ ಅವರಿಗೆ ಬಿಜೆಪಿ ನಾಯಕರ ಪ್ರಶ್ನೆ ● ಕಳೆದ ಲೋಕಸಭಾ ಚುನಾವಣೆಯಲ್ಲಿ ನಿಮಗೆ ಟಿಕೆಟ್ ಕೈತಪ್ಪಲು ಕಾರಣ ಏನು?

ಮೈಸೂರು, ಜ.8(ಎಂಟಿವೈ)– ಕಳೆದ ಲೋಕಸಭಾ ಚುನಾವಣೆಯಲ್ಲಿ ತಮಗೆ ಟಿಕೆಟ್ ಕೈ ತಪ್ಪಲು ಕಾರಣವನ್ನು ಜನರಿಗೆ ತಿಳಿಸುವುದರೊಂದಿಗೆ ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ನಿಮಗೆ ಟಿಕೆಟ್ ಕೊಡುವವರು ಯಾರು ಎಂದು ಸ್ಪಷ್ಟಪಡಿಸಿ ಎಂದು ಮಾಜಿ ಸಂಸದ ಪ್ರತಾಪ್ ಸಿಂಹ ಅವರನ್ನು ಬಿಜೆಪಿ ಮುಖಂಡ ಮೈ.ಕಾ.ಪ್ರೇಮ್‌ಕುಮಾರ್ ಆಗ್ರಹಿಸಿದ್ದಾರೆ.



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಸದಸ್ಯರಾಗಿ ಎರಡು ಬಾರಿ ಆಯ್ಕೆಯಾಗಿದ್ದ ಪ್ರತಾಪ್‌ಸಿಂಹ ಅವರನ್ನು ರಾಷ್ಟ್ರ ರಾಜಕಾರಣದಿಂದ ಹೈಕಮಾಂಡ್ ಹೊರ ಹಾಕಿದೆ. ಅಲ್ಲಿಂದಲೇ ಹೊರ ಹಾಕಿಸಿಕೊಂಡವರ ಅವಶ್ಯಕತೆ ರಾಜ್ಯ ರಾಜಕಾರಣಕ್ಕೆ ಇದೆಯೇ? ಎನ್ನುವುದನ್ನು ಅರಿತುಕೊಳ್ಳಬೇಕು. ರಾಜ್ಯ ರಾಜಕಾರಣಕ್ಕೆ ಬರುವ ಸಲುವಾಗಿಯೇ ನನಗೆ ಲೋಕಸಭಾ ಟಿಕೆಟ್ ನೀಡಿಲ್ಲ ಎಂದು ಪ್ರತಾಪ್‌ಸಿಂಹ ಎಲ್ಲ ಕಡೆ ಹೇಳಿಕೊಳ್ಳುತ್ತಿದ್ದಾರೆ. ಈ ಬಗ್ಗೆ ಬಿಜೆಪಿ ಹೈಕಮಾಂಡ್ ಆಗಲೀ, ಹಿರಿಯ ನಾಯಕರಾಗಲೀ ಎಲ್ಲಿಯೂ ಹೇಳಿಲ್ಲ ಎಂದರು.

ಮೈಸೂರು ಚಾಮರಾಜ ವಿಧಾನಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ನಾನೇ ಎಂದು ತಾವೇ ಬಹಿರಂಗವಾಗಿ ಘೋಷಿಸಿಕೊಂಡಿದ್ದಾರೆ. ಹೀಗೆ ತಾವೇ ಘೋಷಿಸಿಕೊಳ್ಳಲು ಪಕ್ಷದಲ್ಲಿ ಅವಕಾಶ ಇದೆಯೇ? ಸ್ವಘೋಷಿತ ಅಭ್ಯರ್ಥಿ ಪ್ರತಾಪ್‌ಸಿಂಹ ಘೋಷಣೆಗೆ ಹೈಕಮಾಂಡ್ ಬೆಂಬಲ ಇದೆ ಎನ್ನುವುದನ್ನು ಸಾಬೀತುಪಡಿಸುವರೇ? ಎರಡು ಬಾರಿ ಸಂಸದರಾಗಿದ್ದ ಪ್ರತಾಪ್‌ಸಿಂಹ ಅವರು, ತಮ್ಮ ಕಚೇರಿಗೆ ಬಂದಂತಹ ಕಾರ್ಯಕರ್ತರನ್ನು ಅವಮಾನಿಸಿ ಕಳುಹಿಸುತ್ತಿದ್ದರು. ಈಗ ಕಾರ್ಯಕರ್ತರ ನೆನಪಾಗುತ್ತಿದೆ ಎಂದು ಲೇವಡಿ ಮಾಡಿದರು.

ರಾಜ್ಯದ ಎಲ್ಲ ಜಿಲ್ಲೆಗಳಿಂದಲೂ ಚುನಾವಣೆಗೆ ಸ್ಪರ್ಧಿಸಲು ತಮಗೆ ಆಹ್ವಾನ ಬರುತ್ತಿದೆ ಎಂದು ಹೇಳಿಕೊಳ್ಳುವ ಪ್ರತಾಪ್‌ಸಿಂಹ ಮೈಸೂರು ಜಿಲ್ಲೆಯ, ಒಕ್ಕಲಿಗರ ಪ್ರಾಬಲ್ಯವಿರುವ ಕ್ಷೇತ್ರವನ್ನೇ ಆಯ್ಕೆ ಮಾಡಿಕೊಂಡಿದ್ದಾದರೂ ಏಕೆ? ಬೇರೆ ಕ್ಷೇತ್ರಗಳಲ್ಲಿ ನಿಂತರೆ ಠೇವಣಿ ಕಳೆದುಕೊಳ್ಳುತ್ತೇನೆ ಎನ್ನುವ ಭಯ ಅವರನ್ನು ಕಾಡುತ್ತಿರಬೇಕು. ಕಳೆದ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಯಾಗಿದ್ದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರಿಗೆ ಅಸಹಕಾರ ತೋರಿಸಿದರು. ಪ್ರಚಾರಕ್ಕೂ ಹೋಗಲಿಲ್ಲ ಎಂದು ದೂರಿದರು.

ಸಂಸತ್ ಅಧಿವೇಶನದ ವೇಳೆ ತಾವು ನೀಡಿದ ಪಾಸ್ ಬಳಸಿಕೊಂಡು ಯುವಕರು ಸ್ಮೋಕ್ ಬಾಂಬ್ ಸಿಡಿಸಿದರು. ಆ ಪ್ರಕರಣ ಏನಾಯಿತು. ಕತ್ತಲೆ ಜಗತ್ತು ಎನ್ನುವ ಪುಸ್ತಕದ ಮೇಲೆ ತಡೆಯಾಜ್ಞೆ ಏಕೆ ತಂದಿದ್ದಾರೆ? ಹೊರಜಗತ್ತಿಗೆ ಗೊತ್ತಾಗಬಾರದ ಯಾವ ವಿಷಯ ಅದರಲ್ಲಿತ್ತು? ಬಹಿರಂಗ ಚರ್ಚೆಯ ಮುಖಾಂತರವೇ ಅದನ್ನು ಎದುರಿಸಬಹುದಿತ್ತು. ಆದರೆ, ನ್ಯಾಯಾಲಯದಲ್ಲಿ ತಡೆಯಾಜ್ಞೆ ತಂದು ರಾಜಕೀಯ ಮಾಡುವುದು ಸರಿಯಲ್ಲ ಎಂದು ಕಿಡಿಕಾರಿದರು. ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಮುಖಂಡ ಕುಂಬಾರಕೊಪ್ಪಲು ಕುಮಾರಗೌಡ ಉಪಸ್ಥಿತರಿದ್ದರು.

ಜೆಎಸ್‌ಎಸ್ ಕಾಲೇಜು ಎನ್‌ಎಸ್‌ಎಸ್ ಘಟಕದ ವಿದ್ಯಾರ್ಥಿಗಳಿಂದ ಶಾಲೆಗಳಿಗೆ ಹೊಸ ರೂಪ

ಮೈಸೂರು, ಜ.8– ಕಾಲೇಜುಗಳಲ್ಲಿ ಹಲವಾರು ಪಠ್ಯೇತರ ಚಟುವಟಿಕೆಗಳು ನಡೆಯುತ್ತಿರುತ್ತವೆ. ಇದರ ಭಾಗವಾದ ಗ್ರಾಮೀಣ ಪ್ರದೇಶದಲ್ಲಿ ವರ್ಷಕ್ಕೊಮ್ಮೆ ಒಂದು ವಾರ ಎನ್‌ಎಸ್‌ಎಸ್ ನಡೆಸಲಾಗುತ್ತದೆ. ಆದರೆ ಮೈಸೂರು ಊಟಿ ರಸ್ತೆಯಲ್ಲಿನ ಜೆಎಸ್‌ಎಸ್ ಕಲಾ ವಾಣಿಜ್ಯ, ವಿಜ್ಞಾನ ಕಾಲೇಜಿನ ಎನ್‌ಎಸ್‌ಎಸ್ ಘಟಕವು ವಾರ್ಷಿಕ ಶಿಬಿರಕ್ಕೆ ಸೀಮಿತವಾಗದೆ ನಿರಂತರ ಸಾರ್ಥಕ ಸೇವೆಯ ಮೂಲಕ ಮಾದರಿಯಾಗಿದೆ.

ಸರ್ಕಾರಿ ಶಾಲೆಗಳಲ್ಲಿ ಮೂಲಭೂತ ಸೌಕರ್ಯವಿಲ್ಲ ಎಂದು ಪೋಷಕರು ತಮ್ಮ ಮಕ್ಕಳನ್ನು ಸರ್ಕಾರಿ ಶಾಲೆಗಳಿಗೆ ಸೇರಿಸಲು ಹಿಂದೇಟು ಹಾಕುತ್ತಿದ್ದಾರೆ. ಈ ಕಾರಣದಿಂದ ಸರ್ಕಾರಿ ಶಾಲೆಗಳು ವಿದ್ಯಾರ್ಥಿಗಳಿಲ್ಲದೆ ಮುಚ್ಚುವ ಹಂತಕ್ಕೆ ಬಂದಿವೆ. ಇಂತಹ ಸಂದಿಗ್ಧ ಪರಿಸ್ಥಿತಿಯಲ್ಲಿ ಮಕ್ಕಳನ್ನು ಸರ್ಕಾರಿ ಶಾಲೆಗಳತ್ತ ಆಕರ್ಷಿಸುವ ನಿಟ್ಟಿನಲ್ಲಿ ಜೆಎಸ್‌ಎಸ್ ಕಾಲೇಜು ಎನ್‌ಎಸ್‌ಎಸ್ ವಿದ್ಯಾರ್ಥಿಗಳು ಶ್ರಮಿಸುತ್ತಿದ್ದಾರೆ.

ಕಾಲೇಜಿನ ಎನ್‌ಎಸ್‌ಎಸ್ ಅಧಿಕಾರಿ ಸಂತೋಷ್‌ಕುಮಾರ್ ನಾಯಕತ್ವದಲ್ಲಿ ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳಿಗೆ ಭೇಟಿ ನೀಡಿ, ಅಲ್ಲೇ ಶಿಬಿರ ಆಯೋಜಿಸಿ ಗ್ರಾಮದಲ್ಲಿ ಸ್ವಚ್ಛತಾ ಕಾರ್ಯ ನಡೆಸುವುದರೊಂದಿಗೆ ದಾನಿಗಳ ನೆರವಿನಿಂದ ಶಾಲೆಗೆ ಅವಶ್ಯಕತೆಯಿರುವ ಮೂಲ ಸೌಕರ್ಯಗಳನ್ನು ಕಲ್ಪಿಸುತ್ತಿದ್ದಾರೆ. ಗೋಡೆಗಳಿಗೆ ಸುಣ್ಣ ಬಳಿದು, ಚಲನಚಿತ್ರ ಕಲಾವಿದ ಸ್ವಾಮಿ ಸಹಯೋಗದೊಂದಿಗೆ ಶಾಲೆಗಳ ಗೋಡೆಗಳಲ್ಲಿ ಚಿತ್ತಾರ ಮೂಡಿಸುವ ಮೂಲಕ ಹೊಸ ರೂಪವನ್ನು ನೀಡಲಾಗುತ್ತಿದೆ.



ಕಳೆದ ವರ್ಷದ ಶಿಬಿರದಲ್ಲಿ ವಿದ್ಯಾರ್ಥಿನಿಗೆ ಸೈಕಲ್ ವಿತರಿಸಿದ ಸಂದರ್ಭ.

> ಗಿಡ ನೆಡುವುದು, ಅದನ್ನು ಪೋಷಿಸುವುದು, ಗ್ರಾಮೀಣ ಜನರಿಗೆ ಪ್ಲಾಸ್ಟಿಕ್ ಬಳಕೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸುವುದು, ಶಾಲಾ ಮಕ್ಕಳಿಗೆ ಇಂಗ್ಲಿಷ್ ಮತ್ತು ಕಂಪ್ಯೂಟರ್ ಕಲಿಕೆ ಪಾಠವನ್ನು ಹೇಳಿಕೊಡುವುದು ಸೇರಿದಂತೆ ಹಲವಾರು ಕಾರ್ಯಕ್ರಮಗಳನ್ನು ನಮ್ಮ ಎನ್‌ಎಸ್‌ಎಸ್ ಘಟಕವು ರೂಪಿಸುತ್ತಿದೆ. –ಸಿ.ಆರ್.ಮಾನಸಿ, ವಿದ್ಯಾರ್ಥಿ

ಹುಣಸೂರು ತಾಲೂಕಿನ ಕುಟ್ಟವಾಡಿ, ಬಿ.ಬಸವನಹಳ್ಳಿ, ದೇವಲಾಪುರ, ಸಂಜೀವ ನಗರ ಹಾಗೂ ಹೆಚ್.ಡಿ.ಕೋಟೆ ತಾಲೂಕಿನ ಅಂಬೇಡ್ಕರ್ ನಗರ, ಮಂಟಿ ಹಾಡಿ ಶಾಲೆಗಳಿಗೆ ಜನಪದ ಶೈಲಿಯ ಚಿತ್ತಾರ ಮೂಡಿಸಿ ಮಕ್ಕಳು ಶಾಲೆಯತ್ತ ಆಕರ್ಷಿತರಾಗುವಂತೆ ಮಾಡಿದ್ದಾರೆ.

ಸೈಕಲ್ ವಿತರಣೆ: ಬಸ್ ಸೌಲಭ್ಯಗಳಿಲ್ಲದ ಹಾಡಿ ವಿದ್ಯಾರ್ಥಿನಿಯರಿಗೆ ದಾನಿಗಳ ನೆರವಿನಿಂದ ಸೈಕಲ್‌ಗಳನ್ನು ನೀಡಲಾಗಿದೆ. ವಿದ್ಯಾರ್ಥಿಗಳ ಕಲಿಕೆಗೆ ಉತ್ತೇಜನ ನೀಡಲು ಕಂಪ್ಯೂಟರ್, ಪ್ರಿಂಟರ್, ಟ್ಯಾಬ್, ಸೆಟ್‌ಅಪ್ ಬಾಕ್ಸ್, ಯುಪಿಎಸ್, ಕಲಿಕಾ ಹಾಗೂ ಕ್ರೀಡಾ ಸಾಮಗ್ರಿಗಳನ್ನು ನೀಡಿ, ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಗೆ ಒತ್ತು ನೀಡಲಾಗುತ್ತಿದೆ. ಬಿಡುವಿನ ವೇಳೆಯಲ್ಲಿ ಕಾಲೇಜಿನ ಎನ್ ಎಸ್ ಎಸ್ ವಿದ್ಯಾರ್ಥಿಗಳು ಕಂಪ್ಯೂಟರ್ ಮತ್ತು ಇಂಗ್ಲಿಷ್ ತರಗತಿ ನಡೆಸುವುದರ ಜೊತೆಗೆ ಸಹಪಠ್ಯೇತರ ಚಟುವಟಿಕೆಗಳನ್ನು ರೂಪಿಸುತ್ತಿದ್ದಾರೆ.

ಪರಿಸರ ಸಂರಕ್ಷಣೆಗೆ ಒತ್ತು: ಶಾಲೆಯ ಆವರಣದಲ್ಲಿ ಗಿಡಗಳನ್ನು ನೆಟ್ಟು ಅದರ ಪೋಷಣೆ ಮಾಡಿ ಹಸಿರಾಗಿಸಿದ್ದಾರೆ. ಎನ್‌ಎಸ್‌ಎಸ್ ವಿದ್ಯಾರ್ಥಿಗಳ ಪರಿಶ್ರಮದಿಂದಾಗಿ ವಿದ್ಯಾರ್ಥಿಗಳ ಕಲಿಕೆ ಉತ್ತಮವಾಗಿದ್ದು ಶಾಲಾ ದಾಖಲಾತಿ ಪ್ರಮಾಣವು ಹೆಚ್ಚಾಗಿದೆ. ಶಿಬಿರದ ಸಮಯದಲ್ಲಿ ಸಾರ್ವಜನಿಕರಿಗೆ ಬೀದಿ ನಾಟಕಗಳ ಮೂಲಕ ಮದ್ಯಪಾನ ಮತ್ತು ಧೂಮಪಾನದಿಂದಾಗುವ ಅನಾಹುತಗಳು, ಪ್ಲಾಸ್ಟಿಕ್ ಬಳಕೆಯಿಂದಾಗುವ ದುಷ್ಪರಿಣಾಮಗಳು, ಮಾರಕ ಕಾಯಿಲೆಗಳ ಬಗ್ಗೆ ಅರಿವು ಮೂಡಿಸುತ್ತಿದ್ದಾರೆ. ಶೌಚಾಲಯ ಹಾಗೂ ನೀರಿನ ಸದ್ಬಳಕೆ, ಕಸ ವಿಲೇವಾರಿ, ಹೆಣ್ಣು ಮಕ್ಕಳಿಗೆ ಸ್ಯಾನಿಟರಿ ಪ್ಯಾಡ್‌ಗಳ ಬಗ್ಗೆ ಮಾಹಿತಿ ನೀಡುವ ಮೂಲಕ ಗ್ರಾಮೀಣ ಜನರಿಗೆ ಜಾಗೃತಿ ಮೂಡಿಸುತ್ತಿದ್ದಾರೆ. ತುರ್ತು ಸಂದರ್ಭಗಳಲ್ಲಿ ಅವಶ್ಯವಿರುವ ರೋಗಿಗಳಿಗೆ ರಕ್ತದಾನ ಮಾಡುವ ಮೂಲಕ ನೆರವಾಗುತ್ತಿದ್ದಾರೆ.

> ನಮ್ಮ ಕಾಲೇಜಿನ ಎನ್‌ಎಸ್‌ಎಸ್ ಘಟಕದಿಂದ ಈವರೆಗೆ 10ಕ್ಕೂ ಹೆಚ್ಚು ಗ್ರಾಮಗಳು ಅದರಲ್ಲೂ ಹಾಡಿ ಮಕ್ಕಳ ಶಾಲೆಗಳನ್ನು ದತ್ತು ತೆಗೆದುಕೊಂಡು ಅನೇಕ ಸೌಲಭ್ಯಗಳನ್ನು ಒದಗಿಸಲಾಗಿದೆ. ನಮ್ಮ ಕಾಲೇಜಿನ ಸ್ವಯಂಸೇವಕರು ಈ ಶಾಲೆಗಳಿಗೆ ಬಣ್ಣ ಬಳಿದು ಹೊಸ ರೂಪ ನೀಡುವುದರ ಜೊತೆಗೆ ಕಂಪ್ಯೂಟರ್, ಸ್ಮಾರ್ಟ್ ಟಿವಿ, ಪ್ರಿಂಟರ್, ಕಲಿಕಾ ಹಾಗೂ ಕ್ರೀಡಾ ಸಾಮಗ್ರಿಗಳನ್ನು ಒದಗಿಸುತ್ತಿದ್ದಾರೆ. ಶಾಲೆಗಳು ಹಾಗೂ ವಿದ್ಯಾರ್ಥಿಗಳ ಸರ್ವಾಂಗೀಣ ಪ್ರಗತಿಗೆ ಶ್ರಮಿಸುತ್ತಿದ್ದಾರೆ. –ಎಂ.ಕಿರಣ್

ವೈವಿಧ್ಯತೆಗಳ ನಡುವೆ ಒಟ್ಟಾಗಿರುವುದು ಮುಖ್ಯ

ಜಯದೇವ ಹೃದ್ರೋಗ ವಿಜ್ಞಾನ, ಸಂಶೋಧನಾ ಸಂಸ್ಥೆ ನಿರ್ದೇಶಕ ದಿನೇಶ್ ಅಭಿಪ್ರಾಯ



ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕಾವೇರಿ ಸಭಾಂಗಣದಲ್ಲಿ ರಾಷ್ಟ್ರೀಯ ಐಕ್ಯತಾ ಸಪ್ತಾಹ ದಿನಾಚರಣೆ ಅಂಗವಾಗಿ ನಡೆದ 'ಸಾಂಸ್ಕೃತಿಕ ಏಕತಾ ದಿನ' ಕಾರ್ಯಕ್ರಮದಲ್ಲಿ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ ನಿರ್ದೇಶಕ ಬಿ.ದಿನೇಶ್ ಮಾತನಾಡಿದರು.

ಮೈಸೂರು, ಜ.8(ಜಿಎ)–ಭಿನ್ನ ಭಾಷೆ, ಸಂಸ್ಕೃತಿ ಮತ್ತು ಸಾಂಸ್ಕೃತಿಕ ವೈವಿಧ್ಯತೆಗಳ ನಡುವೆಯೂ ನಾವು ಒಟ್ಟಾಗಿರುವುದು ಮುಖ್ಯ ಎಂದು ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ ನಿರ್ದೇಶಕ ಬಿ.ದಿನೇಶ್ ತಿಳಿಸಿದರು.

ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕಾವೇರಿ ಸಭಾಂಗಣದಲ್ಲಿ ರಾಷ್ಟ್ರೀಯ ಐಕ್ಯತಾ ಸಪ್ತಾಹ ದಿನಾಚರಣೆ ಅಂಗವಾಗಿ ಗುರುವಾರ ನಡೆದ 'ಸಾಂಸ್ಕೃತಿಕ ಏಕತಾ ದಿನ' ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಭಾರತದಲ್ಲಿ ನಾವು ವಿವಿಧ ರೀತಿಯ ಆಚಾರ ವಿಚಾರ, ಸಂಸ್ಕಾರ, ಸಂಸ್ಕೃತಿಗಳನ್ನು ಕಾಣುತ್ತೇವೆ. ಇದನ್ನು ಅರಿತುಕೊಂಡು ನಮ್ಮ ಸಂಸ್ಕೃತಿ ಬಗ್ಗೆ ಗೌರವ ಬೆಳೆಸಿಕೊಳ್ಳಬೇಕು ಎಂದರು.

ವಿವಿಧತೆಯಲ್ಲಿ ಏಕತೆ ಸಾರುವ ದೇಶದ ಎಲ್ಲಾ ಭಾಷೆ, ಜನಾಂಗ ಮತ್ತು ಧರ್ಮವನ್ನು ಗೌರವಿಸುವುದು ನಮ್ಮೆಲ್ಲರ ಕರ್ತವ್ಯ. ವಿಶ್ವದ ಎಲ್ಲಾ ದೇಶಗಳಿಗಿಂತ ಧರ್ಮ ಮತ್ತು ಭಾಷೆಯಲ್ಲಿ ಭಾರತವು ಹೆಚ್ಚು ಮೌಲ್ಯಗಳನ್ನು ಹೊಂದಿದೆ ಎಂದರು.

ಸಮಾನತೆ, ಸಹಬಾಳ್ವೆ ಗುಣ ಬೆಳೆಸಿಕೊಳ್ಳಬೇಕು. ಪರಸ್ಪರ ಸಹಕಾರ ಮನೋಭಾವ ಹೊಂದಬೇಕು. ವಿಶ್ವ ಮಾನವರಾಗಿ ಬದುಕುಬೇಕು. ದೇಶದ ಅಭಿವೃದ್ಧಿಗೆ, ಅರೋಗ್ಯಕರ ಸಮಾಜ ನಿರ್ಮಾಣಕ್ಕೆ ಶಿಕ್ಷಣ ಮುಖ್ಯವಾಗಿದ್ದು, ಕೆಎಸ್‌ಒಯು ಸಂಸ್ಥೆ ತನ್ನ ಜವಾಬ್ದಾರಿಯಿಂದ ಯಶಸ್ವಿಯಾಗಿ ನಿರ್ವಹಿಸುತ್ತಿದೆ ಎಂದು ದಿನೇಶ್ ಮೆಚ್ಚುಗೆ ವ್ಯಕ್ತಪಡಿಸಿದರು.

ಮಾರ್ಚ್ ತಿಂಗಳಿನಲ್ಲಿ ಜಯದೇವ ಸಂಸ್ಥೆಯಿಂದ ಕೆಎಸ್‌ಒಯುನ ಎಲ್ಲಾ ವರ್ಗದ ಸಿಬ್ಬಂದಿಗಳಿಗೆ ವಾರ್ಷಿಕ ತಪಾಸಣೆ ನಡೆಸಲಾಗುವುದು. ಈ ಅವಕಾಶವನ್ನು ಎಲ್ಲರೂ ಸದುಪಯೋಗ ಪಡಿಸಿಕೊಳ್ಳಬೇಕು. ಒತ್ತಡದ ಬದುಕಿನಲ್ಲಿ ಆರೋಗ್ಯದ ಕಾಳಜಿ ಮುಖ್ಯ. ಉತ್ತಮ ಆಹಾರ ಪದ್ಧತಿ ರೂಢಿಸಿಕೊಳ್ಳಬೇಕು. ಲಘು ವ್ಯಾಯಾಮ ಮಾಡಿ ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಕುಲಪತಿ ಶರಣಪ್ಪ ವಿ.ಹಲಸೆ, ಶೈಕ್ಷಣಿಕ ಡಿನ್ ಪ್ರೊ.ಎಂ.ರಾಮನಾಥಂ ನಾಯುಡು, ಕುಲಸಚಿವ ಪ್ರೊ.ಎಸ್.ಕೆ.ನವೀನ್ ಕುಮಾರ, ಹಣಕಾಸು ಅಧಿಕಾರಿ ಪ್ರೊ.ಎಸ್.ನಿರಂಜನ ಕುಮಾರ್, ಪರೀಕ್ಷಾಂಗ ಸಚಿವ ಪ್ರೊ.ಸಿ.ಎಸ್.ಆನಂದ್‌ಕುಮಾರ್, ಸಂಯೋಜನಾಧಿಕಾರಿ ಟಿ.ಪಿ.ಶಶಿಕುಮಾರ್ ಉಪಸ್ಥಿತರಿದ್ದರು.

ಜ.11ಕ್ಕೆ ಹೆಚ್.ಆರ್. ಲೀಲಾ ರಂಗ ಪ್ರವೇಶ

ಮೈಸೂರು,ಜ.8(ಎಂಟಿವೈ)–ಮೈಸೂರಿನ ಕೂಮಂದಿರದಲ್ಲಿ ಜ.11ರಂದು ಸಂಜೆ 5.30ಕ್ಕೆ ಭರತನಾಟ್ಯ ಕಲಾವಿದೆ ಹೆಚ್.ಆರ್.ಲೀಲಾ ಅವರ ಭರತನಾಟ್ಯ ರಂಗ ಪ್ರವೇಶ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಗುರು ಡಾ.ಪದ್ಮಶ್ರೀ ತಿಳಿಸಿದ್ದಾರೆ.



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಲಾನಿಧಿ ಸ್ಕೂಲ್ ಆಫ್ ಡ್ಯಾನ್ಸ್ ವತಿಯಿಂದ ಆಯೋಜಿಸಿರುವ ಕಾರ್ಯಕ್ರಮದಲ್ಲಿ ಹೆಚ್.ಆರ್.ಲೀಲಾ ಅವರು ರಂಗ ಪ್ರವೇಶ ಮಾಡಲಿದ್ದಾರೆ. ಈ ವೇಳೆ ಶಿವಮೊಗ್ಗದ ಪುಷ್ಪ ಪರ್ಫಾಮಿಂಗ್ ಆರ್ಟ್ಸ್ ಸೆಂಟರ್‌ನ ನಿರ್ದೇಶಕರಾದ ಗುರು ಪುಷ್ಪಾ ಕೃಷ್ಣಮೂರ್ತಿ, ಬದರಿ ದಿವ್ಯ ಭೂಷಣ್, ಡಾ.ಅಂಜನಾ ಭೂಷಣ್ ಹಾಗೂ ಡಾ.ಬಿ.ವಿ. ನಂದೀಶ್ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದರು. ಸುದ್ದಿಗೋಷ್ಠಿಯಲ್ಲಿ ಕಲಾವಿದೆ ಎಚ್.ಆರ್.ಲೀಲಾ ಇದ್ದರು.

ಇಂದಿನಿಂದ ದೇಸಿ ಎಣ್ಣೆ ಮೇಳ

ಮೈಸೂರು,ಜ.8(ಎಂಕೆ)–ಮೈಸೂರಿನ ನಂಜರಾಜ ಬಹದ್ದೂರ್ ಛತ್ರದಲ್ಲಿ ಸಹಜ ಸಮೃದ್ಧ ವತಿಯಿಂದ ನಾಳೆ(ಜ.9)ಯಿಂದ ಮೂರು ದಿನ ದೇಸಿ ಎಣ್ಣೆ ಮೇಳ ಆಯೋಜಿಸಲಾಗಿದೆ. ಬೆಳಗ್ಗೆ 11.30ಕ್ಕೆ ಮೈಸೂರು–ಕೊಡಗು ಲೋಕಸಭಾ ಸದಸ್ಯ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಮೇಳಕ್ಕೆ ಚಾಲನೆ ನೀಡಲಿದ್ದು, ಕಲಬೆರಕೆ ಹಾಗೂ ದೇಸಿ ಎಣ್ಣೆಯ ಮಹತ್ವದ ಕುರಿತು ನುರಿತ ತಜ್ಞರಿಂದ ವಿಶೇಷ ಉಪನ್ಯಾಸ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ.



ಮೇಳದಲ್ಲಿ 50ಕ್ಕೂ ಹೆಚ್ಚು ಬಗೆಯ ಸಾಂಪ್ರದಾಯಿಕ ಎಣ್ಣೆಗಳನ್ನು ಪರಿಚಯಿಸಲಾಗುವುದು. ನಾಳೆ(ಜ.9) ಸಂಜೆ 6 ಗಂಟೆಗೆ ಡಾ.ಖಾದರ್ ವಲಿ ಅವರಿಂದ ವಿಶೇಷ ಉಪನ್ಯಾಸ, ಜ.10ರ ಬೆಳಗ್ಗೆ ಎಣ್ಣೆ ಬೆಳೆಗಳ ಕೃಷಿ ಮತ್ತು ಮೌಲ್ಯವರ್ಧನೆ ಕುರಿತು ತರಬೇತಿ ಹಾಗೂ ಜ.11 ರಂದು ಬೆಳಗ್ಗೆ 10.30ಕ್ಕೆ ಮಕ್ಕಳಿಗಾಗಿ ವಿವಿಧ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಬೀದಿಬದಿ ವ್ಯಾಪಾರಿಗಳ ವಲಯ ಸ್ಥಾಪನೆಗೆ ಆದ್ಯತೆ

ನಗರ ಪ್ರದಕ್ಷಿಣೆ ನಡೆಸಿ ಸಂಸದ ಯದುವೀರ್ ಮಾಹಿತಿ



ಮೈಸೂರು ಅಶೋಕ ರಸ್ತೆ ಬದಿ ವ್ಯಾಪಾರಿಗಳೊಂದಿಗೆ ಸಂಸದ ಯದುವೀರ್ ಚರ್ಚಿಸುತ್ತಿರುವುದನ್ನು ಕಾಣಬಹುದು.

ಮೈಸೂರು, ಜ. 8 (ಎಂಕೆ)– ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಸ್ವಚ್ಛತೆ ಕಾಪಾಡುವ ದೃಷ್ಟಿಯಿಂದ ಬೀದಿ ಬದಿ ವ್ಯಾಪಾರಿಗಳ ವಲಯ ಸ್ಥಾಪನೆಗೆ ಆದ್ಯತೆ ನೀಡಲಾಗುವುದು ಎಂದು ಸಂಸದ ಯದುವೀರ್ ತಿಳಿಸಿದ್ದಾರೆ.

ಮೈಸೂರಿನಲ್ಲಿ ಗುರುವಾರ ನಗರ ಪ್ರದಕ್ಷಿಣೆ ನಡೆಸಿದ ಅವರು, ವಿವಿಧ ಸ್ಥಳಗಳಲ್ಲಿ ಬೀದಿ ಬದಿ ವ್ಯಾಪಾರಿಗಳೊಂದಿಗೆ ಚರ್ಚಿಸಿ ಸಮಸ್ಯೆಗಳ ಬಗ್ಗೆ ಮಾಹಿತಿ ಪಡೆದುಕೊಂಡರು. ಬಳಿಕ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿ, ಮೈಸೂರು ನಗರದ ಸ್ವಚ್ಛತೆಯ ದೃಷ್ಟಿಯಿಂದ ಬೀದಿಬದಿ ವ್ಯಾಪಾರಿಗಳ ವಲಯ ಸ್ಥಾಪನೆ ಅವಶ್ಯವಿದೆ ಎಂದರು.

ಐತಿಹಾಸಿಕ ಹಿನ್ನಲೆಯುಳ್ಳ ಮೈಸೂರಿನ ಸ್ವಚ್ಛತೆ ಹಾಗೂ ಸುಗಮ ಸಂಚಾರಕ್ಕೆ ಅನುಕೂಲವಾಗುವ ಹಾಗೂ ಗ್ರಾಹಕರಿಗೂ ಅನುಕೂಲವಾಗುವ ನಿಟ್ಟಿನಲ್ಲಿ ಬೀದಿ ವ್ಯಾಪಾರಿಗಳ ವಲಯಗಳ ಸ್ಥಾಪನೆ ಮುಖ್ಯವಾಗಿದ್ದು, ವಲಯಗಳ ಸ್ಥಾಪನೆಗೆ ಕ್ರಮಗೊಳ್ಳಲಾಗುವುದು. ಹಾಗೆಯೇ ಇತರ ಪ್ರದೇಶಗಳಿಗೂ ಭೇಟಿ ನೀಡಿ ಪರಿಶೀಲಿಸಲಾಗುವುದು ಎಂದರು.

ಮಾಜಿ ಮೇಯರ್ ಸಂದೇಶ್‌ಸ್ವಾಮಿ, ಮುಖಂಡ ಬಿ.ಪಿ.ಮಂಜುನಾಥ್, ಅಲ್ಪಸಂಖ್ಯಾತ ಮೋರ್ಚಾದ ಅನಿಲ್ ಥಾಮಸ್, ಬಿಜೆಪಿ ನಗರ ಮಾಜಿ ಪ್ರಧಾನ ಕಾರ್ಯದರ್ಶಿ ಹೆಚ್.ಜಿ.ಗಿರಿಧರ್, ಎನ್.ಆರ್. ಕ್ಷೇತ್ರದ ಬಿಜೆಪಿ ಮಂಡಳ ಅಧ್ಯಕ್ಷ ಮಂಜುನಾಥ್, ಪ್ರಧಾನ ಕಾರ್ಯದರ್ಶಿ ಪದ್ಮನಾಭ್, ಮಂಜು ಸಿ.ಗೌಡ, ಮುಖಂಡರಾದ ಸು.ಮುರುಳಿ, ವೇಲು, ಶ್ರೀಕಂಠಮೂರ್ತಿ, ಟಿಎನ್ ಶಾಂತ, ನಾಗರಾಜ್, ಮಣಿರತ್ನಂ, ಶ್ರೀನಿವಾಸ್, ಸಂಪತ್, ಭಾನುಪ್ರಕಾಶ್, ನಾರಾಯಣ ಲೋಲಪ್ಪ, ಶರತ್, ಅಶ್ವಿನಿ, ಕೃಷ್ಣಮೂರ್ತಿ ರಾವತ್ ಇದ್ದರು.

ಇಂದಿನಿಂದ ಫಸ್ಟ್ ಸರ್ಕಲ್ ಉದ್ಯಮಿ ಒಕ್ಕಲಿಗ ಎಕ್ಸ್–ಪೋ



ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯುವ 'ಫಸ್ಟ್ ಸರ್ಕಲ್ ಉದ್ಯಮಿ ಒಕ್ಕಲಿಗ ಎಕ್ಸ್ ಪೋ' ಪೋಸ್ಟರ್ ಬಿಡುಗಡೆ.

ಮೈಸೂರು,ಜ.8(ಎಂಟಿವೈ)–ಬೆಂಗಳೂರಿನ ಅರಮನೆ ಮೈದಾನದಲ್ಲಿ ಫಸ್ಟ್ ಸರ್ಕಲ್ ಉದ್ಯಮಿ ಒಕ್ಕಲಿಗ ಸಂಸ್ಥೆ ಜ.9ರಿಂದ 11ರವರೆಗೆ ಫಸ್ಟ್ ಸರ್ಕಲ್ ಉದ್ಯಮಿ ಒಕ್ಕಲಿಗ ಎಕ್ಸ್ ಪೋ ಆಯೋಜಿಸಿದೆ ಎಂದು ಸಂಸ್ಥೆಯ ಮೈಸೂರು ಕೇಂದ್ರ ವಲಯದ ಎಂ.ಕೆ.ಯಶ್ವಂತ್‌ಕುಮಾರ್ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆದಿಚುಂಚನಗಿರಿ ಮಠದ ಶ್ರೀ ಡಾ. ನಿರ್ಮಲಾನಂದನಾಥ ಸ್ವಾಮೀಜಿ ಸಾನ್ನಿಧ್ಯದಲ್ಲಿ ಜ.9ರ ಬೆಳಗ್ಗೆ 10ಕ್ಕೆ ಈ ಪ್ರದರ್ಶನವನ್ನು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮಾಜಿ ಸಂಸದ ಬಿ.ಎನ್.ಬಚ್ಚೇಗೌಡ ಉದ್ಘಾಟಿಸಲಿದ್ದಾರೆ. ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ, ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಸೇರಿದಂತೆ ಸಚಿವರು, ಶಾಸಕರು, ಸಂಸದರು ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ ಎಂದರು.

ಜ.11ರ ಸಂಜೆ 4ಕ್ಕೆ ಸಮಾರೋಪ ಸಮಾರಂಭದಲ್ಲಿ ಶ್ರೀ ನಂಜಾವಧೂತ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದು, ಶಾಸಕರಾದ ಡಾ.ಸಿ.ಎನ್. ಅಶ್ವತ್ಥನಾರಾಯಣ್, ಸಿ.ಟಿ.ರವಿ ಸಮಾರೋಪ ಭಾಷಣ ಮಾಡುವರು. ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಸೇರಿದಂತೆ ಸಚಿವರು, ಸಂಸದರು, ಶಾಸಕರು ಇತರರು ಭಾಗವಹಿಸುವರು.

ಈ ಪ್ರದರ್ಶನದಲ್ಲಿ ಒಕ್ಕಲಿಗ ಉದ್ಯಮಿಗಳಿಗೆ ತಮ್ಮ ಉತ್ಪನ್ನ ಮತ್ತು ಸೇವೆಗಳನ್ನು ಪ್ರದರ್ಶನ ಮಾಡಲು ಅವಕಾಶ ನೀಡಲಾಗಿದೆ. ಮೂರು ದಿನಗಳ ಪ್ರದರ್ಶನದಲ್ಲಿ ಒಕ್ಕಲಿಗ ಸಮಾಜದ ಎಲ್ಲಾ ಉದ್ಯಮಿಗಳು ಹಾಗೂ ಗಣ್ಯರು ಪಾಲ್ಗೊಳ್ಳುತ್ತಿದ್ದಾರೆ ಎಂದು ಅವರು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಪದಾಧಿಕಾರಿಗಳಾದ ಚಂದ್ರಣ್ಣ, ಕೆಂಪೇಗೌಡ, ಚಂದನ್, ಶೀಲಾ, ಹರೀಶ್, ಪ್ರಸನ್ನ, ರಚನಾ ಇನ್ನಿತರರು ಉಪಸ್ಥಿತರಿದ್ದರು.

ನಾಳೆ ಅಬಾಕಸ್, ವೇದಿಕ್ ಮ್ಯಾಥ್ಸ್ ಸ್ಪರ್ಧೆ ಆಯೋಜನೆ

ಮೈಸೂರು,ಜ.8(ಎಂಟಿವೈ)–ಮೈಸೂರಿನ ವಿಜಯನಗರದಲ್ಲಿರುವ ಸಂಭ್ರಮ ಕನ್ವೆನ್ಷನ್ ಹಾಲ್‌ನಲ್ಲಿ ಜ.10ರಂದು ಬೆಳಗ್ಗೆ 10ಕ್ಕೆ ಪ್ರೊಪಾತ್ ಅಕಾಡೆಮಿ ವತಿಯಿಂದ ಅಬಾಕಸ್ ಮತ್ತು ವೇದಿಕ್ ಮ್ಯಾಥ್ಸ್ ಸ್ಪರ್ಧೆ ಆಯೋಜಿಸಲಾಗಿದೆ ಎಂದು ಸಂಸ್ಥೆಯ ಮಾರುಕಟ್ಟೆ ವಿಭಾಗದ ನಿರ್ದೇಶಕ ನರಹರಿ ಆರ್.ಬೋರ್ಕರ್ ತಿಳಿಸಿದ್ದಾರೆ. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತ ನಾಡಿದ ಅವರು, ಅಬಾಕಸ್‌ನಲ್ಲಿ 5–12 ವರ್ಷದ ಮಕ್ಕಳು, ವೇದಿಕ್ ಮ್ಯಾಥ್ಸ್ ಸ್ಪರ್ಧೆಯಲ್ಲಿ 12 ವರ್ಷ ಮಕ್ಕಳು ಭಾಗವಹಿಸಬಹುದಾಗಿದೆ. ರಾಜ್ಯ ವಿವಿಧ ಜಿಲ್ಲೆಗಳಿಂದ ಸುಮಾರು 500 ವಿದ್ಯಾರ್ಥಿ ಸ್ಪರ್ಧಾರ್ಥಿಗಳು ಹಾಗೂ 1,000ಕ್ಕೂ ಹೆಚ್ಚು ಪೋಷಕರು ಭಾಗವಹಿಸುವ ನಿರೀಕ್ಷೆಯಿದೆ. ಕಾರ್ಯಕ್ರಮದಲ್ಲಿ ಅಕಾಡೆಮಿ ನಿರ್ದೇಶಕರಾದ ಆಶಾ ದಿನೇಶ್, ವೀರೇಶ್ ತಿಮ್ಮಪುರ, ಮುರುಳಿಧರ್ ಆರ್.ಬೋರ್ಕರ್, ಮಮತ ಶಿವು, ಜಯಂತಿ ಮೋಹನ್ ಭಾಗವಹಿಸಲಿದ್ದಾರೆ. ಸಂಜೆ 5.30ಕ್ಕೆ ಬಹುಮಾನ ವಿತರಣೆ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ವಿಐಎಲ್‌ಡಿ ಫೌಂಡೇಷನ್ ಮ್ಯಾನೇಜಿಂಗ್ ಟ್ರಸ್ಟಿ ಡಾ.ಸೀತಾರಾಮ ಭಾಗವಹಿಸಲಿದ್ದಾರೆ ಎಂದರು. ಸುದ್ದಿಗೋಷ್ಠಿಯಲ್ಲಿ ಮಧುಮತಿ ಎನ್.ಬೋರ್ಕರ್ ಇದ್ದರು.

ಬಾಲಕಾರ್ಮಿಕರ ಪದ್ಧತಿ ನಿರ್ಮೂಲನಾ ಸೊಸೈಟಿ ವೆಬ್‌ಸೈಟ್ ಅಭಿವೃದ್ಧಿ

ಮೈಸೂರು,ಜ.8–ಕಾರ್ಮಿಕ ಇಲಾಖೆಯಿಂದ CENTRE FOR e-Governance ಇವರು ರಾಜ್ಯ ಬಾಲ ಕಾರ್ಮಿಕರ ಪದ್ಧತಿ ನಿರ್ಮೂಲನಾ ಸೊಸೈಟಿಯ ವೆಬ್‌ಸೈಟ್ ಅಭಿವೃದ್ಧಿಪಡಿಸಲಾಗಿದೆ. https://childlabour.karnataka.gov.in/en ಬಾಲ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ನಿರ್ಮೂಲನೆಗೆ ಸಂಬಂಧಿಸಿದ ಕಾಯ್ದೆ ನಿಯಮಗಳು (ಕೇಂದ್ರ /ರಾಜ್ಯ) ಎಸ್‌ಓಪಿ (ಕೇಂದ್ರ /ರಾಜ್ಯ) ಸರ್ಕಾರದ ಆದೇಶಗಳು ಅಧಿಸೂಚನೆಗಳು ಸುತ್ತೋಲೆಗಳು ಹಾಗೂ ಇತರೆ ದಾಖಲೆಗಳನ್ನು ಅಪ್ಲೋಡ್ ಮಾಡಲಾಗಿದೆ. ಸದರಿ ವೆಬ್‌ಸೈಟ್ ಅನ್ನು ಸಾರ್ವಜನಿಕರು ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿ ಸದಸ್ಯ ಕಾರ್ಯದರ್ಶಿ, ಸಹಾಯಕ ಕಾರ್ಮಿಕ ಆಯುಕ್ತರು ತಿಳಿಸಿದ್ದಾರೆ.

ಅಪರಿಚಿತ ಮಹಿಳೆ ಶವ ಪತ್ತೆ

ಮೈಸೂರು: ಜ.1ರಂದು ಮೈಸೂರು–ಅಶೋಕಪುರಂ ರೈಲು ನಿಲ್ದಾಣಗಳ ನಡುವೆ ರೈಲುಗಾಡಿಗೆ ಸಿಕ್ಕಿ ಸುಮಾರು 35–40 ವರ್ಷದ ಅಪರಿಚಿತ ಹೆಂಗಸು ಮೃತಪಟ್ಟಿರುತ್ತಾರೆ. ಮೃತದೇಹವು ಕೆ.ಆರ್.ಆಸ್ಪತ್ರೆಯಲ್ಲಿ ಶವಗಾರದಲ್ಲಿದ್ದು, ಮೈಸೂರು ರೈಲ್ವೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. 4.5 ಅಡಿ ಎತ್ತರ, ಗೋದಿ ಮೈಬಣ್ಣ, ಸಾಧಾರಣ ಮೈಕಟ್ಟು, ಸುಮಾರು 3 ಅಡಿ ಉದ್ದದ ಬಿಳಿಕೂದಲು ಬಿಟ್ಟಿರುತ್ತಾರೆ. ಮೃತಪಟ್ಟ ಸಮಯದಲ್ಲಿ ಆಕಾಶ ಬಣ್ಣದ ಕೆಂಪು ಬಾರ್ಡರ್ ಹೂವಿನ ಸೀರೆ ಧರಿಸಿರುತ್ತಾರೆ. ಈ ಬಗ್ಗೆ ಮಾಹಿತಿ ದೊರೆತಲ್ಲಿ ದೂ.ಸಂ. 0821–2516579 ಸಂಪರ್ಕಿಸಬಹುದು.

ನಿಧನ



ಜೆ.ರಂಗಶೆಟ್ಟಿ

ಮೈಸೂರು,ಜ.8–ಮೈಸೂರಿನ ಶಕ್ತಿನಗರ ಬಡಾವಣೆಯ ನಿವಾಸಿ ಹಾಗೂ ಶಾಲಾ ಶಿಕ್ಷಣ ಇಲಾಖೆ ನಿವೃತ್ತ ಪ್ರಥಮ ದರ್ಜೆ ಸಹಾಯಕರಾದ ಜೆ.ರಂಗಶೆಟ್ಟಿ(83) ಗುರುವಾರ ನಿಧನರಾದರು. ಮೂಲತಃ ಹೊಸಹುಂಡಿ ಗ್ರಾಮದವರಾಗಿದ್ದು, ಪ್ರಸ್ತುತ ಮೈಸೂರಿನ ಶಕ್ತಿನಗರದಲ್ಲಿ ವಾಸಿಸುತ್ತಿದ್ದರು. ಮೃತರು ಓರ್ವ ಪುತ್ರ, ಮೂವರು ಪುತ್ರಿಯರು, ಅಳಿಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಶುಕ್ರವಾರ ಮಧ್ಯಾಹ್ನ ಯರಗನಹಳ್ಳಿ ಬಡಾವಣೆಯಲ್ಲಿರುವ ರುದ್ರಭೂಮಿಯಲ್ಲಿ ನೆರವೇರಿಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಗಣರಾಜ್ಯೋತ್ಸವ ಆಚರಣೆಗೆ ಅಗತ್ಯ ಸಿದ್ಧತೆ ಮಾಡಿಕೊಳ್ಳಿ

ವಿವಿಧ ಇಲಾಖೆ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿ ಡಾ.ಶಿವರಾಜು ಸಲಹೆ

ಮೈಸೂರು, ಜ.8(ಎಂಕೆ)– ಅರ್ಥಪೂರ್ಣ ಗಣರಾಜ್ಯೋತ್ಸವ ಆಚರಣೆಗೆ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜು ಅಧಿಕಾರಿಗಳಿಗೆ ಸಲಹೆ ನೀಡಿದರು.

ಮೈಸೂರು ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ಗಣರಾಜ್ಯೋತ್ಸವ ಪೂರ್ವಭಾವಿ ಸಭೆ ನಡೆಸಿದ ಅವರು, ಜ.26 ರಂದು ಬನ್ನಿಮಂಟಪದ ಪಂಜಿನ ಕವಾಯತು ಮೈದಾನದಲ್ಲಿ ಗಣರಾಜ್ಯೋತ್ಸವ ಆಚರಣೆ ನಡೆಯಲಿದ್ದು, ಬೆಳಗ್ಗೆ 9 ಗಂಟೆಗೆ ಜಿಲ್ಲಾ ಉಸ್ತುವಾರಿ ಸಚಿವರು ಧ್ವಜಾರೋಹಣ ನೆರವೇರಿಸಲಿದ್ದಾರೆ ಎಂದರು.

ಪ್ರತೀ ವರ್ಷದಂತೆ ಈ ವರ್ಷವೂ ಪಥ ಸಂಚಲನ ಶಿಸ್ತುಬದ್ಧವಾಗಿ ಸಾಗಬೇಕು. ಈ ನಿಟ್ಟಿನಲ್ಲಿ ಪೂರ್ವಾಭ್ಯಾಸ ನಡೆಸಿ, ಹೊಸ ವಿದ್ಯಾರ್ಥಿಗಳ ಭಾಗವಹಿಸುವಿಕೆಗೆ ಅವಕಾಶ ಮಾಡಿಕೊಡಿ.



ಗಣರಾಜ್ಯೋತ್ಸವದ ಹಿನ್ನಲೆ ಎಡಿಸಿ ಡಾ.ಪಿ.ಶಿವರಾಜು ಗುರುವಾರ ವಿವಿಧ ಇಲಾಖೆ ಅಧಿಕಾರಿಗಳ ಸಭೆ ನಡೆಸಿದರು.

ಹಾಗೆಯೇ ಸಾಂಸ್ಕೃತಿಕ ಕಾರ್ಯಕ್ರಮಗಳು ಆಕರ್ಷಕವಾಗಿರಬೇಕು ಎಂದು ತಿಳಿಸಿದರಲ್ಲದೆ ಸ್ವಾಗತ, ಸಾಂಸ್ಕೃತಿಕ, ಸಾರಿಗೆ, ಪರೇಡ್, ಸ್ವಚ್ಛತೆ ಹಾಗೂ ಇನ್ನಿತರೆ ಸಮಿತಿಗಳನ್ನು ರಚಿಸಿ ಜವಾಬ್ದಾರಿ ಹಂಚಿಕೆ ಮಾಡಲಾಯಿತು.

ಪ್ಲಾಸ್ಟಿಕ್ ಧ್ವಜ ಬಳಕೆ ನಿಷಿದ್ಧ: ಜಿಲ್ಲೆಯಲ್ಲಿ ಪ್ಲಾಸ್ಟಿಕ್ ಧ್ವಜ ಮಾರಾಟ ಮತ್ತು ಬಳಕೆ ನಿಷೇಧಿಸಲಾಗಿದೆ. ಈ ನಿಟ್ಟಿನಲ್ಲಿ ಪಾಲಿಕೆ ಅಧಿಕಾರಿಗಳು ಪ್ಲಾಸ್ಟಿಕ್ ಧ್ವಜ ಮಾರಾಟ ಮಳಿಗೆಗಳ ಮೇಲೆ ನಿಗಾ ಇಡಬೇಕು. ಪ್ಲಾಸ್ಟಿಕ್ ಧ್ವಜ ಮಾರಾಟ ಕಂಡು ಬಂದಲ್ಲಿ ಕೂಡಲೇ ವಶಪಡಿಸಿ ಕೊಂಡು ನಿಯಾನುಸಾರ ಮಳಿಗೆದಾರರ ವಿರುದ್ಧ ಕ್ರಮವಹಿಸಬೇಕು ಎಂದು ಸೂಚಿಸಿದರು.

ಹಾಗೆಯೇ ಎಲ್ಲಾ ಇಲಾಖೆಯ ಅಧಿಕಾರಿಗಳು ತಮ್ಮ ಕಚೇರಿಯಲ್ಲಿ ಗಣರಾಜ್ಯೋತ್ಸವ ಆಚರಿಸಿದ ಬಳಿಕ ಬನ್ನಿಮಂಟಪದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಕಡ್ಡಾಯವಾಗಿ ಭಾಗವಹಿಸಬೇಕು. ಈ ಸಂಬಂಧ ಸಮಾಜ ಕಲ್ಯಾಣ ಇಲಾಖೆಯವರು, ಗಣರಾಜ್ಯೋತ್ಸವದಲ್ಲಿ ಭಾಗವಹಿಸುವ ಅಧಿಕಾರಿ ಮತ್ತು ಸಿಬ್ಬಂದಿಯ ಹಾಜರಾತಿ ವಿವರವನ್ನು ಜಿಲ್ಲಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು ಎಂದರು.

ಮೈಸೂರು ಮಹಾನಗರ ಪಾಲಿಕೆ ವತಿಯಿಂದ ಆಹ್ವಾನ ಪತ್ರಿಕೆ ಮುದ್ರಿಸಿ ಶಿಷ್ಟಾಚಾರದಂತೆ ಹಂಚಿಕೆ ಮಾಡುವುದು ಹಾಗೂ ಮೈದಾನದಲ್ಲಿ ಸ್ವಚ್ಛತೆ ಕಾಪಾಡುವ ಕೆಲಸ ನಿರ್ವಹಿಸಬೇಕು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಧಿಕಾರಿಗಳು 5 ಗಂಟೆಗೆ ಕಲಾಮಂದಿರದಲ್ಲಿ ನಡೆಯುವ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ವ್ಯವಸ್ಥಿತವಾಗಿ ಆಯೋಜಿಸುವಂತೆ ತಿಳಿಸಿದರು.

ಸಭೆಯಲ್ಲಿ ಎಎಸ್‌ಪಿ ಮಲ್ಲಿಕ್, ಡಿವೈಎಸ್‌ಪಿ ಹೆಚ್.ಪಿ.ವೀರಣ್ಣ, ಕೆಐಎಡಿಬಿ ಕಾರ್ಯಪಾಲಕ ಇಂಜಿನಿಯರ್ ಹೆಚ್.ಕೆ. ಮಾದೇಶ್, ಜಂಟಿ ಕೃಷಿ ನಿರ್ದೇಶಕ ರವಿ, ಡಿಡಿಪಿಐ ಕಚೇರಿ ಅಧಿಕಾರಿ ಬಿ.ಎ. ಸೋಮಶೇಖರ್, ಮೈಸೂರು ಪೂರ್ವ ಪ್ರಾದೇಶಿಕ ಸಾರಿಗೆ ಅಧಿಕಾರಿ ಮಧುರ, ಜಿಲ್ಲಾಧಿಕಾರಿಗಳ ಕಚೇರಿಯ ಶಿಷ್ಟಾಚಾರ ವಿಭಾಗದ ತಹಶೀಲ್ದಾರ್ ಶಿವಪ್ರಸಾದ್ ಇತರರಿದ್ದರು.

ಮದ್ದೂರಲ್ಲಿ ಘರ್ಜಿಸಿದ ಜೆಸಿಬಿ: ಅಕ್ರಮ ಒತ್ತುವರಿ ತೆರವು

ಮದ್ದೂರು, ಜ.8– ನಗರದ ಪೇಟೆ ಬೀದಿ ಫುಟ್‌ಪಾತ್ ಒತ್ತುವರಿ ತೆರವು ಕಾರ್ಯಾಚರಣೆ ಗುರುವಾರ ಬಿಗಿ ಪೊಲೀಸ್ ಬಂದೋಬಸ್ತ್‌ನಲ್ಲಿ ನಡೆಯಿತು.

ನಗರಸಭೆ, ಲೋಕೋಪಯೋಗಿ ಅಧಿಕಾರಿಗಳು ಹಾಗೂ ನಗರದ ಪೊಲೀಸ್ ಠಾಣೆ ಇನ್ಸ್‌ಪೆಕ್ಟರ್ ನವೀನ್ ಅವರ ನೇತೃತ್ವದಲ್ಲಿ ಪೇಟೆ ಬೀದಿಯ ಕೊಲ್ಲಿ ವೃತ್ತದಿಂದ ಪ್ರವಾಸಿ ಮಂದಿರದ ವೃತ್ತದವರೆಗೆ ನಡೆದ ತೆರವು ಕಾರ್ಯಾಚರಣೆಯಲ್ಲಿ ಅಂಗಡಿ ಮುಂಗಟ್ಟುಗಳ ಸರಕು, ತಗಡಿನ ಶೀಟ್ ಮತ್ತು ಇತರೆ ವಸ್ತುಗಳು, ಫುಟ್‌ಪಾತ್ ಮೇಲೆ ಹಾಕಿದ್ದ ನಾಮ ಫಲಕ ಸೇರಿದಂತೆ ಇನ್ನಿತರ ವಸ್ತುಗಳನ್ನು ತೆರವುಗೊಳಿಸಲಾಯಿತು.

ನಗರಸಭಾ ಪೌರಾಯುಕ್ತೆ ರಾಧಿಕಾ ಮಾತನಾಡಿ, ನಗರದ ಪೇಟೆ ಬೀದಿಯಲ್ಲಿ ಅಡ್ಡಾದಿಡ್ಡಿ ವಾಹನ ಪಾರ್ಕಿಂಗ್ ಮಾಡುವುದು, ಬಹುತೇಕ ಅಂಗಡಿಯವರು ತಮ್ಮ ಅಂಗಡಿಗಳ ಸರಕನ್ನು ಫುಟ್‌ಪಾತ್ ಒತ್ತುವರಿ ಮಾಡಿಕೊಂಡು ಹಾಕಿರುವುದರಿಂದ ವಾಹನ ಸವಾರರು ಹಾಗೂ ಸಾರ್ವಜನಿಕರ ಸಂಚಾರಕ್ಕೆ ತೊಂದರೆಯಾಗುತ್ತಿದೆ. ಹೀಗಾಗಿ ತೆರವುಗೊಳಿಸಬೇಕು ಎಂದು ನಗರಸಭೆಗೆ ಈ ಬಗ್ಗೆ ನಾಗರಿಕರು ಹಲವು ಬಾರಿ ಮನವಿ ಮಾಡಿದ್ದ ಹಿನ್ನೆಲೆಯಲ್ಲಿ ಇಂದು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿಯೊಂದಿಗೆ ತೆರವು ಕಾರ್ಯಾಚರಣೆ ಮಾಡಲಾಗುತ್ತಿದೆ. ಪಾದಚಾರಿ ಮಾರ್ಗದಲ್ಲಿ ಯಾವುದೇ ನಾಮಫಲಕ ಅಂಗಡಿ ಸರಕುಗಳನ್ನು ಇಡದೇ ವಾಹನಗಳನ್ನು ಹಾಗೂ ಪಾದಚಾರಿಗಳು ಸುಗಮವಾಗಿ ಸಂಚರಿಸಲು ಅಂಗಡಿ ಮಾಲೀಕರು, ಸಾರ್ವಜನಿಕರು ಸಹಕರಿಸಬೇಕು ಎಂದು ಮನವಿ ಮಾಡಿದರು.


ಮದ್ದೂರಿನ ಪೇಟೆ ಬೀದಿಯಲ್ಲಿ ಫುಟ್‌ಪಾತ್ ಒತ್ತುವರಿ ತೆರವುಗೊಳಿಸಲಾಯಿತು.

ಮಾತಿನ ಚಕಮಕಿ: ಬೆಳ್ಳಂಬೆಳಗ್ಗೆ ನಗರಸಭಾ ಅಧಿಕಾರಿಗಳು ತೆರವು ಕಾರ್ಯಾಚರಣೆಗೆ ಮುಂದಾಗುತ್ತಿದ್ದಂತೆ ಆತಂಕಗೊಂಡ ವ್ಯಾಪಾರಿಗಳು ನಮಗೆ ಯಾವುದೇ ನೋಟಿಸ್ ನೀಡದೆ ಏಕಾಏಕಿ ಫುಟ್‌ಪಾತ್ ತೆರವುಗೊಳಿಸುತ್ತಿರುವುದು ಸರಿಯಲ್ಲ. ನಮ್ಮ ಗಮನಕ್ಕೆ ತಂದು ತೆರವು ಮಾಡಬೇಕಿತ್ತು ಎಂದಾಗ ಅಧಿಕಾರಿಗಳು ಹಾಗೂ ಕಟ್ಟಡ ಮಾಲೀಕರ ನಡುವೆ ಕೆಲಕಾಲ ಮಾತಿನ ಚಕಮಕಿ ನಡೆಯಿತು. ಪೊಲೀಸರು ಮಧ್ಯ ಪ್ರವೇಶಿಸಿ ಪರಿಸ್ಥಿತಿ ತಿಳಿಗೊಳಿಸಿದರು.

ಕೊಲ್ಲಿ ವೃತ್ತದಿಂದ ಟಿಬಿ ವೃತ್ತದವರೆಗೆ ಸುಮಾರು ಎರಡೂವರೆ ಕಿಮೀವರೆಗಿನ ಫುಟ್‌ಪಾತ್ ಮೇಲಿದ್ದ ಅಂಗಡಿ ಹಾಗೂ ನಾಮಫಲಕಗಳನ್ನು ಜೆಸಿಬಿ ಮೂಲಕ ತೆರವುಗೊಳಿಸಲಾಯಿತು.

ಸರಗಳ್ಳತನಕ್ಕೆ ಯತ್ನ: ಇಬ್ಬರ ಬಂಧನ



ಮದ್ದೂರು, ಜ.8– ಸರಗಳ್ಳತನಕ್ಕೆ ಯತ್ನಿಸಿದ ಇಬ್ಬರು ಆರೋಪಿಗಳನ್ನು ಸಾರ್ವಜನಿಕರೇ ಹಿಡಿದು ಪೊಲೀಸರಿಗೆ ಒಪ್ಪಿಸಿದ ಘಟನೆ ತಾಲೂಕಿನ ದೇಶಹಳ್ಳಿ ಗ್ರಾಮದಲ್ಲಿ ಬುಧವಾರ ರಾತ್ರಿ ನಡೆದಿದೆ.

ಮಂಡ್ಯ ತಾಲೂಕಿನ ಗಣಿಗ ಗ್ರಾಮದ ನಿವಾಸಿ ವಿನಯ್ ಕುಮಾರ್ ಹಾಗೂ ಕಾಡುಕೊತ್ತನಹಳ್ಳಿ ಗ್ರಾಮದ ವಿನಯ್ ಬಂಧಿತ ಆರೋಪಿಗಳು. ತಾಲೂಕಿನ ವಳಗೆರೆಹಳ್ಳಿ ಗ್ರಾಮದ ನಿವಾಸಿ ಅಂಬುಜ ಅವರು ದೇಶಹಳ್ಳಿ ಕಡೆಯಿಂದ ಸ್ವಗ್ರಾಮಕ್ಕೆ ತಮ್ಮ ದ್ವಿಚಕ್ರ ವಾಹನದಲ್ಲಿ ಬುಧವಾರ ರಾತ್ರಿ 7.30ರಲ್ಲಿ ಬರುತ್ತಿದ್ದ ವೇಳೆ ಬೈಕ್‌ನಲ್ಲಿ ಹಿಂಬಾಲಿಸಿಕೊಂಡು ಬಂದ ಆರೋಪಿಗಳು ವಿಳಾಸ ಕೇಳುವ ನೆಪದಲ್ಲಿ ಅವರನ್ನು ಮಾತನಾಡಿಸುತ್ತಾ ಅವರ ಕುತ್ತಿಗೆಗೆ ಕೈ ಹಾಕಿ ಚಿನ್ನದ ಸರ ಕಳವು ಮಾಡಲು ಮುಂದಾಗಿದ್ದಾರೆ. ಈ ವೇಳೆ ಅಂಬುಜ ಅವರು ಕೂಗಿಕೊಂಡಿದ್ದು, ಈ ವೇಳೆ ಗ್ರಾಮಸ್ಥರು ಆರೋಪಿಗಳನ್ನು ಹಿಡಿದು ಬೆಸಗರಹಳ್ಳಿ ಠಾಣೆಗೆ ವಿಷಯ ತಿಳಿಸಿದ ಹಿನ್ನೆಲೆಯಲ್ಲಿ ಪೊಲೀಸರು ಸ್ಥಳಕ್ಕೆ ಆಗಮಿಸಿ ಆರೋಪಿಗಳನ್ನು ವಶಕ್ಕೆ ಪಡೆದಿದ್ದಾರೆ.

ಘಟನಾ ಸ್ಥಳಕ್ಕೆ ಎಸ್ಪಿ ಶೋಭಾರಾಣಿ, ಎಎಸ್ಪಿ ಗಂಗಾಧರಸ್ವಾಮಿ, ಡಿವೈಎಸ್‌ಪಿ ಯಶವಂತ ಕುಮಾರ್ ಆಗಮಿಸಿ ಪರಿಶೀಲನೆ ನಡೆಸಿ ಮಾಹಿತಿ ಪಡೆದರು. ಈ ಸಂಬಂಧ ಬೆಸಗರಹಳ್ಳಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಪರ್ಯಾಯ ವ್ಯವಸ್ಥೆ ಕಲ್ಪಿಸದೇ ತೆರವು: ನಗರಸಭೆಗೆ ಮುತ್ತಿಗೆ


ಬೀದಿ ವ್ಯಾಪಾರಸ್ಥರ ಸಂಘದಿಂದ ಪ್ರತಿಭಟನೆ ಮಾಡಲಾಯಿತು.

ಮದ್ದೂರು: ನಗರದ ಪೇಟೆ ಬೀದಿಯಲ್ಲಿ ಬೀದಿ ಬದಿ ವ್ಯಾಪಾರಿಗಳಿಗೆ ಪರ್ಯಾಯ ವ್ಯವಸ್ಥೆ ಕಲ್ಪಿಸದೆ ಏಕಾಏಕಿ ಬೀದಿ ಬದಿ ವ್ಯಾಪಾರಿಗಳನ್ನು ತೆರವುಗೊಳಿಸಿರುವ ಅಧಿಕಾರಿಗಳ ಕ್ರಮ ಖಂಡಿಸಿ ಜಿಲ್ಲಾ ಬೀದಿ ವ್ಯಾಪಾರಸ್ಥರ ಸಂಘದಿಂದ ನಗರಸಭಾ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಲಾಯಿತು.

ಸಿಐಟಿಯು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿ.ಕುಮಾರಿ ಮಾತನಾಡಿ, ನಗರದ ಪೇಟೆ ಬೀದಿ ರಸ್ತೆ ಅಗಲೀಕರಣ ಮಾಡುವುದಾದರೆ ಮಾಡಲಿ. ಆದರೆ, ನಗರದ ಪೇಟೆ ಬೀದಿಯಲ್ಲಿ 275 ಮಂದಿ ಬೀದಿ ಬದಿ ವ್ಯಾಪಾರ ಮಾಡಿಕೊಂಡು ಜೀವನ ಮಾಡುತ್ತಿದ್ದು, ಇವರಿಗೆ ಪರ್ಯಾಯ ವ್ಯವಸ್ಥೆ ಕಲ್ಪಿಸದೆ ಏಕಾಏಕಿ ಪೇಟೆ ಬೀದಿಯಿಂದ ತೆರವುಗೊಳಿಸಿದರೆ ಇವರ ಜೀವನೋಪಾಯಕ್ಕೆ ತೊಂದರೆಯಾಗುತ್ತದೆ ಎಂದರು.

ಬೀದಿ ಬದಿ ವ್ಯಾಪಾರಸ್ಥರ ಜೀವನೋಪಾಯ ಸಂರಕ್ಷಣಾ ಕಾಯ್ದೆ 2014ರ ಅನ್ವಯ ನಗರದ ಪೇಟೆ ಬೀದಿಯಲ್ಲಿರುವುದು 275 ಬೀದಿ ಬದಿ ವ್ಯಾಪಾರಿಗಳಿಂದ ಸರ್ವೆ ಮಾಡಿ ಗುರುತಿನ ಚೀಟಿ ವಿತರಿಸಿದ್ದು, ಅವರಿಗೆ ಪರ್ಯಾಯ ವ್ಯವಸ್ಥೆ ಮಾಡುವವರೆಗೆ ವ್ಯಾಪಾರ ಮಾಡಲು ಅವಕಾಶ ಮಾಡಿಕೊಡಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ರೂಪಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಮನವಿ ಸ್ವೀಕರಿಸಿ ಮಾತನಾಡಿದ ನಗರಸಭಾ ಪೌರಾಯುಕ್ತೆ ರಾಧಿಕಾ, ಬೀದಿ ಬದಿ ವ್ಯಾಪಾರಿಗಳಿಗೆ ಕಾನೂನಿನ ಪ್ರಕಾರ ವ್ಯಾಪಾರ ಮಾಡಲು ಪರ್ಯಾಯ ಸ್ಥಳ ಗುರುತಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಸಿಐಟಿಯು ಮುಖಂಡರಾದ ಪ್ರದೀಪ್, ಚಂದ್ರು, ಜಯರಾಮು, ಮಕ್ಬಲ್ ಪಾಷ, ರೂಪ, ಶಿವಕುಮಾರ್, ಶಿವಚನ್ನಪ್ಪ, ಮಹಾಲಕ್ಷ್ಮಿ, ಮಹೇಂದ್ರ, ಬೀದಿ ಬದಿ ವ್ಯಾಪಾರಿಗಳಾದ ರೂಪ, ರಮೇಶ್, ಶಾಂತರಾಜು, ಕುಮಾರ, ನಾರಾಯಣ, ಸಂಪತ್ ಇತರರಿದ್ದರು.

ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷರ ನೇಮಕ

ಭಾರತೀನಗರ, ಜ.8– ಕೆಪಿಸಿಸಿ ಅಧ್ಯಕ್ಷರೂ ಆದ ಡಿಸಿಎಂ ಡಿ.ಕೆ. ಶಿವಕುಮಾರ್ ಅವರ ಆದೇಶದ ಮೇರೆಗೆ ಮಂಡ್ಯ ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷರಾಗಿ ಮುಟ್ಟನಹಳ್ಳಿ ಎನ್.ಶಿವಲಿಂಗೇಗೌಡ ಅವರನ್ನು ಜಿಲ್ಲಾಧ್ಯಕ್ಷ ಸಿ.ಡಿ.ಗಂಗಾಧರ್ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.



'ಚಂದ್ರಬಿಂಬ' ಕೃತಿ ಲೋಕಾರ್ಪಣೆ


'ಚಂದ್ರಬಿಂಬ' ಅಭಿನಂದನಾ ಕೃತಿಯನ್ನು ಗಣ್ಯರು ಲೋಕಾರ್ಪಣೆಗೊಳಿಸಿದರು.


ಪಾಂಡವಪುರ: ಮಕ್ಕಳಿಗೆ ಪ್ರಾಥಮಿಕ, ಪ್ರೌಢ ಹಂತದಲ್ಲಿಯೇ ನೈತಿಕತೆ, ಮೌಲ್ಯ, ವಿನಯತೆ, ಸಂಸ್ಕಾರ ಕಲಿಸುವ ಕೆಲಸವಾಗಬೇಕಿದೆ ಎಂದು ಸುತ್ತೂರು ಶ್ರೀಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ತಿಳಿಸಿದರು.

ಪಟ್ಟಣದ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ನಡೆದ ನಿವೃತ್ತ ಶಿಕ್ಷಕ ಚಂದ್ರಶೇಖರಯ್ಯ ಅವರ 'ಚಂದ್ರಬಿಂಬ' ಅಭಿನಂದನಾ ಕೃತಿ ಲೋಕಾರ್ಪಣೆ ಸಮಾರಂಭ ಉದ್ಘಾಟಿಸಿ ಮಾತನಾಡಿದ ಅವರು, ಪ್ರಸ್ತುತ ಶಿಕ್ಷಕರಾಗಿ ಸಮಾಜದಲ್ಲಿ ಹೆಸರು ಗಳಿಸಿ ಅಪಾರ ಶಿಷ್ಯ ವೃಂದ ಪಡೆಯುವುದು ಕಷ್ಟ ಸಾಧ್ಯ. ಆದರೆ, ಚಂದ್ರಶೇಖರಯ್ಯ ಅವರು ಶಿಕ್ಷಕ ವೃತ್ತಿ ಜೊತೆಗೆ ಬಹುಮುಖ ಪ್ರತಿಭೆ ಮೂಲಕ ಉತ್ತಮ ಕಲಾವಿದ, ಸಾಹಿತ್ಯ, ಆಡಳಿತಗಾರರಾಗಿ ಸಮಾಜದಲ್ಲಿ ಹೆಸರುಗಳಿಸುವ ಜೊತೆಗೆ ಅಪಾರ ಶಿಷ್ಯ ಬಳಗ ಕಟ್ಟಿಕೊಂಡಿದ್ದಾರೆ. ಬಯಸಿ ಬಂದಿದ್ದು ಅಂಹಭೋಗ ಭಯಸದೆ ಬಂದಿದ್ದು ಲಿಂಗ ಭೋಗ ಎಂಬಂತೆ ಚಂದ್ರಶೇಖರಯ್ಯ ಅವರು ಭಯಸದೆ ಎಲ್ಲವನ್ನು ಪಡೆದುಕೊಂಡಿದ್ದಾರೆ. ಇದಕ್ಕೆ ಅವರ ವಿನಯ, ಸೌಮ್ಯ ಸ್ವಭಾವವೇ ಕಾರಣ ಎಂದು ಬಣ್ಣಿಸಿದರು.

ವಿಶ್ವ ಒಕ್ಕಲಿಗ ಮಠದ ಪೀಠಾಧ್ಯಕ್ಷ ಡಾ. ಶ್ರೀನಿಶ್ಚಲಾನಂದನಾಥ ಸ್ವಾಮೀಜಿ ಮಾತನಾಡಿ, ಆಧ್ಯಾತ್ಮಿಕ ಜೀವನ ಎಂದರೆ ಸನ್ಯಾಸತ್ವ ಸ್ವೀಕರಿಸುವುದು ಮಾತ್ರವಲ್ಲ. ನಮ್ಮೊಳಗಿರುವ ಅಹಂಕಾರ ತ್ಯಜಿಸಿ ನಿರಪೇಕ್ಷ ವ್ಯಕ್ತಿಗಳಾಗಿ ಬದುಕುವುದು ಸಹ ಆಧ್ಯಾತ್ಮವೇ. ಚಂದ್ರಶೇಖರಯ್ಯ ಅವರು ಸಹ ಸಮಾಜದಲ್ಲಿ ಆಧ್ಯಾತ್ಮಕ ವ್ಯಕ್ತಿಗಳಾಗಿ ಯಾವುದನ್ನು ಅಪೇಕ್ಷೆ ಪಡದೆ ಮಾದರಿ ಬದುಕು ಸಾಗಿಸುತ್ತಿದ್ದಾರೆ ಎಂದರು.

ಮಾಜಿ ಸಚಿವ ಸಿ.ಎಸ್.ಪುಟ್ಟರಾಜು, ಪ್ರೊ ಬಿ.ನಾರಾಯಣಗೌಡ ಮಾತನಾಡಿದರು. ಪ್ರೊ.ಎಂ.ಕೃಷ್ಣೇಗೌಡ ಅವರು ಚಂದ್ರಶೇಖರಯ್ಯ ಅವರ ಚಂದ್ರಬಿಂಬ ಅಭಿನಂದನಾ ಕೃತಿ ಬಿಡುಗಡೆಗೊಳಿಸಿ ಮಾತನಾಡಿದರು. ಕರ್ನಾಟಕ ಸಂಘದ ಅಧ್ಯಕ್ಷ ಪ್ರೊ.ಡಾ.ಬಿ. ಜಯಪ್ರಕಾಶ್‌ಗೌಡ, ಚಂದ್ರಶೇಖರಯ್ಯ, ಲಂಡನ್ ಮಹದೇವಯ್ಯ, ಕಸಾಪ ಅಧ್ಯಕ್ಷ ಮೇನಾಗರ ಪ್ರಕಾಶ್ ಹಲವರಿದ್ದರು.

ಎಕ್ಸ್‌ಪ್ರೆಸ್ ವೇನಲ್ಲಿ ಕಾರು ಭಸ್ಮ


ಎಕ್ಸ್‌ಪ್ರೆಸ್ ವೇನಲ್ಲಿ ಕಾರು ಭಸ್ಮವಾಗಿರುವುದು.

ಮದ್ದೂರು, ಜ.8– ಚಲಿಸುತ್ತಿದ್ದ ಕಾರಿನಲ್ಲಿ ಆಕಸ್ಮಿಕವಾಗಿ ಬೆಂಕಿ ಕಾಣಿಸಿಕೊಂಡು ಸಂಪೂರ್ಣ ಭಸ್ಮವಾಗಿರುವ ಘಟನೆ ತಾಲೂಕಿನ ನಿಡಘಟ್ಟ ಬಳಿ ಮೈಸೂರು–ಬೆಂಗಳೂರು ಎಕ್ಸ್‌ಪ್ರೆಸ್ ವೇನಲ್ಲಿ ಗುರುವಾರ ನಡೆದಿದೆ.

ಶ್ರೀರಂಗಪಟ್ಟಣ ತಾಲೂಕಿನ ಹೊಸಹಳ್ಳಿ ನಿವಾಸಿ ರಂಜಿತಾ ಎಂಬುವರು ಬೆಂಗಳೂರಿನಲ್ಲಿರುವ ತಮ್ಮ ತಾಯಿ ಮನೆಗೆ ಕಾರಿನಲ್ಲಿ ತೆರಳಿ ಸಂಜೆ ಶ್ರೀರಂಗಪಟ್ಟಣಕ್ಕೆ ವಾಪಸ್ಸಾಗುತ್ತಿದ್ದ ವೇಳೆ ಇದ್ದಕ್ಕಿದ್ದಂತೆ ಕಾರಿನಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಈ ವೇಳೆ ಚಾಲಕ ಕಿರಣ್ ತಕ್ಷಣ ಎಚ್ಚೆತ್ತು ಕಾರಿನಿಂದ ರಂಜಿತಾ ಅವರನ್ನು ಇಳಿಸಿದ್ದಾರೆ. ಹೀಗಾಗಿ ಯಾವುದೇ ಅನಾಹುತ ಸಂಭವಿಸಿಲ್ಲ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಅಗ್ನಿಶಾಮಕ ದಳದ ಸಿಬ್ಬಂದಿ ಬೆಂಕಿ ನಂದಿಸಿ, ಹೆಚ್ಚಿನ ಅನಾಹುತ ತಪ್ಪಿಸಿದ್ದಾರೆ. ಅಲ್ಲದೇ ಸ್ಥಳಕ್ಕೆ ಮದ್ದೂರು ಸಂಚಾರ ಠಾಣೆ ಎಸ್‌ಐ ರಂಗಸ್ವಾಮಿ ಹಾಗೂ ಸಿಬ್ಬಂದಿ ಆಗಮಿಸಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಟ್ಟು, ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ.

ಬೈಕ್ ನಡುವೆ ಡಿಕ್ಕಿ: ವ್ಯಕ್ತಿಗೆ ತೀವ್ರ ಗಾಯ

ಭಾರತೀನಗರ, ಜ.8– ಬೈಕ್ ನಡುವೆ ಡಿಕ್ಕಿ ಸಂಭವಿಸಿ ವ್ಯಕ್ತಿಯೊಬ್ಬರು ತೀವ್ರ ಗಾಯಗೊಂಡಿರುವ ಘಟನೆ ಪಟ್ಟಣದ ಭಾರತೀ ಸಹಕಾರ ಸಂಘದ ಮುಂಭಾಗ ನಡೆದಿದೆ.

ಇಲ್ಲಿಗೆ ಸಮೀಪದ ಬೊಪ್ಪಸಮುದ್ರ ಗ್ರಾಮದ ನಿವಾಸಿ ಬೋರೇಗೌಡ(59) ಗಾಯಗೊಂಡವರು. ಇವರು ಮೆಳ್ಳಹಳ್ಳಿಯಿಂದ ಬೈಕ್‌ನಲ್ಲಿ ತೆರಳುತ್ತಿದ್ದ ವೇಳೆ ನಂಬರ್ ಪ್ಲೇಟ್ ಇಲ್ಲದ ಮತ್ತೊಂದು ಡಿಸ್ಕವರ್ ಬೈಕ್ ಬಂದು ಡಿಕ್ಕಿ ಹೊಡೆದಿದೆ. ಈ ವೇಳೆ ರಸ್ತೆಗೆ ಬಿದ್ದ ಬೋರೇಗೌಡರ ಕಾಲು ಮುರಿದು ತೀವ್ರ ಗಾಯಗೊಂಡಿದ್ದು, ಅವರನ್ನು ಚಿಕಿತ್ಸೆಗಾಗಿ ಮೈಸೂರಿನ ಜೆಎಸ್‌ಎಸ್ ಆಸ್ಪತ್ರೆಗೆ ದಾಖಲಿಸಲಾಗಿದೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಕೆ.ಎಂ.ದೊಡ್ಡಿ ಠಾಣೆ ಪೊಲೀಸರು ಎರಡೂ ಬೈಕ್‌ಗಳನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

ಜ.12ಕ್ಕೆ, ರಾಷ್ಟ್ರೀಯ ಯುವ ದಿನ

ಮಂಡ್ಯ, ಜ.8– ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಮೈಭಾರತ್ ಕೇಂದ್ರ ಹಾಗೂ ಮಂಡ್ಯ ವಿವಿ ಸಂಯುಕ್ತಾಶ್ರಯದಲ್ಲಿ ಸ್ವಾಮಿ ವಿವೇಕಾನಂದರ ಜನ್ಮ ದಿನಾಚರಣೆ ಪ್ರಯುಕ್ತ ಜ.12ರಂದು ಬೆಳಗ್ಗೆ 10 ಗಂಟೆಗೆ ರಾಷ್ಟ್ರೀಯ ಯುವ ದಿನವನ್ನು ಮಂಡ್ಯ ವಿವಿಯಲ್ಲಿ ಹಾಗೂ ಸ್ವಾಮಿ ವಿವೇಕಾನಂದರ ಕುರಿತು ಚಿತ್ರಕಲೆ ಸ್ಪರ್ಧೆಯನ್ನು ಮಧ್ಯಾಹ್ನ 1 ಗಂಟೆಗೆ ಮೈಭಾರತ್ ಕೇಂದ್ರದ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದೆ.

ಒಂದನೇ ಪುಟದಿಂದ

ಮೈಸೂರಲ್ಲಿ ರೇಷ್ಮೆ ಮಾರುಕಟ್ಟೆ

33 ಜೀವಾವಧಿ ಶಿಕ್ಷಾ ಬಂದಿಗಳನ್ನು ಸನ್ನಡತೆ ಆಧಾರದ ಮೇಲೆ ಅವಧಿಪೂರ್ವ ಬಿಡುಗಡೆ ಮಾಡಲು ಸಚಿವ ಸಂಪುಟ ಅನುಮೋದನೆ ನೀಡಿದೆ. ಈ ಪೈಕಿ ಇಬ್ಬರು ಶಿಕ್ಷಾ ಬಂಧಿಗಳನ್ನು ಕೇಂದ್ರ ಗೃಹ ಮಂತ್ರಾಲಯದ ಸಹಮತಿ ದೊರಕಿದ ನಂತರ ಬಿಡುಗಡೆ ಮಾಡಲು ನಿರ್ಣಯಿಸಲಾಗಿದೆ.

ಹಿಂದ ಮಠಗಳಿಗೆ ಭೂಮಿ: ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಉತ್ತರ ತಾಲೂಕು, ದಾಸನಪುರ ಹೋಬಳಿ, ರಾವುತ್ತನಹಳ್ಳಿ ಗ್ರಾಮದ ಸ.ನಂ. 57 ಮತ್ತು 58ರಲ್ಲಿನ ಜಮೀನನ್ನು ದಲಿತ ಹಾಗೂ ಹಿಂದುಳಿದ ವರ್ಗಗಳ 22 ಮಠಗಳಿಗೆ ಮಂಜೂರು ಮಾಡಲು ಸಚಿವ ಸಂಪುಟ ಒಪ್ಪಿಗೆ ನೀಡಿದೆ.

ಅಕ್ಕ ಪಡೆ: ಅಕ್ಕ ಪಡೆ ಯೋಜನೆಯನ್ನು ಒಳಾಡಳಿತ ಇಲಾಖೆಯ ಸಹಯೋಗದೊಂದಿಗೆ ರಾಜ್ಯದ 31 ಜಿಲ್ಲೆ ಹಾಗೂ 5 ಪೊಲೀಸ್ ಆಯುಕ್ತಾಲಯಗಳಲ್ಲಿ ಅನುಷ್ಠಾನಗೊಳಿಸಲು ಸಚಿವ ಸಂಪುಟ ಸಭೆ ನಿರ್ಣಯಿಸಿದೆ. ಗೃಹಲಕ್ಷ್ಮಿ ವಿವಿಧೋದ್ದೇಶ ಸಹಕಾರ ಸಂಘ ನಿಯಮಿತದ ಸ್ಥಾಪನೆ ಹಾಗೂ ಸಂಘದ ಉಪವಿಧಿಗಳಿಗೆ ಅನುಮೋದನೆ ಹಾಗೂ ಕರ್ನಾಟಕ ಗೃಹ ಕಾರ್ಮಿಕರ (ಸಾಮಾಜಿಕ ಭದ್ರತೆ ಮತ್ತು ಕಲ್ಯಾಣ) ವಿಧೇಯಕ 2026ಕ್ಕೆ ಸಚಿವ ಸಂಪುಟ ಅನುಮೋದನೆ ದೊರೆತಿದೆ. ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತ (KSDL), ಬೆಂಗಳೂರು ಸಂಕೀರ್ಣಕ್ಕೆ ಸಾಬೂನು ತಯಾರಿಸುವ ಯಂತ್ರವನ್ನು 17.70 ಕೋಟಿಗಳ ಅಂದಾಜು ಮೊತ್ತದಲ್ಲಿ ಖರೀದಿಸಲು ಅನುಮೋದನೆ ನೀಡಲಾಗಿದೆ. ಪ್ರಧಾನ ಮಂತ್ರಿ ಆಯುಷ್ಮಾನ್ ಭಾರತ್ ಹೆಲ್ತ್ ಇನ್ಫ್ರಾಸ್ಟ್ರಕ್ಚರ್ ಮಿಷನ್(PM-ABHIM) ಯೋಜನೆಯಡಿ 2024–2026ನೇ ಸಾಲಿನಲ್ಲಿ ರಾಜ್ಯಾದ್ಯಂತ 196 ಗ್ರಾಮೀಣ ಆರೋಗ್ಯ ಮತ್ತು ಸ್ವಾಸ್ಥ್ಯ ಕೇಂದ್ರ(SC-AAM)ಗಳನ್ನು 127.40 ಕೋಟಿಗಳ ಅಂದಾಜು ಮೊತ್ತದಲ್ಲಿ ನಿರ್ಮಿಸಲು ಸರ್ಕಾರಿ ಆದೇಶ ಹೊರಡಿಸಿರುವ ಕ್ರಮಕ್ಕೆ ಘಟನೋತ್ತರ ಅನುಮೋದನೆ ನೀಡಲಾಗಿದೆ.

ಸುರಿದು ಬೆಂಕಿ ಹಚ್ಚಿದ ಮಹಿಳೆ

ಠಾಣೆಯಲ್ಲಿ ಈ ವಿಚಾರವಾಗಿ ಪ್ರಕರಣ ದಾಖಲಾಗಿದೆ.

ಆಸ್ಪತ್ರೆಗೆ ಶಿಶು ಅಭಿವೃದ್ಧಿ ಅಧಿಕಾರಿ ಭೇಟಿ: ವಿಷಯ ತಿಳಿದು ಆಸ್ಪತ್ರೆಗೆ ಆಗಮಿಸಿದ ಶಿಶು ಅಭಿವೃದ್ಧಿ ಅಧಿಕಾರಿ ಹೇಮಾವತಿ ಸಂತ್ರಸ್ತ ಬಾಲಕಿಯ ಆರೋಗ್ಯ ವಿಚಾರಿಸಿದರು. ನಂತರ ಮಾತನಾಡಿದ ಅವರು, ಬಾಲಕಿಯ ಹೇಳಿಕೆ ಪಡೆದು ಅಗತ್ಯ ಸೌಕರ್ಯ ಒದಗಿಸುವ ಹಾಗೂ ಬಾಲಕಿ ಮೇಲೆ ಕ್ರೌರ್ಯ ಮೆರೆದ ಮಹಿಳೆ ಮೇಲೆ ಕಾನೂನು ರೀತ್ಯಾ ಕ್ರಮಕ್ಕೆ ಶಿಫಾರಸ್ಸು ಮಾಡಲಾಗುವುದು. ಜೊತೆಗೆ ಬಾಲಕಿಯ ಬಗ್ಗೆ ವಿಶೇಷ ನಿಗಾ ವಹಿಸಿ, ಉತ್ತಮ ಭವಿಷ್ಯಕ್ಕಾಗಿ ಎಲ್ಲಾ ನೆರವು ನೀಡಲಾಗುವುದು ಎಂದು 'ಮೈಸೂರು ಮಿತ್ರ'ನಿಗೆ ತಿಳಿಸಿದ್ದಾರೆ.

ಇನ್ನು ಅಧಿಕಾರ ಹಸ್ತಾಂತರ ಕುತೂಹಲ!!

ಸಿದ್ದರಾಮಯ್ಯ ಗಾದಿಯಲ್ಲಿ ಮುಂದುವರಿಯುವ ಇಂಗಿತ ವ್ಯಕ್ತಪಡಿಸಿದ್ದು, ಶಿವಕುಮಾರ್ ಸಿಟ್ಟು ನೆತ್ತಿಗೇರುವಂತೆ ಮಾಡಿದೆ. ಇದೇ ಕಾರಣಕ್ಕೆ ನಿನ್ನೆ ಹಾವೇರಿಯಲ್ಲಿ ನಡೆದ ಸರ್ಕಾರಿ ಕಾರ್ಯಕ್ರಮದಲ್ಲಿ ಸಿದ್ದರಾಮಯ್ಯ ಸಮ್ಮುಖದಲ್ಲೇ ವರ್ಲ್ಡ್ ಪವರ್‌ಗಿಂತ ವರ್ಡ್ ಪವರ್ ಹೆಚ್ಚು ಎಂಬ ಟಾಂಗ್ ಮತ್ತೊಮ್ಮೆ ನೀಡಿದ್ದಾರೆ.

ಅಧಿಕಾರ ಹಂಚಿಕೆ ಕುರಿತು ವರಿಷ್ಠರ ಸಮ್ಮುಖದಲ್ಲಿ ನಡೆದ ಮಾತುಕತೆಯಂತೆ ನವೆಂಬರ್ 2025ರಲ್ಲೇ ಗಾದಿ ಬಿಟ್ಟು ಕೊಡಬೇಕಿತ್ತು. ಅರಸು ದಾಖಲೆ ಮುರಿಯಲು ಸಮಯಾವಕಾಶ ಕೋರಿದ್ದಲ್ಲದೆ, ಜನವರಿ 7ರ ನಂತರ ಅಧಿಕಾರದಲ್ಲಿ ಮುಂದುವರೆಯುವುದಿಲ್ಲ ಎಂದು ಶಿವಕುಮಾರ್ ಅವರಿಗೆ ಸಿದ್ದರಾಮಯ್ಯ ಹೇಳಿದ್ದರಂತೆ.

ಭರವಸೆ ಮೇಲೆ ಭರವಸೆ ನೀಡಿದ ನಂತರವೂ ಅಧಿಕಾರದಲ್ಲಿ ಮುಂದುವರೆಯುವ ಇಂಗಿತದ ಹೇಳಿಕೆ ನೀಡುತ್ತಿದ್ದಂತೆ, ಶಿವಕುಮಾರ್ ಮುಖ್ಯಮಂತ್ರಿ ಸಮ್ಮುಖದಲ್ಲೇ ಅವರ ಮಾತನ್ನು ನೆನಪಿಸುವ ಕೆಲಸ ಮಾಡಿದ್ದಾರೆ.

ಶಿವಕುಮಾರ್ ಸಾರ್ವಜನಿಕ ಸಭೆಯಲ್ಲೇ ಈ ಮಾತು ಹೇಳಿದ ನಂತರ ಮುಖ್ಯಮಂತ್ರಿ ನಗರಕ್ಕೆ ಆಗಮಿಸುವ ಮುನ್ನ ವಿಮಾನ ನಿಲ್ದಾಣದಲ್ಲಿ ಇನ್ನು ಎಷ್ಟು ದಿನ ಅಧಿಕಾರದಲ್ಲಿ ಇರುತ್ತೇನೋ ಎಂಬ ಮಾತುಗಳನ್ನು ಆಡಿದರು.

ಎರಡು ದಿನಗಳ ಹಿಂದಷ್ಟೇ ಸತತವಾಗಿ ಪೂರ್ಣಾವಧಿ ಮುಖ್ಯಮಂತ್ರಿ ಆಗಿರುತ್ತೇನೆಂದು ಹೇಳಿದ್ದ ಮುಖ್ಯಮಂತ್ರಿ, ದೆಹಲಿಯಿಂದ ಸಂದೇಶ ಬರುತ್ತಿದ್ದಂತೆ ಹಾವೇರಿಯಲ್ಲಿ ತಮ್ಮ ವರಸೆ ಬದಲಾಯಿಸಿದರು.

ಗೋವಿಂದ್‌ಗೆ ಡಾ.ರಾಜ್‌ಕುಮಾರ್ ಪ್ರಶಸ್ತಿ

ಪ್ರಶಸ್ತಿಯನ್ನು 2020ನೇ ಸಾಲಿನಲ್ಲಿ ಪ್ರಗತಿ ಅಶ್ವಥ್ ನಾರಾಯಣ್ ಅವರಿಗೆ ನೀಡಲಾಗಿದ್ದು, 2021ನೇ ಸಾಲಿನ ಈ ಪ್ರಶಸ್ತಿಯನ್ನು ಹಿರಿಯ ನಟ ಎಂ.ಕೆ.ಸುಂದರ್ ರಾಜ್ ಅವರಿಗೆ ನೀಡಲಾಗಿದೆ. ಈ ಮೂರು ಪ್ರಶಸ್ತಿ ವಿಜೇತರಿಗೆ ತಲಾ 5 ಲಕ್ಷ ರೂ. ನಗದು ಹಾಗೂ 50 ಗ್ರಾಂ. ಚಿನ್ನದ ಪದಕವನ್ನು ನೀಡಿ ಗೌರವಿಸಲಾಗುತ್ತದೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ

ಎ ಖಾತಾ ನೀಡಲು ತೀರ್ಮಾನ

ನಿಯಮ ರೂಪಿಸಿ ರಾಜ್ಯದಾದ್ಯಂತ ಬಿ ಖಾತಾ ಆಸ್ತಿಗಳಿಗೆ ಎ ಖಾತಾ ನೀಡಲಾಗುತ್ತೆ. ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ

ವ್ಯಾಪ್ತಿಯಲ್ಲಿ ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆಯದೆ ರಚಿಸಿರುವ ಬಡಾವಣೆಗಳಲ್ಲಿನ 'ಬಿ–ಖಾತಾ' ನಿವೇಶನ/ಕಟ್ಟಡ/ಅಪಾರ್ಟ್‌ಮೆಂಟ್/ ಫ್ಲಾಟ್‌ಗಳಿಗೆ ಎ–ಖಾತಾ' ನೀಡಲು ಸಂಪುಟ ಒಪ್ಪಿಗೆ ನೀಡಿದೆ ಎಂದರು.

ಜಿಬಿಎ ಮಾದರಿಯಲ್ಲೇ ನಿಯಮ ರೂಪಿಸಿ ಎ ಖಾತಾ ನೀಡಲು ನಿರ್ಧಾರ ಕೈಗೊಳ್ಳಲಾಗಿದೆ. ಇದರಿಂದ ಬೆಂಗಳೂರು ಹೊರತುಪಡಿಸಿ ರಾಜ್ಯದ ಎಲ್ಲ ಜಿಲ್ಲೆಗಳಲ್ಲಿರುವ ಪುರಸಭೆ, ಪಟ್ಟಣ ಪಂಚಾಯಿತಿ, ನಗರಸಭೆ, ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಬಿ ಖಾತಾ ಆಸ್ತಿಗಳನ್ನು ಎ ಖಾತಾ ಆಸ್ತಿಗಳಾಗಿ ಪರಿವರ್ತಿಸಿಕೊಳ್ಳಲು ಅವಕಾಶ ಸಿಗಲಿದೆ ಎಂದು ಸಚಿವರು ತಿಳಿಸಿದರು. ದಂಡದ ಪ್ರಮಾಣ ಇನ್ನೂ ನಿಗದಿ ಮಾಡಿಲ್ಲ. ಈಗಾಗಲೇ ಜಿಬಿಎ ವ್ಯಾಪ್ತಿಯಲ್ಲಿ ಆಸ್ತಿಯ ಮಾರ್ಗಸೂಚಿ ದರದ ಶೇ.5ರಷ್ಟು ದಂಡ ಕಟ್ಟಿ ಎ ಖಾತಾ ಪಡೆಯಲು ಅವಕಾಶ ಕೊಟ್ಟಿದೆ. ಆದರೆ ಶೇ.5 ರಷ್ಟು ದಂಡಕ್ಕೆ ಆಕ್ಷೇಪ ವ್ಯಕ್ತವಾಗಿತ್ತು. ಅಷ್ಟೇ ಅಲ್ಲ ಹೆಚ್ಚು ಅರ್ಜಿ ಸಲ್ಲಿಕೆಯೂ ಆಗಿಲ್ಲ. ಹಾಗಾಗಿ ಶೇ.5 ದಂಡದ ಪ್ರಮಾಣ ಇಳಿಕೆ ಬಗ್ಗೆ ಸರ್ಕಾರದ ಮಟ್ಟದಲ್ಲಿ ಚರ್ಚೆ ಆಗುತ್ತಿದೆ.

ಮಹಾರಾಷ್ಟ್ರದಲ್ಲಿ ಚುನಾವಣೆಗೆ ಸ್ಪರ್ಧೆ

ಸೇರಿದ್ದರು. ಆದಾಗ್ಯೂ, ಆಕ್ರೋಶದ ನಂತರ, ಶಿಂಧೆ ತಮ್ಮ ಪಕ್ಷ ಸೇರ್ಪಡೆಯನ್ನು ಸ್ಥಗಿತಗೊಳಿಸಿದ್ದರು. ಬೆಂಗಳೂರಿನ ಲಂಕೇಶ್ ನಿವಾಸದ ಹೊರಗೆ 2017ರ ಸೆಪ್ಟೆಂಬರ್ 5 ರಂದು ಗುಂಡು ಹಾರಿಸಿ ಗೌರಿ ಲಂಕೇಶ್ ಹತ್ಯೆ ಮಾಡಲಾಗಿತ್ತು. ಈ ಕೊಲೆ ರಾಷ್ಟ್ರಮಟ್ಟದಲ್ಲಿ ಸುದ್ದಿಯಾಗಿತ್ತು. ಪಂಗಾರ್ಕರ್ 2001 ಮತ್ತು 2006ರ ನಡುವೆ ಅವಿಭಜಿತ ಶಿವಸೇನೆಯಿಂದ ಜಲ್ನಾ ಪುರಸಭೆಯ ಸದಸ್ಯರಾಗಿದ್ದರು. 2011ರಲ್ಲಿ ಶಿವಸೇನೆ ಅವರಿಗೆ ಟಿಕೆಟ್ ನಿರಾಕರಿಸಿದ ನಂತರ ಅವರು ಬಲಪಂಥೀಯ ಹಿಂದೂ ಜನಜಾಗೃತಿ ಸಮಿತಿಯನ್ನು ಸೇರಿದರು. ರಾಜ್ಯದ ವಿವಿಧ ಭಾಗಗಳಿಂದ ಕಚ್ಚಾ ಬಾಂಬ್‌ಗಳು ಮತ್ತು ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಂಡ ಪ್ರಕರಣಕ್ಕೆ ಸಂಬಂಧಿಸಿದಂತೆ ಅವರನ್ನು 2018ರ ಆಗಸ್ಟ್‌ನಲ್ಲಿ ಮಹಾರಾಷ್ಟ್ರ ಭಯೋತ್ಪಾದನಾ ನಿಗ್ರಹ ದಳ(ಎಟಿಎಸ್) ಬಂಧಿಸಿತು.

ಆ ಸಮಯದಲ್ಲಿ ಪಂಗಾರ್ಕರ್ ವಿರುದ್ಧ ಸ್ಫೋಟಕ ಕಾಯ್ದೆ, ಸ್ಫೋಟಕ ವಸ್ತುಗಳ ಕಾಯ್ದೆ ಮತ್ತು ಕಾನೂನುಬಾಹಿರ ಚಟುವಟಿಕೆಗಳು(ತಡೆಗಟ್ಟುವಿಕೆ) ಕಾಯ್ದೆ (ಯುಎಪಿಎ) ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿತ್ತು. ಗೌರಿ ಲಂಕೇಶ್ ಹತ್ಯೆ ಪ್ರಕರಣದಲ್ಲಿ ಕರ್ನಾಟಕ ಹೈಕೋರ್ಟ್ 2024ರ ಸೆಪ್ಟೆಂಬರ್ 4 ರಂದು ಅವರಿಗೆ ಜಾಮೀನು ನೀಡಿತ್ತು.

ಶಾಲೆಯಲ್ಲಿ ಮಲಯಾಳಂ ಕಲಿಕೆ ಕಡ್ಡಾಯ

ಮಾಡಿಕೊಟ್ಟ ಹಾಗಾಗುತ್ತದೆ. ಕಾಸರಗೋಡಿನ ಜನ ಹಲವು ತಲೆಮಾರುಗಳಿಂದ ಕನ್ನಡ ಮಾಧ್ಯಮದಲ್ಲಿ ಓದಿದ್ದಾರೆ, ನಿತ್ಯದ ಬದುಕಿನಲ್ಲಿ ಕನ್ನಡವನ್ನು ನಿರಂತರವಾಗಿ ಬಳಸುತ್ತಾ ಬಂದಿದ್ದಾರೆ. ಕಾಸರಗೋಡು ಜಿಲ್ಲೆಯ ಶೇಕಡಾ 70ರಷ್ಟು ವಿದ್ಯಾರ್ಥಿಗಳು ಕನ್ನಡ ಭಾಷೆಯನ್ನು ಮತ್ತು ಕನ್ನಡ ಮಾಧ್ಯಮದಲಿಯೇ ಕಲಿಯುವುದನ್ನು ಬಯಸುತ್ತಾರೆ ಎಂಬುದು ಅಲ್ಲಿನ ಕನ್ನಡಿಗರ ಒಕ್ಕೊರಲ ಅಭಿಪ್ರಾಯವಾಗಿದೆ. ಯಾವುದೇ ಒಂದು ಭಾಷೆ ಮತ್ತೊಂದು ಭಾಷೆಯ ವಿರುದ್ಧವಾಗಿ ಇರುವುದಿಲ್ಲ. ಭಾರತ ಬಹುಭಾಷೆ, ಬಹುಸಂಸ್ಕೃತಿ ಮತ್ತು ಬಹುಧರ್ಮದ ತೊಟ್ಟಿಲಾಗಿದೆ. ಈ ಬಹುತ್ವದ ವಾತಾವರಣಕ್ಕೆ ಧಕ್ಕೆ ಉಂಟು ಮಾಡುವ ಪ್ರಯತ್ನ ಅಪಾಯಕಾರಿಯಾಗಿದೆ.

ಭಾಷೆಯೂ ಸೇರಿದಂತೆ ಅಲ್ಪಸಂಖ್ಯಾತರ ಹಿತರಕ್ಷಣೆಯ ವಿಚಾರದಲ್ಲಿ ನಾವೆಲ್ಲರೂ ಗೌರವಿಸುವ ಸಂವಿಧಾನದಲ್ಲಿ ಸ್ಪಷ್ಟವಾಗಿದೆ. ಸಂವಿಧಾನದ 29 ಮತ್ತು 30ನೇ ಪರಿಚ್ಛೇದಗಳು ದೇಶದ ಯಾವುದೇ ಭಾಗದಲ್ಲಿ ವಾಸಿಸುತ್ತಿರುವವರಿಗೆ ತಮ್ಮ ಭಾಷೆ, ಲಿಪಿ ಮತ್ತು ಸಂಸ್ಕೃತಿ ರಕ್ಷಿಸಿಕೊಳ್ಳುವ ಹಕ್ಕನ್ನು ನೀಡಿದೆ. ಅವರಿಗೆ ತಮ್ಮ ಆಯ್ಕೆಯ ಶೈಕ್ಷಣಿಕ ಸಂಸ್ಥೆಗಳನ್ನು ಸ್ಥಾಪಿಸಿ ನಡೆಸುವ ಹಕ್ಕನ್ನೂ ನೀಡುತ್ತದೆ. ಸಂವಿಧಾನದ 350(ಎ) ಪ್ರಾಥಮಿಕ ಹಂತದಲ್ಲಿ ಮಾತೃಭಾಷೆಯಲ್ಲಿ ಕಲಿಯುವ ಸ್ವಾತಂತ್ರ್ಯವನ್ನು ನೀಡಿದೆ. ಸಂವಿಧಾನದ 350(ಬಿ) ಅಲ್ಪಸಂಖ್ಯಾತರ ರಕ್ಷಣೆಯ ಖಾತರಿಯನ್ನು ನೀಡಿದೆ ಈ ಹಿನ್ನೆಲೆಯಲ್ಲಿ ಯಾವುದೇ ಸರ್ಕಾರ ಅಲ್ಪಸಂಖ್ಯಾತರ ಭಾಷಾ ಸ್ವಾತಂತ್ರ್ಯವನ್ನು ಹತ್ತಿಕ್ಕುವ ಪ್ರಯತ್ನ ಮಾಡಬಾರದು.

ಕರ್ನಾಟಕದಲ್ಲಿ ನಾವು ಕನ್ನಡ ಭಾಷೆಯನ್ನು ಪೊರೆಯುವ ಕೆಲಸ ಮಾಡಿದ ಹಾಗೆ, ಕೇರಳ ರಾಜ್ಯದಲ್ಲಿ ಮಲೆಯಾಳಿ ಭಾಷೆಯನ್ನು ಬೆಳೆಸುವ ಮತ್ತು ಉಳಿಸುವ ಸರ್ವ ಸ್ವಾತಂತ್ರ್ಯ ಅಲ್ಲಿನ ರಾಜ್ಯ ಸರ್ಕಾರಕ್ಕೆ ಇದೆ. ಆದರೆ ಒಂದು ಭಾಷೆಯ ಮೇಲೆ ಇನ್ನೊಂದು ಭಾಷೆಯನ್ನು ಹೇರುವ ಪ್ರಯತ್ನ ಸಲ್ಲದು. ಕೇರಳ ಸರ್ಕಾರ ಈ ಮಸೂದೆಯನ್ನು ಜಾರಿಗೊಳಿಸಲು ಹೊರಟರೆ ಕನ್ನಡಿಗರು ಇದನ್ನು ಒಕ್ಕೊರಲಿನಿಂದ ವಿರೋಧಿಸಲಿದ್ದಾರೆ. ಕಾಸರಗೋಡಿನ ಕನ್ನಡಿಗರ ಜೊತೆಯಲ್ಲಿ ನಿಂತು ಅವರ ಭಾಷಾ ಸ್ವಾತಂತ್ರ್ಯದ ರಕ್ಷಣೆಗೆ ಸರ್ವ ರೀತಿಯ ಬೆಂಬಲವನ್ನು ನೀಡಲಿದ್ದಾರೆ ಎಂದು ಎಚ್ಚರಿಕೆ ನೀಡಿದ್ದಾರೆ.

ಬಳ್ಳಾರಿ ಗಲಭೆ: ಸಿಬಿಐ ತನಿಖೆ ಅಗತ್ಯವಿಲ್ಲ

- ನಮ್ಮ ಪೊಲೀಸರಿಗೂ ತನಿಖಾ ಸಾಮರ್ಥ್ಯವಿದೆ: ಡಾ.ಪರಮೇಶ್ವರ್
- ಕೇಂದ್ರ ಸಚಿವ ಕುಮಾರಸ್ವಾಮಿ ಅವರೊಂದಿಗೂ ಕೆಲಸ ಮಾಡಿದ್ದೇನೆ; ನನ್ನ ಸಾಮರ್ಥ್ಯ ಅವರಿಗೂ ಗೊತ್ತು

ಬೆಂಗಳೂರು, ಜ.8(ಕೆಎಂಶಿ)– ಬಳ್ಳಾರಿ ಗಲಭೆ ಪ್ರಕರಣದ ತನಿಖೆ ಸಿಬಿಐಗೆ ವಹಿಸುವ ಅಗತ್ಯವಿಲ್ಲ. ನಮ್ಮ ಪೊಲೀಸರಿಗೂ ತನಿಖೆ ನಡೆಸುವ ಸಾಮರ್ಥ್ಯ ಇದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಇಂದಿಲ್ಲಿ ಪ್ರತಿಪಾದಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಮ್ಮ ಪೊಲೀಸರಿಗೆ ತನಿಖೆ ಮಾಡಲು ಆಗುವುದಿಲ್ಲ ಎಂಬ ಸಂದರ್ಭ ಬಂದರೆ ಸಿಬಿಐಗೆ ನೀಡುವ ಬಗ್ಗೆ ಮಾತನಾಡಬಹುದು. ಯಾವುದೇ ಪ್ರಕರಣಗಳನ್ನು ಸಿಬಿಐಗೆ ನೀಡುವುದಿಲ್ಲ ಎಂಬುದಾಗಿ ಈಗಾಗಲೇ ಕ್ಯಾಬಿನೆಟ್‌ನಲ್ಲಿ ತೀರ್ಮಾನ ಮಾಡಲಾಗಿದೆ. ಸಿಬಿಐಗೆ ಕೊಡುವ ಅಗತ್ಯತೆಯೂ ಇಲ್ಲ ಎಂದರು.

ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಎರಡು ಬಾರಿ ರಾಜ್ಯದ ಮುಖ್ಯಮಂತ್ರಿಗಳಾಗಿದ್ದವರು. ಕೇಂದ್ರದಲ್ಲಿ ಬೃಹತ್ ಕೈಗಾರಿಕೆ ಸಚಿವರಾಗಿದ್ದಾರೆ. ನನ್ನ ಬಗ್ಗೆ ವೈಯಕ್ತಿಕವಾಗಿ ಹೇಳಿಕೆ ಕೊಟ್ಟಿದ್ದಾರೆ. ನಾನು ಅವರ ಬಗ್ಗೆ ಏನು ಬೇಕಾದರೂ ಮಾತನಾಡಬಹುದು. ಅವರು ಬಹಳ ಜವಾಬ್ದಾರಿಯುತವಾಗಿ ಹೇಳಿಕೆ ಕೊಟ್ಟಿದ್ದಾರೆ ಎಂಬುದಾಗಿ ಭಾವಿಸಿ, ಸ್ವೀಕಾರ ಮಾಡುತ್ತೇನೆ.

ರಾಜ್ಯದ ಕಾನೂನು ವ್ಯವಸ್ಥೆಯಡಿ ಯಾವ ರೀತಿ ಆಡಳಿತ ಮಾಡಬೇಕು ಎಂಬ ಅರಿವು ನನಗಿದೆ ಎಂಬುದನ್ನು ಹೇಳಬಯಸುತ್ತೇನೆ. 38 ವರ್ಷ ರಾಜಕಾರಣದಲ್ಲಿದ್ದೇನೆ. ಅನೇಕ ಹುದ್ದೆಗಳಲ್ಲಿ ಕೆಲಸ ಮಾಡಿದ್ದೇನೆ.



ಕುಮಾರಸ್ವಾಮಿ ಜೊತೆಗೂ ಕೆಲಸ ಮಾಡಿದ್ದೇನೆ. ಹಾಗಾಗಿ ನನ್ನ ಸಾಮರ್ಥ್ಯ ಮತ್ತು ವ್ಯಕ್ತಿತ್ವ ಅವರಿಗೂ ಗೊತ್ತಿದೆ. ಅವರ ಹೇಳಿಕೆಯನ್ನು ಗಂಭೀರವಾಗಿ ತೆಗೆದುಕೊಳ್ಳುವುದಿಲ್ಲ.

ಹುಬ್ಬಳ್ಳಿ ಘಟನೆಗೆ ಸಂಬಂಧಿಸಿದಂತೆ ಪೊಲೀಸ್ ಕಮಿಷನರ್ ಶಶಿಕುಮಾರ್ ಹೇಳಿಕೆ ನೀಡಿದ್ದಾರೆ. ಪೊಲೀಸರು ಮಹಿಳೆಯನ್ನು ವಿವಸ್ತ್ರಗೊಳಿಸಿಲ್ಲ. ಅರೆಸ್ಟ್ ಮಾಡುವ ವೇಳೆ ಮಹಿಳೆಯೇ ಆ ರೀತಿ ಮಾಡಿಕೊಂಡಿದ್ದಾರೆ ಎನ್ನುವ ಸ್ಪಷ್ಟನೆಯನ್ನು ಕಮಿಷನರ್ ನೀಡಿದ್ದಾರೆ. ಕಮಿಷನರ್ ಸ್ಪಷ್ಟಪಡಿಸಿದ ಮೇಲೆ ಅದಕ್ಕಿಂತ ಇನ್ನೇನು ಬೇಕು ಎಂದರು. ಎಲ್ಲದರಲ್ಲೂ ರಾಜಕೀಯ ಮಾಡುವುದು ಒಳ್ಳೆಯದಲ್ಲ, ಹೆಣ್ಣುಮಗಳ ವಿಚಾರದಲ್ಲಿ ರಾಜಕೀಯ ಮಾಡುವುದು ಸರಿ ಕಾಣುವುದಿಲ್ಲ.

ಯಾರನ್ನೂ ಅವರ ರಾಜಕೀಯ ಪಕ್ಷದ ಹಿನ್ನೆಲೆಯಲ್ಲಿ ಟಾರ್ಗೆಟ್ ಮಾಡುವುದಿಲ್ಲ. ಪೊಲೀಸರು ಆ ರೀತಿ ಮಾಡಲು ಸಾಧ್ಯವಿಲ್ಲ, ಮಾಡಕೂಡದು. ಇಂತಹುದಕ್ಕೆ ಅವಕಾಶ ಕೊಡುವುದಿಲ್ಲ. ಯಾವುದೇ ರಾಜಕೀಯ ದುರುದ್ದೇಶದಿಂದ ಪೊಲೀಸರು ನಡೆದುಕೊಳ್ಳುವುದಿಲ್ಲ ಎಂದರು.

ಅಕ್ರಮ ಬಾಂಗ್ಲಾ ವಲಸಿಗರನ್ನು ಪತ್ತೆ ಮಾಡಿ, ಗಡೀಪಾರು ಮಾಡಲಾಗುತ್ತಿದೆ. ಈಗಾಗಲೇ ಸಾಕಷ್ಟು ಮಂದಿ ಗಡೀಪಾರು ಆಗಿದ್ದಾರೆ. ಬಾಂಗ್ಲಾದವರು ಅನಧಿಕೃತವಾಗಿ ರಾಜ್ಯದ ಎಲ್ಲಿಯೇ ಇದ್ದರೂ ಪತ್ತೆ ಹಚ್ಚಿ, ಗಡೀಪಾರು ಮಾಡುತ್ತೇವೆ ಎಂದರು.

ಎರಡು ವಿಶೇಷ ರೈಲು

ಸಂಜೆ 18:35 ಗಂಟೆಗೆ ಹೊರಡಲಿದ್ದು, ಮರುದಿನ ಬೆಳಗ್ಗೆ 11:00 ಗಂಟೆಗೆ ಟ್ಯುಟಿಕಾರನ್ ತಲುಪಲಿದೆ. 06284 ಟ್ಯುಟಿಕಾರನ್–ಮೈಸೂರು ಎಕ್ಸ್‌ಪ್ರೆಸ್ ವಿಶೇಷ ರೈಲು 10 ಮತ್ತು 14ರಂದು (ಶನಿವಾರ ಮತ್ತು ಬುಧವಾರ) ಟ್ಯುಟಿಕಾರನ್‌ನಿಂದ ಮಧ್ಯಾಹ್ನ 2 ಗಂಟೆಗೆ ಹೊರಡಲಿದ್ದು, ಮರುದಿನ ಬೆಳಗ್ಗೆ 07:45 ಗಂಟೆಗೆ ಮೈಸೂರು ತಲುಪಲಿದೆ.

ಎಲ್ಲೆಲ್ಲಿ ನಿಲುಗಡೆ: ಈ ರೈಲುಗಳು ಮಂಡ್ಯ, ಮದ್ದೂರು, ಚನ್ನಪಟ್ಟಣ, ರಾಮನಗರ, ಕೆಂಗೇರಿ, ಕೆಎಸ್‌ಆರ್ ಬೆಂಗಳೂರು, ಬೆಂಗಳೂರು ಕಂಟೋನ್ಮೆಂಟ್, ಹೊಸೂರು, ಧರ್ಮಪುರಿ, ಸೇಲಂ ಜಂಕ್ಷನ್, ನಾಮಕ್ಕಲ್, ಕರೂರು ಜಂಕ್ಷನ್, ದಿಂಡಿಗಲ್ ಜಂಕ್ಷನ್, ಮದುರೈ ಜಂಕ್ಷನ್, ವಿರುಧುನಗರ ಜಂಕ್ಷನ್, ಸತೂರು, ಕೋವಿಲ್‌ಪಟ್ಟಿ ಮತ್ತು ಟುಟಿಮೇಲೂರ್ ನಿಲ್ದಾಣಗಳಲ್ಲಿ ನಿಲುಗಡೆ ಕೊಡಲಿದೆ. ಈ ವಿಶೇಷ ರೈಲು ಒಟ್ಟು 19 ಕೋಚ್‌ಗಳನ್ನು ಹೊಂದಿದ್ದು, ಎಸಿ ಟು ಟೈಯರ್–3, ಎಸಿ ತ್ರಿ ಟೈಯರ್–6, ಸ್ಲೀಪರ್ ಕ್ಲಾಸ್–8, ಎಸ್‌ಎಲ್‌ಆರ್/ಡಿ–2 ಬೋಗಿಗಳಿವೆ ಎಂದು ಸಂಸದರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿಬಿ ಜಿ ರಾಮ್ ಜಿ ಯೋಜನೆ; ಕಾನೂನಾತ್ಮಕ ಕ್ರಮಕ್ಕೆ ಸಚಿವ ಸಂಪುಟ ಸಭೆ ತೀರ್ಮಾನ

ಬೆಂಗಳೂರು, ಜ.8– ಮಹಾತ್ಮಾ ಗಾಂಧಿ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯನ್ನು ಕೇಂದ್ರ ಸರ್ಕಾರ ಹಿಂಪಡೆದಿರುವ ಬಗ್ಗೆ ಸಚಿವ ಸಂಪುಟ ಸಭೆ ಚರ್ಚೆ ನಡೆಸಿದ್ದು, ಇದರ ಬದಲಿಗೆ ತಂದಿರುವ 'ವಿಬಿಜಿ, ರಾಮ್ ಜಿ' ಯೋಜನೆಯ ಬಗ್ಗೆ ಕಾನೂನಾತ್ಮಕ ಕ್ರಮಕೈಗೊಳ್ಳಲು ಸಚಿವ ಸಂಪುಟ ಸಭೆ ತೀರ್ಮಾನಿಸಿದೆ. ಜನತಾ ನ್ಯಾಯಾಲಯಕ್ಕೂ ಇದನ್ನು ತೆಗೆದುಕೊಂಡು ಹೋಗಲು ನಿರ್ಣಯಿಸಲಾಗಿದೆ ಎಂದು ಪ್ರವಾಸೋದ್ಯಮ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ.ಪಾಟೀಲ್ ತಿಳಿಸಿದ್ದಾರೆ.

ಸಂವಿಧಾನದ 73 ನೇ ತಿದ್ದುಪಡಿಯಾದ ನಂತರ ದೇಶದಲ್ಲಿ ವಿಕೇಂದ್ರೀಕರಣವಾಗಿದೆ. ಈ ಯೋಜನೆಯಿಂದ ವಿಕೇಂದ್ರೀಕರಣಕ್ಕೆ ಕೊಡಲಿ ಏಟು ಬಿದ್ದಿದೆ. ಕೂಲಿಕಾರರ ಹಿತ ಕಾಪಾಡುವ ಆಸಕ್ತಿಯನ್ನು ಕೇಂದ್ರ ಸರ್ಕಾರ ತೋರಿಸಿಲ್ಲ. ಬದಲಿಗೆ ಉದ್ಯೋಗದ ಹಕ್ಕನ್ನು ಕಿತ್ತುಕೊಂಡಿದೆ. ಗ್ರಾಮಗಳಲ್ಲಿ ಯಾವ ಕೆಲಸವಾಗಬೇಕೆಂದು ತೀರ್ಮಾನಿಸುವ ಅಧಿಕಾರವನ್ನು ಪಂಚಾಯಿತಿಗಳಿಂದ ಸಂಪೂರ್ಣವಾಗಿ ಕಿತ್ತುಕೊಂಡು, ಕೇಂದ್ರ ಸರ್ಕಾರ ನಿರ್ದೇಶನ ನೀಡುತ್ತದೆ. ಈ ಕರಾಳ ಶಾಸನವನ್ನು ಕರ್ನಾಟಕ ಸರ್ಕಾರ ತೀವ್ರವಾಗಿ ವಿರೋಧಿಸುತ್ತದೆ. ರಾಜಕೀಯವಾಗಿ, ಕಾನೂನಾತ್ಮಕವಾಗಿ ಹಾಗೂ ಜನರ ನ್ಯಾಯಾಲಯದಲ್ಲಿ ಹೋರಾಟ ಮಾಡುವುದಾಗಿ ತಿಳಿಸಿದರು.

ಶೀಘ್ರದಲ್ಲಿ ಪಂಚಾಯತ್ ಚುನಾವಣೆ: ಪಂಚಾಯತಿ ಚುನಾವಣೆಯನ್ನು ಆದಷ್ಟು ಶೀಘ್ರವಾಗಿ ನಡೆಸಲು ಸಂಪುಟ ತೀರ್ಮಾನಿಸಿದೆ. ಹಲವಾರು ಪಂಚಾಯ್ತಿಗಳು ಸುಪ್ರೀಂಕೋರ್ಟಿಗೆ ಹೋಗುವಂತೆ ರಾಜ್ಯ ಸರ್ಕಾರವನ್ನು ಕೋರಿವೆ. ಒಂದೆರಡು ದಿನಗಳಲ್ಲಿ ಈ ಬಗ್ಗೆ ತೀರ್ಮಾನ ಮಾಡಲಿದೆ ಎಂದರು.

ಬಿ.ಎಲ್.ಜ್ಯೋತಿಗೆ ಪಿಎಚ್.ಡಿ.



ಮೈಸೂರು: ಡಾ. ಎಂ.ಜಿ. ಮಂಜುನಾಥ ಅವರ ಮಾರ್ಗದರ್ಶನದಲ್ಲಿ ಬಿ.ಎಲ್. ಜ್ಯೋತಿ ಅವರು ರೇಷ್ಮೆ ಕೃಷಿ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ವಿಕಲಚೇತನರಿಗೆ ರಿಯಾಯಿತಿ ಪಾಸ್ ನವೀಕರಣ

ಮೈಸೂರು, ಜ.8–ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವತಿಯಿಂದ ವಿಕಲ ಚೇತನರ ರಿಯಾಯಿತಿ ಬಸ್ ಪಾಸ್ ಹೊಂದಿರುವ ಪಾಸ್‌ದಾರರ ಬಸ್ ಪಾಸನ್ನು ಜ.8ರಿಂದ ಫೆ.28ರವರೆಗೆ ಸಾರಿಗೆ ಬಸ್ ನಿಲ್ದಾಣದಲ್ಲಿ ನವೀಕರಿಸಲಾಗುವುದು. 2025ರಲ್ಲಿ ವಿತರಿಸಿರುವ ಬಸ್ ಪಾಸ್ ನವೀಕರಿಸಲು ಅನುಕೂಲವಾಗುವಂತೆ ಕಾಲ ಮಿತಿ ನೀಡುವ ಉದ್ದೇಶದಿಂದ 2025ನೇ ಸಾಲಿನಲ್ಲಿ ವಿತರಿಸಿರುವ ಪಾಸ್‌ಗಳನ್ನು ಮಾನ್ಯತೆ ಮಾಡಲಾಗಿದ್ದು, ಸದರಿ ಪಾಸ್‌ಗಳನ್ನು ಮೈಸೂರು ನಗರ ಬಸ್ ನಿಲ್ದಾಣ ಹಾಗೂ ನಂಜನಗೂಡು ಬಸ್ ನಿಲ್ದಾಣ, ಮೈಸೂರು ನಗರ ಮತ್ತು ಉಪನಗರ ವ್ಯಾಪ್ತಿಯ ವಿಕಲಚೇತನರ ಪಾಸ್‌ಗಳನ್ನು ನವೀಕರಿಸಲಾಗುವುದು. 2026ನೇ ಸಾಲಿನ ಬಸ್‌ಪಾಸ್ ನವೀಕರಣ ಮಾಡಿಸಲು ಇಚ್ಛಿಸುವ ವಿಕಲಚೇತನರು https://seva sinduser vices. karnataka. gov.in/ ತಮ್ಮ ವಿವರಗಳೊಂದಿಗೆ ಅರ್ಜಿ ಸಲ್ಲಿಸಲು ಕೋರಲಾಗಿದೆ. ಪ್ರಸಕ್ತ ಸಾಲಿನಲ್ಲಿ ವಿಕಲಚೇತನರ ಪಾಸುಗಳನ್ನು ನವೀಕರಿಸುವ ಸಮಯದಲ್ಲಿ ಫಲಾನುಭವಿಗಳು ಸೇವಾ ಸಿಂಧು ಪೋರ್ಟಲ್ ಮುಖಾಂತರ ಅರ್ಜಿ ಸಲ್ಲಿಸಿದ ನಂತರ ಅದರ ಪ್ರಿಂಟ್‌ನೊಂದಿಗೆ ಮೂಲ ಯುಡಿಐಡಿ ಕಾರ್ಡ್ ಹಾಗೂ ಆಧಾರ್ ಕಾರ್ಡ್ ಅನ್ನು ಪರಿಶೀಲನೆಗಾಗಿ ತೋರಿಸತಕ್ಕದ್ದು. ಜೊತೆಗೆ ಫಲಾನುಭವಿಗಳು ರೂ.660ಗಳನ್ನು ನಗದು ರೂಪದಲ್ಲಿ ಪಾವತಿಸಿ. 2026ರ ಪಾಸ್‌ನೊಂದಿಗೆ 2 ಸ್ಟ್ಯಾಂಪ್ ಅಳತೆಯ ಇತ್ತೀಚಿನ ಭಾವಚಿತ್ರವನ್ನು ಸಲ್ಲಿಸಿ ರಿಯಾಯಿತಿ ಪಾಸ್‌ಗಳನ್ನು ನವೀಕರಿಸಿಕೊಳ್ಳಬಹುದು ಎಂದು ಪತ್ರಿಕಾ ಪ್ರಕಟಣೆ ತಿಳಿಸಿದೆ.

ಚಾ.ನಗರದಲ್ಲಿ ಅರಿಶಿಣ ಮಂಡಳಿಯ ಪ್ರಾದೇಶಿಕ ಕೇಂದ್ರ ಸ್ಥಾಪಿಸಿ, ಅದಕ್ಕೆ ಬೇಕಾದ ಜಾಗ ಸರ್ಕಾರದಿಂದ ಕೊಡಿಸುವೆ

ಅರಿಶಿನ ಪದಾರ್ಥಗಳ ಖರೀದಿದಾರರು, ಮಾರಾಟಗಾರರ ಸಮಾವೇಶದಲ್ಲಿ ಎಂಎಲ್‌ಸಿ ಕೆ.ಶಿವಕುಮಾರ್ ಘೋಷಣೆ

ಮೈಸೂರು,ಜ.8(ಜಿಎ)–ಚಾಮರಾಜನಗರದಲ್ಲಿ ಉತ್ತಮ ಗುಣಮಟ್ಟದ ಅರಿಶಿಣ ಬೆಳೆಯುತ್ತಾರೆ. ಅಲ್ಲಿ ಅರಿಶಿಣ ಮಂಡಳಿಯ ಪ್ರಾದೇಶಿಕ ಕೇಂದ್ರ ಸ್ಥಾಪಿಸಬೇಕು. ಇದಕ್ಕೆ ಅಗತ್ಯವಿರುವ ಜಾಗವನ್ನು ಸರ್ಕಾರದಿಂದ ಕೊಡಿಸುತ್ತೇನೆ ಎಂದು ಎಂಎಲ್‌ಸಿ ಕೆ.ಶಿವಕುಮಾರ್ ಭರವಸೆ ನೀಡಿದ್ದಾರೆ.

ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ತೋಟಗಾರಿಕೆ ಇಲಾಖೆ, ಕರ್ನಾಟಕ ರಾಜ್ಯ ಸಾಂಬಾರ ಪದಾರ್ಥಗಳ ಅಭಿವೃದ್ಧಿ ಮಂಡಳಿ, ರಾಷ್ಟ್ರೀಯ ಅರಿಶಿಣ ಮಂಡಳಿ, ಭಾರತೀಯ ಸಾಂಬಾರು ಮಂಡಳಿ ಸಹಯೋಗದೊಂದಿಗೆ ಆಯೋಜಿಸಿದ್ದ ಅರಿಶಿಣ ಪದಾರ್ಥಗಳ ಖರೀದಿದಾರರು, ಮಾರಾಟಗಾರರ ಸಮಾವೇಶ ಉದ್ಘಾಟಿಸಿ ಅವರು ಮಾತನಾಡಿದರು.

ಚಾಮರಾಜನಗರ ಜಿಲ್ಲೆಯಲ್ಲಿ ಸುಮಾರು 22 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಅರಿಶಿಣ ಬೆಳೆಯಲಾಗುತ್ತಿದ್ದು, ಅಸ್ಸಾಂ ಮತ್ತು ಮೇಘಾಲಯದಷ್ಟೇ ಉತ್ತಮ ಗುಣಮಟ್ಟದ ಅರಿಶಿಣ ಇಲ್ಲಿ ಬೆಳೆಯುತ್ತಿದ್ದಾರೆ. ಆದರೆ, ಸರಿಯಾದ ಶೈತ್ಯಾಗಾರದ ವ್ಯವಸ್ಥೆ ಇಲ್ಲದೆ ರೈತರು ಬೆಳೆ ಹಾಳಾಗುವ ಭೀತಿಯಲ್ಲಿದ್ದಾರೆ. ಇದರಿಂದಾಗಿ ಮಧ್ಯವರ್ತಿಗಳು ರೈತರನ್ನು ಸುಲಭವಾಗಿ ವಂಚಿಸುತ್ತಿದ್ದಾರೆ. ರೈತರು ತಮಿಳುನಾಡಿನ ಯಂತ್ರಗಳ ಮೇಲೆ ಅವಲಂಬಿತರಾಗಿದ್ದು, ಸಂಸ್ಕರಣೆಗೆ ಹೆಚ್ಚಿನ ಹಣ ವ್ಯಯಿಸುವಂತಾಗಿದೆ. ಅಲ್ಲದೆ ಪ್ರಸ್ತುತ ಇರುವ ಹರಾಜು ವ್ಯವಸ್ಥೆ ರೈತರಿಗೆ ಪೂರಕವಾಗಿಲ್ಲ. ಹೀಗಾಗಿ ತೆಲಂಗಾಣದಲ್ಲಿರುವಂತೆ ಚಾಮರಾಜನಗರದಲ್ಲೂ ಅರಿಶಿನ ಮಂಡಳಿಯ ಪ್ರಾದೇಶಿಕ ಕೇಂದ್ರ ಸ್ಥಾಪನೆ ಮಾಡಬೇಕು. ಇದಕ್ಕೆ ಬೇಕಾದ ಅಗತ್ಯ ಜಾಗವನ್ನು ನಾನು ಸರ್ಕಾರದಿಂದ ಕೊಡಿಸುತ್ತೇನೆ ಎಂದು ಭರವಸೆ ನೀಡಿದರು.



ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ತೋಟಗಾರಿಕೆ ಇಲಾಖೆ, ಕರ್ನಾಟಕ ರಾಜ್ಯ ಸಾಂಬಾರ ಪದಾರ್ಥಗಳ ಅಭಿವೃದ್ಧಿ ಮಂಡಳಿ, ರಾಷ್ಟ್ರೀಯ ಅರಿಶಿಣ ಮಂಡಳಿ, ಭಾರತೀಯ ಸಾಂಬಾರು ಮಂಡಳಿ ಸಹಯೋಗದೊಂದಿಗೆ ಗುರುವಾರ ಆಯೋಜಿಸಿದ್ದ ಅರಿಶಿಣ ಪದಾರ್ಥಗಳ ಖರೀದಿದಾರರು, ಮಾರಾಟಗಾರರ ಸಮಾವೇಶದಲ್ಲಿ ಸಂಬಾರ ಬೆಳೆಗಳ ಕಿರು ಪರಿಚಯ ಹೊತ್ತಿಗೆಯನ್ನು ವಿಧಾನಪರಿಷತ್ ಸದಸ್ಯರಾದ ಕೆ.ಶಿವಕುಮಾರ್, ಸಿ.ಎನ್.ಮಂಜೇಗೌಡ ಬಿಡುಗಡೆಗೊಳಿಸಿದರು.

> "ರೈತರು ಹಿಂದಿನ ವರ್ಷದ ಹೆಚ್ಚಿನ ಬೆಲೆ ನೋಡಿ ರೈತರು ಅರಿಶಿಣ ಬೆಳೆಯುತ್ತಾರೆ. ಆದರೆ ಬೆಳೆ ಕಟಾವಿಗೆ ಬರುವ ಹೊತ್ತಿಗೆ ಬೆಲೆ ಗಣನೀಯವಾಗಿ ಕುಸಿದಿರುತ್ತದೆ. ಅಲ್ಲದೆ ತಮಿಳುನಾಡಿನ ಈರೋಡ್ ಮಾರುಕಟ್ಟೆಯ ಮೇಲಿನ ಅವಲಂಬನೆ ಹೆಚ್ಚಾಗಿದೆ. ಅಲ್ಲಿನ ಹರಾಜು ಪ್ರಕ್ರಿಯೆ ಮತ್ತು ಬೆಲೆ ನಿಗದಿ ಪದ್ಧತಿ ನಮ್ಮ ರೈತರಿಗೆ ಪೂರಕವಾಗಿಲ್ಲ. –ಕೆ.ಶಿವಕುಮಾರ್, ಎಂಎಲ್‌ಸಿ

ನಮ್ಮ ದೇಶದ ಅರಿಶಿಣ ರಫ್ತು 1,800 ಕೋಟಿ ರೂಪಾಯಿಗಳಷ್ಟಿದ್ದು, ಮುಂದಿನ ವರ್ಷಗಳಲ್ಲಿ ಇದನ್ನು 2,800 ಕೋಟಿ ರೂಪಾಯಿಗಳಿಗೆ ಹೆಚ್ಚಿಸುವ ಗುರಿ ಇಟ್ಟುಕೊಳ್ಳಬೇಕು. ಅರಿಶಿಣ ಮಂಡಳಿಗೆ ಕನಿಷ್ಠ 150 ರಿಂದ 200 ಕೋಟಿ ರೂ. ಬಜೆಟ್ ಮೀಸಲಿಡಬೇಕಿದ್ದು, ಅದರಲ್ಲಿ 50 ಕೋಟಿ ರೂಪಾಯಿಯನ್ನು ಕರ್ನಾಟಕದ ಬೆಳೆಗಾರರ ಅಭಿವೃದ್ಧಿಗೆ ಬಳಸಬೇಕು ಎಂದು ತಿಳಿಸಿದರು.

ಕೇಂದ್ರ ಸರ್ಕಾರ ರಾಷ್ಟ್ರೀಯ ಅರಿಶಿನ ಮಂಡಳಿ ಸ್ಥಾಪಿಸಿದೆ. ಇದಕ್ಕೆ ನಾನು ಅಭಿನಂದನೆ ಸಲ್ಲಿಸುತ್ತೇನೆ. ಇದು ಕೇವಲ ನಾಮಕಾವಸ್ಥೆಯಾಗದೆ ಉತ್ತಮವಾಗಿ ಕಾರ್ಯನಿರ್ವಹಿಸಬೇಕು. ರೈತರು ಬೆಳೆದ ಅರಿಶಿಣಕ್ಕೆ ಮೌಲ್ಯವರ್ಧನೆ ಮಾಡಲು ಸರ್ಕಾರ ಸ್ಥಳೀಯವಾಗಿ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸಬೇಕು. ಅಸ್ಸಾಂನಂತಹ ರಾಜ್ಯಗಳಲ್ಲಿರುವ ಆಧುನಿಕ ಪದ್ಧತಿಗಳನ್ನು ನಮ್ಮಲ್ಲೂ ಅಳವಡಿಸಿ, ಮೂಲಸೌಕರ್ಯ ಅಭಿವೃದ್ಧಿಪಡಿಸಬೇಕು. ರೈತರಿಗೆ ಅನುಕೂಲವಾಗುವಂತೆ ಆಧುನಿಕ ಬಾಯ್ಲರ್‌ಗಳು, ಪಾಲಿಶಿಂಗ್ ಯಂತ್ರಗಳು, ಟಾರ್ಪಾಲಿನ್ ಸೇರಿದಂತೆ ಎಲ್ಲಾ ಅಗತ್ಯ ಸೌಲಭ್ಯಗಳನ್ನು ಕೇಂದ್ರ ಸರ್ಕಾರ ಒದಗಿಸಬೇಕು. ಜೊತೆಗೆ ಮಾರು ಕಟ್ಟೆಯಲ್ಲಿ ಪಾರದರ್ಶಕತೆ ತರಲು ತಂಬಾಕು ಮಂಡಳಿಯ ಮಾದರಿಯಲ್ಲಿ ಅರಿಶಿಣಕ್ಕೂ ಆನ್‌ಲೈನ್ ಮಾರುಕಟ್ಟೆ ವ್ಯವಸ್ಥೆ ಜಾರಿಗೆ ತರಬೇಕು. ಇದರಿಂದ ರೈತರಿಗೆ ತಮ್ಮ ಬೆಳೆಯ ಗುಣಮಟ್ಟ ಮತ್ತು ದರದ ಬಗ್ಗೆ ಸ್ಪಷ್ಟ ಮಾಹಿತಿ ಸಿಗುತ್ತದೆ ಎಂದು ಸಲಹೆ ನೀಡಿದರು.

ವಿಧಾನ ಪರಿಷತ್ ಸದಸ್ಯ ಸಿ.ಎನ್. ಮಂಜೇಗೌಡ ಮಾತನಾಡಿ, ದೇಶದಲ್ಲಿ ಸಾಂಬಾರ ಪದಾರ್ಥಗಳು ವಾಣಿಜ್ಯ ಬೆಳೆಗಳಾಗಿದ್ದು, ಇದಕ್ಕೆ ಪೈಪೋಟಿ ಇದೆ. ಕೇಂದ್ರ ಮತ್ತು ರಾಜ್ಯ ಸರ್ಕಾರದ ಯೋಜನೆಗಳ ಪ್ರಯೋಜನ ಪಡೆದುಕೊಳ್ಳುವ ಜೊತೆಗೆ ತಂತ್ರಜ್ಞಾನವನ್ನು ಬಳಸಿಕೊಳ್ಳ ಬೇಕು ಎಂದು ಹೇಳಿದರು.

ಕರ್ನಾಟಕ ರಾಜ್ಯ ಸಾಂಬಾರು ಪದಾರ್ಥಗಳ ಅಭಿವೃದ್ಧಿ ಮಂಡಳಿ ವ್ಯವಸ್ಥಾಪಕ ನಿರ್ದೇಶಕ ಬಿ.ಆರ್.ಗಿರೀಶ್ ಮಾತನಾಡಿ, ದೇಶದಲ್ಲಿ ಪ್ರಪಂಚದ ಶೇ.80ರಷ್ಟು ಅರಿಶಿಣ ಬೆಳೆಯಲಾಗುತ್ತಿದೆ. ಪ್ರತಿ ವರ್ಷ ಸುಮಾರು 2,800 ಕೋಟಿಯಷ್ಟು ಅರಿಶಿಣ ಮತ್ತು ಅದರ ಉತ್ಪನ್ನಗಳನ್ನು ಬೇರೆ ದೇಶಗಳಿಗೆ ರಫ್ತು ಮಾಡುತ್ತಿದ್ದೇವೆ. ಆದರೆ, ವರ್ಷದಿಂದ ವರ್ಷಕ್ಕೆ ವಿಸ್ತೀರ್ಣ ಕಡಿಮೆಯಾಗುತ್ತಿದೆ. ರೋಗಬಾಧೆ, ಅಂತಾರಾಷ್ಟ್ರೀಯ ಮಾರುಕಟ್ಟೆಯ ಬೆಲೆಗಳ ಮೇಲೆ ನಿಂತಿರುವ ಆದಾಯ, ಕಡಿಮೆ ಉತ್ಪಾದಕತೆಯಿಂದ ಉತ್ಪಾದನೆ ಕಡಿಮೆಯಾಗುತ್ತಿದೆ. ಹೀಗಾಗಿ ಇವುಗಳ ಸುಧಾರಣೆಗೆ ಕ್ರಮ ವಹಿಸಲಾಗಿದೆ ಎಂದು ವಿವರಿಸಿದರು.

ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಅರಿಶಿನ ಮಂಡಳಿ ಅಧ್ಯಕ್ಷ ಪಲ್ಲೆ ಗಂಗಾರೆಡ್ಡಿ, ಸದಸ್ಯ ಚೇತನ್‌ಕುಮಾರ್, ಈರಪ್ಪ ಯಡವಣ್ಣವರ್, ಡಾ.ಡಿ.ವಿಷ್ಣುವರ್ಧನ್, ಪ್ರಧಾನ ವ್ಯವಸ್ಥಾಪಕ ಡಾ.ರಾಮಚಂದ್ರ ಕೆ.ಮಡಿವಾಳ, ಲಕ್ಷ್ಮೀಕಾಂತ ಬೊಮ್ಮಣ್ಣನವರ, ಉಪವ್ಯವಸ್ಥಾಪಕ ಎಂ.ವೈ.ಹೊನ್ನೂರ, ಉಪ ನಿರ್ದೇಶಕ ಶಿವಪ್ರಸಾದ್, ಹಿರಿಯ ಸಹಾಯಕ ನಿರ್ದೇಶಕ ಚೇತನ್, ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕ ಡಾ.ಎನ್. ನಾಗರಾಜು, ಚಾಮರಾಜನಗರ ಜಿಲ್ಲಾ ತೋಟಗಾರಿಕೆ ಇಲಾಖೆ ಉಪ ನಿರ್ದೇಶಕ ಶಿವಪ್ರಸಾದ್ ಉಪಸ್ಥಿತರಿದ್ದರು.

ಮನೆಗೊಂದು ಗ್ರಂಥಾಲಯ ಇರಬೇಕು

ಕನ್ನಡ ಪುಸ್ತಕ ಪ್ರಾಧಿಕಾರ ಅಧ್ಯಕ್ಷ ಡಾ.ಮಾನಸ ಅಭಿಮತ



ಮೈಸೂರು ರಾಜೀವ್‌ನಗರ 3ನೇ ಹಂತದಲ್ಲಿರುವ ಡಾ.ಪಿ.ಶಾಂತರಾಜೇ ಅರಸ್ ಅವರ ಮನೆಯಲ್ಲಿ ಗ್ರಂಥಾಲಯವನ್ನು ಡಾ.ಮಾನಸ ಉದ್ಘಾಟಿಸಿದರು.

ಮೈಸೂರು,ಜ.8(ಎಂಕೆ)–ಮನೆಯಲ್ಲಿ ದೇವರ ಕೋಣೆ ಎಷ್ಟು ಮುಖ್ಯವೋ ಅದೇ ರೀತಿ ಜ್ಞಾನದ ಸಂಕೇತವಾದ ಗ್ರಂಥಾಲಯ ಮನೆಗೊಂದಿರಬೇಕು ಎಂದು ಕನ್ನಡ ಪುಸ್ತಕ ಪ್ರಾಧಿಕಾರ ಅಧ್ಯಕ್ಷ ಡಾ.ಮಾನಸ ತಿಳಿಸಿದರು.

ಮೈಸೂರಿನ ರಾಜೀವ್‌ನಗರ 3ನೇ ಹಂತದಲ್ಲಿರುವ ದಿ ಮೈಸೂರು ಪೋಸ್ಟಲ್ ಎಂಪ್ಲಾಯಿಸ್ ಹೌಸಿಂಗ್ ಕೊ–ಆಪರೇಟಿವ್ ಸೊಸೈಟಿ ನಿರ್ದೇಶಕ ಡಾ.ಪಿ. ಶಾಂತರಾಜೇ ಅರಸ್ ಅವರ ಮನೆಯಲ್ಲಿ ಗ್ರಂಥಾಲಯ ಉದ್ಘಾಟಿಸಿ ಮಾತನಾಡಿದ ಅವರು, ಮನೆಗೊಂದು ಗ್ರಂಥಾಲಯ ಕನ್ನಡ ಪುಸ್ತಕ ಪ್ರಾಧಿಕಾರದ ಮಹತ್ವದ ಯೋಜನೆಯಾಗಿದೆ. ಬೀದರ್‌ನಿಂದ ಆರಂಭಗೊಂಡು ಇಲ್ಲಿಯವರೆಗೂ ಬಂದಿದ್ದೇವೆ ಎಂದು ಹೇಳಿದರು.

ಮನೆಗೊಂದು ಗ್ರಂಥಾಲಯ ಯೋಜನೆಗೆ ಸಾರ್ವಜನಿಕರಿಂದ ಅಭೂತಪೂರ್ವ ಬೆಂಬಲ ದೊರೆತಿದೆ. ಮನೆಯ ಕತ್ತಲನ್ನು ಕಳೆಯಲು ಸ್ವಿಚ್ ಆನ್ ಮಾಡಿ ವಿದ್ಯುತ್ ದೀಪ ಬೆಳಗಿಸುವಂತೆ, ಮನದಲ್ಲಿರುವ ಅಜ್ಞಾನದ ಕತ್ತಲೆಯನ್ನು ತೊಲಗಿಸಲು ಜ್ಞಾನದ ಸಂಕೇತವಾದ ಪುಸ್ತಕಗಳು ಅವಶ್ಯವಾಗಿವೆ. ಆದ್ದರಿಂದ ಪ್ರತೀ ಮನೆಯಲ್ಲಿಯೂ ಗ್ರಂಥಾಲಯವೊಂದು ಇರಲೇಬೇಕು ಎಂದು ಪ್ರತಿಪಾದಿಸಿದರು.

ಭಕ್ತಿಯ ನೆಲೆಗಟ್ಟಿನಲ್ಲಿ ಮನೆಯಲ್ಲೊಂದು ದೇವರ ಕೋಣೆ ಇರುವಂತೆ, ಜ್ಞಾನದ ಅರಿವಿಗಾಗಿ ಗ್ರಂಥಾಲಯ ಇರಬೇಕು. ದೇವರ ಫೋಟೋ ಮುಂದೆ ದೀಪಗಳು ಬೆಳಗುವಂತೆ ನಮ್ಮ ವ್ಯಕ್ತಿತ್ವವನ್ನು ವಿಕಸನ ಮಾಡಲು ಪುಸ್ತಕವೆಂಬ ಜ್ಞಾನದ ಸಂಕೇತ ಮನೆಯಲ್ಲಿರಬೇಕು. ಅಗರಬತ್ತಿ ಹಚ್ಚದೆ ಇದ್ದರೂ ಯಾವುದೇ ನಷ್ಟವಿಲ್ಲ. ಆದರೆ, ಪುಸ್ತಕಗಳನ್ನು ಓದದಿದ್ದರೆ ಜ್ಞಾನದ ಅರಿವಿಲ್ಲದೆ ಜಡದಂತೆ ಬದುಕ ಬೇಕಾಗುತ್ತದೆ ಎಂದು ಎಚ್ಚರಿಸಿದರು.

ಇದೇ ವೇಳೆ ಮನೆಯಲ್ಲಿ ಗ್ರಂಥಾಲಯ ತೆರೆದಿರುವ ಡಾ.ಪಿ.ಶಾಂತರಾಜೇ ಅರಸ್ ದಂಪತಿಗೆ ಪ್ರಾಧಿಕಾರದ ವತಿಯಿಂದ ಅಭಿನಂದನಾ ಪತ್ರ ನೀಡಿ, ಸನ್ಮಾನಿಸಲಾಯಿತು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್ ಅಧ್ಯಕ್ಷತೆ ವಹಿಸಿದ್ದರು. ಮನೆಗೊಂದು ಗ್ರಂಥಾಲಯ ಜಿಲ್ಲಾ ಸಮಿತಿ ಸಂಚಾಲಕ ಎಂ.ಚಂದ್ರಶೇಖರ್, ಚುಟುಕು ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷರಾದ ಡಾ.ರತ್ನ ಹಾಲಪ್ಪಗೌಡ, ಅಂಚೆ ಇಲಾಖೆ ನಿವೃತ್ತ ಅಧಿಕಾರಿ ರಾಜಶೇಖರ್, ಕರ್ನಾಟಕ ಸೇನಾ ಪಡೆ ಅಧ್ಯಕ್ಷ ತೇಜಸ್ ಲೋಕೇಶ್ ಗೌಡ, ಲೇಖಕ ದೇವರಾಜ್ ಪಿ.ಚಿಕ್ಕಹಳ್ಳಿ ಮತ್ತಿತರರು ಉಪಸ್ಥಿತರಿದ್ದರು.

ಅವರಿವರ ಬಗ್ಗೆ ಮಾತನಾಡುತ್ತಾ ಕಾಲಹರಣ ಮಾಡುವ ಬದಲು ಓದಿ ದೊಡ್ಡವರಾಗಿ...

ಮೈಸೂರು ವಿವಿಯ ವಿಶ್ರಾಂತ ಕುಲಪತಿ ಪ್ರೊ.ಕೆ.ಎಸ್.ರಂಗಪ್ಪ ಸಲಹೆ

ಮೈಸೂರು, ಜ.8(ಎಂಕೆ)–ಸುಮ್ಮನೇ ಅವರಿವರ ಬಗ್ಗೆ ಮಾತಾಡುತ್ತಾ ಕಾಲಹರಣ ಮಾಡದೇ ಓದಿ, ದೊಡ್ಡ ಸ್ಥಾನಕ್ಕೆ ಬೆಳೆಯಿರಿ ಎಂದು ಖ್ಯಾತ ವಿಜ್ಞಾನಿಗಳೂ ಆದ ಮೈಸೂರು ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿ ಪ್ರೊ.ಕೆ.ಎಸ್. ರಂಗಪ್ಪ ಸಲಹೆ ನೀಡಿದರು.

ಮೈಸೂರು ವಿವಿ ಮಾನಸಗಂಗೋತ್ರಿಯ ವಿಜ್ಞಾನ ಭವನದ ಸೆಮಿನಾರ್ ಹಾಲ್‌ನಲ್ಲಿ ಪ್ರೊ.ಕೆ.ಎಸ್.ರಂಗಪ್ಪ ಅಭಿಮಾನಿ ಬಳಗದ ವತಿಯಿಂದ ಸನ್ಮಾನ ಮತ್ತು ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆ ಸಮಾರಂಭದಲ್ಲಿ ಮಾತನಾಡಿದ ಅವರು, ಯುವಕರು ಬೆಳೆಯಬೇಕು. ಸುಮ್ಮನೇ ಕಾಲಹರಣ ಮಾಡಬಾರದು. ದಡ್ಡತನ ನಿಮ್ಮನ್ನು ಹಾಳು ಮಾಡಲಿದೆ. ಹಾಗಾಗಿ ಓದಿ... ಓದಿ... ಎಂದು ಎಚ್ಚರಿಸಿದರು.



ಪ್ರೊ.ಕೆ.ಎಸ್.ರಂಗಪ್ಪ ಅಭಿಮಾನಿ ಬಳಗದಿಂದ ಹೊರತಂದಿರುವ ನೂತನ ವರ್ಷದ ಕ್ಯಾಲೆಂಡರ್ ಅನ್ನು ಬಿಡುಗಡೆ ಮಾಡಲಾಯಿತು.

ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆಗೊಳಿಸಿದ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಶರಣಪ್ಪ ವಿ.ಹಲಸೆ ಮಾತನಾಡಿ, ನಾನು ಕೂಡ ಪ್ರೊ.ರಂಗಪ್ಪ ಅವರ ಅಭಿಮಾನಿ. ನೂರಾರು ಸಂಶೋಧನೆ ಜೊತೆಗೆ ಸಮಾಜಮುಖಿ ಸೇವಾ ಕಾರ್ಯಗಳನ್ನು ಮಾಡಿರುವ ಪ್ರೊ.ರಂಗಪ್ಪ ಅವರದು ಮೇರು ವ್ಯಕ್ತಿತ್ವ. ಮುಕ್ತ ವಿವಿ ನ್ಯಾಕ್‌ನಲ್ಲಿ ಸ್ಥಾನ ಪಡೆದಿದೆ ಎಂಬುದರಲ್ಲಿ ಪ್ರೊ.ರಂಗಪ್ಪ ಅವರ ಕೊಡುಗೆಯೂ ಇದೆ ಎಂದು ಮೆಚ್ಚುಗೆ ಮಾತುಗಳನ್ನಾಡಿದರು.

ಮೈಸೂರು ವಿವಿ ವಿಶ್ರಾಂತ ಕುಲಪತಿ ಪ್ರೊ.ಜಿ.ಹೇಮಂತ್‌ಕುಮಾರ್, ಪ್ರೊ.ರಂಗಪ್ಪ ಅವರೊಂದಿಗೆ ವಿವಿಯ ಅಭಿವೃದ್ಧಿ ಕಾರ್ಯಚಟುವಟಿಕೆಗಳಲ್ಲಿ ಭಾಗವಹಿಸಿದ್ದ ದಿನಗಳನ್ನು ಮೆಲುಕು ಹಾಕಿದರು. ವಿಶ್ರಾಂತ ವಿಜ್ಞಾನಿ ಪ್ರೊ.ಮೇವಾ ಸಿಂಗ್, ಮುಕ್ತ ವಿವಿ ಪರೀಕ್ಷಾಂಗ ಕುಲಸಚಿವ ಡಾ.ಸಿ.ಎನ್. ಆನಂದ್‌ಕುಮಾರ್, ನಿವೃತ್ತ ಪ್ರಾಧ್ಯಾಪಕ ಪ್ರೊ.ಶ್ರೀಕಂಠಸ್ವಾಮಿ, ಮೈಸೂರು ವಿವಿ ಭೌತಶಾಸ್ತ್ರ ವಿಭಾಗದ ಪ್ರೊ. ಎಂ.ಎಸ್.ಚಂದ್ರಶೇಖರ್, ಬಯೋಟೆಕ್ನಾಲಜಿ ವಿಭಾಗದ ಪ್ರೊ.ಚಂದ್ರನಾಯಕ್, ಅಭಿಮಾನಿ ಬಳಗದ ಅಧ್ಯಕ್ಷ ಹೆಚ್.ಶ್ರೀನಿವಾಸ್, ಉಪಾಧ್ಯಕ್ಷ ಎಸ್.ರವಿಕುಮಾರ್ ಮತ್ತಿತರರಿದ್ದರು.

ವಾಹನದಟ್ಟಣೆ ನಿಯಂತ್ರಿಸಲು ಹೊಸ ಮಾರ್ಗ ಹುಡುಕಿ

ಪಾಲಿಕೆ ಮಾಜಿ ಸದಸ್ಯ ಕೆ.ವಿ.ಮಲ್ಲೇಶ್ ಸಲಹೆ

ಮೈಸೂರು, ಜ. 8 –ಮೈಸೂರು ನಗರದಲ್ಲಿ ದಿನೇ ದಿನೆ ವಾಹನ ದಟ್ಟಣೆ ಹೆಚ್ಚುತ್ತಿದ್ದು, ಸ್ಥಳೀಯಾಡಳಿತ ಶೀಘ್ರ ಹೊಸ ಹೊಸ ಕ್ರಮಗಳನ್ನು ಅಳವಡಿಸಿಕೊಳ್ಳುವ ಮೂಲಕ ಮುಂದಿನ ದಿನಗಳಲ್ಲಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕಾಗಿದೆ ಎಂದು ಮಾಜಿ ನಗರಪಾಲಿಕೆ ಸದಸ್ಯ ಹಾಗೂ ಅನಿಕೇತನ ಸೇವಾ ಟ್ರಸ್ಟ್ ಅಧ್ಯಕ್ಷ ಕೆ.ವಿ.ಮಲ್ಲೇಶ್ ಅಭಿಪ್ರಾಯಪಟ್ಟಿದ್ದಾರೆ.

ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು, ಮೈಸೂರು ನಗರ ಬೆಳೆದಂತೆಲ್ಲ ವಾಹನ ದಟ್ಟಣೆಯೂ ಹೆಚ್ಚುತ್ತಿದೆ. ಹೆಚ್ಚುವರಿ ಟ್ರಾಫಿಕ್ ನಿಯಂತ್ರಿಸಲು ಎಲ್ಲೆಡೆ ಸಿಗ್ನಲ್‌ಗಳನ್ನು ಅಳವಡಿಸಲಾಗುತ್ತಿದೆ. ಇದರಿಂದ ಸುಲಲಿತವಾಗಿ ಸಂಚರಿಸಬಹುದಾದ ರಸ್ತೆಗಳಲ್ಲೂ ಈಗ ಟ್ರಾಫಿಕ್ ಸಮಸ್ಯೆ ಕಾಡುತ್ತಿದೆ. ಅಲ್ಲದೆ ಉಚಿತ ಎಡ ತಿರುವುಗಳನ್ನು ಎಲ್ಲೆಡೆ ಕಾರ್ಯರೂಪಕ್ಕೆ ತರ ಬೇಕಿದೆ. ಈಗಾಗಲೇ ದೊಡ್ಡ ದೊಡ್ಡ ನಗರಗಳಲ್ಲಿ ಕೃತಕ ಬುದ್ಧಿಮತ್ತೆ ಆಧರಿತ ಸಿಗ್ನಲ್‌ಗಳು, ಕ್ಯಾಮರಗಳು ಕಾರ್ಯನಿರ್ವಹಿಸುತ್ತಿವೆ. ಇದರಿಂದ ವಾಹನ ದಟ್ಟಣೆ ಅನುಸಾರ ಸಿಗ್ನಲ್‌ಗಳು ಕೆಲಸ ಮಾಡುತ್ತವೆ.

ರೈಲ್ವೆ ಅಂಡರ್‌ಪಾಸ್‌ಗಳು ವಿಸ್ತಾರಗೊಳ್ಳಲಿ: ಜಯನಗರ, ಮೇಟಗಳ್ಳಿ, ಕುಕ್ಕರಳ್ಳಿ ಕೆರೆ ಬಳಿಯ ರೈಲ್ವೆ ಗೇಟ್‌ಗಳನ್ನು ಬದಲಿಸಿ ಭವಿಷ್ಯದ ದೃಷ್ಟಿಯಿಂದ ವಿಶಾಲವಾದ ಮೇಲ್ಸೇತುವೆಗಳನ್ನು ನಿರ್ಮಿಸಬೇಕಿದೆ. ಅಲ್ಲದೇ, ಕೆ.ಜಿ. ಕೊಪ್ಪಲು, ಜಯನಗರ (ಇಸ್ಕಾನ್ ರಸ್ತೆ)ದ ರೈಲ್ವೆ ಅಂಡರ್ ಪಾಸ್‌ಗಳನ್ನು ವಿಸ್ತರಿಸಬೇಕಿದೆ. ಈಗಿರುವ ಅಂಡರ್ ಪಾಸ್‌ಗಳು ಕಿರಿದಾಗಿದ್ದು, ವಾಹನ ದಟ್ಟಣೆಯಿಂದ ಸಂಚಾರಕ್ಕೆ ಕಿರಿಕಿರಿಯಾಗುತ್ತಿದೆ. ಭವಿಷ್ಯದ ದೃಷ್ಟಿಯಿಂದ ಈಗಲೇ ಈ ಬಗ್ಗೆ ಗಮನಹರಿಸಿ ಅಂಡರ್ ಪಾಸ್‌ಗಳನ್ನು ವಿಸ್ತರಿಸಬೇಕು. ಇಲ್ಲದಿದ್ದರೆ ಮುಂದಿನ ದಿನಗಳಲ್ಲಿ ಇನ್ನಷ್ಟು ವಾಹನ, ಜನದಟ್ಟಣೆ ಯಿಂದ ಸಂಚಾರ ದುಸ್ತರವಾಗಲಿದೆ.



ಮಲ್ಲೇಶ್

ಅಪಘಾತ ಮುಕ್ತವಲಯ ನಿರ್ಮಿಸಿ: ನಗರದಲ್ಲಿ ಜನಸಂಖ್ಯೆ ಹೆಚ್ಚಾದಂತೆ ವಾಹನ ದಟ್ಟಣೆಯೂ ಹೆಚ್ಚುತ್ತಿದೆ. ಹೆಚ್ಚುತ್ತಿರುವ ವಾಹನದಟ್ಟಣೆಗೆ ಅನುಗುಣವಾಗಿ ಅಪಘಾತಗಳೂ ಹೆಚ್ಚುತ್ತಿವೆ. ಅಂಕಿ ಅಂಶದ ಪ್ರಕಾರ ಕಳೆದ 5 ವರ್ಷಗಳಲ್ಲಿ 12000ಕ್ಕೂ ಹೆಚ್ಚು ಗಂಭೀರ ಪ್ರಮಾಣದ ಅಪಘಾತಗಳು ಸಂಭವಿಸಿವೆ. ಸುಸಜ್ಜಿತ ರಸ್ತೆಗಳು ಸುಗಮ ಸಂಚಾರಕ್ಕೆ ಅನುಕೂಲವಾಗಬೇಕೇ ಹೊರತು ಅಪಘಾತ ವಲಯಗಳಾಗಬಾರದು. ಆದರೆ, ನಗರದಲ್ಲಿ ದಿನೇ ದಿನೆ ಅಪಘಾತಗಳು ಹೆಚ್ಚುತ್ತಿರುವುದು ಕಳವಳಕಾರಿಯಾಗಿದೆ. ಸ್ಥಳೀಯಾಡಳಿತ ಈ ಬಗ್ಗೆ ಗಮನಹರಿಸಿ ನಗರವನ್ನು ಅಪಘಾತ ಮುಕ್ತವಾಗಿಸುವತ್ತ ಗಮನಹರಿಸಬೇಕು.

ರಸ್ತೆ ವಿಭಜಕಕ್ಕೆ ಸಿಮೆಂಟ್ ಬ್ರಿಕ್ಸ್ ಬಳಸಿ: ಜನದಟ್ಟಣೆ ನಿಯಂತ್ರಿಸಲು ನಗರದ ಬಹುತೇಕ ಕಡೆಗಳಲ್ಲಿ ಕಬ್ಬಿಣದ ಬ್ಯಾರಿಕೇಡ್‌ಗಳನ್ನು ಹಾಕಲಾಗಿದೆ. ಆದರೆ, ಸಾರ್ವಜನಿಕರು ಅವುಗಳನ್ನು ಬದಿಗೆ ಸರಿಸಿ ಹೋಗುತ್ತಿದ್ದಾರೆ. ಇದು ಸುಗಮ ಸಂಚಾರಕ್ಕೆ ಅಡಚಣೆಯಾಗುವ ಜತೆಗೆ ಅಪಘಾತಕ್ಕೂ ಕಾರಣವಾಗುತ್ತಿದೆ. ಆದ್ದರಿಂದ ಕಬ್ಬಿಣದ ಬ್ಯಾರಿಕೇಡ್‌ಗಳ ಬದಲು ಸಿಮೆಂಟ್ ಬ್ರಿಕ್ಸ್‌ಗಳನ್ನು ಅಳವಡಿಸಬೇಕು. ಆಗಾದಾಗ ಮಾತ್ರ ಸಂಚಾರದಟ್ಟಣೆ ನಿಯಂತ್ರಣ ಸಾಧ್ಯ ಎಂದು ಮಲ್ಲೇಶ್ ಅಭಿಪ್ರಾಯಪಟ್ಟಿದ್ದಾರೆ.

ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಯ ಅಧ್ಯಕ್ಷ ಸ್ಥಾನಕ್ಕೆ ನಟಿ ಜಯಮಾಲಾ ಸ್ಪರ್ಧೆ



ಮೈಸೂರಿಗೆ ಆಗಮಿಸಿದ್ದ ನಟಿ ಜಯಮಾಲಾ ಅವರನ್ನು ಅಭಿಮಾನಿಗಳು ಅಭಿನಂದಿಸಿದರು.

ಬೆಂಗಳೂರು,ಜ.8–ಜನವರಿ 30ರಂದು ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಚುನಾವಣೆ ನಡೆಯಲಿದ್ದು, ಈ ಬಾರಿ ಅಧ್ಯಕ್ಷ ಸ್ಥಾನಕ್ಕೆ ಮಾಜಿ ಅಧ್ಯಕ್ಷರು ಹಾಗೂ ನಟಿ ಜಯಮಾಲಾ ಸ್ಪರ್ಧಿಸುತ್ತಿದ್ದಾರೆ. ಮೈಸೂರಿಗೆ ಪ್ರಚಾರಕ್ಕೆ ಆಗಮಿಸಿದ್ದ ಅವರು, ಚಾಮುಂಡಿಬೆಟ್ಟಕ್ಕೆ ತೆರಳಿ ತಾಯಿ ಚಾಮುಂಡೇಶ್ವರಿಗೆ ಪೂಜೆ ಸಲ್ಲಿಸಿ, ಪ್ರಚಾರ ಆರಂಭಿಸಿದರು. ಇದೇ ವೇಳೆ ಅವರನ್ನು ಅಭಿಮಾನಿಗಳು ಅಭಿನಂದಿಸಿದರು. ಮಾಜಿ ಅಧ್ಯಕ್ಷ ಸಾರಾ ಗೋವಿಂದ್, ಹಾಲಿ ಅಧ್ಯಕ್ಷ ನರಸಿಂಹ ಕೊಲ್ಲು ಚಿನ್ನೇಗೌಡ, ಎಂ.ಎನ್.ಸುರೇಶ್, ಎಂ.ಎನ್.ಕುಮಾರ್, ಸಂದೇಶ್ ನಾಗರಾಜ್, ಕಾರ್ಯದರ್ಶಿ ಗಣೇಶ್, ರಾಮಕೃಷ್ಣ, ಅಶೋಕ್‌ಕುಮಾರ್, ನಿರ್ಮಾಪಕರಾದ ಎಂ.ಡಿ.ಪಾರ್ಥಸಾರಥಿ, ಸುರೇಶ್ ಗೋಲ್ಡ್, ನಂದೀಶ್ ನಾಯಕ್, ವಿಕ್ರಂ ಅಯ್ಯಂಗಾರ್, ಪ್ರಮೀಳಾ, ಶೋಭಾ ಇನ್ನಿತರರು ಉಪಸ್ಥಿತರಿದ್ದರು.

ದೇಶ – ವಿದೇಶ

ನೇಮಕಾತಿಯಲ್ಲಿ ಅಕ್ರಮ; ವಿವಿಧ ರಾಜ್ಯದಲ್ಲಿ ಇಡಿ ಶೋಧ



ನವದೆಹಲಿ: ಸರ್ಕಾರಿ ಉದ್ಯೋಗದ ನೇಮಕಾತಿ ಪತ್ರಗಳ ಹಂಚಿಕೆಯಲ್ಲಿ ನಡೆದಿದೆ ಎನ್ನಲಾದ ಹಣ ಅಕ್ರಮ ವರ್ಗಾವಣೆ ಪ್ರಕರಣದ ತನಿಖೆಯ ಭಾಗವಾಗಿ ಜಾರಿ ನಿರ್ದೇಶನಾಲಯದ(ಇಡಿ) ಅಧಿಕಾರಿಗಳು ಬಿಹಾರ, ಪಶ್ಚಿಮ ಬಂಗಾಳ, ಕೇರಳ, ತಮಿಳುನಾಡು, ಗುಜರಾತ್ ಹಾಗೂ ಉತ್ತರ ಪ್ರದೇಶ ರಾಜ್ಯಗಳ 15 ಸ್ಥಳಗಳಲ್ಲಿ ಶೋಧ ನಡೆಸುತ್ತಿದ್ದಾರೆ. ಕೃತ್ಯದಲ್ಲಿ ಭಾಗಿಯಾಗಿದ್ದವರನ್ನು ಪತ್ತೆ ಹಚ್ಚಿದ್ದೇವೆ. ಆರಂಭದಲ್ಲಿ ರೈಲ್ವೆ ಹೆಸರಿನಲ್ಲಿ ಹಗರಣ ನಡೆದಿರುವುದು ಪತ್ತೆಯಾಗಿತ್ತು. ಆದರೆ ವಿಸ್ತೃತ ತನಿಖೆ ಬಳಿಕ ಅರಣ್ಯ ಇಲಾಖೆ, ಆರ್‌ಆರ್‌ಬಿ(ರೈಲ್ವೆ ನೇಮಕಾತಿ ಮಂಡಳಿ), ಅಂಚೆ ಇಲಾಖೆ, ಆದಾಯ ತೆರಿಗೆ ಇಲಾಖೆ, ಕೆಲವು ಹೈಕೋರ್ಟ್‌ಗಳು, ಪಿಡಬ್ಲ್ಯೂಡಿ, ಬಿಹಾರ ಸರ್ಕಾರ, ದೆಹಲಿ ಅಭಿವೃದ್ಧಿ ಪ್ರಾಧಿಕಾರ, ರಾಜಸ್ಥಾನ ಸಚಿವಾಲಯ ಸೇರಿದಂತೆ 40ಕ್ಕೂ ಹೆಚ್ಚು ಸರ್ಕಾರಿ ಸಂಸ್ಥೆಗಳ ಹೆಸರಿನಲ್ಲಿ ಹಗರಣ ನಡೆದಿರುವುದು ದೃಢಪಟ್ಟಿದೆ ಎಂದು ಅಧಿಕಾರಿಯೊಬ್ಬರು ವಿವರಿಸಿದ್ದಾರೆ. ಆರೋಪಿಗಳು ಸರ್ಕಾರಿ ಇಲಾಖೆಗಳ ಇ–ಮೇಲ್ ಐಡಿಗಳಿಗೆ ಹೊಂದಾಣಿಕೆಯಾಗುವಂತೆ ನಕಲಿ ಐಡಿ ಬಳಸಿ, ಕೆಲವರಿಗೆ ನೇಮಕಾತಿ ಪತ್ರಗಳನ್ನು ಕಳುಹಿಸಿ 3 ತಿಂಗಳು ವೇತನವನ್ನು ನೀಡಿದ್ದರು. ಈ ಹಿನ್ನೆಲೆಯಲ್ಲಿ ವಿವಿಧ ರಾಜ್ಯಗಳಲ್ಲಿ ಇಡಿ ಶೋಧ ನಡೆಸುತ್ತಿದೆ.

ಪಾಕ್ ಆರ್ಥಿಕ ಮುಗ್ಗಟ್ಟಿನ ನಡುವೆ ಲಾಬಿಗೆ ಮಿಲಿಯನ್‌ಗಟ್ಟಲೆ ಡಾಲರ್ ಖರ್ಚು

ವಾಷಿಂಗ್ಟನ್: ನಗದು ಕೊರತೆಯಿಂದ ಬಳಲುತ್ತಿರುವ ಪಾಕಿಸ್ತಾನ ತನ್ನ ತೀವ್ರ ಆರ್ಥಿಕ ಬಿಕ್ಕಟ್ಟಿನ ನಡುವೆ ಆಪರೇಷನ್ ಸಿಂಧೂರ ವೇಳೆ ಅಮೆರಿಕದಲ್ಲಿ ಲಾಬಿ ಮಾಡಲು ಮಿಲಿಯನ್ ಗಟ್ಟಲೆ ಡಾಲರ್ ಖರ್ಚು ಮಾಡಿತ್ತು ಎಂಬುದು ಅಮೆರಿಕ ಸರ್ಕಾರ ಈಗ ಬಿಡುಗಡೆ ಮಾಡಿರುವ ದಾಖಲಾತಿಗಳಲ್ಲಿ ಬಹಿರಂಗವಾಗಿದೆ. ತನ್ನ ವಾಯುನೆಲೆಗಳು ಮತ್ತು ಭಯೋತ್ಪಾದಕ ಶಿಬಿರಗಳ ಮೇಲೆ ಭಾರತೀಯ ವಾಯುದಾಳಿ ಸಮಯದಲ್ಲಿ ಪಾಕಿಸ್ತಾನ ಸಹಾಯಕ್ಕಾಗಿ ಅಮೆರಿಕಕ್ಕೆ ಓಡಿಹೋಗಿತ್ತು ಎನ್ನಲಾಗಿದೆ. ವಿದೇಶಿ ಏಜೆಂಟರ ನೋಂದಣಿ ಕಾಯ್ದೆ ಅಡಿಯಲ್ಲಿ ದೊರೆತ ಮಾಹಿತಿಯಲ್ಲಿ ನೂರಾರು ಸಾವಿರ ಡಾಲರ್‌ಗಳ ಒಪ್ಪಂದ ಮತ್ತು ಪಾವತಿ ತೋರಿಸಿದೆ. ಇದರಲ್ಲಿ ಪಾಕಿಸ್ತಾನ ಸರ್ಕಾರ ಮತ್ತು ಪಾಕಿಸ್ತಾನದೊಂದಿಗೆ ಸಂಘಟನೆಗಳು ತೊಡಗಿಸಿಕೊಂಡಿರುವುದು ಕಂಡುಬಂದಿದೆ. ಜಮ್ಮು–ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪಾಕಿಸ್ತಾನ ಮೂಲದ ಭಯೋತ್ಪಾದಕರು 26 ನಾಗರಿಕರನ್ನು ಕೊಂದ 2 ದಿನಗಳ ನಂತರ, ಏ.24ರಂದು ನಡೆದ ಡೀಲ್‌ನಲ್ಲಿ ಪಾಕಿಸ್ತಾನವನ್ನು ಪ್ರತಿನಿಧಿಸಲು ಜಾವೆಲಿನ್ ಅಡ್ವೈಸರ್ಸ್ LLC ಅನ್ನು ನೋಂದಾಯಿಸಲಾಗಿದೆ ಎಂದು ಮಾಹಿತಿ ನೀಡಲಾಗಿದೆ.



ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ; ಸಂದರ್ಶನ ಪ್ರಸಾರ ಮಾಡಿದ ಯೂಟ್ಯೂಬರ್ ಬಂಧನ



ಹೈದರಾಬಾದ್: ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯದ ವಿಷಯವನ್ನು ಅಪ್ರಾಪ್ತ ಬಾಲಕಿಯರ ಜೊತೆ ಸಂದರ್ಶನ ಮಾಡಿ ಅದನ್ನು 'ವೈರಲ್ ಹಬ್ ಚಾನೆಲ್‌ನ ಅಪ್‌ಲೋಡ್ ಮಾಡಿ, ಪ್ರಸಾರ ಮಾಡಿದ್ದ ಆರೋಪದ ಮೇಲೆ ಯೂಟ್ಯೂಬರ್‌ನನ್ನು ಪೊಲೀಸರು ಬಂಧಿಸಿದ್ದಾರೆ.


ಆಂಧ್ರಪ್ರದೇಶದ ವಿಶಾಖಪಟ್ಟಣಂ ನಿವಾಸಿ ಕಂಬೆಟ್ಟಿ ಸತ್ಯಮೂರ್ತಿ ತಾನು ನಡೆಸುತ್ತಿದ್ದ 'ವೈರಲ್ ಹಬ್' ಯೂಟ್ಯೂಬ್ ಚಾನೆಲ್‌ನಲ್ಲಿ 15ರಿಂದ 17 ವರ್ಷ ವಯಸ್ಸಿನ ಅಪ್ರಾಪ್ತ ವಯಸ್ಕರ ಸಂದರ್ಶನಗಳನ್ನು ಒಳಗೊಂಡ ವೀಡಿಯೊಗಳನ್ನು ಅಪ್‌ಲೋಡ್ ಮಾಡುತ್ತಿದ್ದನು. ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯದ ಪ್ರಕರಣದಲ್ಲಿ ಹೈದರಾಬಾದ್ ಪೊಲೀಸರು ಸೈಬರ್ ಕ್ರೈಮ್ ಪೊಲೀಸರು ಆರೋಪಿ ಮೂರ್ತಿಯನ್ನು ಬಂಧಿಸಿದ್ದಾರೆ. ಸಂದರ್ಶನ ವೇಳೆ ಅಪ್ರಾಪ್ತ ಬಾಲಕಿಯರಿಗೆ ಅಶ್ಲೀಲ ಮತ್ತು ಲೈಂಗಿಕ ವಿಚಾರಗಳ ಕುರಿತು ಪ್ರಶ್ನೆಗಳನ್ನು ಕೇಳಿದ್ದನು. ಕಳೆದ ವರ್ಷ ಅಕ್ಟೋಬರ್‌ನಲ್ಲಿ, ಚಾನೆಲ್‌ನಲ್ಲಿ ಮಕ್ಕಳ ಮೇಲಿನ ದೌರ್ಜನ್ಯವನ್ನು ಚಿತ್ರಿಸುವ ವೀಡಿಯೊಗಳನ್ನು ನೋಡಿದ ನಂತರ ಹೈದರಾಬಾದ್‌ನ ಸೈಬರ್ ಕ್ರೈಮ್ ಪೊಲೀಸರು ಸ್ವಯಂ ಪ್ರಕರಣ ದಾಖಲಿಸಿಕೊಂಡರು. ತಾಂತ್ರಿಕ ವಿಶ್ಲೇಷಣೆಯು ವಿಷಯವು ಮಕ್ಕಳ ರಕ್ಷಣೆ ಮತ್ತು ಸೈಬರ್ ಕಾನೂನು ಉಲ್ಲಂಘಿಸುತ್ತದೆ ಎಂದು ಬಹಿರಂಗಪಡಿಸಿತು.

ಇರಾನ್‌ನಲ್ಲಿ ಆರ್ಥಿಕ ಮುಗ್ಗಟ್ಟು; ಬೀದಿಗಿಳಿದು ಜನರು ಹೋರಾಟ



ತೆಹ್ರಾನ್: ಅಮೆರಿಕಾ ಸೇರಿದಂತೆ ಪಾಶ್ಚಿಮಾತ್ಯ ದೇಶಗಳಿಂದ ನಿರ್ಬಂಧ ಎದುರಿಸುತ್ತಿರುವ ಇರಾನ್ ಈಗ ಅಮೆರಿಕಾದ ಡಾಲರ್ ಎದುರು ಅದರ ಕರೆನ್ಸಿ ರಿಯಾಲ್ ಪಾತಾಳಕ್ಕೆ ಕುಸಿದಿದ್ದು, ದೇಶದಲ್ಲಿ ಹಣ ದುಬ್ಬರ ಸೇರಿದಂತೆ ಆರ್ಥಿಕತೆ ಕುಸಿತಗೊಂಡಿದೆ. ಇದರಿಂದ ದಿನದೂಡುವದಕ್ಕು ಕಷ್ಟಪಡುವಂತಹ ಸ್ಥಿತಿಗೆ ತಲುಪಿದ್ದು, ಇರಾನ್ ಜನತೆಯ ಆಕ್ರೋಶದ ಕಟ್ಟೆಯೊಡೆದು ಬೀದಿಗಿಳಿದು ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸುತ್ತಿದ್ದಾರೆ. ಇದನ್ನು ತಡೆಯಲು ಕಠಿಣ ಮಾರ್ಗವನ್ನು ಖಮೇನಿ ಸರ್ಕಾರ ಅನುಸರಿಸುತ್ತಿದ್ದು, ಇದರಿಂದಾಗಿ ಈಗಾಗಲೇ ಸುಮಾರು 35 ಜೀವ ಬಲಿಯಾಗಿವೆ. ಇನ್ನು, ಈವೆಲ್ಲದರ ಮಧ್ಯೆ ಇರಾನ್ ಪ್ರತಿಭಟನಾಕಾರರಿಗೆ ಟ್ರಂಪ್ ಬೆಂಬಲ ಸೂಚಿಸಿದ್ದು, ಪ್ರತಿಭಟನಾಕಾರರನ್ನು ಹಿಂಸಾತ್ಮಕವಾಗಿ ಕೊಲ್ಲುವುದನ್ನು ಮುಂದುವರೆಸಿದರೆ ಯುಎಸ್ ಮಧ್ಯಪ್ರವೇಶಿಸುತ್ತದೆ ಎಂದು ಬೆದರಿಕೆಯಾಗಿದ್ದು, ಇರಾನ್ ಪರಿಸ್ಥಿತಿ ಸಹ ವೆನುಜುವೆಲಾದ ರೀತಿ ಆಗಲಿದೆಯಾ ಎಂಬ ಪ್ರಶ್ನೆಗಳು ಮೂಡಿವೆ. ಇರಾನ್ ಆರ್ಥಿಕತೆ ಕುಸಿತಗೊಂಡಿದ್ದು, ಇರಾನಿಗರು ಖಮೇನಿ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸುತ್ತಿದ್ದಾರೆ. ಸರ್ವಾಧಿಕಾರಿಗೆ ಸಾವಾಗಲಿ ಹಾಗೂ ಖಮೇನಿ ನಾಶ ವಾಗಲಿ ಎಂದು ಘೋಷಣೆಗಳನ್ನು ಕೂಗುತ್ತಾ, ಸುಮಾರು 25 ಪ್ರಾಂತ್ಯಗಳಲ್ಲಿ 250ಕ್ಕೂ ಹೆಚ್ಚು ಸ್ಥಳಗಳಲ್ಲಿ ಸತತ 12 ದಿನಗಳಿಂದ ಪ್ರತಿಭಟನೆ ನಡೆಸುತ್ತಿದ್ದಾರೆ.

ಖ್ಯಾತ ಪರಿಸರವಾದಿ ಗಾಡ್ಗೀಳ್ ನಿಧನ




ಪುಣೆ: ಹಿರಿಯ ಪರಿಸರ ವಿಜ್ಞಾನಿ ಮಾಧವ ಧನಂಜಯ ಗಾಡ್ಗೀಳ್ ನಿಧನರಾಗಿದ್ದಾರೆ. ಅವರಿಗೆ 83 ವರ್ಷ ವಯಸ್ಸಾಗಿತ್ತು.

ಪಶ್ಚಿಮ ಘಟ್ಟಗಳ ಸಂರಕ್ಷಣಾ ವರದಿಯನ್ನು ರಚಿಸಿದ್ದ ಪರಿಸರವಾದಿ ಮತ್ತು ಬರಹಗಾರ ಡಾ. ಮಾಧವ ಗಾಡ್ಗೀಳ್ ಅವರು ಅನಾರೋಗ್ಯದಿಂದ ಬುಧವಾರ ರಾತ್ರಿ ಪುಣೆಯ ಪ್ರಯಾಗ್ ಆಸ್ಪತ್ರೆಯಲ್ಲಿ ನಿಧನರಾದರು. ಇಂದು ಸಂಜೆ ಪುಣೆಯಲ್ಲಿ ಅಂತ್ಯಕ್ರಿಯೆ ನಡೆದಿದೆ.

1973 ರಲ್ಲಿ ಬೆಂಗಳೂರಿನಲ್ಲಿರುವ ಭಾರತೀಯ ವಿಜ್ಞಾನ ಸಂಸ್ಥೆಯನ್ನು ಸೇರಿ 2004ರಲ್ಲಿ ಅಧ್ಯಕ್ಷರಾಗುವ ಮೂಲಕ ಸುಮಾರು 30 ವರ್ಷಗಳ ಕಾಲ ಸೇವೆ ಸಲ್ಲಿಸಿದ್ದರು. ಪರಿಸರ ಶಾಸ್ತ್ರಜ್ಞ, ಬರಹಗಾರ ಹಾಗೂ ಅಂಕಣಕಾರರಾಗಿ ಗುರುತಿಸಿಕೊಂಡಿದ್ದ ಗಾಡ್ಗೀಳ್, ಪ್ರಧಾನ ಮಂತ್ರಿಗಳ ವೈಜ್ಞಾನಿಕ ಸಲಹಾ ಮಂಡಳಿಯ ಮಾಜಿ ಸದಸ್ಯರಾಗಿದ್ದರು. 2010ರ ಪಶ್ಚಿಮ ಘಟ್ಟಗಳ ಪರಿಸರ ವಿಜ್ಞಾನ ತಜ್ಞರ ಸಮಿತಿ ಮುಖ್ಯಸ್ಥರಾಗಿದ್ದ ಇವರು ಅಧ್ಯಯನ ನಡೆಸಿ ತಯಾರಿಸಿದ್ದ ವರದಿಯನ್ನು ಗಾಡ್ಗೀಳ್ ಆಯೋಗದ ವರದಿ ಎಂದೇ ಕರೆಯಲಾಗುತ್ತಿತ್ತು. ಪರಿಸರ ಕ್ಷೇತ್ರದಲ್ಲಿನ ಸಾಧನೆಗಾಗಿ ಗಾಡ್ಗೀಳ್ ಅವರಿಗೆ ವೋಲ್ವೋ, ಟೈಲರ್ ಅನೇಕ ಪ್ರಶಸ್ತಿ ಪುರಸ್ಕಾರಗಳು ಸಂದಿವೆ. ಭಾರತ ಸರ್ಕಾರ 1981 ರಲ್ಲಿ ಅವರಿಗೆ ನಾಲ್ಕನೇ ಅತ್ಯುನ್ನತ ನಾಗರಿಕ ಪ್ರಶಸ್ತಿಯಾದ ಪದ್ಮಶ್ರೀ ಪ್ರಶಸ್ತಿಯನ್ನು ನೀಡಿ ಗೌರವಿಸಿತ್ತು.

ಕುಪ್ಪಳ್ಳಿಯಂತೆ ಕುವೆಂಪು ಅವರ ಮೈಸೂರು ನಿವಾಸ ಮ್ಯೂಸಿಯಂ

ಕುವೆಂಪು ಅವರ ಅಳಿಯ ಡಾ.ಚಿದಾನಂದಗೌಡ ಘೋಷಣೆ



ಕಾರ್ಯಕ್ರಮದಲ್ಲಿ ಕುವೆಂಪು ವಿವಿ ವಿಶ್ರಾಂತ ಕುಲಪತಿ ಡಾ.ಚಿದಾನಂದ ಗೌಡ ಅವರನ್ನು ಅಭಿನಂದಿಸಲಾಯಿತು.

ಕುಶಾಲನಗರ: ಕುಪ್ಪಳ್ಳಿಯಂತೆ ಮೈಸೂರಿನ ಕುವೆಂಪು ಅವರ ನಿವಾಸ 'ಉದಯರವಿ'ಯನ್ನು ವಸ್ತುಸಂಗ್ರಹಾಲಯವನ್ನಾಗಿ ಮಾಡಲಾಗುವುದು ಎಂದು ಕುವೆಂಪು ವಿವಿ ವಿಶ್ರಾಂತ ಕುಲಪತಿ, ಕುವೆಂಪು ಅಳಿಯ ಡಾ.ಚಿದಾನಂದಗೌಡ ಘೋಷಿಸಿದ್ದಾರೆ.

ಕುಪ್ಪಳ್ಳಿಯಲ್ಲಿರುವ ಮನೆಯಂತೆ ಮೈಸೂರಿನಲ್ಲಿರುವ ಉದಯರವಿ ಎಂಬ ಕುವೆಂಪುರವರ ಮನೆಯನ್ನು ಮ್ಯೂಸಿಯಂ ಯನ್ನಾಗಿ ಮಾಡಿ ಅಲ್ಲಿ ಅವರು ಬಳಸುತ್ತಿದ್ದ ಪುಸ್ತಕ, ಕೃತಿಗಳು ಮತ್ತು ಹಲವಾರು ವಸ್ತುಗಳನ್ನು ಪ್ರದರ್ಶನಕ್ಕೆ ಇಡಲಾಗುತ್ತ ಮ್ಯೂಸಿಯಂ 2026 ಡಿ.29ರಂದು ಪ್ರಾರಂಭವಾಗುತ್ತದೆ ಎಂದು ಕೊಡಗು ವಿಶ್ವವಿದ್ಯಾಲಯದ ಜ್ಞಾನ ಕಾವೇರಿ ಆವರಣದ ಹಾರಂಗಿ ಸಭಾಂಗಣದಲ್ಲಿ ಕನ್ನಡ ಸಿರಿ ಸ್ನೇಹ ಬಳಗ, ಹಾಗೂ ಕುಶಾಲನಗರ ನಾಡಪ್ರಭು ಪತ್ತಿನ ಸಹಕಾರ ಸಂಘ ಸಂಯುಕ್ತಾಶ್ರಯದಲ್ಲಿ ನಡೆದ ವಿಶ್ವಮಾನವ ಕುವೆಂಪು ಅವರ ಜನ್ಮೋತ್ಸವ ಮತ್ತು ಸಮಗ್ರ ಸಾಹಿತ್ಯದ ಕುರಿತು ಒಂದು ದಿನದ ರಾಷ್ಟ್ರೀಯ ಸಮ್ಮೇಳನ ಹಾಗೂ ರಸಪ್ರಶ್ನೆ ಕಾರ್ಯಕ್ರಮದ ಸಮಾರೋಪ ಸಮಾರಂಭದಲ್ಲಿ ಮಾತನಾಡುತ್ತಾ ಘೋಷಿಸಿದ್ದಾರೆ.

ಕುವೆಂಪು ಅವರ ವಿಶ್ವಮಾನವ ಸಂದೇಶವನ್ನು ಪಾಠ ಹೇಳಿದಂತೆ "ಮಾನವ ಕುಲಂ ತಾನೊಂದೆ ವಲಂ" ಎಂಬ ತತ್ವದ ಅಡಿಯಲ್ಲಿ ಜಾತಿ ಧರ್ಮ ಭಾಷೆಗಳ ಬೇಲಿಯನ್ನು ಕಳಚಿ ಪ್ರತಿಯೊಬ್ಬರು ಸಂಕುಚಿತ ಮನೋಭಾವದಿಂದ ಹೊರಬರಬೇಕು. ಮಂತ್ರ ಮಾಂಗಲ್ಯ ಪರಿಕಲ್ಪನೆಯು ಕುವೆಂಪುರವರು ಹಿಂದೂ ವಿವಾಹಕ್ಕೆ ನೀಡಿದ ಸರಳ ವಿವಾಹ ಪದ್ಧತಿಯಾಗಿದೆ. ಇಂದಿನ ಸಮಾಜದಲ್ಲಿ ಪೋಷಕರು ಆಡಂಬರದ ವಿವಾಹಕ್ಕೆ ಸಿಲುಕಿ ತಮ್ಮ ಜೀವನವನ್ನು ಕೇವಲ ವಿವಾಹಕ್ಕೆ ಮಾಡಿದ ಸಾಲವನ್ನು ತೀರಿಸುವುದಕ್ಕೆ ಕಷ್ಟ ಪಡುತ್ತಿದ್ದಾರೆ. ಅಂತವರಿಗೆ ಈ ಪರಿಕಲ್ಪನೆಯು ಒಂದು ಉತ್ತಮ ವಿಧಾನವಾಗಿದೆ ಎಂದರು.

ಶ್ರೀ ರಾಮಾಯಣ ದರ್ಶನಂ ಆಧುನಿಕ ಕಾಲದಲ್ಲಿನ ಮಹಾಕಾವ್ಯದ ವೈಶಿಷ್ಟ್ಯತೆಯು ಮೂಲ ರಾಮಾಯಣಕ್ಕಿಂತ ವಿಭಿನ್ನ ಮತ್ತು ವಿಶೇಷವಾಗಿದೆ. ರಾಮನ ಆದರ್ಶಗಳನ್ನು ಎದ್ದು ಕಾಣುತ್ತದೆ. ಹಲವಾರು ವಿಶೇಷತೆಯನ್ನು ಎತ್ತಿ ಹಿಡಿದಿದೆ. ಕುವೆಂಪು ಒಬ್ಬರು ಕವಿ. ತಮ್ಮ ಸಾಹಿತ್ಯದಲ್ಲಿ ಕಾಡಿನ ನಿಸರ್ಗ 'ಇದ್ದಂತಹ' ಪ್ರೀತಿಯನ್ನು ಮತ್ತು ಆಸಕ್ತಿಯನ್ನು ತೋರ್ಪಡಿಸಿದ್ದಾರೆ ಎಂದರು.

ಇದೇ ಸಂದರ್ಭದಲ್ಲಿ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಕೊಡಗು ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಅಶೋಕ ಸಂಗಪ್ಪ ಆಲೂರ ಮಾತನಾಡಿ, ಕುವೆಂಪು ಅವರ ಕಾವ್ಯದಲ್ಲಿ ವಿಶ್ವಮಾನತಾವಾದ, ಆತ್ಮ ಶೋಧ, ಮನಸ್ಸಿನ ಅಂತರಂಗ, ಪ್ರಕೃತಿ–ಮಾನವ–ದೇವತೆಗಳ ಅಂತರಿಕ ಸಂಬಂಧದ ಸೂಕ್ಷ್ಮತೆ, ಭಾರತೀಯ ದಾರ್ಶನಿಕ ಪರಂಪರೆಯ ಸಂಧಾನಕ್ಕೆ ಅನುವು ಮಾಡಿ ಕೊಟ್ಟಿರುವುದನ್ನು ಕಾಣಬಹುದಾಗಿದೆ. ಮಾನವತ್ವವೇ ಪರಮ ಧರ್ಮ. ಜಾತಿ–ಧರ್ಮ –ಭಾಷೆಗಳ ಮೀರಿದ ಮಾನವ ಬಾಂಧವ್ಯವೇ ನಿಜವಾದ ಮೌಲ್ಯ ಎಂಬುದನ್ನು ಸಾರಿದರು. ಕುವೆಂಪು ಅವರ ಸಾಹಿತ್ಯವನ್ನು ಕೇವಲ ಮನರಂಜನೆಗಾಗಿ, ಭಾವನಾತ್ಮಕ ಉದ್ದಾತ್ತತೆಗೆ ಮಾತ್ರ ಸೀಮಿತಗೊಳಿಸದೆ, ಮನುಷ್ಯತ್ವದ ವಿಕಾಸ ಸಾಧನವಾಗಿ ಅರ್ಥೈಸುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕೊಡಗು ವಿಶ್ವವಿದ್ಯಾಲಯದ ಕುಲಸಚಿವರು (ಮೌಲ್ಯಮಾಪನ) ಆದ ಡಾ. ಸುರೇಶ್ ಎಂ., ಕನ್ನಡ ಸಿರಿ ಸ್ನೇಹ ಬಳಗದ ಅಧ್ಯಕ್ಷರಾದ ಲೋಕೇಶ್ ಸಾಗರ್ ಮಾತನಾಡಿದರು.

ಕನ್ನಡ ಸಿರಿ ಸ್ನೇಹ ಬಳಗದ ಪದಾಧಿಕಾರಿಗಳು ಮತ್ತು ಸದಸ್ಯರು, ಕೊಡಗು ವಿವಿ ಹಿತರಕ್ಷಕ ಬಳಗದ ಪದಾಧಿಕಾರಿಗಳು ಮತ್ತು ಸದಸ್ಯರು, ವಿವಿಧ ವಿಭಾಗಗಳ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ವರ್ಗದವರು, ಸ್ನಾತಕ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಉ.ರಾ. ನಾಗೇಶ್ ನಿರೂಪಿಸಿದರು.

ರಸಪ್ರಶ್ನೆ ಕಾರ್ಯಕ್ರಮದಲ್ಲಿ ಮೊದಲ ಸ್ಥಾನದಲ್ಲಿ ಅನಿಕೇತನ ತಂಡವು 9000 ನಗದು ಬಹುಮಾನ ಪಡೆದುಕೊಂಡಿತು. 2ನೇ ಸ್ಥಾನದಲ್ಲಿ ಕೋಳು ತಂಡ 6000 ನಗದು ಬಹುಮಾನ ಪಡೆದರೆ, 3ನೇ ಸ್ಥಾನವನ್ನು ಅಗ್ನಿ ಹಂಸ ತಂಡ 3000 ನಗದು ಬಹುಮಾನ ಪಡೆದುಕೊಂಡಿತು.

'ವಿಬಿ ಜಿ ರಾಮ್ ಜಿ' ಹೆಸರಿಗೆ ಕಾಂಗ್ರೆಸ್ ತಕರಾರಿಲ್ಲ, ತನ್ನ ಪಾಲಿನ ಶೇ.40ರಷ್ಟು ಹಣ ನೀಡಬೇಕಲ್ಲ ಎಂಬ ಆತಂಕ

ಮಡಿಕೇರಿಯಲ್ಲಿ ಮಾಜಿ ಸಂಸದ ಪ್ರತಾಪ್ ಸಿಂಹ ವಾಗ್ದಾಳಿ

ಮಡಿಕೇರಿ, ಜ.8– ಮಹಾತ್ಮಗಾಂಧಿ ಉದ್ಯೋಗ ಖಾತ್ರಿ ಯೋಜನೆಯ ಹೆಸರನ್ನು 'ವಿಕಸಿತ ಭಾರತ್ ರೋಜಗಾರ್ ಮತ್ತು ಆಜೀವಿಕಾ ಮಿಷನ್ ಖಾತರಿ (ವಿಬಿ ಜಿರಾಮ್ ಜಿ) ಎಂದು ಬದಲಾಯಿಸಿರುವ ಬಗ್ಗೆ ರಾಜ್ಯ ಕಾಂಗ್ರೆಸ್ ಸರಕಾರದ ತಕರಾರಿಲ್ಲ. ಬದಲಿಗೆ ಈ ಯೋಜನೆಗೆ ತನ್ನ ಪಾಲು ಹಣ ಶೇ.40 ಅನ್ನು ನೀಡಬೇಕಲ್ಲ ಎನ್ನುವ ಆತಂಕ ಕಾಡುತ್ತಿದೆ ಎಂದು ಮೈಸೂರು–ಕೊಡಗು ಕ್ಷೇತ್ರದ ಮಾಜಿ ಸಂಸದ ಪ್ರತಾಪ್ ಸಿಂಹ ವ್ಯಂಗ್ಯವಾಡಿದ್ದಾರೆ.



ಸುದ್ದಿಗೋಷ್ಠಿಯಲ್ಲಿ ಮಾತನಾಡುತ್ತಿರುವ ಮಾಜಿ ಸಂಸದ ಪ್ರತಾಪ್ ಸಿಂಹ.

ಮಡಿಕೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಒಂದು ವೇಳೆ ರಾಜ್ಯ ಕಾಂಗ್ರೆಸ್ ಸರಕಾರ 'ವಿಬಿ ಜಿರಾಮ್ ಜಿ' ಯೋಜನೆಯ ಜಾರಿಗೆ ಮುಂದಾಗದಿದ್ದಲ್ಲಿ ಕೇಂದ್ರ ಸರಕಾರ ಅನಿವಾರ್ಯವಾಗಿ ಪರ್ಯಾಯ ಚಿಂತನೆ ಮಾಡಬೇಕಾಗುತ್ತದೆ. ಜನಪರ ಕಾಳಜಿ ಇದ್ದರೆ ಸರಕಾರ ಅನುಷ್ಠಾನಗೊಳಿಸುತ್ತದೆ. ತಪ್ಪಿದಲ್ಲಿ ಎರಡೂವರೆ ವರ್ಷ ಕಳೆದ ನಂತರ ರಾಜ್ಯದಲ್ಲಿ ನಮ್ಮ ಸರಕಾರ ಅಧಿಕಾರಕ್ಕೆ ಬರುತ್ತದೆ. ಆಗ ನಾವು ಯೋಜನೆಯನ್ನು ಸಮರ್ಪಕವಾಗಿ ಜಾರಿಗೆ ತರುತ್ತೇವೆ ಎಂದರು.

ಮಹಾತ್ಮಗಾಂಧಿ ಉದ್ಯೋಗ ಖಾತ್ರಿ ಯೋಜನೆಯಲ್ಲಿ ಶೇ.90ರಷ್ಟು ಹಣವನ್ನು ಕೇಂದ್ರ ಸರಕಾರ ನೀಡುತ್ತಿತ್ತು ಮತ್ತು ಉಳಿದ ಶೇ.10ರಷ್ಟು ಹಣವನ್ನು ರಾಜ್ಯ ಸರಕಾರ ನೀಡಬೇಕಾಗಿತ್ತು. ಆದರೆ 'ವಿಬಿ ಜಿರಾಮ್ ಜಿ' ಯೋಜನೆಯಲ್ಲಿ ಶೇ.60ರಷ್ಟು ಹಣವನ್ನು ಕೇಂದ್ರ ಸರಕಾರ ನೀಡುತ್ತಿದ್ದು, ಶೇ.40 ರಷ್ಟನ್ನು ರಾಜ್ಯ ಸರಕಾರ ನೀಡಬೇಕಾಗುತ್ತದೆ. ಯೋಜನೆಯ ಯಶಸ್ವಿ ಜಾರಿಗೆ ಸಮಾನ ಜವಾಬ್ದಾರಿ ಇರಬೇಕು ಮತ್ತು ದುರುಪಯೋಗವಾಗುವುದನ್ನು ತಡೆಯಬೇಕು ಎನ್ನುವ ಕಾರಣದಿಂದ ಪಾಲು ಹಣದ ಮೊತ್ತವನ್ನು ರಾಜ್ಯ ಸರಕಾರಕ್ಕೆ ಹೆಚ್ಚು ನಿಗಧಿ ಮಾಡಲಾಗಿದೆ ಎಂದು ತಿಳಿಸಿದರು.

'ವಿಬಿ ಜಿರಾಮ್ ಜಿ' ಯೋಜನೆ 266 ಕಾಮಗಾರಿಗಳನ್ನು ಸೃಷ್ಟಿ ಮಾಡಲಿದ್ದು, ಆಯಾ ಪ್ರದೇಶಕ್ಕೆ ಅನುಗುಣವಾಗಿ ರಾಜ್ಯ ಸರಕಾರ ಯೋಜನೆಯನ್ನು ತಯಾರು ಮಾಡಬಹುದಾಗಿದೆ. ಈ ಹಿಂದೆ ಉದ್ಯೋಗ ಖಾತ್ರಿ ಯೋಜನೆಯಲ್ಲಿ ಜಾಬ್ ಕಾರ್ಡ್ ದುರುಪಯೋಗವಾಗುತ್ತಿತ್ತು ಮತ್ತು ಹಣ ಪೋಲಾಗುತ್ತಿತ್ತು. ಅರ್ಹ ಫಲಾನುಭವಿಗಳಿಗೆ ಉದ್ಯೋಗ ಲಭಿಸುತ್ತಿರಲಿಲ್ಲ, ಕೆಲಸ ಮಾಡದೆ ಹಣ ಡ್ರಾ ಮಾಡಲಾಗುತ್ತಿತ್ತು. ಆದರೆ ಪ್ರಸ್ತುತ ಕೇಂದ್ರ ಸರಕಾರ ತಂದಿರುವ ಯೋಜನೆಯಲ್ಲಿ ಯಾವುದೇ ದುರುಪಯೋಗಕ್ಕೆ ಅವಕಾಶವಿಲ್ಲ. ಬೆಳಗ್ಗೆ ಮತ್ತು ಸಂಜೆ ಕಾಮಗಾರಿಯಲ್ಲಿ ತೊಡಗುವವರ ಛಾಯಾಚಿತ್ರವನ್ನು ತೆಗೆಯಬೇಕಾಗುತ್ತದೆ. ವಾರದ ಲೆಕ್ಕ ನೀಡಬೇಕು ಮತ್ತು ಸಕಾಲದಲ್ಲಿ ಆಡಿಟಿಂಗ್ ನಡೆಸಬೇಕಾಗುತ್ತದೆ. ಇದರಿಂದ ದುರುಪಯೋಗಕ್ಕೆ ಅವಕಾಶವಿರುವುದಿಲ್ಲ. ಅರ್ಹರಿಗೆ ಉದ್ಯೋಗ ಒದಗಿಸುವುದು, ಲೋಪಗಳನ್ನು ಸರಿಪಡಿಸುವುದು, ಹಣ ಸೋರಿಕೆಯಾಗುವುದನ್ನು ತಡೆಯುವುದು ಮತ್ತು ಗ್ರಾಮೀಣ ಅಭಿವೃದ್ಧಿಯೇ ಯೋಜನೆಯ ಮುಖ್ಯ ಉದ್ದೇಶವಾಗಿದೆ ಎಂದು ಸ್ಪಷ್ಟಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ನಾಪಂಡ ರವಿ ಕಾಳಪ್ಪ, ಮಾಜಿ ಶಾಸಕರುಗಳಾದ ಕೆಜಿ.ಬೋಪಯ್ಯ, ಎಂ.ಪಿ. ಅಪ್ಪಚ್ಚು ರಂಜನ್, ಮಾಜಿ ಎಂಎಲ್‌ಸಿ ಎಂ.ಪಿ.ಸುನಿಲ್ ಸುಬ್ರಮಣಿ ಹಾಗೂ ತಳೂರು ಕಿಶೋರ್ ಕುಮಾರ್ ಉಪಸ್ಥಿತರಿದ್ದರು.

ಉಮ್ಮಣಕುಟ್ಟಡ ಅಟ್ಟು ನಿಧನ



ನಾಪೋಕ್ಲು, ಜ.8– ಇಲ್ಲಿಗೆ ಸಮೀಪದ ಮರಂದೋಡ ಗ್ರಾಮದ ನಿವಾಸಿ ಉಮ್ಮಣಕುಟ್ಟಡ ಅಟ್ಟು (54) ಬುಧವಾರ ನಿಧನರಾದರು. ಮೃತರ ಅಂತ್ಯಕ್ರಿಯೆ ಗುರುವಾರ ಮರಂದೋಡ ಗ್ರಾಮದಲ್ಲಿ ನಡೆಯಿತು.

ಮೃತರು ಪತ್ನಿ ಓರ್ವ ಪುತ್ರ ಹಾಗೂ ಪುತ್ರಿ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

ಕೊಡಗು ಗೌಡ ಸಮಾಜಗಳ ಒಕ್ಕೂಟದಿಂದ ಎಸ್ಪಿಗೆ ಸ್ವಾಗತ



ನಾಪೋಕ್ಲು: ಕೊಡಗು ಜಿಲ್ಲೆಗೆ ನೂತನ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಯಾಗಿ ಅಧಿಕಾರ ಸ್ವೀಕರಿಸಿರುವ ಬಿಂದುಮಣಿ ಅವರನ್ನು ಕೊಡಗು ಗೌಡ ಸಮಾಜಗಳ ಒಕ್ಕೂಟದ ತಂಡದಿಂದ ಹೂಗುಚ್ಛ ನೀಡಿ ಹಾರ್ದಿಕವಾಗಿ ಸ್ವಾಗತಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಬಾರಿಕೆ ದಿನೇಶ್ ಕುಮಾರ ಅವರೂ ಉಪಸ್ಥಿತರಿದ್ದರು.

ಒಕ್ಕೂಟದ ಅಧ್ಯಕ್ಷ ಆನಂದ ಕರಂದ್ಲಾಜೆ ಅಭಿನಂದನೆ ಸಲ್ಲಿಸಿ ಮಾತನಾಡಿ, ಕೊಡಗಿನ ಮತ್ತು ಸಮುದಾಯದ ಅಭಿವೃದ್ಧಿ ದೃಷ್ಟಿಯಿಂದ ಮತ್ತು ಕಾನೂನು ಸುವ್ಯವಸ್ಥೆ ಪರಿಪಾಲನೆಗೆ ಇಲಾಖೆ ತೆಗೆದುಕೊಳ್ಳುವ ಎಲ್ಲ ನಿರ್ಧಾರಗಳಿಗೆ ಕೊಡಗಿನ ಗೌಡ ಸಮುದಾಯದವರು ಸಹಕರಿಸುವುದಾಗಿ ಹೇಳಿದರು. ಮುಂದಿನ ದಿನಗಳಲ್ಲಿ ಜಿಲ್ಲೆಯಲ್ಲಿ ಉತ್ತಮ ಜನಪರ ಕೆಲಸ ಕಾರ್ಯಗಳು ಮತ್ತು ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವುದಾಗಿ ನೂತನ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿಂದುಮಣಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಕಾರ್ಯದರ್ಶಿ ಪೇರಿಯನ ಉದಯ, ಖಜಾಂಚಿ ಅಂಬೆಕಲ್ಲು ನವೀನ್, ಕುಶಾಲನಗರ ಯುವಕ ಸಂಘದ ಅಧ್ಯಕ್ಷ ಕೊಡಗಿನ ಹರ್ಷ, ನಡುವಟ್ಟಿರ ಶಿವ ಪ್ರಕಾಶ್, ಕೊಡಗು ಗೌಡ ಸಮಾಜದ ನಿರ್ದೇಶಕರಾದ ಪೊನ್ನಚ್ಚನ ಮಧು, ಪುದಿಯನೆರವನ ರೇವತಿ, ಪಳಂಗೋಟು ವಿನಯ್ ಕಾರ್ಯಪ್ಪ, ಪೆರುಬಾಯಿ ನವೀನ್, ಚೆಟ್ಟಿಮಾಡ ರೋಹಿತ್ ಸೇರಿದಂತೆ ಇತರರು ಹಾಜರಿದ್ದರು.

ನಾಪೋಕ್ಲು ಬಳಿ ಗಾಂಜಾ ಮಾರಾಟ: ಇಬ್ಬರು ಬಂಧನ

ನಾಪೋಕ್ಲು: ನಾಪೋಕ್ಲು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಅಕ್ರಮವಾಗಿ ಮಾದಕ ವಸ್ತು ಗಾಂಜಾವನ್ನು ಮಾರಾಟ ಮಾಡುತ್ತಿದ್ದ ಪ್ರತ್ಯೇಕ ಪ್ರಕರಣಗಳಲ್ಲಿ ಅಸ್ಸಾಂ ರಾಜ್ಯದ ಇಬ್ಬರು ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ.

ಅಸ್ಸಾಂ ರಾಜ್ಯದ ದರಾಂಗ ಜಿಲ್ಲೆಯ ನಿವಾಸಿ ಮುಸ್ತಫ ಆಲಿ (25) ಹಾಗೂ ಮಾಜುನ್ ಆಲಿ (34) ಬಂಧಿತ ಆರೋಪಿಗಳು. ಇಲ್ಲಿನ ಹೊದವಾಡ ಗ್ರಾಮದ ರಾಫೈಲ್ಸ್ ಶಾಲೆಯ ಬಳಿ ಬಸು ತಂಗುತಾಣದಲ್ಲಿ ಹಾಗೂ ಕುಂಬಳಗಾಳು ಗ್ರಾಮದ ಕುಯಂಗೇರಿ ರಸ್ತೆಯಲ್ಲಿರುವ ಪ್ರಯಾಣಿಕರ ಬಸ್ಸು ತಂಗು ದಾಣದಲ್ಲಿ ಆರೋಪಿಗಳು ಮಾದಕ ವಸ್ತು ಗಾಂಜಾವನ್ನು ಮಾರಾಟ ಮಾಡುತ್ತಿರುವ ಬಗ್ಗೆ ದೊರೆತ ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಿದ ಪೊಲೀಸರು ಮುಸ್ತಫ ಆಲಿ ಎಂಬಾತನಿಂದ ಮಾರಾಟಕ್ಕೆ ಇಟ್ಟಿದ್ದ 234 ಗ್ರಾಂ ಅಕ್ರಮ ಗಾಂಜಾ ಹಾಗೂ ಮತ್ತೊಂದು ಪ್ರಕರಣದಲ್ಲಿ ಮಾಜುನ್ ಆಲಿ ಎಂಬಾತನಿಂದ 155 ಗ್ರಾಂ ಅಕ್ರಮ ಗಾಂಜಾ ಸಹಿತ ಆರೋಪಿಗಳನ್ನು ವಶಕ್ಕೆ ಪಡೆದು ನ್ಯಾಯಾಲಯಕ್ಕೆ ಹಾಜರುಪಡಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ. ಕಾರ್ಯಾಚರಣೆಯಲ್ಲಿ ಪಿಎಸ್‌ಐ ರಾಘವೇಂದ್ರ ಹಾಗೂ ಸಿಬ್ಬಂದಿಗಳು ಪಾಲ್ಗೊಂಡಿದ್ದರು.





ಹನುಮ ಭಕ್ತರ ಮೇಲೆ ಕೇಸ್ ದಾಖಲು ಖಂಡಿಸಿ ಪ್ರತಿಭಟನೆ

ಗುಂಡ್ಲುಪೇಟೆ, ಜ.8 (ಸೋಮ್.ಜಿ)– ಪಟ್ಟಣದಲ್ಲಿ ಕಳೆದ ಡಿ.27ರಂದು ನಡೆಸಿದ ಹನುಮ ಜಯಂತಿ ಆಚರಣೆ ಸಮಿತಿ ಸದಸ್ಯರ ವಿರುದ್ಧ ಪೊಲೀಸ್ ಇಲಾಖೆ ದುರುದ್ದೇಶಪೂರ್ವಕವಾಗಿ ಎಫ್‌ಐಆರ್ ದಾಖಲಿಸಿದೆ ಎಂದು ಆರೋಪಿಸಿ ಬಿಜೆಪಿ ಜಿಲ್ಲಾಧ್ಯಕ್ಷ, ಮಾಜಿ ಶಾಸಕ ಸಿ.ಎಸ್.ನಿರಂಜನ್ ಕುಮಾರ್ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಯಿತು.



ಹನುಮ ಜಯಂತಿ ಆಚರಣೆ ಸಮಿತಿ ಸದಸ್ಯರ ವಿರುದ್ಧ ಎಫ್‌ಐಆರ್ ದಾಖಲು ಖಂಡಿಸಿ ಪ್ರತಿಭಟನೆ ನಡೆಸಲಾಯಿತು.

ಗುರುವಾರ ಪಟ್ಟಣದ ಚಾಮರಾಜನಗರ ರಸ್ತೆಯ ಶಕ್ತಿ ಹನುಮಾನ್ ದೇವಸ್ಥಾನದ ಮುಂಭಾಗದಿಂದ ಪೊಲೀಸ್ ಠಾಣೆಯತ್ತ ಮೆರವಣಿಗೆ ಹೊರಟ ಪ್ರತಿಭಟನಾಕಾರರನ್ನು ಪೊಲೀಸರು ಬಸವೇಶ್ವರ ವೃತ್ತದ ಬಳಿ ತಡೆದರು. ಈ ವೇಳೆ ಪೊಲೀಸರು ಹಾಗೂ ಹನುಮ ಭಕ್ತರ ನಡುವೆ ಮಾತಿನ ಚಕಮಕಿ ನಡೆಯಿತು. ನಂತರ ಪ್ರತಿಭಟನಾಕಾರರು ತಾಲೂಕು ಕಚೇರಿ ಎದುರು ಜಮಾಯಿಸಿ ಸರ್ಕಾರ ಹಾಗೂ ಪೊಲೀಸ್ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ, ಹನುಮ ಭಕ್ತರ ಮೇಲೆ ಕೇಸ್ ದಾಖಲಿಸಲು ಕಾರಣರಾದ ಅಧಿಕಾರಿ ವಿರುದ್ಧ ಕ್ರಮ ಕೈಗೊಳ್ಳಬೇಕು. ವಿಷಯ ಗಂಭೀರವಾಗಿರುವುದರಿಂದ ಜಿಲ್ಲಾ ಎಸ್ಪಿ ಸ್ಥಳಕ್ಕಾಗಮಿಸಬೇಕು ಎಂದು ಪ್ರತಿಭಟನೆ ನಡೆಸಿದರು.

ಮಾಜಿ ಶಾಸಕ ಸಿ.ಎಸ್.ನಿರಂಜನ ಕುಮಾರ್ ಮಾತನಾಡಿ, ಸರ್ಕಾರ ಹಿಂದೂಗಳನ್ನು ಹತ್ತಿಕ್ಕಲು ಹೊರಟಿದೆ. ಡಿ.27ರಂದು ನಡೆದ ಹನುಮ ಜಯಂತಿಯನ್ನು ಸರ್ವ ಸಮುದಾಯದ ಒಟ್ಟಿಗೆ ನಡೆಸಿದ್ದನ್ನು ಸಹಿಸಲಾಗದೆ ಸಮಿತಿ ಸದಸ್ಯರ ಮೇಲೆ ಪ್ರಕರಣ ದಾಖಲಿಸಿ ಬೆದರಿಸುವ ಕುತಂತ್ರಕ್ಕೆ ರಾಜ್ಯ ಸರ್ಕಾರ ಹಾಗೂ ಶಾಸಕರು ಮುಂದಾಗಿದ್ದಾರೆ. ಬಿಜೆಪಿ ಹನುಮ ಜಯಂತಿ ಆಚರಿಸುವ ಮೂಲಕ ಎಲ್ಲಾ ಜಾತಿಯವರನ್ನು ಒಂದುಗೂಡಿಸಲು ಹೊರಟಿದ್ದರೆ ಕಾಂಗ್ರೆಸ್ ಸಮುದಾಯಗಳ ನಡುವೆ ಬೆಂಕಿ ಹಚ್ಚುವ ಕೆಲಸ ಮಾಡುತ್ತಿದೆ. ಸಾವಿರಾರು ಬಿಪಿಎಲ್ ಕಾರ್ಡ್‌ಗಳನ್ನು ರದ್ದುಗೊಳಿಸುವ ಮೂಲಕ ಬಡ ಜನತೆಗೆ ದೊಡ್ಡ ಕೊಡುಗೆ ನೀಡಿದೆ ಎಂದು ಲೇವಡಿ ಮಾಡಿದರು.

ಶಾಂತಿಯುತವಾಗಿ ಹನುಮೋತ್ಸವ ಮಾಡಿದ ಸದಸ್ಯರ ವಿರುದ್ಧ ಮೊಕದ್ದಮೆ ದಾಖಲಿಸಿರುವುದು ಖಂಡನೀಯ ಎಂದ ಅವರು, ಡಿಸೆಂಬರ್ ಮೊದಲ ವಾರ ತಾಲೂಕಿನ ಕೆರೆಗಳಿಗೆ ನದಿ ಮೂಲದಿಂದ ನೀರು ಬಿಡಲಾಗುತ್ತದೆ ಎಂದು ಭರವಸೆ ನೀಡಿದ ಶಾಸಕರು ಮೌನಕ್ಕೆ ಶರಣಾಗಿದ್ದಾರೆ. ಎರಡೂವರೆ ವರ್ಷ ಕಳೆದರೂ ನೀರು ಹರಿಸಲಾಗದಿದ್ದು ನಿಮ್ಮ ಅಸಮರ್ಥತೆ ತೋರಿಸುತ್ತದೆ ಎಂದು ಲೇವಡಿ ಮಾಡಿದ ಅವರು ಈ ಕೂಡಲೇ ಪೊಲೀಸ್ ಅಧಿಕಾರಿಗಳು ಸುಳ್ಳು ಪ್ರಕರಣ ಕೈಬಿಡಬೇಕು ಎಂದು ಒತ್ತಾಯಿಸಿದರು.

ಜಾರಕಿಹೊಳಿ ಬ್ರಿಗೇಡ್ ಅಧ್ಯಕ್ಷ ಗೋವಿಂದ ನಾಯಕ್ ಮಾತನಾಡಿ, ಗುಂಡ್ಲುಪೇಟೆಯಲ್ಲಿ ಅನ್ನಭಾಗ್ಯ ಅಕ್ಕಿ ಅಕ್ರಮ ಸಾಗಣೆ ಆಗುತ್ತಿದೆ. ಅದನ್ನು ಪ್ರಶ್ನಿಸಿದರೆ ಕೇಸ್ ದಾಖಲಿಸುತ್ತಾರೆ. ಗಾಂಜಾ ಮಾರಾಟ, ಕೇರಳ ಲಾಟರಿ ದಂಧೆ, ಜಾನುವಾರು ಸಾಗಣೆ, ಕಳ್ಳತನಗಳು ಎಗ್ಗಿಲ್ಲದೆ ನಡೆಯುತ್ತಿದೆ. ಮಧ್ಯರಾತ್ರಿ ಜಾನುವಾರುಗಳ ಕಳ್ಳತನ ನಡೆಯುತ್ತಿದ್ದು, ಇಲ್ಲಿವರೆಗೆ 42ಕ್ಕೂ ಹೆಚ್ಚು ಜಾನುವಾರುಗಳನ್ನು ಕಳವು ಮಾಡಿ ಕಸಾಯಿಖಾನೆಗೆ ಸಾಗಿಸಲಾಗಿದೆ. ಈ ಬಗ್ಗೆ ಸಾಕ್ಷಿ ನೀಡಿದರೂ ಕ್ರಮ ಕೈಗೊಳ್ಳಲು ಪೊಲೀಸರು ಹಿಂದೇಟು ಹಾಕುತ್ತಿದ್ದಾರೆ ಎಂದು ಆರೋಪಿಸಿದರು.

ಈ ವೇಳೆ ಸ್ಥಳಕ್ಕಾಗಮಿಸಿ ಮಾತನಾಡಿದ ಎಎಸ್ಪಿ ಶಶಿಧರ್ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳೊಂದಿಗೆ ಈ ಸಂಬಂಧ ಚರ್ಚಿಸಲಾಗುವುದು ಎಂದು ಭರವಸೆ ನೀಡಿದ ನಂತರ ಪ್ರತಿಭಟನೆ ಕೈ ಬಿಡಲಾಯಿತು.

ಪ್ರತಿಭಟನೆಯಲ್ಲಿ ಬಿಜೆಪಿ ಮಂಡಲಾಧ್ಯಕ್ಷ ಸಿ.ಮಹದೇವಪ್ರಸಾದ್, ಮಾಜಿ ಅಧ್ಯಕ್ಷರಾದ ಎನ್.ಮಲ್ಲೇಶ್, ಎಲ್.ಸುರೇಶ್, ಡಿ.ಪಿ.ಜಗದೀಶ್, ಪ್ರಧಾನ ಕಾರ್ಯದರ್ಶಿ ಸುನೀಲ್ ಮೂಡ್ಲು, ಪುರಸಭೆ ಸದಸ್ಯ ನಾಗೇಶ್, ಹನುಮೋತ್ಸವ ಆಚರಣಾ ಸಮಿತಿ ನಂದೀಶ್, ಡಿ.ಮಾದಪ್ಪ, ಮಹದೇವಶೆಟ್ಟಿ, ನವೀನ್ ಮೌರ್ಯ, ಬಸವರಾಜು, ನಂಜಪ್ಪ, ಮಂಜು, ಪ್ರಣಯ್ ಸೇರಿದಂತೆ ಹಲವರಿದ್ದರು.

ಪತ್ರಕರ್ತರ ಭವನಕ್ಕೆ ಶೀಘ್ರ ನಿವೇಶನ



ನೂತನ ಪದಾಧಿಕಾರಿಗಳನ್ನು ಶಾಸಕ ಎ.ಆರ್.ಕೃಷ್ಣಮೂರ್ತಿ ಸನ್ಮಾನಿಸಿದರು.

ಯಳಂದೂರು, ಜ.8– ತಾಲೂಕು ಪತ್ರಕರ್ತರ ಭವನಕ್ಕೆ ಶೀಘ್ರದಲ್ಲೇ ನಿವೇಶನ ಮಂಜೂರು ಮಾಡಿ ಸಂಕ್ರಾಂತಿ ನಂತರ ಗುದ್ದಲಿ ಪೂಜೆ ನೆರವೇರಿಸಲಾಗುವುದು ಎಂದು ಶಾಸಕ ಎ.ಆರ್.ಕೃಷ್ಣಮೂರ್ತಿ ತಿಳಿಸಿದರು.

ಪಟ್ಟಣದ ತಾಪಂನ ಗ್ಯಾರಂಟಿ ಯೋಜನೆಗಳ ಸಭಾಂಗಣದಲ್ಲಿ ನಡೆದ ಜಿಲ್ಲಾ ಹಾಗೂ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಚುನಾವಣೆಯಲ್ಲಿ ಆಯ್ಕೆಯಾದ ಪದಾಧಿಕಾರಿಗಳನ್ನು ಸನ್ಮಾನಿಸಿ ಮಾತನಾಡಿದ ಅವರು, ಈ ಸಂಬಂಧ ಈಗಾಗಲೇ ಪಪಂ ಮುಖ್ಯಾಧಿಕಾರಿ ಅವರೊಂದಿಗೆ ಮಾತನಾಡಿದ್ದು, ಪತ್ರಕರ್ತರ ಭವನಕ್ಕೆ ಶೀಘ್ರದಲ್ಲೇ ನಿವೇಶನ ಮಂಜೂರು ಮಾಡಿ ಸಂಕ್ರಾಂತಿ ನಂತರ ಗುದ್ದಲಿ ಪೂಜೆ ನೆರವೇರಿಸಲಾಗುವುದು. ಪದಾಧಿಕಾರಿಗಳು ಎಲ್ಲರ ವಿಶ್ವಾಸಕ್ಕೆ ಪಡೆದು ಉತ್ತಮವಾಗಿ ಕಾರ್ಯ ನಿರ್ವಹಿಸಿ ಎಂದರು.

ಈ ವೇಳೆ ಜಿಲ್ಲಾ ಗ್ಯಾರಂಟಿ ಯೋಜನೆ ಅಧ್ಯಕ್ಷ ಹೆಚ್.ವಿ.ಚಂದ್ರು, ತಾಲೂಕು ಅಧ್ಯಕ್ಷ ಪ್ರಭುಪ್ರಸಾದ್, ಯುವ ಕಾಂಗ್ರೆಸ್ ಮುಖಂಡ ಜೇತನ್ ದೊರೆರಾಜು, ಕೊಳ್ಳೇಗಾಲ ನಗರಸಭೆ ನಾಮನಿರ್ದೇಶನ ಸದಸ್ಯ ಸ್ವಾಮಿನಂಜಪ್ಪ, ಪಪಂ ನಾಮ ನಿರ್ದೇಶನ ಸದಸ್ಯ ಲಿಂಗರಾಜಮೂರ್ತಿ, ಪ್ರಕಾಶ್, ಪತ್ರಕರ್ತರ ಸಂಘದ ಜಿಲ್ಲಾ ಕಾರ್ಯದರ್ಶಿ ನಾಗೇಂದ್ರ, ಜಿಲ್ಲಾ ನಿರ್ದೇಶಕ ವೈ.ಎಂ.ಭಾನುಪ್ರಕಾಶ್, ತಾಲೂಕು ಅಧ್ಯಕ್ಷ ವಿ.ನಾಗರಾಜು, ಪ್ರಧಾನ ಕಾರ್ಯದರ್ಶಿ ಲೋಕೇಶ್, ಉಪಾಧ್ಯಕ್ಷ ನಾಗೇಂದ್ರ, ಖಜಾಂಚಿ ಇರ್ಫಾನ್, ಪ್ರಸನ್ನ, ಮುಷರಫ್, ಪುನೀತ್, ಉಮೇಶ್, ರಂಗಸ್ವಾಮಿ, ಶಾಸಕರ ಆಪ್ತ ಸಹಾಯಕ ಚೇತನ್, ವಿಜಯ್ ಇತರರಿದ್ದರು.

ದುಶ್ಚಟ ತ್ಯಜಿಸಿ ಶಿಕ್ಷಣ, ಕ್ರೀಡೆಗೆ ಆದ್ಯತೆ ನೀಡಲು ಸಲಹೆ

ಚಾಮರಾಜನಗರ, ಜ.8– ಜಿಲ್ಲೆಯ ಬುಡಕಟ್ಟು ಜನರು ದುಶ್ಚಟಗಳನ್ನು ತ್ಯಜಿಸಿ ಶಿಕ್ಷಣ ಹಾಗೂ ಕ್ರೀಡೆಗೆ ಹೆಚ್ಚಿನ ಒತ್ತು ನೀಡುವಂತೆ ಶಾಸಕ ಸಿ.ಪುಟ್ಟರಂಗಶೆಟ್ಟಿ ಸಲಹೆ ನೀಡಿದರು.



ಕಾರ್ಯಕ್ರಮವನ್ನು ಗಣ್ಯರು ಉದ್ಘಾಟಿಸಿದರು.

ನಗರದ ಡಾ.ಬಿ.ಆರ್.ಅಂಬೇಡ್ಕರ್ ಜಿಲ್ಲಾ ಕ್ರೀಡಾಂಗಣದಲ್ಲಿಂದು ಜಿಲ್ಲಾಡಳಿತ, ಜಿಪಂ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಸಂಯುಕ್ತಾಶ್ರಯದಲ್ಲಿ 2 ದಿನಗಳ ಕಾಲ ಆಯೋಜಿಸಿರುವ ಜಿಲ್ಲಾ ಮಟ್ಟದ ಅತೀ ಹಿಂದುಳಿದ ಅರಣ್ಯಾಧಾರಿತ ಬುಡಕಟ್ಟು ಜನಾಂಗದ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕ್ರೀಡಾಕೂಟದಲ್ಲಿ ಬೆಟ್ಟ ಹಾಗೂ ಮರ ಹತ್ತುವುದು ಸೇರಿದಂತೆ ಸಾಕಷ್ಟು ಸ್ಪರ್ಧೆಗಳಿವೆ. ಸ್ಪರ್ಧೆಗಳಲ್ಲಿ ಭಾಗವಹಿಸಲು ಶರೀರ ದೃಢಕಾಯವಾಗಿರಬೇಕು. ಹಿಂದೆ ಬುಡಕಟ್ಟು ಜನರು ದೃಢಕಾಯತೆ ಹೊಂದಿದ್ದರು. ಬದಲಾದ ಕಾಲಘಟ್ಟದಲ್ಲಿ ದುಶ್ಚಟಗಳಿಗೆ ಬಲಿಯಾಗಿ ದೃಢಕಾಯ ಕಳೆದುಕೊಳ್ಳುತ್ತಿದ್ದಾರೆ. ಆದಿವಾಸಿಗಳು ದುಶ್ಚಟ ತ್ಯಜಿಸಿ ಸಮಾಜ ತಿದ್ದುವ ಕೆಲಸ ಮಾಡಬೇಕು. ಶಿಕ್ಷಣ, ಕ್ರೀಡೆಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು. ಬುಡಕಟ್ಟು ಮಕ್ಕಳ ಶಿಕ್ಷಣಕ್ಕಾಗಿ ಸರ್ಕಾರವು ಆಶ್ರಮ ಶಾಲೆಗಳು, ಮೊರಾರ್ಜಿ ಶಾಲೆಗಳನ್ನು ತೆರೆದಿದೆ ಎಂದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಶಾಸಕ ಎ.ಆರ್.ಕೃಷ್ಣಮೂರ್ತಿ, ಸ್ವಾತಂತ್ರ್ಯ ನಂತರ ಸರ್ಕಾರ ಶೈಕ್ಷಣಿಕವಾಗಿ ಬುಡಕಟ್ಟು ಜನರಿಗೆ ಸಾಕಷ್ಟು ಅವಕಾಶ ಕಲ್ಪಿಸಿದೆ. ಬುಡಕಟ್ಟು ಜನರನ್ನು ಸಮಾಜದ ಮುಖ್ಯವಾಹಿನಿಗೆ ತರಲು 2025–26ನೇ ಸಾಲಿನ ಆಯವ್ಯಯ ಮಂಡನೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅತೀ ಹಿಂದುಳಿದ ಅರಣ್ಯಾಧಾರಿತ ಬುಡಕಟ್ಟು ಜನರಿಗೆ ಕ್ರೀಡಾಕೂಟ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳಿಗೆ ಅವಕಾಶ ಮಾಡಿಕೊಟ್ಟಿದ್ದಾರೆ. ರಾಜ್ಯದ 5 ಜಿಲ್ಲೆಗಳಲ್ಲಿ ಕ್ರೀಡೆ, ಸ್ಪರ್ಧೆಗಳು ನಡೆಯಲಿದ್ದು, ಈ ಪೈಕಿ ಚಾಮರಾಜನಗರ ಜಿಲ್ಲೆಯು ಒಂದಾಗಿದೆ ಎಂದರು.

ಕಾಡಾ ಅಧ್ಯಕ್ಷ ಪಿ.ಮರಿಸ್ವಾಮಿ, ಗ್ಯಾರಂಟಿ ಯೋಜನೆ ಜಿಲ್ಲಾಧ್ಯಕ್ಷ ಹೆಚ್.ವಿ.ಚಂದ್ರು, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಹಮ್ಮದ್ ಅಸ್ಗರ್ ಮುನ್ನಾ ಹಾಗೂ ಡಿಸಿ ಶ್ರೀರೂಪ ಅವರು ಬುಡಕಟ್ಟು ಜನರ ಕ್ರೀಡಾಕೂಟ, ಸಾಂಸ್ಕೃತಿಕ ಸ್ಪರ್ಧೆಗಳ ಮಹತ್ವ ಕುರಿತು ಮಾತನಾಡಿದರು.

ಬುಡಕಟ್ಟು ಜನರ ನಾಯಕ ಭಗವಾನ್ ಬಿರ್ಸಾ ಮುಂಡಾ ಪ್ರತಿಮೆಯನ್ನು ಶಾಸಕ ಸಿ.ಪುಟ್ಟರಂಗಶೆಟ್ಟಿ ಅನಾವರಣಗೊಳಿಸಿದರು. ಬುಡಕಟ್ಟು ಮುಖಂಡರನ್ನು ಕಾರ್ಯಕ್ರಮದಲ್ಲಿ ಸನ್ಮಾನಿಸಲಾಯಿತು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ಸುರೇಶ್, ಜಿಲ್ಲಾ ಪ.ವರ್ಗಗಳ ಕಲ್ಯಾಣಾಧಿಕಾರಿ ಬಿಂದ್ಯಾ, ಆರೋಗ್ಯಾಧಿಕಾರಿ ಡಾ.ಎಸ್.ಚಿದಂಬರ, ಶ್ರೀನಿವಾಸಪ್ರಸಾದ್, ಗಿರಿಜನ ಮುಖಂಡ ಡಾ.ಸಿ.ಮಾದೇಗೌಡ ಇತರರಿದ್ದರು.

ಕುಡಿಯುವ ನೀರಿಗೆ ತೊಂದರೆಯಾಗದಂತೆ ಕ್ರಮ ವಹಿಸಿ

ಚಾಮರಾಜನಗರ, ಜ.8– ಜಿಲ್ಲೆಯಲ್ಲಿ ಕುಡಿಯುವ ನೀರಿಗೆ ತೊಂದರೆಯಾಗದಂತೆ ಅನುಷ್ಠಾನದಲ್ಲಿರುವ ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಲು ಜಿಲ್ಲಾಧಿಕಾರಿ ಶ್ರೀರೂಪ ಸೂಚನೆ ನೀಡಿದರು.



ಸಭೆಯಲ್ಲಿ ಜಿಲ್ಲಾಧಿಕಾರಿ ಶ್ರೀರೂಪ ಮಾತನಾಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ವಿವಿಧ ಇಲಾಖೆ ಅಧಿಕಾರಿಗಳೊಂದಿಗೆ ಯೋಜನೆ ಕಾರ್ಯಕ್ರಮ ಅನುಷ್ಠಾನ ಸಂಬಂಧ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜನತೆಗೆ ಕುಡಿಯುವ ನೀರು ಒದಗಿಸುವುದು ಆದ್ಯತೆ ಕೆಲಸವಾಗಿದೆ. ಈಗಾಗಲೇ ಲಭ್ಯವಿರುವ ಅನುದಾನದಲ್ಲಿ ಕೈಗೆತ್ತಿಕೊಂಡಿರುವ ಗ್ರಾಮೀಣ, ನಗರ, ಪಟ್ಟಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಯೋಜನೆಯನ್ನು ವಿಳಂಬ ಮಾಡದೇ ಶೀಘ್ರಗತಿಯಲ್ಲಿ ಮುಗಿಸಬೇಕು. ಕಾಮಗಾರಿ ನಿರ್ವಹಣೆ ಅನುಮತಿಗೆ ತೊಡಕಾಗಿದ್ದಲ್ಲಿ ಸಂಬಂಧಪಟ್ಟ ಇಲಾಖೆಗಳಿಗೆ ಕೂಡಲೇ ಮತ್ತೊಮ್ಮೆ ಮನವರಿಕೆ ಮಾಡಿ ಅಗತ್ಯ ಕ್ರಮ ವಹಿಸುವಂತೆ ತಿಳಿಸಿದರು.

ಕಾಡಂಚಿನ ಗ್ರಾಮಗಳಲ್ಲಿ ಮೂಲ ಸೌಕರ್ಯಕ್ಕೆ ಕೊರತೆಯಾಗಬಾರದು. ಅರಣ್ಯ ವ್ಯಾಪ್ತಿಯ ವಿದ್ಯಾರ್ಥಿಗಳಿಗೆ ಶಾಲಾ ಕಾಲೇಜುಗಳಿಗೆ ತೆರಳಲು ಮುಖ್ಯವಾಗಿ ರಸ್ತೆ ಅಭಿವೃದ್ಧಿಯಾದರೆ ಸಾರಿಗೆ ಸೌಲಭ್ಯ ಒದಗಿಸಲು ಅನುಕೂಲವಾಗಲಿದೆ. ಹೀಗಾಗಿ ರಸ್ತೆ, ಕುಡಿಯುವ ನೀರು, ಇನ್ನಿತರ ಸೌಕರ್ಯ ಕಲ್ಪಿಸಲು ಸಂಬಂಧಪಟ್ಟ ಅಧಿಕಾರಿಗಳು ಮುಂದಾಗಬೇಕು ಎಂದರು.

ಆರೋಗ್ಯ ಸೇವೆಗಳು ಜನರಿಗೆ ಸಕಾಲಕ್ಕೆ ಲಭ್ಯವಾಗಬೇಕು. ಅಪಘಾತ ತುರ್ತು ಸಂದರ್ಭ ಆಂಬುಲೆನ್ಸ್ ಸೇವೆ ದೊರೆಯಬೇಕು. ಪ್ರಾಥಮಿಕ ಆರೋಗ್ಯ ಕೇಂದ್ರ, ಆಸ್ಪತ್ರೆಗಳ ಕಟ್ಟಡ ನಿರ್ಮಾಣಕ್ಕೆ ಬೇಕಿರುವ ನಿವೇಶನ ಪಡೆದುಕೊಳ್ಳುವ ನಿಟ್ಟಿನಲ್ಲಿ ಬೇಗನೆ ಪ್ರಕ್ರಿಯೆ ಕೈಗೊಳ್ಳಬೇಕು ಎಂದರು.

ಸಮಾಜ ಕಲ್ಯಾಣ, ಪ.ವರ್ಗಗಳ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಹಾಸ್ಟೆಲ್‌ಗಳಿಗೆ ಅಧಿಕಾರಿಗಳು ಭೇಟಿ ನೀಡಿ ಅಲ್ಲಿನ ವ್ಯವಸ್ಥೆ ಪರಿಶೀಲಿಸಬೇಕು. ವಿದ್ಯಾರ್ಥಿಗಳ ಹಾಜರಾತಿ, ಬಯೋಮೆಟ್ರಿಕ್, ಸಿಸಿ ಟಿವಿ ಕಾರ್ಯ ನಿರ್ವಹಣೆ ವೀಕ್ಷಿಸಬೇಕು. ವಿದ್ಯಾರ್ಥಿಗಳು ಗೈರು ಹಾಜರಾಗಿದ್ದಲ್ಲಿ ಪೋಷಕರ ಗಮನಕ್ಕೆ ತನ್ನಿ ಎಂದರು.


ಜಿಪಂ ಸಿಇಓ ಮೋನಾ ರೋತ್, ಎಸ್ಪಿ ಎಂ.ಮುತ್ತುರಾಜ್, ಎಡಿಸಿ ಟಿ.ಜವರೇಗೌಡ, ಎಸಿ ದಿನೇಶ್ ಕುಮಾರ್ ಮೀನಾ, ಅರಣ್ಯ ಇಲಾಖೆ ಅಧಿಕಾರಿಗಳಾದ ಶ್ರೀಪತಿ, ಭಾಸ್ಕರ್, ಸಿಮ್ಸ್ ನಿರ್ದೇಶಕರು ಹಾಗೂ ಡೀನ್ ಡಾ.ಮಂಜುನಾಥ್, ಜಿಲ್ಲಾ ಆರೋಗ್ಯಾಧಿಕಾರಿ ಡಾ.ಎಸ್.ಚಿದಂಬರ, ಶಾಲಾ ಶಿಕ್ಷಣ ಇಲಾಖೆ ಚಂದ್ರ ಪಾಟೀಲ್, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕಿ ಸುಧಾ, ಸುಷ್ಮಾ, ಇತರರಿದ್ದರು.

ಉತ್ತಮ ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಸನ್ಮಾನ



ಬೇಗೂರು ಸಮೀಪದ ತೆರಕಣಾಂಬಿ ಮೊರಾರ್ಜಿ ದೇಸಾಯಿ ವಸತಿ ವಿಜ್ಞಾನ ಕಾಲೇಜಿನಲ್ಲಿ ಪ್ರಥಮ ಪಿಯುಸಿಯಲ್ಲಿ ಉತ್ತಮ ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಶ್ರೀಮಲೆ ಮಹದೇಶ್ವರ ಪ್ರೇರಣಾ ಫೌಂಡೇಶನ್ ಟ್ರಸ್ಟ್‌ನಿಂದ ಸನ್ಮಾನಿಸಲಾಯಿತು. ಟ್ರಸ್ಟ್ ಸಂಸ್ಥಾಪಕ ಕಾರ್ಯದರ್ಶಿ ಎನ್.ಎಸ್.ಮಂಜುನಾಥ್ ಪ್ರಸಾದ್ ನಿತ್ರೆ ವಿದ್ಯಾರ್ಥಿಗಳಾದ ದ್ರಾಕ್ಷಾಯಿಣಿ, ನಾಗಲಾಂಬಿಕ, ಅಜಿತ್, ಪ್ರಾಂಶುಪಾಲ ಮಹದೇವ ಪ್ರಸಾದ್ ಸೇರಿದಂತೆ ಉಪನ್ಯಾಸಕರಿದ್ದರು.

■ ಸತ್ಯಮೂರ್ತಿ ತೋಳಹುಣಸೆ



ಕಾಮಿಡಿ ರಾಜಾಸಾಬ್

ಪ್ರಭಾಸ್ ಅಭಿನಯದ ಬಹುನಿರೀಕ್ಷಿತ ಚಿತ್ರ 'ರಾಜಾ ಸಾಬ್' ಜ. 9ರಂದು ತೆರೆಗೆ ಬರುತ್ತಿದೆ. ಕರ್ನಾಟಕದಲ್ಲಿ ಈ ಚಿತ್ರದ ವಿತರಣಾ ಹಕ್ಕನ್ನು ಹೊಂಬಾಳೆ ಫಿಲಂಸ್ ಪಡೆದುಕೊಂಡಿದೆ. ಮಾರುತಿ ನಿರ್ದೇಶನದಲ್ಲಿ ಮೂಡಿಬಂದಿರುವ ಈ ಚಿತ್ರದಲ್ಲಿ, ಪ್ರಭಾಸ್ ಅವರು ಹೊಸದೊಂದು ಅವತಾರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. ತೆಲುಗು, ಕನ್ನಡ ಸೇರಿದಂತೆ ಹಲವಾರು ಭಾಷೆಗಳಲ್ಲಿ ಈ ಚಿತ್ರ ತೆರೆಕಾಣುತ್ತಿದೆ.

ಇದೊಂದು ಪಕ್ಕಾ ಕಮರ್ಷಿಯಲ್ ಹಾಗೂ ಹಾರರ್, ಕಾಮಿಡಿ ಎಂಟರ್‌ಟೈನರ್ ಚಲನಚಿತ್ರವಾಗಿದ್ದು, ಮನರಂಜನೆಯ ಜತೆಗೆ ಭಾವನಾತ್ಮಕ, ಹಾರರ್ ಹಾಗೂ ಮಾಸ್ ಎಲಿಮೆಂಟ್‌ಗಳನ್ನು ಒಳಗೊಂಡಿದೆ. ಕರ್ನಾಟಕದಾದ್ಯಂತ ಸುಮಾರು 300ಕ್ಕೂ ಹೆಚ್ಚು ಚಿತ್ರಮಂದಿರಗಳಲ್ಲಿ ಈ ಚಿತ್ರ ಬಿಡುಗಡೆಯಾಗುತ್ತಿದೆ.

ಪ್ರಭಾಸ್ ಜೊತೆ ಮಾಳವಿಕಾ ಮೋಹನನ್, ನಿಧಿ ಅಗರ್ವಾಲ್ ಮತ್ತು ರಿದ್ಧಿ ಕುಮಾರ್ ನಾಯಕಿಯರಾಗಿ, ಹಿರಿಯ ನಟಿ ಜರೀನಾ ವಹಾಬ್ ಅಜ್ಜಿಯಾಗಿ ಕಾಣಿಸಿಕೊಂಡಿದ್ದಾರೆ. ಸಂಜಯ್ ದತ್ ಮತ್ತು ಬೋಮನ್ ಇರಾನಿ ಪ್ರಮುಖ ಪಾತ್ರಗಳಲ್ಲಿದ್ದಾರೆ. ಥಮನ್ ಅವರ ಸಂಗೀತ ಮತ್ತು ಕಾರ್ತಿಕ್ ಪಳನಿ ಛಾಯಾಗ್ರಹಣ ಈ ಚಿತ್ರಕ್ಕಿದೆ. ಪೀಪಲ್ ಮೀಡಿಯಾ ಫ್ಯಾಕ್ಟರಿಯ ಬ್ಯಾನರ್ ಅಡಿ ಟಿ.ಜಿ. ವಿಶ್ವ ಪ್ರಸಾದ್ ಅವರು ಈ ಚಿತ್ರವನ್ನು ನಿರ್ಮಿಸಿದ್ದಾರೆ.



'ಸೀತಾ ಪಯಣ' ಚಿತ್ರದಲ್ಲಿ ಅಸಲಿ ಸಿನಿಮಾ ಹಾಡು

ನಟ, ನಿರ್ಮಾಪಕ ಅರ್ಜುನ್ ಸರ್ಜಾ ಅವರ ನಿರ್ದೇಶನದ ಬಹುನಿರೀಕ್ಷಿತ ಚಿತ್ರ ಸೀತಾ ಪಯಣ. ಶ್ರೀ ರಾಮ್ ಫಿಲಂಸ್ ಬ್ಯಾನರ್ ಅಡಿಯಲ್ಲಿ ನಿರ್ಮಾಣವಾಗುತ್ತಿರುವ ಈ ಚಿತ್ರದ ಅಸಲು ಸಿನಿಮಾ.. ಹಾಡು ಬಿಡುಗಡೆಯಾಗಿದ್ದು ಸೋಷಿಯಲ್ ಮೀಡಿಯಾದಲ್ಲಿ ಸಖತ್ ಸದ್ದು ಮಾಡುತ್ತಿದೆ. ಭರತ್ ಜನನಿ ಈ ಹಾಡಿಗೆ ಸಾಹಿತ್ಯ ಬರೆದಿದ್ದು, ಗಾಯಕಿ ಅನುರಾಧಾ ಭಟ್ ಹಾಡಿದ್ದಾರೆ. ಅನೂಪ್ ರೂಬೆನ್ಸ್ ಅವರ ಪೆಪ್ಪಿ ಟ್ಯೂನ್‌ಗಳು ಈ ಹಾಡಿನ ಮೆರುಗನ್ನು ಹೆಚ್ಚಿಸಿವೆ.

ಅರ್ಜುನ್ ಸರ್ಜಾ ಅವರ ಪುತ್ರಿ ಐಶ್ವರ್ಯ ಅರ್ಜುನ್ ಚಿತ್ರದ ನಾಯಕಿಯಾಗಿದ್ದು, ನಿರಂಜನ್ ನಾಯಕನಾಗಿ ನಟಿಸಿದ್ದಾರೆ. ಪೋಷಕ ಪಾತ್ರಗಳಲ್ಲಿ ಸತ್ಯರಾಜ್, ಪ್ರಕಾಶ್ ರೈ ಮತ್ತು ಕೋವೈ ಸರಳಾ ಕಾಣಿಸಿಕೊಂಡಿದ್ದಾರೆ. ಅರ್ಜುನ್ ಸರ್ಜಾಅವರು ವಿಶಿಷ್ಟ ಪಾತ್ರದಲ್ಲಿ ಕಾಣಿಸಿಕೊಂಡರೆ, ಅವರ ಸೋದರಳಿಯ ಧ್ರುವ ಸರ್ಜಾ ಕೂಡ ಪ್ರಮುಖ ಪಾತ್ರವೊಂದಕ್ಕೆ ಬಣ್ಣ ಹಚ್ಚಿದ್ದಾರೆ.

ಸೀತಾ ಪಯಣ ಚಿತ್ರವು ಪ್ರೇಮಿಗಳ ದಿನದ ಅಂಗವಾಗಿ ಫೆ. 14ರಂದು ತೆರೆಕಾಣಲಿದೆ. ಕನ್ನಡ ಸೇರಿದಂತೆ ತೆಲುಗು, ತಮಿಳು, ಮಲಯಾಳಂ ಮತ್ತು ಹಿಂದಿ ಭಾಷೆಗಳಲ್ಲಿ ಪ್ಯಾನ್ ಇಂಡಿಯಾ ಮಟ್ಟದಲ್ಲಿ ಈ ಸಿನಿಮಾ ಬಿಡುಗಡೆಯಾಗುತ್ತಿದೆ.

ಕಥೆ-ಚಿತ್ರಕಥೆ ಬರೆದು ನಿರ್ಮಾಣ ಮತ್ತು ನಿರ್ದೇಶನದ ಜವಾಬ್ದಾರಿಯನ್ನು ಅರ್ಜುನ್ ಸರ್ಜಾ ಅವರೇ ನಿಭಾಯಿಸಿದ್ದಾರೆ.

ಅನೂಪ್ ರೂಬೆನ್ಸ್ ಅವರ ಸಂಗೀತ, ಜಿ. ಬಾಲಮುರುಗನ್ ಅವರ ಛಾಯಾಗ್ರಹಣ, ಅಯೂಬ್ ಖಾನ್ ಅವರ ಸಂಕಲನ ಈ ಚಿತ್ರಕ್ಕಿದೆ.





'ರಾಂಗ್ ವರ್ಡ್ಸ್' ವೀಡಿಯೊ ಹಾಡು ಬಿಡುಗಡೆ



ಸರ್ಕಾರ ಹೊರತರುತ್ತಿರುವ ಹೊಸ ಮಸೂದೆಯ ಕುರಿತು ಅರಿವು ಮೂಡಿಸುವ 'ರಾಂಗ್ ವರ್ಡ್ಸ್' ವೀಡಿಯೊ ಹಾಡೊಂದನ್ನು ನಹೇಶ್ ಪೂಲ್ ಅವರು ಹೊರ ತಂದಿದ್ದಾರೆ. ರ್‍ಯಾಡಿಕಲ್ ಕಾನ್ಸೆಪ್ಟ್ ಸ್ಟುಡಿಯೋ ಈ ಹಾಡಿನ ನಿರ್ಮಾಣದ ಜವಬ್ದಾರಿ ಹೊತ್ತುಕೊಂಡಿದೆ.


ಇತ್ತೀಚೆಗೆ ಈ ಹಾಡಿನ ಬಿಡುಗಡೆ ಕಾರ್ಯಕ್ರಮ ನಡೆಯಿತು. ಬೆಂಗಳೂರು ಮೂಲದ ಯುವ ಪ್ರತಿಭೆ ನಹೇಶ್ ಪೂಲ್ ವೃತ್ತಿಯಲ್ಲಿ ಆಟೋಮೊಬೈಲ್ ಇಂಜಿನಿಯರ್. ಪ್ರವೃತ್ತಿ ಫಿಲಂ ಮೇಕರ್. ಈ ಗೀತೆಗೆ ಸಾಹಿತ್ಯ ರಚಿಸಿ, ಸಂಗೀತ, ನಿರ್ದೇಶನ ಜತೆಗೆ ಐದು ನಿಮಿಷದ ಹಾಡಿನಲ್ಲಿ ಅವರೇ ಅಭಿನಯಿಸಿದ್ದಾರೆ ಕೂಡ.



ಈ ಸಂದರ್ಭದಲ್ಲಿ ಮಾತನಾಡಿದ ನಹೇಶ್ ಪೂಲ್, ಕಳೆದ ತಿಂಗಳು ದ್ವೇಷ ಭಾಷಣ ಮತ್ತು ದ್ವೇಷ ಅಪರಾಧ ಅಥವಾ ಸಮುದಾಯದ ವಿರುದ್ಧ ಯಾವುದೇ ವ್ಯಕ್ತಿ ಮಾತನಾಡುವುದನ್ನು ಅಪರಾಧ ಎಂದು ಪರಿಗಣಿಸಿ, ದಂಡ ಹಾಗೂ ಜೈಲು ಶಿಕ್ಷೆ ವಿಧಿಸಲಾಗುವುದು ಎಂಬ ಮಸೂದೆಯನ್ನು ನಮ್ಮ ಸರ್ಕಾರ ಹೊರಡಿಸಿದೆ. ಆದರೆ ಈವರೆಗೂ ರಾಜ್ಯಪಾಲರಿಂದ ಇದಕ್ಕೆ ಹಸಿರು ನಿಶಾನೆ ಸಿಕ್ಕಿಲ್ಲ. ಇಂತಹ ಮಸೂದೆಯ ಬಗ್ಗೆ ಸಾರ್ವಜನಿಕರಿಗೆ ಮಾಹಿತಿಯಿಲ್ಲ. ನಾನು ನಮ್ಮ ಹಾಡಿನ ಮೂಲಕ ಅಂಥಾ ಅರಿವು ಮೂಡಿಸುವ ಪ್ರಯತ್ನ ಮಾಡಿದ್ದೇನೆ. ನಾನು ತಪ್ಪಾದ ಪದಗಳನ್ನು ಬಳಸಲು ಸಾಧ್ಯವಿಲ್ಲ. ಅವುಗಳನ್ನು ಬಳಸಿದರೆ ನನ್ನನ್ನು ಬಂಧಿಸುತ್ತಾರೆ. ನನಗೆ ಬೇರೆ ಯಾವುದೇ ಪದಗಳಿಲ್ಲ. ಜತೆಗೆ ನಾವು ಜನರಿಗೆ ಮರಳಿ ಕೊಡುವಂತಹ ಒಂದು ಮಾದರಿ ರಸ್ತೆಯನ್ನು ನಿರ್ಮಿಸಲು ಪ್ರಯತ್ನಿಸುತ್ತಿದ್ದೇವೆ. ವಿಧಾನಸೌಧ'ದ ಮೆಟ್ಟಿಲುಗಳ ಬಳಿಯಿಂದ ಪ್ರತಿಯೊಂದು ಹಂತವನ್ನು ನೇರವಾಗಿ ತೋರಿಸಿ, ಪಾರದರ್ಶಕತೆಯೊಂದಿಗೆ ರಸ್ತೆ ನಿರ್ಮಿಸುವುದು ನನ್ನ ಗುರಿ. ವಿಧಾನಸೌಧದ ಮುಂಬಾಗದಲ್ಲಿ ಈ ಹಾಡಿಗೆ ಚಿತ್ರೀಕರಣ ನಡೆಸಲಾಗಿದೆ ಎಂದು ಮಾಹಿತಿ ಹಂಚಿಕೊಂಡರು.

ಕ್ರಿಯೇಟಿವ್ ಮುಖ್ಯಸ್ಥೆಯಾಗಿ ಅಕ್ಷರಾ ಸುರೇಶ್, ಛಾಯಾಗ್ರಹಣ, ಸಂಕಲನದ ಜವಾಬ್ದಾರಿಯನ್ನು ಸಾಗರ್ ನಿಭಾಯಿಸಿದ್ದಾರೆ.

ಸಿನಿಪದಬಂಧ-610



ಉಮ್ಮತ್ತೂರು ಇಂದುಶೇಖರ್
ಮೊ.9880820462



ಹೆಸರು ______

ವಿಳಾಸ ______

ದೂರವಾಣಿ ಸಂಖ್ಯೆ ______

ಎಡದಿಂದ ಬಲಕ್ಕೆ

1. ಹಂಶಿ ನಿರ್ದೇಶನದಲ್ಲಿನ 'ಸುಧೆ'ಯ 'ಹನಿ' 5
6. ಶಿವಣ್ಣ, ಸುಧಾರಾಣಿ ಅಭಿನಯದಿ "ಉರಿದ ಹಣತೆ" 5
7. ಮದುವೆಯ ಆಮಂತ್ರಣ ತೆರೆಯ ಮೇಲೂ ಅಚ್ಚಾಗಿದೆ 5
9. ಶಂಕರ್ ನಾಗ್ ಸೋಲದ ಪುತ್ರ 4
10. ಚಾಲೆಂಜಿಂಗ್ ಸ್ಟಾರ್ ದರ್ಶನ್ ಸುರಪತಿಯ ವಾಹನ ಏರಿದ್ದಾನೆ 4
14. ಪ್ರೀತಿಯೊಂದಿಗಿನ ಹಾಡಿನ ಆರಂಭ 5
15. ಸೂಪರ್ ಚಿತ್ರದ ನಾಯಕಿ 5
16. ದೇವರಾಜ್ ಬರೆದ ಕೊಲೆಗಾರನ ದಿನಚರಿ 5

ಮೇಲಿನಿಂದ ಕೆಳಕ್ಕೆ

1. ಪದ್ಮಾ ವಾಸಂತಿ, ಶ್ರೀಧರ್, ರಾಮಕೃಷ್ಣ ಅಭಿನಯದ ಸುಂದರ ಕ್ಷಣ 6
2. ಸಾಯಿಕುಮಾರ್ ಕಲ್ಲಿನ ಕೋಟೆಯ ವ್ಯಾಘ್ರ 5
3. ಶಂಕರ್ ನಾಗ್ ಇಟ್ಟ 'ರುಧಿರ'ದ 'ಬೊಟ್ಟು' 5
4. ಶ್ರೀನಿವಾಸ ಮೂರ್ತಿ – ರೂಪಾದೇವಿಯ ಬದುಕಿನಲ್ಲಿ ಚಲಿಸದ ನಾವೆ 4
5. ಲಯನ್ _ _ _ _ _ _ 6
8. '_ _ _ _ _ _ ಬಂತು ಮದುವೆಗೆ ಸಿಗ್ನಲ್ ತಂತು ಓ ಚಿನ್ನಾ....', 6
11. ಶಿವಣ್ಣನ ಅಭಿನಯದಿ ಹುಟ್ಟಿದ ಮನೆಯಲ್ಲಿನ ಸಂಪತ್ತು 6
12. ರಾಜ್ ಕುಮಾರ್ ಬಿಸಿ ಬಿಸಿ ಕಜ್ಜಾಯದ ರುಚಿ ತೋರಿಸಿದ ಚಿತ್ರ 5
13. ಸುರೇಶ್ ಹೆಬ್ಳಿಕರ್ ಅರಣ್ಯದಲ್ಲಿ ಕಿಚ್ಚು ಹಚ್ಚಿದೆ 5
14. ರವಿಚಂದ್ರನ್ ರಾಮಾಚಾರಿಯಾದರೆ ಬಿ.ಸಿ. ಪಾಟೀಲ್ !? 4

ಸಿನಿ ಪದಬಂಧ 609ರ ಉತ್ತರ

ತುಂ	ಗ	ಭ	ದ್ರ		ಲೋ	ಕ	ನಾ	ಥ್		ಭೈ
ಬಿ		ದ್ರ				ವ				ರ
ದ			ಮಾ		ಮಾ	ನ	ವ	ದಾ	ನ	ವ
ಮ	ನ	ಸಿ	ನ	ಮಾ	ತು			ದಾ		
ನೆ			ಸ		ತ		ಹೊಂ	ಗಿ	ರ	ಣ
		ಮಂ			ಪ್ಪ			ರಿ		
ಕು	ಳ್ಳ	ಕು	ಳ್ಳಿ		ದ		ಪ			ಕಾ
		ತಿ			ಮ	ರೆ	ಯ	ದ	ಹಾ	ಡು
ಜ	ಯ	ಮ್ಮ	ನ	ಮ	ಗ		ಣ			ಕು
ಲಿ				ಘು				ಲ		ದು
ಲ್		ಮ	ಣಿ	ರ	ತ್ನಂ		ನ	ವ	ತಾ	ರೆ

ವಿಜೇತರು: ಬಾಲರಾಜ್, ನಂ.6, ಗೋಕುಲಂ 3ನೇ ಹಂತ, ಮೈಸೂರು

ವಿಳಾಸ: 'ಸಿನಿಬಂಧ' ವಿಭಾಗ, 'ಮೈಸೂರು ಮಿತ್ರ' ದಿನಪತ್ರಿಕೆ, ಬನ್ನಿಮಂಟಪ, ಮೈಸೂರು-570 015

ಹೆಣ್ಣಿನ ಮೇಲೆ ದೌರ್ಜನ್ಯಕ್ಕೆ 'ಮಾಜರ್'ನಲ್ಲಿದೆ ಉತ್ತರ...!

ಸಂಗೀತ ಸಿನಿ ಹೌಸ್ ಲಾಂಛನದಲ್ಲಿ ಡಾ||ಮುರುಗನಂದನ್ ಎಮ್(ಪುಲಿಮುರುಗನ್) ಅವರು ನಿರ್ಮಿಸಿರುವ, ಲೋಕಲ್ ಲೋಕಿ ಅವರ ಕಥೆ-ಚಿತ್ರಕಥೆ ಹಾಗೂ ನಿರ್ದೇಶನದ ಮಹಿಳಾ ಪ್ರಧಾನ ಚಿತ್ರ "ಮಾಜರ್". ಶ್ರೀಹಾನ್, ಸಂಭ್ರಮಶ್ರೀ ಚಿತ್ರದ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ. ಇತ್ತೀಚೆಗೆ ಈ ಚಿತ್ರದ ಟ್ರೇಲರ್ ಬಿಡುಗಡೆ ಕಾರ್ಯಕ್ರಮ ನಡೆಯಿತು.

ವೇದಿಕೆಯಲ್ಲಿ ನಿರ್ದೇಶಕ ಲೋಕಲ್ ಲೋಕಿ ಮಾತನಾಡುತ್ತ ದೇಶದಲ್ಲಿ ನಾನು ಕೇಳಿರುವ ನಿರ್ಭಯ ಹತ್ಯೆ ಪ್ರಕರಣದಂಥ ದುರಂತಗಳೇ ಈ ಕಥೆ ಬರೆಯಲು ಮುಖ್ಯ ಪ್ರೇರಣೆ. ಇಂಥ ಕೃತ್ಯಗಳನ್ನು ಪ್ರತಿಯೊಬ್ಬರು ಖಂಡಿಸಬೇಕು. ನೊಂದ ಹೆಣ್ಣು ಮಕ್ಕಳಿಗೆ ನ್ಯಾಯ ಸಿಗಬೇಕು ಎನ್ನುವುದೇ 'ಮಾಜರ್' ಚಿತ್ರದ ಮುಖ್ಯ ಉದ್ದೇಶ. ನಾನು ನಿರ್ದೇಶನದ ಜೊತೆಗೆ ಪ್ರಮುಖ ಪಾತ್ರದಲ್ಲಿ ಅಭಿನಯಿಸಿದ್ದೇನೆ. ಮುರುಗನಂದನ್ ಅವರು ಜನರಿಗೆ ಮೆಸೇಜ್ ಕೊಡಬೇಕೆಂಬ ಉದ್ದೇಶದಿಂದ ಈ ಚಿತ್ರ ನಿರ್ಮಿಸಿದ್ದಾರೆ. ಜ. 15 ರ ಸಂಕ್ರಾಂತಿಗೆ ಚಿತ್ರ ಬಿಡುಗಡೆಯಾಗಲಿದೆ ಎಂದರು.

ಉದ್ಯಮಿ ಹಾಗೂ ರಾಜಕಾರಣಿಯೂ ಆದ ನಿರ್ಮಾಪಕ ಮುರುಗನಂದನ್ ಮಾತನಾಡುತ್ತ ಏನಾದರೂ ಸಂದೇಶ ಇರುವ ಚಿತ್ರ ಮಾಡಬೇಕೆನ್ನುವುದು ನನಗೆ ಮೊದಲಿನಿಂದಲೂ ಇದ್ದ ಆಸೆ. ಅದು ಈ ಚಿತ್ರದ ಮೂಲಕ ಈಡೇರಿದೆ ಎಂದರು.

ಎ.ಟಿ. ರವೀಶ್ ಅವರ ಸಂಗೀತ ನಿರ್ದೇಶನ, ರಾಜೇಶ್ ರಾಮನಾಥ್ ಅವರ ಹಿನ್ನೆಲೆ ಸಂಗೀತ ಹಾಗೂ ಗಗನ್ ಗೌಡ, ವಿನಯ್ ಗೌಡ, ಜಗನ್ ಬಾಬು ಅವರ ಛಾಯಾಗ್ರಹಣ 'ಮಾಜರ್' ಚಿತ್ರಕ್ಕಿದೆ. ಶ್ರೀಹಾನ್, ದೀಪಕ್, ಉಗ್ರಂ ರವಿ, ಸಂಭ್ರಮಶ್ರೀ, ರಾಜು, ರಂಜನ್, ಅಜಯ್ ಶರ್ಮ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ.



ಸೈಕಾಲಜಿಕಲ್ ಥ್ರಿಲ್ಲರ್ 'ವಿಕಲ್ಪ'

ಬಹುತೇಕ ಹೊಸ ಪ್ರತಿಭೆಗಳೇ ಸೇರಿ ನಿರ್ಮಿಸುತ್ತಿರುವ ಚಿತ್ರ ವಿಕಲ್ಪ. ಸೈಕಾಲಜಿಕಲ್-ಥ್ರಿಲ್ಲರ್ ಕಥಾಹಂದರ ಇರುವ ಈ ಚಿತ್ರದ ಮೂಲಕ ಮನುಷ್ಯನ ಮನಸ್ಸಿನ ಸುಪ್ತ ಭಾವನೆಗಳು, ತುಮುಲ-ತಲ್ಲಣಗಳ ಮೂಲಕ ತೆರೆಮೇಲೆ ತರುತ್ತಿದ್ದಾರೆ ಯುವನಟ ಕಂ ನಿರ್ದೇಶಕ ಪೃಥ್ವಿರಾಜ್ ಪಾಟೀಲ್. ಕನ್ನಡ ಚಿತ್ರರಂಗದಲ್ಲಿ ಸೈಕಾಲಜಿಕಲ್ ಥ್ರಿಲ್ಲರ್ ಸಿನಿಮಾಗಳ ಸಂಖ್ಯೆ ಬೆರಳೆಣಿಕೆಯಷ್ಟು ಮಾತ್ರ, ಅಂಥ ಸಿನಿಮಾ ಗಳ ಸಾಲಿಗೆ ಸೇರುವ ಮತ್ತೊಂದು ಚಿತ್ರವಿದು.

'ವಿಕಲ್ಪ' ಎಂದರೆ ವಾಸ್ತವ ಮತ್ತು ಕಲ್ಪನೆಗಳ ನಡುವಿನ ಒಂದು ಸ್ಥಿತಿ ಎಂದರ್ಥ. ಇದೊಂದು ಮಾನಸಿಕ ಆರೋಗ್ಯಕ್ಕೆ ಸಂಬಂಧಿಸಿದ ಕಥೆ ಎಂದೆನಿಸಿದರೂ, ಸಂಪೂರ್ಣ ಥ್ರಿಲ್ಲರ್ ಚಿತ್ರ ಎನ್ನುವುದು ವಿಶೇಷ. ಸೈಕಾಲಜಿಕಲ್-ಥ್ರಿಲ್ಲರ್ ಜೊತೆಗೆ ನವಿರಾದ ಹಾಸ್ಯ ಮತ್ತು ಮನೋರಂಜನೆಗೆ ಹೆಚ್ಚಿನ ಒತ್ತನ್ನು ಕೊಟ್ಟು ಇಡೀ ಚಿತ್ರದ ಕಥೆಯನ್ನು ಹೆಣೆಯಲಾಗಿದೆ. ಈ ಚಿತ್ರಕ್ಕೆ ಚಿತ್ರದ ಕಥೆಯೆ ಹೀರೋ. ಇಲ್ಲಿ ಪ್ರತಿ ಪಾತ್ರಗಳೂ ಮಾತನಾಡುತ್ತವೆ. ಪ್ರತಿ ಪಾತ್ರಗಳೂ ನೋಡುಗರ ಮನಮುಟ್ಟುತ್ತವೆ ಎಂದು ಹೇಳುತ್ತಾರೆ ನಿರ್ದೇಶಕ ಪೃಥ್ವಿರಾಜ್ ಪಾಟೀಲ್.

ಎರಡು ದಶಕಗಳಿಗೂ ಹೆಚ್ಚಿನ ಕಾಲ ಹವ್ಯಾಸಿ ರಂಗ ಭೂಮಿಯಲ್ಲಿ ಕಲಿತಿರುವ, ಬಹುರಾಷ್ಟ್ರೀಯ ಐಟಿ ಕಂಪನಿಯ ವ್ಯವಸ್ಥಾಪಕ ನಿರ್ದೇಶಕರಾಗಿರುವ ಪೃಥ್ವಿರಾಜ್ ಪಾಟೀಲ್, ತಮ್ಮ ಪರಿಕಲ್ಪನೆಯನ್ನು ವಿಕಲ್ಪ ಚಿತ್ರದ ಮೂಲಕ ಹೇಳಹೊರಟಿದ್ದಾರೆ. ಸುರೂಸ್ ಟಾಕೀಸ್‌ಅಡಿ ಶ್ರೀಮತಿ ಇಂದಿರಾ ಶಿವಸ್ವಾಮಿ



ಅವರ ನಿರ್ಮಾಣದ ಚೊಚ್ಚಲ ಚಿತ್ರ ಇದಾಗಿದೆ, ನಿರ್ದೇಶಕ ಪೃಥ್ವಿರಾಜ್ ಪಾಟೀಲ್ ಅವರೇ ಚಿತ್ರದ ನಾಯಕನಾಗಿ ಕಾಣಿಸಿಕೊಳ್ಳುತ್ತಿದ್ದಾರೆ.

'ವಿಕಲ್ಪ' ಚಿತ್ರದ ಮತ್ತೊಂದು ವಿಶೇಷತೆ ಯೆಂದರೆ, ನುರಿತ ಮಾನಸಿಕ ವೈದ್ಯರ ಸಲಹೆಯ ಮೇರೆಗೆ ಈ ಚಿತ್ರದ ಹಲವು ಸನ್ನಿವೇಶಗಳನ್ನು ಚಿತ್ರಿಸಲಾಗಿರುವುದು. ದೃಶ್ಯಗಳು ಸಹಜತೆಗೆ ಹತ್ತಿರವಾಗಿರಬೇಕು ಎಂಬ ಆಶಯದಿಂದ ಚಿತ್ರತಂಡ ಇಂಥದ್ದೊಂದು ಕೆಲಸ ಮಾಡಿದೆ. ಬೆಂಗಳೂರು, ತೀರ್ಥಹಳ್ಳಿ, ಸಾಗರ, ಶಿರಸಿ, ಕುಂದಾಪುರ, ಯಲ್ಲಾಪುರ ಸುತ್ತಮುತ್ತ ಬಹುತೇಕ ಚಿತ್ರೀಕರಣ ನಡೆಸಲಾಗಿದ್ದು, ಸಿಂಗಾಪುರ್, ನೆದರ್‌ಲ್ಯಾಂಡ್‌ನಲ್ಲೂ ಚಿತ್ರೀಕರಿಸಗಿದೆ. ಪೃಥ್ವಿರಾಜ್ ಪಾಟೀಲ್, ನಾಗಶ್ರೀ ಹೆಬ್ಬಾರ್, ಸಂಧ್ಯಾ ವಿನಾಯಕ್, ಗಣಪತಿ ವಡ್ಡಿನಗದ್ದೆ, ಸ್ವರೂಪ್ ಬಚ್ಚ್, ಪೂಜಾ ಬಚ್ಚ್, ಜಯಂತ್ ಡೇವಿಡ್, ಡಾ. ಪ್ರಕೃತಿ, ಮಾಸ್ಟರ್ ಆಯುಷ್ ಸಂತೋಷ್ ಚಿತ್ರದ ಪ್ರಮುಖ ಪಾತ್ರಗಳಲ್ಲಿದ್ದಾರೆ.

ಅನ್ನ ಕೊಡುವ ರೈತನಿಗೆ ಸೌಲಭ್ಯ ಕೊಡದೆ ಸರ್ಕಾರದಿಂದ ವಂಚನೆ

ಕೆ.ಆರ್.ನಗರದ ರೈತ ದಿನಾಚರಣೆ, ಕಿಸಾನ್ ಗೋಷ್ಠಿಯಲ್ಲಿ ಎಂಎಲ್‌ಸಿ ಮಂಜೇಗೌಡ ವಿಷಾದ


ಕೆ.ಆರ್.ನಗರದಲ್ಲಿ ತಾಲೂಕು ರೈತ ವೇದಿಕೆ ವತಿಯಿಂದ ಆಯೋಜಿಸಿದ್ದ ರಾಷ್ಟ್ರೀಯ ರೈತ ದಿನಾಚರಣೆ ಮತ್ತು ತಾಲೂಕು ಮಟ್ಟದ ಕಿಸಾನ್ ಗೋಷ್ಠಿ ಕಾರ್ಯಕ್ರಮದಲ್ಲಿ ಪ್ರಗತಿಪರ ರೈತರನ್ನು ಸನ್ಮಾನಿಸಿ, ಗೌರವಿಸಲಾಯಿತು.

ಕೆ.ಆರ್.ನಗರ, ಜ.8– ಅನ್ನ ಕೊಡುವ ರೈತನಿಗೆ ಸರ್ಕಾರ ಸೌಲಭ್ಯಗಳನ್ನು ಕೊಡದೆ ವಂಚಿಸುತ್ತಿದೆ. ಚುನಾವಣೆ ಸಂದರ್ಭದಲ್ಲಿ ಮಾತ್ರ ಭರವಸೆಗಳನ್ನು ನೀಡಿ ಆ ನಂತರ ಕೊಟ್ಟ ಮಾತನ್ನು ಮರೆಯುತ್ತವೆ ಎಂದು ವಿಧಾನಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ ವಿಷಾದ ವ್ಯಕ್ತಪಡಿಸಿದರು.

ಪಟ್ಟಣದ ಹೆಚ್.ಡಿ.ದೇವೇಗೌಡ ಸಮುದಾಯ ಭವನದಲ್ಲಿ ಗುರುವಾರ ತಾಲೂಕು ರೈತ ವೇದಿಕೆ ವತಿಯಿಂದ ಆಯೋಜಿಸಿದ್ದ ರಾಷ್ಟ್ರೀಯ ರೈತ ದಿನಾಚರಣೆ ಮತ್ತು ತಾಲೂಕು ಮಟ್ಟದ ಕಿಸಾನ್ ಗೋಷ್ಠಿ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಅವರು ಎಲ್ಲಾ ದಿನಾಚರಣೆಗಳನ್ನು ಮಾಡುವ ಸರ್ಕಾರ ರೈತ ದಿನಾಚರಣೆಯನ್ನು ಮಾಡಲು ಮನಸ್ಸಿಲ್ಲ. ನಾನು ಸರ್ಕಾರವೇ ರೈತ ದಿನಾಚರಣೆಯನ್ನು ಆಚರಿಸುವಂತೆ ಹಾಗೂ ಚುಂಚನಕಟ್ಟೆ ಶ್ರೀರಾಮ ಸಕ್ಕರೆ ಕಾರ್ಖಾನೆಯನ್ನು ಪುನರಾರಂಭಿಸುವ ಬಗ್ಗೆ ಮುಖ್ಯಮಂತ್ರಿಗಳಿಗೆ ಪತ್ರ ಬರೆಯುವ ಜತೆಗೆ ಸದನದಲ್ಲಿ ಚರ್ಚಿಸುತ್ತೇನೆ ಎಂದರು.

ಈ ಹಿಂದೆ ಪೊಲೀಸರಿಗೆ ಇದ್ದ ಹಳೆ ಪದ್ಧತಿಯ ಟೋಪಿಯಿಂದ ನೂತನ ಟೋಪಿ ಕೊಡುವಂತೆ ವಿಧಾನಪರಿಷತ್‌ನಲ್ಲಿ ಒತ್ತಾಯಿಸಿದ್ದು ನಾನೇ. ಇಂದು ಆ ಕೆಲಸ ಆಗಿದೆ. ಅದೇ ರೀತಿ ಇದನ್ನು ಸದನದಲ್ಲಿ ಚರ್ಚಿಸಿ ಮಾಡಿಸುತ್ತೇನೆ ಎಂದು ಭರವಸೆ ನೀಡಿದರು.

ಕರ್ನಾಟಕ ರಾಜ್ಯ ರೈತ ಸಂಘಟನೆಯ ರಾಜ್ಯಾಧ್ಯಕ್ಷ ಇಂಗಲಕುಪ್ಪೆ ಕೃಷ್ಣೇಗೌಡ ಮಾತನಾಡಿ ಮುಖ್ಯಮಂತ್ರಿಗಳ ತವರು ಜಿಲ್ಲೆಯಾದ ಮೈಸೂರು ಭಾಗದಲ್ಲಿ ಹುಲಿ ದಾಳಿಗಳು ಹೆಚ್ಚಾಗಿದ್ದು ರಾಷ್ಟ್ರ ಮಟ್ಟದಲ್ಲಿ ಸುದ್ದಿಯಾಗುತ್ತಿದೆ. ಇದಕ್ಕೆ ಕಾರಣ ಅರಣ್ಯ ಪ್ರದೇಶದಲ್ಲಿ ಅಕ್ರಮವಾಗಿ ರೆಸಾರ್ಟ್ ನಿರ್ಮಾಣ ಮಾಡಿರುವುದೇ ಆಗಿದ್ದು ಇಂತಹ ರೆಸಾರ್ಟ್‌ಗಳನ್ನು ಮುಚ್ಚಿಸಿದರೆ ವನ್ಯಜೀವಿಗಳು ಮತ್ತು ಮಾನವ ಸಂಘರ್ಷ ತಾನಾಗಿಯೇ ಕಡಿಮೆ ಆಗಲಿದೆ. ತಂಬಾಕಿಗೆ ಉತ್ತಮ ಬೆಲೆ ಇಲ್ಲ ಇಂತಹ ಸಂದರ್ಭದಲ್ಲಿ ರೈತರ ಬಗ್ಗೆ ಸರ್ಕಾರಕ್ಕೆ ಕಿಂಚಿತ್ತು ಗೌರವ ಇದ್ದರೆ ರೈತರ ಸಾಲ ಮನ್ನಾ ಮಾಡಿ ಎಂದು ಒತ್ತಾಯಿಸಿದರು.

ಕಾರ್ಯಕ್ರಮವನ್ನು ಕುರಿತು ಹಿರಿಯ ಪತ್ರಕರ್ತ ಎಸ್.ಟಿ.ರವಿಕುಮಾರ್, ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರರ ಸಂಘದ ಅಧ್ಯಕ್ಷ ಹಳ್ಳಿಕೆರೆ ಹುಂಡಿ ಭಾಗ್ಯರಾಜ್, ತಾಲೂಕು ಯುವ ರೈತ ವೇದಿಕೆ ಅಧ್ಯಕ್ಷ ಅರ್ಜುನಹಳ್ಳಿ ರಾಮಪ್ರಸಾದ್ ಮಾತನಾಡಿದರು. ವೇದಿಕೆಯಲ್ಲಿ ಪ್ರಗತಿಪರ ರೈತರನ್ನು ಸನ್ಮಾನಿಸಿ ಗೌರವಿಸಲಾಯಿತು.

ತಾಲೂಕು ಒಕ್ಕಲಿಗರ ಸಂಘದ ಅಧ್ಯಕ್ಷ ಶಿವರಾಮು, ಸ್ವರಾಜ್ ಇಂಡಿಯಾ ಪಕ್ಷದ ತಾಲೂಕು ಅಧ್ಯಕ್ಷ ಗರುಡಗಂಭಸ್ವಾಮಿ, ರೈತ ಮುಖಂಡ ಸಿ.ಕೆ.ರವೀಂದ್ರ, ಕರ್ನಾಟಕ ರಾಜ್ಯ ರೈತ ಪರ್ವ ಸಂಘದ ಗೌರವಾಧ್ಯಕ್ಷ ಎಂ.ಜೆ.ಕುಮಾರ್, ಯುವ ರೈತ ವೇದಿಕೆ ಕನುಗನಹಳ್ಳಿ ಗ್ರಾಮ ಘಟಕದ ಅಧ್ಯಕ್ಷ ಕೆ.ಆರ್.ಜಿತೇಂದ್ರ, ಪ್ರಗತಿಪರ ರೈತರಾದ ಕನುಗನಹಳ್ಳಿ ವಿಶ್ವನಾಥ್, ಅರುಣ್, ಜೆಡಿಎಸ್ ರೈತ ಘಟಕದ ಅಧ್ಯಕ್ಷ ಜಿ.ಪಿ.ಮಂಜು, ರೈತ ಮುಖಂಡರಾದ ಸಂಪತ್, ಚೇತನ್, ಮಂಚನಾಯಕ, ಬಾಲೂರು ನಾಗೇಂದ್ರ, ದಾಮೋಧರ್ ಸೇರಿದಂತೆ ಇನ್ನಿತರರು ಇದ್ದರು.

ಮಾಜಿ ಸಚಿವ ಸಾ.ರಾ.ಮಹೇಶ್ ನೂರಕ್ಕೆ ನೂರು ಪರ್ಸೆಂಟ್ ಚಾಮುಂಡೇಶ್ವರಿ ಜೆಡಿಎಸ್ ಅಭ್ಯರ್ಥಿ

ಕೆ.ಆರ್.ನಗರ: ನೂರಕ್ಕೆ ನೂರು ಪರ್ಸೆಂಟ್ ಮಾಜಿ ಸಚಿವ ಸಾ.ರಾ.ಮಹೇಶ್ ಅವರು ಚಾಮುಂಡೇಶ್ವರಿ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿ. ಇದನ್ನು ನಾನು ಹೇಳುತ್ತಿಲ್ಲ, ಚಾಮುಂಡೇಶ್ವರಿ ಕ್ಷೇತ್ರದ ಬಹುತೇಕ ಬಿಜೆಪಿ ಮತ್ತು ಜೆಡಿಎಸ್ ಕಾರ್ಯಕರ್ತರು, ಮತದಾರರ ಅಭಿಪ್ರಾಯವೂ ಆಗಿದೆ ಎಂದು ವಿಧಾನಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ ತಿಳಿಸಿದರು.

ಪಟ್ಟಣದ ಹೆಚ್.ಡಿ.ದೇವೇಗೌಡ ಸಮುದಾಯ ಭವನದಲ್ಲಿ ವಿಶ್ವರೈತ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಜೆಡಿಎಸ್ ಪಕ್ಷದಿಂದ ಗೆದ್ದು ಪಕ್ಷ ನಿಷ್ಠೆ ತೋರಿಸದೆ, ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಗಳ ಪರವಾಗಿ ಕೆಲಸ ಮಾಡದೇ ಬೇರೊಂದು ಪಕ್ಷದ ಅಭ್ಯರ್ಥಿಗಳ ಪರವಾಗಿ ಚುನಾವಣಾ ಪ್ರಚಾರ, ಒಳ್ಳೆಯ ಮಾತನಾಡುವುದರ ಜೊತೆಗೆ ನಮ್ಮ ಪಕ್ಷದ ನಾಯಕರ ಬಗ್ಗೆ ಹಗುರವಾಗಿ ಮಾತನಾಡುವುದು ಎಷ್ಟು ಸರಿ? ಎಂದು ಪ್ರಶ್ನಿಸಿದರು. ಚಾಮುಂಡೇಶ್ವರಿ ಕ್ಷೇತ್ರದ ಶಾಸಕ ಜಿ.ಟಿ.ದೇವೇಗೌಡರ ನಡೆಯನ್ನು ಖಂಡಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯನವರ ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ರಾಜೀನಾಮೆ ಕೇಳುವುದಿರಲಿ ಇವರೇ ಚಾಮುಂಡಿಬೆಟ್ಟದಲ್ಲಿ ನಡೆದ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಕಾರ್ಯಕ್ರಮದಲ್ಲಿ ನಮ್ಮ ನಾಯಕರಾದ ಕುಮಾರಣ್ಣ ಅವರ ರಾಜೀನಾಮೆ ಕೇಳುತ್ತಾರೆ. ಇದು ಎಷ್ಟರಮಟ್ಟಿಗೆ ಸರಿ ಎಂದು ಪ್ರಶ್ನೆ ಮಾಡಿದರು.

ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಜೆಡಿಎಸ್ ಪಕ್ಷ ಬಲವರ್ಧನೆಗೆ ನಮ್ಮ ನಾಯಕರಾದ ಮಾಜಿ ಸಚಿವ ಸಾ.ರಾ.ಮಹೇಶ್ ಅವರನ್ನು ಕಣಕ್ಕಿಳಿಸಲು ಪಕ್ಷದ ವರಿಷ್ಠರಾದ ಮಾಜಿ ಪ್ರಧಾನ ಮಂತ್ರಿ ಹೆಚ್.ಡಿ.ದೇವೇಗೌಡರು ಹಾಗೂ ಕೇಂದ್ರ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಅವರ ಜೊತೆ ಚರ್ಚಿಸಿ ತೀರ್ಮಾನಿಸಲಾಗುವುದು ಎಂದು ತಿಳಿಸಿದರು.

ಕುಂಬಾರರ ಅಭಿವೃದ್ಧಿ ನಿಗಮಕ್ಕೆ ಅನುದಾನದ ಭರವಸೆ

ಮುಖ್ಯಮಂತ್ರಿ, ಉಸ್ತುವಾರಿ ಸಚಿವರಿಗೆ ಕುಂಬಾರರ ಸಂಘದಿಂದ ಅಭಿನಂದನೆ



ತಿ.ನರಸೀಪುರ, ಜ.8– ಕುಂಬಾರರ ಅಭಿವೃದ್ಧಿ ನಿಗಮಕ್ಕೆ ಅನುದಾನ ಬಿಡುಗಡೆ ಮಾಡಿಕೊಡುವ ಭರವಸೆ ನೀಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗು ಸಮಾಜ ಕಲ್ಯಾಣ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಅವರನ್ನು ತಾಲೂಕು ಕುಲಾಲಗುಂಡ ಬ್ರಹ್ಮಾರ್ಯ ಕುಂಬಾರ ಸಂಘವು ಅಭಿನಂದಿಸುತ್ತದೆ ಎಂದು ಕುಂಬಾರ ಸಂಘದ ಸಂಸ್ಥಾಪಕ ಅಧ್ಯಕ್ಷ ಕೇತಹಳ್ಳಿ ರಾಜಣ್ಣ ಹೇಳಿದರು.

ಮೈಸೂರಿನ ಕಲಾ ಮಂದಿರದಲ್ಲಿ ಇತ್ತೀಚೆಗೆ ನಡೆದ ಜಿಲ್ಲಾ ಕುಲಾಲಗುಂಡ ಬ್ರಹ್ಮಾರ್ಯ ಸಂಘದ 75ನೇ ವರ್ಷದ ಅಮೃತ ಮಹೋತ್ಸವ ಹಾಗೂ ರಾಜ್ಯ ಮಟ್ಟದ ಕುಂಬಾರ ಸಮ್ಮೇಳನ ಯಶಸ್ವಿಯಾದ ಹಿನ್ನೆಲೆಯಲ್ಲಿ ಪತ್ರಕರ್ತರೊಂದಿಗೆ ಸಂತಸ ಹಂಚಿಕೊಂಡ ಅವರು ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವ ಮಹದೇವಪ್ಪ ಸೇರಿದಂತೆ ಸಂಪುಟದ ಮತ್ತಿತರೆ ಸಚಿವರು ಆಗಮಿಸಿ ಕುಂಬಾರ ಅಭಿವೃದ್ಧಿ ನಿಗಮಕ್ಕೆ ಹೆಚ್ಚಿನ ಅನುದಾನ ಬಿಡುಗಡೆ ಮಾಡಿಕೊಡುವ ಭರವಸೆ ನೀಡಿದ್ದು, ಈ ಭರವಸೆಯಿಂದ ಕುಂಬಾರ ಸಮುದಾಯಕ್ಕೆ ತೀವ್ರ ಸಂತಸ ಉಂಟಾಗಿದೆ ಎಂದರು.

ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಕುಂಬಾರ ಸಂಘಕ್ಕೆ ಬೆಂಗಳೂರಿನಲ್ಲಿ ನಿವೇಶನ ನೀಡಿ ಉನ್ನತ ವ್ಯಾಸಂಗ ಮಾಡಲು ತರಬೇತಿ ಕೇಂದ್ರ ಮಾಡಲು ಉದ್ದೇಶಿಸಿದ್ದು, ಇದಕ್ಕೂ ತ್ವರಿತವಾಗಿ ಅನುದಾನ ಬಿಡುಗಡೆ ಮಾಡಿ ಕೊಡುವ ಮೂಲಕ ಹಿಂದುಳಿದ ಕುಂಬಾರ ಸಮಾಜದವರ ಶೈಕ್ಷಣಿಕ ಅಭಿವೃದ್ಧಿಗೆ ಸಹಕಾರ ನೀಡುವಂತೆ ರಾಜಣ್ಣ ಮನವಿ ಮಾಡಿದರು.

ಸಿದ್ದರಾಮಯ್ಯ ಪೂರ್ಣಾವಧಿಗೆ ಮುಖ್ಯಮಂತ್ರಿ ಆಗಿ ಮುಂದುವರೆಯಲಿ


ಅಭಿಮಾನಿಗಳು ಸಿದ್ದರಾಮಯ್ಯನವರ ಕಟೌಟ್‌ಗೆ ಹಾಲಿನ ಅಭಿಷೇಕ ಮಾಡಿದರು.

ನಂಜನಗೂಡು: ಮುಖ್ಯಮಂತ್ರಿ ಸಿದ್ದರಾಮಯ್ಯರವರು ಸುಧೀರ್ಘಕಾಲ ರಾಜ್ಯದ ಮುಖ್ಯಮಂತ್ರಿಯಾಗಿ ಬಡವರ ಪರ ಅನೇಕ ಯೋಜನೆಗಳನ್ನು ಜಾರಿಗೊಳಿಸಿ ಸರ್ವ ಧರ್ಮ, ಸರ್ವ ವರ್ಗದ ನಾಯಕನಾಗಿ ರಾಜ್ಯದ ಜನರ ಮನ ಗೆದ್ದಿದ್ದಾರೆ, ರಾಜ್ಯದ ಅಭಿವೃದ್ಧಿಯ ಹಿತದೃಷ್ಟಿಯಿಂದ ಮತ್ತು ಅವರನ್ನು ಪೂರ್ಣಾವಧಿಗೆ ಮುಖ್ಯಮಂತ್ರಿಯಾಗಿ ಮುಂದುವರಿಸಬೇಕು ಎಂದು ಜಿಪಂ ಮಾಜಿ ಅಧ್ಯಕ್ಷ ಬಿ.ಎಂ.ರಾಮು ಮನವಿ ಮಾಡಿದ್ದಾರೆ.

ತಾಲೂಕಿನ ವರುಣ ಕ್ಷೇತ್ರದ ತಾಂಡವಪುರ ಗ್ರಾಮದಲ್ಲಿ ಸಿದ್ದರಾಮಯ್ಯ ಅವರು ಅತಿ ಹೆಚ್ಚು ಕಾಲ ಮುಖ್ಯಮಂತ್ರಿಯಾಗಿ ಇತಿಹಾಸ ಸೃಷ್ಟಿಸಿದ ಹಿನ್ನೆಲೆಯಲ್ಲಿ ದೇವಾಲಯದಲ್ಲಿ ಪೂಜೆ ಸಲ್ಲಿಸಿ ಸಿದ್ದರಾಮಯ್ಯರವರ ಕಟೌಟ್‌ಗೆ ಹಾಲಿನ ಅಭಿಷೇಕ ನಡೆಸಿ ಸಿಹಿ ಹಂಚಿ ಸಂಭ್ರಮಿಸಿ ಮಾತನಾಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಯಾವುದೇ ಕಪ್ಪು ಚುಕ್ಕಿಯಿಲ್ಲದೆ ರಾಜ್ಯದ ಅಭಿವೃದ್ಧಿ ಕಾರ್ಯಗಳನ್ನು ನಡೆಸುವ ಮೂಲಕ ರಾಜ್ಯದ ಜನರ ಮನಸ್ಸಿನಲ್ಲಿ ಸ್ಥಿರಸ್ಥಾಯಿಯಾಗಿ ನೆಲೆಸಿದ್ದಾರೆ, ಅಲ್ಲದೆ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ಬಡವರ ದಲಿತರ ಹಾಗೂ ಸಾಮಾಜಿಕವಾಗಿ ಹಿಂದುಳಿದವರ ಬದುಕನ್ನು ಹಸನುಗೊಳಿಸಿದ್ದಾರೆ, ಅಲ್ಲದೆ ಲಕ್ಷಾಂತರ ಬಡವರು ಬದುಕು ಕಟ್ಟಿಕೊಳ್ಳಲು ನೆರವಾಗಿದ್ದಾರೆ ಎಂದರು.

ಇದೇ ಸಂದರ್ಭದಲ್ಲಿ ಗ್ರಾಪಂ ಮಾಜಿ ಅಧ್ಯಕ್ಷ ಎಂ.ಮಹದೇವು, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ನಾಗೇಶ್, ಗ್ರಾಪಂ ಸದಸ್ಯ ಚಂದ್ರು, ಮುಖಂಡರಾದ ಅರ್ಕೇಶ್, ಬಿ.ಎಂ.ರಾಕೇಶ್, ಹುಚ್ಚಯ್ಯ, ಆನಂದ್, ಶ್ರೀಕಂಠಪ್ಪ ಶಿವರಾಜು, ನಾರಾಯಣ, ಶ್ರೀಕಂಠ, ರವಿ, ಶಂಕರ್, ಕೆಂಪರಸಯ್ಯ ಗ್ರಾಮಸ್ಥರು ಹಾಗೂ ಸಿದ್ದರಾಮಯ್ಯ ಅಭಿಮಾನಿಗಳು ಉಪಸ್ಥಿತರಿದ್ದರು.

ಸಾಲಬಾಧೆ ತಾಳಲಾರದೆ ರೈತ ಆತ್ಮಹತ್ಯೆ



ಬೆಟ್ಟದಪುರ: ಪಿರಿಯಾಪಟ್ಟಣ ತಾಲೂಕಿನ ಬೆಟ್ಟದಪುರ ಸಮೀಪದ ರಾಶಿ ಮಂಟಿಕಾವಲು ಗ್ರಾಮದ ರೈತ ಲೋಕೇಶ್(38) ಸಾಲಬಾಧೆ ತಾಳಲಾರದೆ ಕ್ರಿಮಿ-ಕೀಟಗಳ ನಾಶಕ್ಕೆ ಬಳಸಲಾಗುವ ಮಾತ್ರೆ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಮೃತರ ತಂದೆ ಹೆಸರಲ್ಲಿ ಇದ್ದ 1 ಎಕರೆ ಹಾಗೂ 4 ಎಕರೆ ಜಮೀನನ್ನು ಗುತ್ತಿಗೆಗೆ ಪಡೆದು ತಂಬಾಕು, ಶುಂಠಿ ಹಾಗೂ ಇತರ ಬೆಳೆಗಳನ್ನು ಬೆಳೆಯುತ್ತಿದ್ದರು. ಬೇಸಾಯಕ್ಕೆಂದು ಬೆಟ್ಟದಪುರದ ಎಲ್‌ಅಂಡ್‌ಟಿ ಫೈನಾನ್ಸ್‌ನಲ್ಲಿ 2 ಲಕ್ಷ, ಕುಶಾಲನಗರ ಫೈನಾನ್ಸ್‌ನಲ್ಲಿ 5 ಲಕ್ಷ ಹಾಗೂ ಪರಿಚಯಸ್ಥರ ಬಳಿ 8 ಲಕ್ಷ ಸಾಲ ಪಡೆದಿದ್ದರು. ಇದಲ್ಲದೆ ಅವರ ಜಮೀನಿನಲ್ಲಿ 3 ಬಾರಿ ಕೊಳವೆ ಬಾವಿ ತೆಗೆಸಿದ್ದು ನೀರು ಬಾರದೆ ಅದರಿಂದಲೂ ನಷ್ಟ ಉಂಟಾಗಿ ಮನನೊಂದು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಮಾತ್ರೆ ಸೇವಿಸಿ ಅಸ್ವಸ್ಥಗೊಂಡಿದ್ದ ಲೋಕೇಶ್ ಅವರನ್ನು ಪಿರಿಯಾಪಟ್ಟಣ ಸರ್ಕಾರಿ ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ಕೊಡಿಸಿ ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರಿನ ಕೆ.ಆರ್.ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆಗೆ ಸ್ಪಂದಿಸದೆ ಬುಧವಾರ ರಾತ್ರಿ ಮೃತಪಟ್ಟಿದ್ದಾರೆ ಎಂದು ಅವರ ಪತ್ನಿ ಲತಾ ಬೆಟ್ಟದಪುರ ಠಾಣೆ ದೂರು ನೀಡಿದ್ದಾರೆ.

ಮೈಲ್ಯಾಕ್ ಅಧ್ಯಕ್ಷರಿಗೆ ರಾಜ್ಯ ಸಚಿವರ ಸ್ಥಾನಮಾನ



ಮೈಸೂರು, ಜ.8– ಮೈಸೂರು ಪೇಯಿಂಟ್ಸ್ ಅಂಡ್ ವಾರ್ನಿಶ್ ಲಿಮಿಟೆಡ್‌ನ ಅಧ್ಯಕ್ಷರಾದ ಹೆಚ್.ಡಿ.ಗಣೇಶ್ ಅವರಿಗೆ ತಕ್ಷಣದಿಂದ ಜಾರಿಗೆ ಬರುವಂತೆ ರಾಜ್ಯ ಸಚಿವರ ಸ್ಥಾನಮಾನ ನೀಡಿ ಸರ್ಕಾರ ಆದೇಶ ಹೊರಡಿಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರ ಸೂಚನೆ ಮತ್ತು ನಿರ್ದೇಶನದ ಮೇಲೆ ಈ ಆದೇಶ ಹೊರಡಿಸಲಾಗಿದ್ದು, ಇದು ಮುಂದಿನ ಆದೇಶದವರೆಗೂ ಜಾರಿಯಲ್ಲಿರುತ್ತದೆ ಎಂದು ಪ್ರಕಟಣೆ ತಿಳಿಸಿದೆ.

ಹುಣಸೂರು ಕಸಬಾ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ಅಧ್ಯಕ್ಷರ ಅವಿರೋಧ ಆಯ್ಕೆ


ನೂತನ ಅಧ್ಯಕ್ಷ ದಿವಾಕರ್ ಅವರನ್ನು ಅಭಿನಂದಿಸಲಾಯಿತು.

ಹುಣಸೂರು, ಜ.8– ಕಸಬಾ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ದಿವಾಕರ್ ಆಯ್ಕೆಯಾಗಿದ್ದಾರೆ. ಇದೇ ವೇಳೆ 2026ನೇ ಸಾಲಿನ ಕ್ಯಾಲೆಂಡರ್ ಬಿಡುಗಡೆ ಮಾಡಲಾಯಿತು.

ಕಸಬಾ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ನಡೆದ ಚುನಾವಣೆಯಲ್ಲಿ ದಿವಾಕರ್.ಎಸ್, ಶಾಸಕ ಜಿ.ಡಿ.ಹರೀಶ್‌ಗೌಡ, ಸಂಘದ ಉಪಾಧ್ಯಕ್ಷ ಹಾಗೂ ನಿರ್ದೇಶಕರ ಸಮ್ಮುಖದಲ್ಲಿ ಅವಿರೋಧವಾಗಿ ಆಯ್ಕೆಯಾಗಿದ್ದು ಚುನಾವಣಾಧಿಕಾರಿ ದೇವಪ್ಪ ಎಂ.ಎ ಅವಿರೋಧ ಆಯ್ಕೆ ಘೋಷಿಸಿದ್ದಾರೆ.

ಇದೇ ಸಂದರ್ಭದಲ್ಲಿ 2026ನೇ ಸಾಲಿನ ಕ್ಯಾಲೆಂಡರ್ ಅನ್ನು ಶಾಸಕ ಜಿ.ಡಿ.ಹರೀಶ್ ಗೌಡರು ಬಿಡುಗಡೆ ಮಾಡಿದರು. ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ದಿವಾಕರ್.ಎಸ್, ಉಪಾಧ್ಯಕ್ಷ ಪುಟ್ಟರಾಜು, ನಿರ್ದೇಶಕರಾದ ಎಂ.ಕೆ.ವಾಸೇಗೌಡ, ಹೆಚ್.ಸಿ.ರವಿಕುಮಾರ್, ರುದ್ರಾಬೋವಿ, ಮಹದೇವು, ರಮೇಶ್, ಕೆ.ಎಸ್.ಬೀರೇಶ್, ಗೀತಾ ನಿಂಗರಾಜು, ಶಶಿಕಲಾಬಾಯಿ, ಸುನಂದ, ಸಂಘದ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀ.ದೇವಪ್ಪ ಎಂ.ಎ ಹಾಗೂ ಟಿಎಪಿಸಿಎಂಎಸ್ ಅಧ್ಯಕ್ಷ ಪ್ರೇಮ್ ಕುಮಾರ್ ಉಪಸ್ಥಿತರಿದ್ದರು.

ಬಡಗಲಪುರದಲ್ಲಿ ಉಚಿತ ದಂತ ಚಿಕಿತ್ಸಾ ಶಿಬಿರ



ಸರಗೂರು: ತಾಲೂಕಿನ ಬಡಗಲಪುರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ತಾಲೂಕು ಆರೋಗ್ಯಾಧಿಕಾರಿಗಳ ಕಚೇರಿ, ಸಾರ್ವಜನಿಕ ಆಸ್ಪತ್ರೆ ಹಾಗೂ ಬಡಗಲಪುರ ಪ್ರಾಥಮಿಕ ಆರೋಗ್ಯ ಕೇಂದ್ರದ ಸಹಯೋಗದೊಂದಿಗೆ, ಉಚಿತ ದಂತ ತಪಾಸಣೆ ಮತ್ತು ಚಿಕಿತ್ಸೆ ಶಿಬಿರ ಹಾಗೂ ಬಾಯಿ ಆರೋಗ್ಯ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಶಿಬಿರದಲ್ಲಿ ತಾಲೂಕು ಆರೋಗ್ಯಾಧಿಕಾರಿ ಡಾ.ರವಿಕುಮಾರ್ ಮಾತನಾಡಿ, ನಾವು ಪ್ರತಿನಿತ್ಯ ಎರಡು ಬಾರಿ ಹಲ್ಲನ್ನು ಸ್ವಚ್ಛಗೊಳಿಸಬೇಕು. ಬಿಡಿ, ಸಿಗರೇಟ್, ತಂಬಾಕು, ಸೇವನೆಯಿಂದ ದೂರವಿರಬೇಕು, ಇದರಿಂದ ಬಾಯಿ ಕ್ಯಾನ್ಸರ್ ಬರುವ ಸಂಭವ ಬಹಳ ಹೆಚ್ಚು. ದುಶ್ಚಟಗಳಿಂದ ದೂರವಿದ್ದು ಬಾಯಿ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದರು.

ಕಾರ್ಯಕ್ರಮ ಉದ್ದೇಶಿಸಿ ಸಾರ್ವಜನಿಕ ಆಸ್ಪತ್ರೆ ದಂತ ತಜ್ಞರಾದ ಡಾ.ಸಮೀವುಲ್ಲಾ ಶರೀಫ್ ಮಾತನಾಡಿ, ದೈಹಿಕ ಆರೋಗ್ಯ ರಕ್ಷಣೆಯಲ್ಲಿ ಬಹು ಮುಖ್ಯ ಪಾತ್ರ ದಂತಾರೋಗ್ಯ. ಚಿಕಿತ್ಸೆಗಿಂತಲೂ ಮುನ್ನೆಚ್ಚರಿಕೆ ವಾಸಿ ಎಂಬಂತೆ ಹಲ್ಲು ನೋವು ಬಾರದಂತೆ ತಡೆಯುವುದು ಅವಶ್ಯ ಎಂದರು.

ದಂತ ತಜ್ಞ ವೈದ್ಯರಾದ ಪೂರ್ಣಿಮಾ ಹಲ್ಲಿನ ನೋವು ಕುರಿತಂತೆ ದಂತ ಭಾಗ್ಯದ ಬಗ್ಗೆ ವಿವರವಾಗಿ ಸಲಹೆ ನೀಡಿದರು,

ಕಾರ್ಯಕ್ರಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ, ಡಾ.ರೋಹನ್ ಎನ್‌ಟಿಇಪಿ ಸಿಬ್ಬಂದಿಗಳಾದ ನಾಗರಾಜು, ಉಮೇಶ್, ಸಮುದಾಯ ಆರೋಗ್ಯಾಧಿಕಾರಿ ಮಹೇಶ, ಆರೋಗ್ಯ ಸುರಕ್ಷಾಧಿಕಾರಿ ಜಯಶ್ರೀ ಇದ್ದರು. ಶಿಬಿರದಲ್ಲಿ 32 ಜನರಿಗೆ ದಂತ ಆರೋಗ್ಯ ತಪಾಸಣೆ ನಡೆಸಲಾಯಿತು.

ಪತ್ರಕರ್ತರ ಸಂಘದ ನೂತನ ಕ್ಯಾಲೆಂಡರ್ ಬಿಡುಗಡೆ


ಶಾಸಕ ಅನಿಲ್ ಚಿಕ್ಕಮಾದು ಹೆಚ್.ಡಿ.ಕೋಟೆ ತಾಲೂಕು ಪತ್ರಕರ್ತರ ಸಂಘದ ದಿನದರ್ಶಿಯನ್ನು ಬಿಡುಗಡೆ ಮಾಡಿದರು.

ಹೆಚ್.ಡಿ.ಕೋಟೆ: ಪತ್ರಕರ್ತರು ನನಗೆ ಮಾರ್ಗದರ್ಶಕರಾಗಿದ್ದಾರೆ. ನನ್ನ ಕೆಲಸಗಳ ಬಗ್ಗೆ ನನಗೆ ಎಚ್ಚರಿಸುತ್ತಾರೆ ಎಂದು ಶಾಸಕ ಅನಿಲ್ ಚಿಕ್ಕಮಾದು ತಿಳಿಸಿದರು

ತಾಲೂಕಿನ ಅಂತರಸಂತೆ ವನ್ಯಜೀವಿ ವಲಯದ ಕಾಕನಕೋಟೆ ಸಫಾರಿ ಕೇಂದ್ರದಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ಕೋಟೆ, ಸರಗೂರು ತಾಲೂಕು ಪತ್ರಕರ್ತರ ಸಂಘದ ನೂತನ ದಿನದರ್ಶಿಕೆ ಬಿಡುಗಡೆ ಮಾಡಿ ಮಾತನಾಡಿದ ಅವರು, ನಮ್ಮಲ್ಲಿನ ತಾಲೂಕು ಪತ್ರಕರ್ತರ ಸಂಘದಲ್ಲಿ ಬಹಳಷ್ಟು ಒಗ್ಗಟ್ಟಿದೆ. ನಾನು ಇಂದು ಸರ್ಕಾರದಲ್ಲಿ ಉತ್ತಮ ಸ್ಥಾನಮಾನ ಗಳಿಸಿದ್ದೇನೆ. ಕ್ಷೇತ್ರದಲ್ಲಿ ಎರಡು ಬಾರಿ ಶಾಸಕನಾಗಿದ್ದೇನೆ ಎಂದರೆ ಅದಕ್ಕೆ ಪತ್ರಕರ್ತರ ಕೊಡುಗೆ ಅಪಾರ ಎಂದರು.

ಹಿರಿಯ ಪತ್ರಕರ್ತ ಅಂಶಿ ಪ್ರಸನ್ನ ಕುಮಾರ್ ಮಾತನಾಡಿ, ಮುದ್ರಣ ಮಾಧ್ಯಮಗಳು ಇಂದಿಗೂ ಜನರ ವಿಶ್ವಾಸರ್ಹತೆ ಉಳಿಸಿಕೊಂಡಿವೆ ಸಾಮಾಜಿಕ ಜಾಲತಾಣ, ಎಲೆಕ್ಟ್ರಿಕ್ ಮಾಧ್ಯಮಗಳ ನಡುವೆಯೂ ಇಂದಿಗೂ ಮುದ್ರಣ ಮಾಧ್ಯಮಗಳು ಜನರ ನಂಬಿಕೆ ಮತ್ತು ವಿಶ್ವಾಸರ್ಹತೆಯನ್ನು ಉಳಿಸಿಕೊಂಡಿವೆ ಎಂದರು.

ಕಾರ್ಯಕ್ರಮದಲ್ಲಿ ತಾಲೂಕು ಪತ್ರಕರ್ತರ ಸಂಘದ ಅಧ್ಯಕ್ಷ ಎಸ್.ಆರ್. ನಾಗರಾಮ, ಉಪಾಧ್ಯಕ್ಷ ದೊಡ್ಡಸಿದ್ದು, ಪ್ರಧಾನ ಕಾರ್ಯದರ್ಶಿ ಬಿ.ನಿಂಗಣ್ಣ ಕೋಟೆ, ಕಾರ್ಯದರ್ಶಿಗಳಾದ ದಾಸೇಗೌಡ, ಪುಟ್ಟ ರಾಜು, ಖಂಜಾಂಚಿ ಜಿ.ರವಿಕುಮಾರ್, ನಿರ್ದೇಶಕರಾದ ಚಂದ್ರು ರಂಗರಾಜು, ವಾಸೂಕಿ ನಾಗೇಶ್, ಸುರೇಶ್, ಶರವಣ, ಹಂಪಾಪುರ ನಾಗೇಶ್, ಸದಸ್ಯರುಗಳಾದ ಮಂಜುಕೋಟೆ, ಬಸವರಾಜು, ಎಂ.ಎಲ್. ರವಿಕುಮಾರ್, ರಘು, ಜಶೀಲ, ರಾಜ್ಯ ವನ್ಯಜೀವಿ ಮಂಡಳಿ ನಿರ್ದೇಶಕ ವಡ್ಡರಗುಡಿ ಚಿಕ್ಕಣ್ಣ, ನೂರಲಕುಪ್ಪೆ ಗ್ರಾ.ಪಂ. ಅಧ್ಯಕ್ಷೆ ಸುನೀತಾ ಮಹಾದೇವಸ್ವಾಮಿ, ಸಿಸಿಎಫ್ ರಮೇಶ್ ಕುಮಾರ್, ಆರ್‌ಎಫ್‌ಓ ಎಸ್.ಸಿದ್ದರಾಜು, ಇನ್ನು ಮುಂತಾದವರು ಹಾಜರಿದ್ದರು

ಕಪ್ಪು ಪಟ್ಟಿ ಧರಿಸಿ ಪ್ರಾಥಮಿಕ ಶಾಲಾ ಶಿಕ್ಷಕರಿಂದ ಪಾಠ



ಕೆ.ಆರ್.ನಗರ: ಸೇವಾನಿರತ ಶಿಕ್ಷಕರಿಗೆ ಟಿಇಟಿ ಕಡ್ಡಾಯ ಮಾಡಿರುವ ಸುಪ್ರೀಂ ಕೋರ್ಟ್ ಆದೇಶ ಪಾಲನೆಯಿಂದ ಪಾರಾಗಲು ಸೂಕ್ತ ಕಾನೂನು ತಿದ್ದುಪಡಿ ತಂದು ನ್ಯಾಯ ಒದಗಿಸುವಂತೆ ಆಗ್ರಹಿಸಿ ಗುರುವಾರ ಕೆ.ಆರ್.ನಗರ ಮತ್ತು ಸಾಲಿಗ್ರಾಮದಲ್ಲಿ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರು ತರಗತಿಯಲ್ಲಿ ಕಪ್ಪು ಬಟ್ಟೆ ಧರಿಸಿ ಪಾಠ ಮಾಡಿದರು.

ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು (ಎನ್‌ಪಿಎಸ್) ರದ್ದುಗೊಳಿಸಿ, ಹಳೇ ಪಿಂಚಣಿ ಯೋಜನೆಯನ್ನು (ಒಪಿಎಸ್) ಮರು ಜಾರಿಗೊಳಿಸುವುದೂ ಸೇರಿದಂತೆ ವಿವಿಧ ಬೇಡಿಕೆ ಈಡೇರಿಕೆಗೆ ಪ್ರಾಥಮಿಕ ಶಾಲಾ ಶಿಕ್ಷಕರು ಒತ್ತಾಯಿಸಿದರು.

ಬಳಿಕ ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಸಿ.ಎನ್.ಸ್ವಾಮಿ ಮಾಧ್ಯಮದರೊಂದಿಗೆ ಮಾತನಾಡಿ ಶಿಕ್ಷಕರ ಅರ್ಹತಾ ಪರೀಕ್ಷೆಯನ್ನು ಸೇವಾನಿರತರಿಗೂ ಕಡ್ಡಾಯಗೊಳಿಸಿರುವ ಸುಪ್ರೀಂ ಕೋರ್ಟ್ ಆದೇಶ ಶಿಕ್ಷಕರಿಗೆ ನೋವು ತಂದಿದೆ. ಕಾನೂನಿಗೆ ಸೂಕ್ತ ತಿದ್ದುಪಡಿ ತರಬೇಕು. ಟಿಇಟಿ ಕಡ್ಡಾಯ ಮಾಡಬಾರದು. ಗುತ್ತಿಗೆ ಆಧಾರದ ನೇಮಕಾತಿಗಳನ್ನು ಕೈಬಿಟ್ಟು ಕಾಯಂ ನೇಮಕಕ್ಕೆ ಆದ್ಯತೆ ನೀಡಬೇಕು. ದೇಶದ ಎಲ್ಲ ಶಿಕ್ಷರಿಗೂ ಸಮಾನ ಕೆಲಸಕ್ಕೆ ಸಮಾನ ವೇತನ ನೀಡಬೇಕು. ಕೇಂದ್ರದ ವೇತನವನ್ನು ರಾಜ್ಯದ ಶಿಕ್ಷಕರಿಗೂ ಅನ್ವಯಿಸಬೇಕು ಎಂಬ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಒಂದು ದಿನದ ಸಾಂಕೇತಿಕವಾಗಿ ಕಪ್ಪು ಪಟ್ಟಿ ಧರಿಸಿ ಪಾಠ ಬೋಧನೆಯನ್ನು ಅವಳಿ ತಾಲೂಕಿನಲ್ಲಿ ಶಿಕ್ಷಕರು ಮಾಡಿದ್ದಾರೆ ಎಂದರು. ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ನಿರ್ಣಯದಂತೆ ಕೆ.ಆರ್.ನಗರ ಮತ್ತು ಸಾಲಿಗ್ರಾಮ ಅವಳಿ ತಾಲೂಕಿನ 245 ಹಿರಿಯ ಮತ್ತು ಕಿರಿಯ ಪ್ರಾಥಮಿಕ ಶಾಲಾ ಶಿಕ್ಷಕರು ಕಪ್ಪು ಬಟ್ಟೆ ಧರಿಸಿ ಬೋಧನೆಯಲ್ಲಿ ತೊಡಗಿದರು.

ಅಪರಿಚಿತ ವ್ಯಕ್ತಿ ಶವ ಪತ್ತೆ

ಮೈಸೂರು, ಜ.8– ಡಿ.31ರಂದು ಸುಮಾರು 35ರಿಂದ 40 ವರ್ಷದ ಅಪರಿಚಿತ ವ್ಯಕ್ತಿ ಮೃತಪಟ್ಟಿದ್ದು, ಲಷ್ಕರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಸುಮಾರು 35ರಿಂದ 40 ವರ್ಷ ವಯಸ್ಸಾಗಿದ್ದು, 5.2 ಅಡಿ ಎತ್ತರ, ದಪ್ಪ ಮೈಕಟ್ಟು, ಕಪ್ಪು ಮೈಬಣ್ಣ, ಕಪ್ಪು ತಲೆ ಕೂದಲು, ಗಡ್ಡ ಮೀಸೆ ಬಿಟ್ಟಿರುತ್ತಾರೆ.

ಮೃತನ ವಾರಸುದಾರರ ಬಗ್ಗೆ ಮಾಹಿತಿ ಕಂಡುಬಂದಲ್ಲಿ ಲಷ್ಕರ್ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ 0821–2418107, 2418307 ಪೊಲೀಸ್ ಆಯುಕ್ತರ ದೂ.ಸಂ. 0821–2418180 ಮೈಸೂರು ನಗರ ಕಂಟ್ರೋಲ್ ರೂಂ: 0821–2418337, 2418340 ಅನ್ನು ಸಂಪರ್ಕಿಸಬಹುದು ಎಂದು ಲಷ್ಕರ್ ಪೊಲೀಸ್ ಠಾಣೆ ಠಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ ಬಯಲಾಟ ಅಕಾಡೆಮಿ ಪ್ರಶಸ್ತಿಗೆ ಹಲ್ಲರೆ ಶಿವಬುದ್ಧಿ ಆಯ್ಕೆ



ನಂಜನಗೂಡು: ತಾಲೂಕಿನ ಹಲ್ಲರೆ ಗ್ರಾಮದ ಶಿವಬುದ್ಧಿಯವರನ್ನು 2025ರ ಸಾಲಿನ ಕರ್ನಾಟಕ ಬಯಲಾಟ ಅಕಾಡೆಮಿ ವಾರ್ಷಿಕ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಕರ್ನಾಟಕ ಬಯಲಾಟ ಅಕಾಡೆಮಿಅಧ್ಯಕ್ಷ ಡಾ.ಕೆ.ದುರ್ಗಾದಾಸ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಾರ್ಷಿಕ ಪ್ರಶಸ್ತಿ 25 ಸಾವಿರ ನಗದು ಪುರಸ್ಕಾರದೊಂದಿಗೆ ನೆನಪಿನ ಕಾಣಿಕೆ ನೀಡಲಾಗುವುದು. ಹಲ್ಲರೆ ಶಿವಬುದ್ಧಿಯವರು ಸೂತ್ರದ ಬೊಂಬೆಯಾಟ ಕ್ಷೇತ್ರದಲ್ಲಿ ಸ್ವಂತ ತಂಡವನ್ನು ಕಟ್ಟಿಕೊಂಡು 40 ವರ್ಷಗಳಿಗೂ ಹೆಚ್ಚು ಕಾಲ ಸೇವೆ ಸಲ್ಲಿಸಿದ್ದಾರೆ. ಅವರ ಸೇವೆಯನ್ನು ಗುರ್ತಿಸಿ ವಾರ್ಷಿಕ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಧಾರವಾಡದಲ್ಲಿ ಫೆಬ್ರವರಿ ಮೊದಲ ವಾರ ನಡೆಯಲಿರುವ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಹಲ್ಲರೆ ಶಿವಬುದ್ಧಿಯವರನ್ನು ಗೌರವಿಸಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ತಿಳಿಸಿದರು.

'ಎಲ್ಲಿಯ ಅರಸು, ಎಲ್ಲಿಯ ಸಿದ್ದರಾಮಯ್ಯ' ಹೆಚ್‌ಡಿಕೆ ಹೇಳಿಕೆಗೆ ಖಂಡನೆ


ಮುಖ್ಯಮಂತ್ರಿ ಸಿದ್ದರಾಮಯ್ಯ ದೀರ್ಘಾವಧಿ ಮುಖ್ಯಮಂತ್ರಿಯಾಗಿ ದಾಖಲೆ ನಿರ್ಮಿಸಿದ ಹಿನ್ನೆಲೆಯಲ್ಲಿ ತಿ.ನರಸೀಪುರದಲ್ಲಿ ಬಾತು ಹಂಚಲಾಯಿತು.

ತಿ.ನರಸೀಪುರ, ಜ.8– ಮಾಜಿ ಮುಖ್ಯಮಂತ್ರಿಗಳಾದ ಎಚ್.ಡಿ.ಕುಮಾರಸ್ವಾಮಿ ಅವರು ಸಿದ್ದರಾಮಯ್ಯನವರ ಬಗ್ಗೆ ನೀಡಿರುವ ಹೇಳಿಕೆ ಸರಿಯಲ್ಲ ಎಂದು ಕೆಪಿಸಿಸಿ ಹಿಂದುಳಿದ ವರ್ಗಗಳ ಪ್ರಧಾನ ಕಾರ್ಯದರ್ಶಿ ಎಂ.ರಮೇಶ್ ಹೇಳಿದರು

ಪಟ್ಟಣದ ಕುರುಬರ ಸಂಘದ ಆವರಣದಲ್ಲಿ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು, ಅಭಿಮಾನಿಗಳು, ಪಕ್ಷದ ಮುಖಂಡರು ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸುರವರ ಅಧಿಕಾರಾಧಿಯನ್ನು ಸರಿಗಟ್ಟಿ ಇತಿಹಾಸ ನಿರ್ಮಾಣ ಮಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯರವರ ಹೆಸರಿನಲ್ಲಿ ಶ್ರೀ ಗಣಪತಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ ಪಟಾಕಿ ಸಿಡಿಸಿ ಸಂಭ್ರಮಿಸಿದರು.

ಈ ವೇಳೆ ಮಾತನಾಡಿದ ಅವರು ಸಿದ್ದರಾಮಯ್ಯ ಮಾಡಿದ ದಾಖಲೆಗೆ ಅಭಿನಂದಿಸಬೇಕಾದ ಮಾಜಿ ಮುಖ್ಯಮಂತ್ರಿ ಹಾಗೂ ಹಾಲಿ ಕೇಂದ್ರ ಸಚಿವರೊಬ್ಬರು 'ಎಲ್ಲಿಯ ಅರಸು, ಎಲ್ಲಿಯ ಸಿದ್ದರಾಮಯ್ಯ' ಎಂದು ಹೇಳಿರುವುದು ಸರಿಯಲ್ಲ. ಸಿದ್ದರಾಮಯ್ಯ ಎಲ್ಲೂ ಕೂಡ ಅರಸುರವರಿಗೆ ತಮ್ಮನ್ನು ಹೋಲಿಕೆ ಮಾಡಿಕೊಂಡಿಲ್ಲ. ಹಾಗಾಗಿ ವಿರೋಧ ಪಕ್ಷದವರು ಎಷ್ಟೇ ಟೀಕೆ ಮಾಡಿದರೂ ಕೂಡ ಬಡವರ ಪರವಾಗಿ ಕೆಲಸ ಮಾಡುವ ಸಿದ್ದು ಪರವಾಗಿ ರಾಜ್ಯದ ಶೇ80 ರಷ್ಟು ಜನರಿದ್ದು, ಬಡವರ ಪರ ಕೆಲಸ ಮಾಡುತ್ತಾರೆಂಬ ಕಾರಣಕ್ಕೆ ಶೇ.20 ರಷ್ಟು ಮಂದಿ ಮಾತ್ರೇ ವಿರೋಧಿಸುತ್ತಾರೆ ಎಂದರು. ಹಾಗಾಗಿ ಸಿದ್ದರಾಮಯ್ಯ ಈಗ ಬರೆದಿರುವ ದಾಖಲೆಯೊಂದಿಗೆ ಮುಂದಿನ ಉಳಿದಿರುವ ಅವಧಿಯನ್ನು ಪೂರೈಸುವಂತಾಗಲಿ ಎಂದರು.

ಜಿಲ್ಲಾ ಮಾಧ್ಯಮ ವಕ್ತಾರ ಸಂತೃಪ್ತಿ ಕುಮಾರ್ ಮಾತನಾಡಿದರು. ತಾಲೂಕು ಕುರುಬರ ಸಂಘದ ಮಾಜಿ ನಿರ್ದೇಶಕ ಎಂ.ಕೆ.ಸಹದೇವ, ರಿಯಲ್ ಎಸ್ಟೇಟ್ ಉದ್ಯಮಿ ಶಂಕರ, ಫೈನಾನ್ಸ್ ಕಾಂತರಾಜು, ಹಾಳೇಗೌಡ, ರಾಮನಂಜಯ್ಯ, ಗುರುಸ್ವಾಮಿ, ತಿರುಮಕೂಡಲು ಪುಟ್ಟು ದಿವಾಕರ, ಸೋಮುದಾದಾ, ತುಂಬಲ ಅಂದಾನಿ, ಎಂ.ಎ.ಕಮಲ, ಚೇತನ್, ಚಿಕ್ಕ ಮಹದೇವ್, ಗಗ್ಗರಿ ಬಸರಾಜು, ಕೊತ್ತೇಗಾಲ ಬಸವರಾಜು, ಚೀಕಾ ನಾಗರಾಜು, ಮಹೇಶ್ ಸೇರಿದಂತೆ ಮತ್ತಿತರರಿದ್ದರು.

ಕೋರ್ಟ್‌ಗೆ ಬಾಂಬ್ ಬೆದರಿಕೆ: ವಕೀಲರ ಪ್ರತಿಭಟನೆ


ನ್ಯಾಯಾಲಯಕ್ಕೆ ಬಾಂಬ್ ಬೆದರಿಕೆ ಖಂಡಿಸಿ ಹುಣಸೂರಲ್ಲಿ ವಕೀಲರು ಪ್ರತಿಭಟಿಸಿದರು.

ಹುಣಸೂರು ಜ.8– ನ್ಯಾಯಾಲಯಕ್ಕೆ ಕಿಡಿಗೇಡಿಗಳ ಬಾಂಬ್ ಬೆದರಿಕೆ ಖಂಡಿಸಿ, ಹುಣಸೂರು ವಕೀಲರ ಸಂಘದ ಸದಸ್ಯರು ನ್ಯಾಯಾಲಯದ ಕಲಾಪದಿಂದ ಹೊರಗಿಳಿದು ಪ್ರತಿಭಟಿಸಿದರು.

ಇದಕ್ಕೂ ಮುನ್ನ ವಕೀಲರ ಸಂಘದಲ್ಲಿ ನಡೆದ ಸಭೆಯಲ್ಲಿ ನ್ಯಾಯಾಲಯಕ್ಕೆ ಬಾಂಬ್ ಬೆದರಿಕೆ ಹಾಕಿದ ಘಟನೆಯನ್ನು ಖಂಡಿಸಿ, ಸರಕಾರ ಎಲ್ಲಾ ನ್ಯಾಯಾಲಯಗಳಿಗೂ ಸೂಕ್ತ ಭದ್ರತೆ ನೀಡುವಲ್ಲಿ ವಿಫಲವಾಗಿದೆ. ಸರಕಾರ ರಾಜ್ಯದ ಎಲ್ಲಾ ನ್ಯಾಯಾಲಯಗಳಿಗೂ ಮೆಟಲ್ ಡಿಟೆಕ್ಟರ್ ಅಳವಡಿಸಿ, ನ್ಯಾಯಾಲಯಗಳಲ್ಲಿ ಸುಗಮ ಕಲಾಪ ನಡೆಸಲು ಸರಕಾರ ಅಗತ್ಯ ಕ್ರಮವಹಿಸಲು ತಾಲೂಕು ವಕೀಲರ ಸಂಘದ ಅಧ್ಯಕ್ಷ ಶಿವಣ್ಣೇಗೌಡ ಒತ್ತಾಯಿಸಿದರು. ಸಂಘದ ನಿರ್ಣಯದಂತೆ ಕಲಾಪದಿಂದ ಹೊರಗುಳಿದು ಪ್ರತಿಭಟನೆ ನಡೆಸಿ, ಉಪವಿಭಾಗಾಧಿಕಾರಿಗಳಿಗೆ ಮನವಿ ಸಲ್ಲಿಸಿದರು. ಪ್ರತಿಭಟನೆ ಯಲ್ಲಿ ಸಂಘದ ಕಾರ್ಯದರ್ಶಿ ಸಂದೀಪ್, ಉಪಾಧ್ಯಕ್ಷ ಹರೀಶ್‌ಕುಮಾರ್, ವೀರೇಶ್ ರಾವ್ ಬೋಬಡೆ, ಶ್ರೀನಿವಾಸ್, ಬಾಲ ಸುಬ್ರಮಣ್ಯ, ಎ.ಮಹದೇವ್, ಧರ್ಮಾಪುರ ಮಹದೇವ್, ಎಂ.ಎನ್.ರಾಘವೇಂದ್ರ ತಾಂಡವ ಮೂರ್ತಿ, ಸ್ವಾಮಿಗೌಡ, ಚಂದ್ರಶೇಖರ್, ಬಿ.ಎಸ್. ಯೋಗನಂದ್ ಕುಮಾರ್, ಶ್ರೀನಿವಾಸ್ ಸೇರಿದಂತೆ ವಕೀಲ ವೃಂದ ಭಾಗವಹಿಸಿದ್ದರು.

ಮೈಸೂರು ಮಿತ್ರ

ಶುಕ್ರವಾರ 9 ಜನವರಿ 2026

ಸರ್ಕಾರಿ ನೌಕರರಿಗೆ ಕ್ರೀಡಾ, ಸಾಂಸ್ಕೃತಿಕ ಸ್ಪರ್ಧೆ

ಉತ್ಸಾಹದಿಂದ ಪಾಲ್ಗೊಂಡು ಕ್ರೀಡಾ ಸ್ಫೂರ್ತಿ ಮೆರೆದ ಸರ್ಕಾರಿ ನೌಕರರು

• ಎಂಎಲ್ಸಿ ಮಂಜೇಗೌಡರಿಂದ ಚಾಲನೆ • ಕ್ರೀಡಾ ಮನೋಭಾವನೆ ಬೆಳೆಸಿಕೊಳ್ಳಲು ಕಿವಿಮಾತು

ಮೈಸೂರು, ಜ.8(ಎಂಟಿವೈ)– ಸರ್ಕಾರದ ವಿವಿಧ ಇಲಾಖೆಗಳ ಕಚೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸರ್ಕಾರಿ ನೌಕರರು ಗುರುವಾರ ವಿವಿಧ ಕ್ರೀಡಾ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಉತ್ಸಾಹದಿಂದ ಪಾಲ್ಗೊಂಡರು.

ಮೈಸೂರಿನ ನಜ಼ರ್‌ಬಾದ್‌ನಲ್ಲಿರುವ ಚಾಮುಂಡಿವಿಹಾರ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿ.ಪಂ., ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ವತಿಯಿಂದ ಆಯೋಜಿಸಿದ್ದ 2025–26ನೇ ಸಾಲಿನ ಜಿಲ್ಲಾ ಮಟ್ಟದ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಸರ್ಕಾರಿ ನೌಕರರು ಪಾಲ್ಗೊಂಡರು. ವಿವಿಧ ಇಲಾಖೆಯ ನೌಕರರೊಂದಿಗೆ ಸರ್ಕಾರಿ ಶಾಲೆಗಳ ಶಿಕ್ಷಕರು ಕ್ರೀಡೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗಿಯಾಗಿ ತಮ್ಮ ಪ್ರತಿಭೆಯನ್ನು ಅನಾವರಣಗೊಳಿಸಿದರು.



ಮೈಸೂರಿನ ಚಾಮುಂಡಿವಿಹಾರ ಕ್ರೀಡಾಂಗಣದಲ್ಲಿ ಗುರುವಾರ ನಡೆದ ಸರ್ಕಾರಿ ನೌಕರರ ಕ್ರೀಡಾಕೂಟದ ಕ್ರೀಡಾ ಜ್ಯೋತಿಗೆ ಗಣ್ಯರು ಚಾಲನೆ ನೀಡಿದರು.

ಚಾಲನೆ: ಸರ್ಕಾರಿ ನೌಕರರ ಕ್ರೀಡಾಕೂಟಕ್ಕೆ ವಿಧಾನ ಪರಿಷತ್ ಸದಸ್ಯ ಸಿ.ಎನ್. ಮಂಜೇಗೌಡ ಚಾಲನೆ ನೀಡಿ ಮಾತನಾಡಿ, ಕ್ರೀಡಾ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವುದರಿಂದ ದೈಹಿಕ ಮತ್ತು ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಬಹುದು. ಕ್ರೀಡೆ ಎಂಬುದು ಶ್ರೇಷ್ಠ ಕ್ಷೇತ್ರವಾಗಿದ್ದು, ಅದು ಮನೋವಿಕಾಸಕ್ಕೂ ಸಹಕಾರಿಯಾಗಲಿದೆ. ಕ್ರೀಡೆ ಹಾಗೂ ಶಿಕ್ಷಣದಲ್ಲಿ ಜಾತಿ–ಧರ್ಮದ ತಾರತಮ್ಯವಿರುವುದಿಲ್ಲ. ಕ್ರೀಡೆಗೆ ಸಮಾಜವನ್ನು ಒಗ್ಗೂಡಿಸುವ ಶಕ್ತಿ ಇದೆ. ಸರ್ಕಾರಿ ನೌಕರರು ಕ್ರೀಡೆಯಲ್ಲಿ ಭಾಗವಹಿಸಬೇಕು. ಸಾರ್ವಜನಿಕರ ಕೆಲಸವನ್ನು ಅಚ್ಚುಕಟ್ಟಾಗಿ ಮಾಡಿಕೊಡುವುದರ ಜೊತೆಗೆ ನಿಮ್ಮ ಆರೋಗ್ಯದ ಕಡೆಗೆ ಹೆಚ್ಚಿನ ಗಮನ ನೀಡಬೇಕು ಎಂದು ಸಲಹೆ ನೀಡಿದರು.

ಶಾಸಕ ಟಿ.ಎಸ್ ಶ್ರೀವತ್ಸ ಮಾತನಾಡಿ, ಅಧಿಕಾರಿಗಳು ಕಾರ್ಯಕ್ಷಮತೆಯನ್ನು ಹೆಚ್ಚಿಸುವ ಸಲುವಾಗಿ ಸರ್ಕಾರಿ ನೌಕರರ ಕ್ರೀಡೆಯನ್ನು ಆಯೋಜಿಸಲಾಗಿದ್ದು, ಎಲ್ಲಾ ಅಧಿಕಾರಿಗಳು ಕ್ರೀಡೆಯಲ್ಲಿ ಭಾಗವಹಿಸಬೇಕು. ಪ್ರತಿದಿನ ಅಧಿಕಾರಿಗಳು ಯಾವುದಾದರೂ ಕ್ರೀಡೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳಬೇಕು. ಪ್ರತಿಯೊಬ್ಬರೂ ಯೋಗ, ಕ್ರೀಡೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದರು.

ಜಿಲ್ಲಾಧಿಕಾರಿ ಜಿ. ಲಕ್ಷ್ಮಿಕಾಂತ್ ರೆಡ್ಡಿ ಮಾತನಾಡಿ, ಪ್ರತಿಯೊಬ್ಬ ಅಧಿಕಾರಿ ಹಾಗೂ ಸಿಬ್ಬಂದಿ ಕ್ರೀಡಾ ಮನೋಭಾವನೆ ಬೆಳೆಸಿಕೊಳ್ಳಬೇಕು. ಈ ಮನೋಭಾವನೆ ಬೆಳೆಸಿಕೊಂಡರೆ ಮನಸ್ಸಿಗೂ, ದೇಹಕ್ಕೂ ನೆಮ್ಮದಿ ದೊರೆಯುತ್ತದೆ. ನೌಕರರು ಅನುಭವಿಸುವ ಮಾನಸಿಕ ಒತ್ತಡವನ್ನು ಕಡಿಮೆ ಮಾಡುತ್ತದೆ. ಆದ್ದರಿಂದ ಅಧಿಕಾರಿಗಳು ಕ್ರೀಡೆಯಲ್ಲಿ ತೊಡಗಿಸಿಕೊಳ್ಳಬೇಕು. ಹೀಗೆ ತೊಡಗಿಸಿಕೊಂಡಾಗ ಮಾನಸಿಕ ಸ್ಥಿತಿಯೂ, ದೈಹಿಕ ಆರೋಗ್ಯವೂ ಉತ್ತಮ ವಾಗುತ್ತದೆ ಎಂದು ತಿಳಿಸಿದರು.

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಡಾ. ಸಿ.ಬಿ.ಅರುಣಕುಮಾರ್ ಅತಿಥಿಗಳನ್ನು ಸ್ವಾಗತಿಸಿದರು. ಕಾರ್ಯಕ್ರಮದಲ್ಲಿ ಜಿಪಂ ಸಿಇಒ ಎಸ್. ಯುಕೇಶ್‌ಕುಮಾರ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಭಾಸ್ಕರ್‌ನಾಯಕ, ಸರ್ಕಾರಿ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷ ಜೆ.ಗೋವಿಂದರಾಜು, ರಾಜ್ಯ ಕಾರ್ಯದರ್ಶಿ ಗಣೇಶ್ ಎಂ.ಕೆ., ರಾಜ್ಯ ಪರಿಷತ್ ಸದಸ್ಯರು ಹಾಗೂ ರಾಜ್ಯ ಜಂಟಿ ಕಾರ್ಯದರ್ಶಿ ಮಾಲೇಗೌಡ ಡಿ., ವಿಭಾಗೀಯ ಉಪಾಧ್ಯಕ್ಷ ಮಾಲಂಗಿ ಸುರೇಶ್, ರಾಜ್ಯ ಕಾರ್ಯದರ್ಶಿ ಜಯಪ್ಪ, ರಾಜ್ಯ ಸಂಘಟನಾ ಕಾರ್ಯದರ್ಶಿ ಮಹಾದೇವ, ರಾಜ್ಯ ಪರಿಷತ್ ಸದಸ್ಯರಾದ ರಘು. ಎಸ್, ರೇವಣ್ಣ ಮತ್ತಿತರರು ಉಪಸ್ಥಿತರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ	(ದೂ: 2521923)
ಮಾರ್ಕ್ (ಕ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್	(ದೂ: 2422871)
45 ಫೇಸ್ ದಿ ಇಯರ್ (ಕ)	3 ಪ್ರದರ್ಶನಗಳು
ಬಾಲಾಜಿ	(ದೂ: 2497199)
ತೇರಾ ಇಸ್ಕ್ ಮೈನ್ (ಹಿ)	3 ಪ್ರದರ್ಶನಗಳು
ಮಹದೇಶ್ವರ	(ಮೊ:9900820093)
45 ಫೇಸ್ ದಿ ಇಯರ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ರಾಜಾ ಸಾಬ್ (ಕ)	2 ಪ್ರದರ್ಶನಗಳು
ರಾಜಕಮಲ್	
ಧುರಂದರ್ (ಹಿ)	4 ಪ್ರದರ್ಶನಗಳು
ಸಂಗಂ	
ಮಾರ್ಕ್ (ಕ)	4 ಪ್ರದರ್ಶನಗಳು
ಲಿಡೋ	
ಡೆವಿಲ್ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
–	–
ಪ್ರಭಾ	
ರಾಜಾ ಸಾಬ್ (ಹಿಂ)	4 ಪ್ರದರ್ಶನಗಳು

ರಾಷ್ಟ್ರ ಮಟ್ಟಕ್ಕೆ ಶಿಕ್ಷಕ ವಿ.ವಿನೋದ್ ಕುಮಾರ್ ಆಯ್ಕೆ

ಸುತ್ತೂರು, ಜ.8– ಕರ್ನಾಟಕ ಸರ್ಕಾರದ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ರಾಜ್ಯ ಶಿಕ್ಷಣ ಮತ್ತು ಸಂಶೋಧನೆ ತರಬೇತಿ ಇಲಾಖೆ, ಉರ್ದು ಮತ್ತು ಇತರೆ ಭಾಷಾ ಅಲ್ಪಸಂಖ್ಯಾತ ಶಾಲೆಗಳ ನಿರ್ದೇಶನಾಲಯ, ಆಯುಕ್ತರ ಕಚೇರಿ ಮತ್ತು ವಿಶ್ವೇಶ್ವರಯ್ಯ ಕೈಗಾರಿಕಾ ಮತ್ತು ತಾಂತ್ರಿಕ ವಸ್ತು ಸಂಗ್ರಹಾಲಯ ಬೆಂಗಳೂರು ಸಹಯೋಗದಲ್ಲಿ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಧಾರವಾಡ ವತಿಯಿಂದ ರಾಜ್ಯಮಟ್ಟದ ವಿಜ್ಞಾನ ವಸ್ತು ಪ್ರದರ್ಶನ ಸ್ಪರ್ಧೆಯನ್ನು ಪ್ರೌಢಶಾಲಾ ಶಿಕ್ಷಕರಿಗೆ ಧಾರವಾಡದಲ್ಲಿ ಆಯೋಜಿಸಲಾಗಿತ್ತು.



ಈ ಸ್ಪರ್ಧೆಯಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಭೌತಶಾಸ್ತ್ರ ರಸಾಯನಶಾಸ್ತ್ರ ಗಣಿತ ಇಂಜಿನಿಯರಿಂಗ್ ತಂತ್ರಜ್ಞಾನ ಕೃತಕ ಬುದ್ಧಿಮತ್ತೆ ರೋಬೋಟಿಕ್ ಹಾಗೂ ಜೆನೆಟಿಕ್ ತಂತ್ರಜ್ಞಾನ ಹೀಗೆ ಹಲವು ವಿಭಾಗಗಳಿಂದ 35 ಶೈಕ್ಷಣಿಕ ಜಿಲ್ಲೆಗಳಿಂದ ಹಲವಾರು ಶಿಕ್ಷಕರು ವಿವಿಧ ಮಾದರಿಗಳೊಂದಿಗೆ ಭಾಗವಹಿಸಿದ್ದರು.

ಈ ವಿಜ್ಞಾನ ವಸ್ತು ಪ್ರದರ್ಶನ ಸ್ಪರ್ಧೆಯಲ್ಲಿ ಸುತ್ತೂರು ಮಠದ ಜೆಎಸ್‌ಎಸ್ ವಸತಿಶಾಲೆಯ ಭೌತವಿಜ್ಞಾನ ಶಿಕ್ಷಕ ವಿ.ವಿನೋದ್‌ಕುಮಾರ್ ಅವರು ಭೌತವಿಜ್ಞಾನದಲ್ಲಿನ ಸೃಜನಾತ್ಮಕ ಮಾದರಿಗಳು ಹಾಗೂ ವಿಶೇಷಚೇತನರ ಸ್ನೇಹಿ ಎಂಬ ಮಾದರಿಯನ್ನು ಪ್ರದರ್ಶಿಸಿದರು. ಭೌತಶಾಸ್ತ್ರದಲ್ಲಿ ಕ್ಲಿಷ್ಟಕರವಾದ ಪಾಠಗಳನ್ನು ವಿವಿಧ ಸೃಜನಾತ್ಮಕ ಮಾದರಿಗಳೊಂದಿಗೆ ಸರಳ ಮಾದರಿಯಲ್ಲಿ ಬೋಧಿಸುವ ವಿಧಾನ ಹಾಗೂ ವಯಸ್ಸಾದವರಿಗೆ ಮತ್ತು ವಿಶೇಷ ಚೇತನರಿಗೆ ಅವರು ಮಲಗಿರುವ ಸ್ಥಳದಲ್ಲಿಯೇ ಎಲೆಕ್ಟ್ರಿಕ್ ಉಪಕರಣಗಳಾದ ದೂರದರ್ಶನ, ಎಲೆಕ್ಟ್ರಿಕ್ ಬಲ್ಬ್, ಫ್ಯಾನ್, ಎಸಿ ಹೀಗೆ ಹಲವು ಉಪಕರಣಗಳನ್ನು ಒಂದೇ ರಿಮೋಟ್ ಮೂಲಕವೇ ಕಂಟ್ರೋಲ್ ಮಾಡುವ ಸಾಧನದೊಂದಿಗೆ ವಿಜ್ಞಾನ ವಸ್ತುಪ್ರದರ್ಶನ ಸ್ಪರ್ಧೆಯಲ್ಲಿ ಪ್ರಸ್ತುತಪಡಿಸಿ, ಹೈದರಾಬಾದ್‌ನಲ್ಲಿ ಜ.18 ರಿಂದ 23ರವರೆಗೆ ನಡೆಯುವ ರಾಷ್ಟ್ರಮಟ್ಟದ ದಕ್ಷಿಣ ಭಾರತ ವಿಜ್ಞಾನ ಮೇಳ ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ.

ಕುಮಾರಸ್ವಾಮಿಗೂ ಹೆಚ್ಚಿನ ರಾಜಕೀಯ ಅನುಭವ ನನಗಿದೆ; ಡಿಸಿಎಂ ಡಿಕೆಶಿ

ಬೆಂಗಳೂರು, ಜ.8(ಕೆಎಂಶಿ)–ರಾಜಕೀಯದಲ್ಲಿ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರಿಗಿಂತ ಹೆಚ್ಚಿನ ಅನುಭವ ನನಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದಿಲ್ಲಿ ತಿರುಗೇಟು ನೀಡಿದ್ದಾರೆ.



ಕೆಪಿಸಿಸಿ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ಮುಖ್ಯಮಂತ್ರಿ ಆಗಿಲ್ಲದಿರಬಹುದು. ಆದರೆ, ಆಡಳಿತ ವಿಚಾರದಲ್ಲಿ ಅವರಿಗಿಂತ ಅನುಭವ ಹೊಂದಿದ್ದೇನೆ. ಅವರಿಂದ ಕಲಿಯುವ ಅಗತ್ಯ ನನಗಿಲ್ಲ ಎಂದರು.

ನಾನು ಬಹಳ ಕಾಲ ಸಚಿವನಾಗಿ ಕೆಲಸ ಮಾಡಿದ್ದೇನೆ. ಆಡಳಿತ ಹೇಗೆ ಮಾಡಬೇಕು. ಯಾರ ಜೊತೆ ಸಭೆ ಮಾಡಬೇಕು, ಮಾಡಬಾರದು ಎಂಬುದು ನನಗೆ ಚೆನ್ನಾಗಿ ಗೊತ್ತಿದೆ. ಕುಮಾರಸ್ವಾಮಿ ಧೋರಣೆ ನೋಡಿದರೆ, ಸದ್ಯದಲ್ಲೇ ಬಿಜೆಪಿ ಜೊತೆ ಜೆಡಿಎಸ್ ವಿಲೀನವಾಗುವ ಸಾಧ್ಯತೆ ಇದೆ. ಹಾಗಾದರೆ ನಮಗೂ ಒಳ್ಳೆಯದೇ, ನಾವೂ ನೇರವಾಗಿ ಬಿಜೆಪಿ ಜೊತೆ ಹೋರಾಟ ಮಾಡಬಹುದು, ಆಟಕ್ಕೆ ಮೂರು ಪಕ್ಷ, ಲೆಕ್ಕಕ್ಕೆ ಮಾತ್ರ ಎರಡು ಪಕ್ಷ ಎಂಬ ಗೊಂದಲ ಇರುವುದಿಲ್ಲ.

ಚಾಮರಾಜಪೇಟೆ ವಿಧಾನಸಭಾ ಕ್ಷೇತ್ರದ ಜೆಡಿಎಸ್‌ನ ಮಾಜಿ ಕಾರ್ಪೊರೇಟರ್ ಗೋವಿಂದರಾಜ್ ಬಿಜೆಪಿ–ಜೆಡಿಎಸ್ ಹೊಂದಾಣಿಕೆ ಒಪ್ಪಿಕೊಳ್ಳಲು ಸಾಧ್ಯವಾಗದೇ ಕಾಂಗ್ರೆಸ್ ಸೇರಿದ್ದಾರೆ.

ಅನೇಕ ಕ್ಷೇತ್ರಗಳಲ್ಲಿ ಬಿಜೆಪಿ, ಜೆಡಿಎಸ್ ಕಾರ್ಯಕರ್ತರು ತಮ್ಮ ರಾಜಕೀಯ ಭವಿಷ್ಯದ ಚಿಂತೆಯಲ್ಲಿದ್ದಾರೆ. ಬೆಂಗಳೂರು ಪಾಲಿಕೆ ಚುನಾವಣೆಯಲ್ಲಿ ಕಾಂಗ್ರೆಸ್‌ನಿಂದ ಸ್ಪರ್ಧಿಸಲು ಅನೇಕ ಮಂದಿ ಉತ್ಸುಕರಾಗಿದ್ದಾರೆ.

ಬೆಂಗಳೂರು ಪಶ್ಚಿಮ ಪಾಲಿಕೆಯಲ್ಲಿ 247, ಬೆಂಗಳೂರು ಉತ್ತರದಲ್ಲಿ 199, ಬೆಂಗಳೂರು ದಕ್ಷಿಣದಲ್ಲಿ 129, ಬೆಂಗಳೂರು ಕೇಂದ್ರದಲ್ಲಿ 106, ಬೆಂಗಳೂರು ಪೂರ್ವದಲ್ಲಿ 78 ಸೇರಿದಂತೆ ಒಟ್ಟು 779 ಟಿಕೆಟ್ ಆಕಾಂಕ್ಷಿಗಳು ಅರ್ಜಿ ಸ್ವೀಕರಿಸಿದ್ದಾರೆ.

ಅರ್ಜಿ ತೆಗೆದುಕೊಂಡವರು ಕೊನೆ ದಿನದವರೆಗೂ ಕಾಯದೆ, ಎರಡು ಮೂರು ದಿನಗಳಲ್ಲಿ ಸಲ್ಲಿಕೆ ಮಾಡಿ, ನಾವು ಪಕ್ಷದ ಅಭ್ಯರ್ಥಿ ಆಯ್ಕೆ ವಿಮರ್ಶೆ ಮಾಡಬೇಕಿದ್ದು, ಕೊನೆ ಘಳಿಗೆಯಲ್ಲಿ ಸಲ್ಲಿಕೆಯಾದರೆ ಕಷ್ಟವಾಗುತ್ತದೆ ಎಂದರು.

ಅಸ್ತಿತ್ವ ಉಳಿಸಿಕೊಳ್ಳಲು ಜೆಡಿಎಸ್‌ನವರು ಬಿಜೆಪಿ ಜೊತೆ ಫ್ರೆಂಡ್ಲಿ ಫೈಟ್ ಮಾಡುತ್ತೇವೆ ಎಂದಿದ್ದು, ದಯವಿಟ್ಟು ಫ್ರೆಂಡ್ಲಿ ಫೈಟ್ ಬೇಡ, ನೇರ ಹೋರಾಟ ಮಾಡಿ, ನಾವು ಸಿದ್ಧವಿದ್ದೇವೆ.

ರಾಜಕಾರಣದಲ್ಲಿ ಗೆಲುವು–ಸೋಲು ಇದ್ದದ್ದೇ, ನಾವು ಗೆಲ್ಲುತ್ತೀವೋ, ಸೋಲುತ್ತೀವೋ, ಪಾಲಿಕೆ ಚುನಾವಣೆ ನಡೆಸುವುದಾಗಿ ಸರ್ಕಾರ ಈಗಾಗಲೇ ನ್ಯಾಯಾಲಯದಲ್ಲಿ ಅಫಿಡವಿಟ್ ಸಲ್ಲಿಸಿದೆ. ಈ ವರ್ಷವನ್ನು ಚುನಾವಣಾ ವರ್ಷ ಎಂದು ಪರಿಗಣಿಸಲಾಗಿದ್ದು, ಈ ವರ್ಷವೇ ಇತರೆ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸಲಾಗುವುದು.

ಕಾನೂನು ಅಡೆತಡೆ ನಿವಾರಣೆಗೆ ತೀರ್ಮಾನಿಸಿದ್ದು, ಕಾರ್ಯಕರ್ತರು ಚುನಾವಣೆಗೆ ಸಿದ್ಧರಾಗಬೇಕು. ಪಕ್ಷಕ್ಕೆ ಬರುವುದು, ವಾಪಸ್ ಹೋಗುವುದು ಮಾಡಬೇಡಿ. ಜೆಡಿಎಸ್ ಅನ್ನು ತಮ್ಮ ವೈಯಕ್ತಿಕ ಆಸ್ತಿಯಂತೆ ಮಾಡಿಕೊಂಡಿದ್ದಾರೆ. ಆ ಪಕ್ಷಕ್ಕೆ ಒಂದು ಸಿದ್ಧಾಂತ, ನೀತಿ ಇಲ್ಲ ಎಂದು ಟೀಕಿಸಿದರು.

ರೋಟರಿ ಐವರಿ ಸಿಟಿಯಿಂದ ಮಾತೆ ಮೀನಾಕ್ಷಿ ವಿದ್ಯಾರ್ಥಿ ವೇತನ ವಿತರಣೆ



ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನವನ್ನು ವಿತರಿಸಲಾಯಿತು.

ಮೈಸೂರು, ಜ.8– ಮೈಸೂರಿನ ರೋಟರಿ ಐವರಿ ಸಿಟಿ ವತಿಯಿಂದ ಮಾನಂದವಾಡಿ ರಸ್ತೆಯಲ್ಲಿರುವ ಇನ್ಸ್‌ಟಿಟ್ಯೂಟ್ ಆಫ್ ಇಂಜಿನಿಯರ್ಸ್ ಕಾಲೇಜಿನ ಸರ್ವಪಲ್ಲಿ ರಾಧಾಕೃಷ್ಣನ್ ಸಭಾಂಗಣದಲ್ಲಿ ಸ್ವಾತಂತ್ರ ಹೋರಾಟಗಾರರಾಗಿದ್ದ ಜಿ.ಎಲ್.ಸ್ವಾಮಿ ಅವರ ಧರ್ಮಪತ್ನಿ ಮಾತೆ ಮೀನಾಕ್ಷಿಯವರ ಹೆಸರಿನಲ್ಲಿ ವಿದ್ಯಾರ್ಥಿ ವೇತನವನ್ನು ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ವಿತರಿಸಲಾಯಿತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಹಿರಿಯ ಪತ್ರಕರ್ತ ಗೌರಿಸತ್ಯ ಮಾತನಾಡಿ, ಸಮಾಜ ಸೇವೆಯಿಂದ ಮನುಷ್ಯನಿಗೆ ಆತ್ಮತೃಪ್ತಿ ಸಿಗುತ್ತದೆ. ಜೊತೆಗೆ ಸಂತೃಪ್ತ ಜೀವನ ನಡೆಸಿದ ಸಂತೋಷದ ಅನುಭವ ನಮಗೆಲ್ಲ ಲಭಿಸುತ್ತದೆ ಎಂದರು. ಸಮಾಜದಲ್ಲಿ ಉಳ್ಳವರು, ಕಷ್ಟದಲ್ಲಿರುವವರಿಗೆ, ನೊಂದವರಿಗೆ ಸಹಾಯಹಸ್ತ ನೀಡುವ ಮನೋಭಾವವನ್ನು ಬೆಳೆಸಿಕೊಳ್ಳಬೇಕೆಂದು ತಿಳಿಸಿದರು.

ವಿದ್ಯಾರ್ಥಿಗಳು ಸಮಾಜದಲ್ಲಿ ಸಿಗುವ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ಬದುಕನ್ನು ರೂಪಿಸಿಕೊಳ್ಳಬೇಕೆಂದ ಅವರು, ಶಿಕ್ಷಕರಾದವರು ಪಾಠ ಬೋಧನೆಯ ಜೊತೆಗೆ ಸಮಾಜಸೇವಾ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಬೇಕು. ಆ ಮೂಲಕ ಸೇವಾಕಾರ್ಯಗಳು ಮುಂದುವರೆಯಲು ಸಹಾಯವಾಗುತ್ತದೆ. ಸೇವೆಯ ಮೂಲಕ ಶಿಕ್ಷಣ, ಶಿಕ್ಷಣದ ಮೂಲಕ ಸೇವೆ ಎಲ್ಲರಲ್ಲೂ ಬೆಳೆಯಬೇಕೆಂದು ಸಮಾರಂಭದಲ್ಲಿ ತಿಳಿಸಿದರು.

ವಿಶೇಷ ಆಹ್ವಾನಿತರಾಗಿ ಆಗಮಿಸಿದ್ದ ನ್ಯಾಷನಲ್ ಇನ್ಸ್‌ಟಿಟ್ಯೂಟ್ ಇಂಜಿನಿಯರ್ಸ್ ಸಂಸ್ಥೆಯ ಅಧ್ಯಕ್ಷರು ಹಾಗೂ ನುರಿತ ವೈದ್ಯಕೀಯ ತಜ್ಞರಾದ ಡಾ. ಎಂ.ಎಸ್.ರಂಗನಾಥ್ ಮಾತನಾಡಿ, ವಿದ್ಯಾರ್ಥಿಗಳು ವಿದ್ಯಾರ್ಥಿವೇತನವನ್ನು ಪಡೆದುಕೊಂಡು ಆ ಹಣವನ್ನು ವಿದ್ಯಾಭ್ಯಾಸಕ್ಕೆ ಸದ್ಬಳಕೆ ಮಾಡಿಕೊಳ್ಳಬೇಕು. ನಂತರದ ದಿನಗಳಲ್ಲಿ ತಾವುಗಳು ಉನ್ನತಮಟ್ಟ ತಲುಪಿದಾಗ ಬೆಳೆದುಬಂದ ದಾರಿಯನ್ನು ಎಂದಿಗೂ ಮರೆಯಬಾರದು. ಸಮುದಾಯಕ್ಕೆ ಸಹಾಯ, ಸಹಕಾರವನ್ನು ನೀಡಬೇಕು ಎಂದರು.

ಕಾರ್ಯಕ್ರಮದಲ್ಲಿ ಎನ್.ಐ.ಇ ಇಂಜಿನಿಯರಿಂಗ್ ಕಾಲೇಜಿನ ನಿವೃತ್ತ ಪ್ರಾಂಶುಪಾಲರು ಹಾಗೂ ಶಾರದಾವಿಲಾಸ ವಿದ್ಯಾಸಂಸ್ಥೆಗಳ ಆಡಳಿತ ಮಂಡಳಿ ಸದಸ್ಯ ಡಾ.ಜಿ.ಎಲ್.ಶೇಖರ್ ಪ್ರಾಸ್ತಾವಿಕ ನುಡಿಗಳನ್ನಾಡಿ, ತಾಯಿ ನಮಗೆ ಜನ್ಮವನ್ನು ನೀಡುತ್ತಾಳೆ. ಜನ್ಮಕೊಟ್ಟ ತಾಯಿಯ ಋಣವನ್ನು ಎಂದೆಂದಿಗೂ ತೀರಿಸಲು ಸಾಧ್ಯವಾಗುವುದಿಲ್ಲ. ಆದ್ದರಿಂದ ಅವಕಾಶ ಸಿಕ್ಕಾಗ ತಾಯಿಯ ಹೆಸರಿನಲ್ಲಿ ಇಂತಹ ಸೇವಾ ಕಾರ್ಯಗಳನ್ನು ಮಾಡಬೇಕೆಂದು ಹೇಳಿದರು.

ವೇದಿಕೆಯಲ್ಲಿ ರೋಟರಿ ಐವರಿ ಸಿಟಿಯ ಅಧ್ಯಕ್ಷ ರೋ.ಕೇಶವ್ ಕಾಂಚನ್, ಕಾರ್ಯದರ್ಶಿ ರೋ.ಮುಖೇಶ್, ರೋ.ಡಾ.ಜಿ.ಎಲ್.ಶೇಖರ್, ರೋ.ಸುನಿಲ್‌ಬಾಳಿಗಾ, ರೋ. ಶಶಿಧರ್, ರೋ.ಡಾ.ಸಚ್ಚಿದಾನಂದ, ರೋ. ಇಫ್ತಿಕರ್, ರೋ.ಆರ್.ನರಸಿಂಹ, ರೋ. ಪೂಜಾ ಬಾಳಿಗಾ, ಪ್ರಾಂಶುಪಾಲರಾದ ಡಾ. ಎಂ.ದೇವಿಕಾ, ಸಿ.ಕೆ.ಅಶೋಕ್ ಕುಮಾರ್, ಮನೋಹರ್, ಮನೋಜ್‌ಕುಮಾರ್, ವಿವಿಧ ಕಾಲೇಜಿನ ಪ್ರತಿಭಾನ್ವಿತ ವಿದ್ಯಾರ್ಥಿಗಳು ಮತ್ತು ಪೋಷಕರು ಭಾಗವಹಿಸಿದ್ದರು.

ಚಿನ್ನದ ಪದಕ ಪ್ರದಾನ



ಮೈಸೂರು ವಿಶ್ವವಿದ್ಯಾಲಯದ ಎಂ.ಎಸ್ಸಿ (ಜಿ.ಐ.ಎಸ್.)ಯಲ್ಲಿ ಭಾವನಾ.ಪಿ. ಇವರು ಅತೀ ಹೆಚ್ಚು ಅಂಕ ಪಡೆದು ಚಿನ್ನದ ಪದಕ ಪಡೆದಿದ್ದಾರೆ. ಇತ್ತೀಚೆಗೆ ನಡೆದ ವಿಶ್ವವಿದ್ಯಾಲಯದ 106ನೇ ಘಟಿಕೋತ್ಸವ ಸಮಾರಂಭದಲ್ಲಿ ಕುಲಪತಿ ಪ್ರೊ ಲೋಕನಾಥ್ ಪದಕ ವಿತರಿಸಿದರು. ಭಾವನಾ ಅವರ ಈ ಸಾಧನೆಗೆ ವಿಭಾಗದ ಮುಖ್ಯಸ್ಥೆ ಪಿ ಜಯಶ್ರೀ ಹಾಗೂ ನಿಕಟಪೂರ್ವ ಮುಖ್ಯಸ್ಥ ಪ್ರೊ. ರಾಮು ಅಭಿನಂದಿಸಿದ್ದಾರೆ.

ಪ್ರತಿಭಾ ಕಾರಂಜಿ



ಮೈಸೂರಿನ ಮಹಾರಾಜ ಕಾಲೇಜಿನಲ್ಲಿ ಜರುಗಿದ ಜಿಲ್ಲಾ ಮಟ್ಟದ ಪ್ರತಿಭಾಕಾರಂಜಿಯ ಕನ್ನಡ ಕಂಠಪಾಠ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದ ಹೆಚ್ ಡಿ ಕೋಟೆ ತಾಲೂಕಿನ ಹಂಪಾಪುರ ಹೋಬಳಿಯ ಸರ್ಕಾರಿ ಹಿರಿಯ ಪ್ರಾಥಮಿಕ ಚಿಕ್ಕೆರೆಯೂರು ಶಾಲೆಯ ವಿದ್ಯಾರ್ಥಿ ದೀಕ್ಷಿತ್ ಎಂ ಅವರನ್ನು ಮುಖ್ಯ ಶಿಕ್ಷಕರಾದ ಎಂ. ಪದ್ಮ ಅಭಿನಂದಿಸಿದರು. ಈ ಸಂದರ್ಭದಲ್ಲಿ ಸಹಶಿಕ್ಷಕರಾದ ರೂಪ ಎಲ್ ಕೆ, ದಿನೇಶ್ ಪಿ, ಲಕ್ಷ್ಮಿ ಕೆ, ಪದ್ಮಶ್ರೀ ಎಸ್ ವಿ, ರೋಜಾ ಎಸ್, ರಾಜು ಜೆ, ಮಹದೇವ ಬಿ, ಅಭಿಷೇಕ್ ಎಸ್, ಪ್ರಸನ್ನಕುಮಾರಿ ಎಸ್, ರೋಜಾ ಸಿ ಜೆ, ರೇಖಾ ಎಸ್ ಕೆ, ಸುಮಿತ್ರಾ ಬಿ ಸಿ ಮತ್ತಿತರರು ಉಪಸ್ಥಿತರಿದ್ದರು.

ವೇಣುವಾದನ



ಮೈಸೂರು ಶ್ರೀ ಸುತ್ತೂರು ಮಠದಲ್ಲಿ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ಜರುಗಿದ 287ನೇ ಬೆಳದಿಂಗಳ ಸಂಗೀತ ಕಾರ್ಯಕ್ರಮದಲ್ಲಿ ವಿದ್ವಾನ್ ಶಶಾಂಕ್ ಸುಬ್ರಹ್ಮಣ್ಯಂರವರು ವೇಣುವಾದನ ಪ್ರಸ್ತುತಿಪಡಿಸಿದರು. ವಯೊಲಿನ್‌ನಲ್ಲಿ ವಿದ್ವಾನ್ ನಿಶಾಂತ್ ಚಂದ್ರನ್, ಘಟಂನಲ್ಲಿ ವಿದ್ವಾನ್ ಜಿ.ಎಸ್. ರಾಮಾನುಜಂ ಹಾಗೂ ಮೃದಂಗದಲ್ಲಿ ವಿದ್ವಾನ್ ಅರ್ಜುನ್ ಕುಮಾರ್ ಸಾಥ್ ನೀಡಿದರು.

ಜ.22ರಂದು ಅಯೋಧ್ಯ ಪ್ರಭು ಶ್ರೀ ರಾಮದೇವರ ಪ್ರತಿಷ್ಠಾಪನೆ 2ನೇ ವಾರ್ಷಿಕೋತ್ಸವ ಹಿನ್ನೆಲೆಯಲ್ಲಿ ಲಕ್ಷ ದೀಪೋತ್ಸವ

ಪೇಜಾವರ ಶ್ರೀಪಾದಂಗಳವರಿಂದ ಪೋಸ್ಟರ್ ಬಿಡುಗಡೆ



ಉಡುಪಿಯ ಪೇಜಾವರ ಮಠದ ಶ್ರೀ ವಿಶ್ವ ಪ್ರಸನ್ನ ತೀರ್ಥ ಶ್ರೀಪಾದಂಗಳವರು ಪೋಸ್ಟರ್ ಬಿಡುಗಡೆಗೊಳಿಸಿದರು.

ಮೈಸೂರು: ಅಯೋಧ್ಯೆ ಪ್ರಭು ಶ್ರೀ ರಾಮದೇವರ ಪ್ರತಿಷ್ಠೆಯಾಗಿ 2ನೇ ವಾರ್ಷಿಕೋತ್ಸವ ಹಾಗೂ ಮೈಸೂರಿನಲ್ಲಿ ಸಂಭ್ರಮದಿಂದ ಆಚರಿಸುತ್ತಿರುವ 3ನೇ ವರ್ಷದ ಲಕ್ಷದೀಪೋತ್ಸವ ಕಾರ್ಯಕ್ರಮದ ಹಿನ್ನೆಲೆಯಲ್ಲಿ ಜ.22ರಂದು ಸಂಜೆ 6.30ಕ್ಕೆ ಮೈಸೂರಿನ ಮುಖ್ಯ ದ್ವಾರದ ಅಶೋಕ ರಸ್ತೆಯ ವೀರನಗೆರೆಯ ವೀರ ಗಣಪತಿ ದೇವಸ್ಥಾನದಲ್ಲಿ ಲಕ್ಷ ದೀಪೋತ್ಸವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಅದರ ಪ್ರಚಾರ ಸಾಮಗ್ರಿಯನ್ನು ಸರಸ್ವತಿಪುರಂನಲ್ಲಿರುವ ಶ್ರೀ ಕೃಷ್ಣಧಾಮದಲ್ಲಿ ಉಡುಪಿಯ ಪೇಜಾವರ ಮಠದ ಶ್ರೀ ವಿಶ್ವ ಪ್ರಸನ್ನ ತೀರ್ಥ ಶ್ರೀಪಾದಂಗಳವರು ಬಿಡುಗಡೆಗೊಳಿಸಿ, ಆಶೀರ್ವದಿಸಿ ಮಾತನಾಡಿ, ಇದೊಂದು ಅತ್ಯಂತ ಸಂತೋಷದ ವಿಷಯ. ಸಮಸ್ತ ಭಾರತೀಯ ಆಕಾಂಕ್ಷಿಯಾಗಿದ್ದ ಅಯೋಧ್ಯ ಶ್ರೀ ರಾಮ ಮಂದಿರ ನಿರ್ಮಾಣಗೊಂಡು ಎರಡನೇ ವರ್ಷಕ್ಕೆ ಕಾಲಿಡುತ್ತಿದ್ದು, ರಾಮ ಮಂದಿರ ನಿರ್ಮಾಣವು ಭಾರತೀಯ ಪರಂಪರೆಯನ್ನು ಪುನರ್ಜೀವನಗೊಳಿಸುವ ಕೆಲಸವಾಗಿತ್ತು. ಅಯೋಧ್ಯೆ ಬಾಲರಾಮನ ಆಶೀರ್ವಾದ ಎಲ್ಲರ ಮೇಲೂ ಇರಲಿ ಎಂದು ಆಶೀರ್ವದಿಸಿದರು.


ಈ ಸಂದರ್ಭದಲ್ಲಿ ಮಾತನಾಡಿದ ವಿದ್ವಾನ್ ಪ್ರಹ್ಲಾದ್‌ರಾವ್, ವಿಶ್ವದೆಲ್ಲೆಡೆ ರಾಮಭಕ್ತರು ಆಚರಿಸುವಂತಹ ಸಂಭ್ರಮಿಸುವಂತಹ ದಿನ ಇದಾಗಿದ್ದು, ರಾಮದೇವರ ಪ್ರತಿಷ್ಠಾಪನೆಯಾಗಿ ಅಯೋಧ್ಯೆಯಲ್ಲಿ 2 ವರ್ಷ ತುಂಬಿದೆ. ಇದು ಮೈಸೂರಿನ ಜನತೆ ಪ್ರತಿ ಮನೆಯಲ್ಲೂ ದೀಪ ಬೆಳಗಿಸುವಂತಹ ದಿವಸವಾಗಿದ್ದು ಅದರ ಹಿನ್ನೆಲೆಯಲ್ಲಿ ಈ ಲಕ್ಷ ದೀಪೋತ್ಸವ ಕಾರ್ಯಕ್ರಮಕ್ಕೆ ಮೈಸೂರಿನ ನಾಗರಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗಬೇಕೆಂದು ಮನವಿ ಮಾಡಿದರು.

ಈ ವೇಳೆ ವಿದ್ವಾನ್ ಪ್ರಹ್ಲಾದ್ ರಾವ್, ಶ್ರೀ ಕೃಷ್ಣ ಟ್ರಸ್ಟ್ ಉಪಾಧ್ಯಕ್ಷ ರವಿಶಾಸ್ತ್ರಿ, ಮಂಜುನಾಥ್, ಎಸ್.ಎನ್. ರಾಜೇಶ್, ಶ್ರೀನಿವಾಸ್, ನಕ್ಷತ್ರ ವಿಜಯ್, ಪುನೀತ್ ಕೂಡ್ಲೂರು, ಗಣೇಶ್, ಅಮಿತ್, ಕೃಷ್ಣದಾಸ್ ಪುರಾಣಿಕ್ ಇನ್ನಿತರರು ಇದ್ದರು.

ನಂಜನಗೂಡು ರಸಬಾಳೆ ವೈಜ್ಞಾನಿಕ ಬೇಸಾಯ ಕ್ರಮ

ಮಾರುಕಟ್ಟೆ ಸೌಲಭ್ಯಗಳು, ರಫ್ತು ಅವಕಾಶಗಳು ಕಾರ್ಯಾಗಾರ

ಮೈಸೂರು, ಜ.8– ಬೆಂಗಳೂರಿನ ಕೃಷಿ ಮತ್ತು ಸಂಸ್ಕರಿಸಿದ ಆಹಾರ ಉತ್ಪನ್ನಗಳ ರಫ್ತು ಅಭಿವೃದ್ಧಿ ಪ್ರಾಧಿಕಾರದ ಸಹಯೋಗದೊಂದಿಗೆ ಭೌಗೋಳಿಕ ಹಿನ್ನೆಲೆಯುಳ್ಳ ಸಾಂಪ್ರದಾಯಿಕ ಬೆಳೆಗಳ ವೈಜ್ಞಾನಿಕ ಬೇಸಾಯ ಕ್ರಮಗಳು ಮಾರುಕಟ್ಟೆ ಸೌಲಭ್ಯಗಳು ಹಾಗೂ ರಫ್ತು ಅವಕಾಶಗಳು ಕುರಿತ ಒಂದು ದಿನದ ಕಾರ್ಯಾಗಾರವನ್ನು ಸುತ್ತೂರಿನ ಐಸಿಎಆರ್ ಜೆಎಸ್‌ಎಸ್ ಕೃಷಿ ವಿಜ್ಞಾನ ಕೇಂದ್ರದಲ್ಲಿ ಏರ್ಪಡಿಸಲಾಗಿತ್ತು.



ಸುತ್ತೂರಿನ ಐಸಿಎಆರ್ ಜೆಎಸ್‌ಎಸ್ ಕೃಷಿ ವಿಜ್ಞಾನ ಕೇಂದ್ರದ ಕಾರ್ಯಾಗಾರದಲ್ಲಿ ಭಾಗವಹಿಸಿದ್ದ ಗಣ್ಯರು.

ಕೃಷಿ ಮತ್ತು ಸಂಸ್ಕರಿಸಿದ ಆಹಾರ ಉತ್ಪನ್ನಗಳ ರಫ್ತು ಅಭಿವೃದ್ಧಿ ಪ್ರಾಧಿಕಾರದ ಪ್ರಾದೇಶಿಕ ಸಹಾಯಕ ಪ್ರಧಾನ ವ್ಯವಸ್ಥಾಪಕ ಯು.ಧರ್ಮರಾವ್ ಮಾತನಾಡಿ, ಭೌಗೋಳಿಕ ಹಿನ್ನೆಲೆಯುಳ್ಳ ಸಾಂಪ್ರದಾಯಿಕ ಬೆಳೆಗಳ ಕೃಷಿ ಉತ್ಪನ್ನಗಳಿಗೆ ಅಂತರರಾಷ್ಟ್ರೀಯ ಮಾರುಕಟ್ಟೆಯನ್ನು ಕಲ್ಪಿಸುವುದು APEDA ಮೂಲ ಉದ್ದೇಶವಾಗಿದೆ. ರೈತರು ತಮ್ಮ ಸಾಂಪ್ರದಾಯಿಕ ಬೆಳೆಗಳ ಕೃಷಿ ಉತ್ಪನ್ನಗಳನ್ನು ಮಾರಾಟ ಮಾಡಲು APEDAನ್ನು ಸಂಪರ್ಕಿಸಿದರೆ ಸೂಕ್ತ ಮಾರ್ಗದರ್ಶನ ನೀಡಲಾಗುವುದು ಎಂದು ತಿಳಿಸಿದರು.

ನಂಜನಗೂಡು ತೋಟಗಾರಿಕೆ ಇಲಾಖೆಯ ಹಿರಿಯ ತೋಟಗಾರಿಕಾ ಸಹಾಯಕ ನಿರ್ದೇಶಕ ಸಿ.ಚಂದ್ರು ಮಾತನಾಡಿ, ನಂಜನಗೂಡು ರಸಬಾಳೆಯನ್ನು ರೈತರು ಬೆಳೆಯುವುದು ಕಡಿಮೆಯಾಗಿದೆ. ನಂಜನಗೂಡು ರಸಬಾಳೆಗೆ ಮಾರುಕಟ್ಟೆಯಲ್ಲಿ ಉತ್ತಮ ಬೆಲೆ ಇರುವುದರಿಂದ ರೈತರು ಹೆಚ್ಚು ನಂಜನಗೂಡು ರಸಬಾಳೆಯನ್ನು ಬೆಳೆಯಬೇಕು ಎಂದು ತಿಳಿಸಿದರು. ಮೈಸೂರು ಜಿಲ್ಲೆಯ ಭೌಗೋಳಿಕ ಹಿನ್ನೆಲೆಯುಳ್ಳ ಸಾಂಪ್ರದಾಯಿಕ ಬೆಳೆಗಳಾದ ನಂಜನಗೂಡು ರಸಬಾಳೆ, ಮೈಸೂರು ವಿಳ್ಯದೆಲೆ, ಈರನಗೆರೆ ಬದನೆಕಾಯಿ ಹಾಗೂ ಮೈಸೂರು ಮಲ್ಲಿಗೆ ಬೆಳೆಗಳನ್ನು ಬೆಳೆಯಲು ಪ್ರತ್ಯೇಕವಾಗಿ ಪ್ರೋತ್ಸಾಹ ಧನವನ್ನು ನೀಡಲಾಗುವುದು ಎಂದು ತಿಳಿಸಿದರು.

ಬೆಂಗಳೂರಿನ APEDA ಸಂಸ್ಥೆಯ ವ್ಯವಸ್ಥಾಪಕರಾದ ಶ್ರೀಮತಿ ಮಧುಮತಿ ಆಂಡ್ರೂಸ್ ಮಾತನಾಡಿ, ರೈತರು ತೋಟಗಾರಿಕೆ ಇಲಾಖೆಯ ಮುಖಾಂತರ APEDA ದೊಂದಿಗೆ ನೊಂದಣಿ ಮಾಡಿಕೊಂಡು ಮೈಸೂರು ಜಿಲ್ಲೆಯ ಭೌಗೋಳಿಕ ಹಿನ್ನೆಲೆಯುಳ್ಳ ಸಾಂಪ್ರದಾಯಿಕ ಬೆಳೆಗಳನ್ನು ಬೆಳೆದರೆ, APEDA ವತಿಯಿಂದ ರೂ 5 ಲಕ್ಷದವರೆಗೆ ಸಹಾಯಧನ ನೀಡಲಾಗುವುದು. ರೈತ ಉತ್ಪಾದಕ ಸಂಸ್ಥೆಯವರು ಹಾಗೂ ಸ್ವಸಹಾಯ ಸಂಘಗಳವರೂ ಸಹ APEDA ದೊಂದಿಗೆ ನೊಂದಣಿ ಮಾಡಿಕೊಂಡು ಬೆಳೆಗಳಿಗೆ ಸಹಾಯಧನ ಪಡೆದುಕೊಂಡು ಅಂತರರಾಷ್ಟ್ರೀಯ ಮಟ್ಟದಲ್ಲಿ ತಮ್ಮ ಕೃಷಿ ಉತ್ಪನ್ನಗಳನ್ನು ಮಾರಾಟ ಮಾಡಬಹುದಾಗಿದೆ ಎಂದು ತಿಳಿಸಿದರು.

ಬೆಂಗಳೂರಿನ APEDA ಸಂಸ್ಥೆಯ ಸಹಾಯಕ ವ್ಯವಸ್ಥಾಪಕರಾದ ಡಾ. ಬಿ.ಕೆ. ಪೂಜಾ ಮಾತನಾಡಿ, ಕೃಷಿ ಉತ್ಪನ್ನಗಳನ್ನು ನಿಗದಿತ ಹಾಗೂ ನಿಗದಿತವಲ್ಲದ ಕೃಷಿ ಉತ್ಪನ್ನಗಳು (Scheduled and non-scheduled agriculture products) ಎಂದು ವಿಂಗಡಣೆ ಮಾಡಿಕೊಂಡು APEDA ಸಂಸ್ಥೆಯೊಂದಿಗೆ ನೋಂದಣಿ ಮಾಡಿಕೊಂಡು ಉತ್ತಮ ಗುಣಮಟ್ಟದ ಕೃಷಿ ಉತ್ಪನ್ನಗಳನ್ನು ಮಾರಾಟ ಮಾಡಬಹುದಾಗಿದೆ. ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ಪ್ರತಿಯೊಂದು ದೇಶದಲ್ಲಿ ಅವರದೇ ಆದ ನಿಯಮಗಳಿರುತ್ತವೆ. ಆಯಾ ದೇಶದ ನಿಯಮಾನುಸಾರ ಕೃಷಿ ಉತ್ಪನ್ನಗಳನ್ನು APEDA ಸಂಸ್ಥೆಯ ಮಾರ್ಗದರ್ಶನದೊಂದಿಗೆ ಮಾರಾಟ ಮಾಡಬಹುದಾಗಿದೆ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಡಾ. ಬಿ.ಎನ್. ಜ್ಞಾನೇಶ್ ಮಾತನಾಡಿ, ರೈತರು ಪ್ರತಿ ಹಂಗಾಮಿನಲ್ಲೂ ಒಂದು ಬೆಳೆಯನ್ನು ಬೆಳೆಯದೆ ಪ್ರತಿ ಹಂಗಾಮಿಗೆ ವಿವಿಧ ಬೆಳೆಗಳನ್ನು ಬೆಳೆದು ಮಣ್ಣಿನ ಫಲವತ್ತತೆಯನ್ನು ಕಾಪಾಡಿಕೊಳ್ಳಲು ಕರೆನೀಡಿದರು. ನೈಸರ್ಗಿಕ ಕೃಷಿ, ಸಾವಯವ ಕೃಷಿ ನಡುವಿನ ವ್ಯತ್ಯಾಸ ಹಾಗೂ ಅದರ ಸಾಧಕ ಬಾಧಕಗಳ ಕುರಿತು ಚರ್ಚಿಸಿದರು. ಭೌಗೋಳಿಕ ಹಿನ್ನೆಲೆಯುಳ್ಳ ಮೈಸೂರಿನ ಸಾಂಪ್ರದಾಯಿಕ ಬೆಳೆಗಳಾದ ನಂಜನಗೂಡು ರಸಬಾಳೆ, ಮೈಸೂರು ಮಲ್ಲಿಗೆ ಹಾಗೂ ಮೈಸೂರು ವಿಳ್ಯದೆಲೆ ಉತ್ತಮ ಮಾರುಕಟ್ಟೆ ಮೌಲ್ಯ ಇದೆ. ರೈತರು ಸದರಿ ಬೆಳೆಗಳನ್ನು ರೈತರು ಬೆಳೆಯಲು ಆಸಕ್ತಿ ವಹಿಸಬೇಕೆಂದು ಕರೆ ನೀಡಿದರು.

ವಿಷಯ ತಜ್ಞರುಗಳಾದ ಡಾ. ಜಿ.ಎಂ. ವಿನಯ್ ಹಾಗೂ ಡಾ. ವೈ.ಪಿ ಪ್ರಸಾದ್ ಅವರು ಭೌಗೋಳಿಕ ಹಿನ್ನೆಲೆಯುಳ್ಳ ಮೈಸೂರಿನ ಸಾಂಪ್ರದಾಯಿಕ ಬೆಳೆಗಳ ಬೇಸಾಯ ಕ್ರಮಗಳ ಕುರಿತು ಮಾಹಿತಿ ನೀಡಿದರು. 120ಕ್ಕೂ ಹೆಚ್ಚು ರೈತರು ಹಾಗೂ ರೈತ ಮಹಿಳೆಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಕರ್ನಾಟಕದಲ್ಲಿ ಪ್ರಸರಣವಿಲ್ಲದ ನ್ಯಾಷನಲ್ ಹೆರಾಲ್ಡ್ ಪತ್ರಿಕೆಗೆ

ಕೋಟಿ ಕೋಟಿ ಜಾಹೀರಾತು ಹಣ!!



ಬೆಂಗಳೂರು, ಜ.8– ಯಾವುದೇ ರಾಷ್ಟ್ರೀಯ ದಿನ ಪತ್ರಿಕೆಗಿಂತ ಹೆಚ್ಚಿನ ಜಾಹೀರಾತು ನಿಧಿಯನ್ನು ಕಾಂಗ್ರೆಸ್ ಪಕ್ಷದ ನ್ಯಾಷನಲ್ ಹೆರಾಲ್ಡ್ ಪತ್ರಿಕೆಗೆ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಕಾಂಗ್ರೆಸ್ ಸರ್ಕಾರ ನೀಡಿದೆ.

ಸರ್ಕಾರಿ ದಾಖಲೆಗಳ ಮಾಹಿತಿಯ ಪ್ರಕಾರ, ಕಡಿಮೆ ಓದುಗರಿದ್ದರೂ, ಕರ್ನಾಟಕದಲ್ಲಿ ಪ್ರಸರಣ ಶೂನ್ಯವಾಗಿದ್ದರೂ, ನ್ಯಾಷನಲ್ ಹೆರಾಲ್ಡ್‌ಗೆ ರಾಜ್ಯ ಸರ್ಕಾರದಿಂದ ಕೋಟ್ಯಾಂತರ ರೂಪಾಯಿಗಳನ್ನು ನೀಡಲಾಗಿದೆ ಎಂದು ಆರೋಪಿಸಲಾಗಿದ್ದು, ಇದು ಸರ್ಕಾರದ ಖಜಾನೆಯ ದುರ್ಬಳಕೆ ಪ್ರಶ್ನೆಗಳನ್ನು ಹುಟ್ಟುಹಾಕಿದೆ.

ವರದಿಗಳ ಪ್ರಕಾರ, ಸತತ ಎರಡು ವರ್ಷಗಳ ಕಾಲ ಕರ್ನಾಟಕದಿಂದ ಜಾಹೀರಾತು ಪಡೆದ ರಾಷ್ಟ್ರೀಯ ಪತ್ರಿಕೆಗಳಲ್ಲಿ ಅತಿದೊಡ್ಡ ಫಲಾನುಭವಿಯಾಗಿ ನ್ಯಾಷನಲ್ ಹೆರಾಲ್ಡ್ ಹೊರಹೊಮ್ಮಿದೆ. 2023–24ರಲ್ಲಿ ನ್ಯಾಷನಲ್ ಹೆರಾಲ್ಡ್‌ಗೆ 1 ಕೋಟಿ ರೂ. ನೀಡಲಾಗಿದೆ. 2024–25ರಲ್ಲಿ ಸುಮಾರು 99 ಲಕ್ಷ ಹಂಚಿಕೆಯಾಗಿದ್ದು ಒಟ್ಟಾರೆ 1.99 ಕೋಟಿ ರೂ. ನೀಡಲಾಗಿದೆ. ಅದೇ ಸಮಯದಲ್ಲಿ ಹಲವಾರು ಪ್ರಸಿದ್ಧ ರಾಷ್ಟ್ರೀಯ ಪತ್ರಿಕೆಗಳು ಬಹಳ ಕಡಿಮೆ ಜಾಹಿರಾತು ಹಣವನ್ನು ಪಡೆದಿವೆ ಎಂದು ವರದಿಯಾಗಿದೆ. 2024–25ರಲ್ಲಿ ಮಾತ್ರ ಕರ್ನಾಟಕ ಸರ್ಕಾರವು ರಾಷ್ಟ್ರೀಯ ಪತ್ರಿಕೆಗಳಲ್ಲಿ ಜಾಹೀರಾತುಗಳಿಗಾಗಿ 1.42 ಕೋಟಿ ಖರ್ಚು ಮಾಡಿದ್ದು, ಇದರಲ್ಲೂ ಸರಿಸುಮಾರು ಶೇಕಡ 69ರಷ್ಟು ನ್ಯಾಷನಲ್ ಹೆರಾಲ್ಡ್‌ಗೆ ಹೋಗಿದೆ. ನ್ಯಾಷನಲ್ ಹೆರಾಲ್ಡ್, ಹಿರಿಯ ಕಾಂಗ್ರೆಸ್ ನಾಯಕರಾದ ರಾಹುಲ್ ಗಾಂಧಿ ಮತ್ತು ಸೋನಿಯಾ ಗಾಂಧಿ ಅವರನ್ನು ಒಳಗೊಂಡ ಹೈ ಪ್ರೊಫೈಲ್ ವಿವಾದದ ಕೇಂದ್ರಬಿಂದುವಾಗಿದೆ. ಪತ್ರಿಕೆಯ ಮಾತೃ ಕಂಪನಿ ಅಸೋಸಿಯೇಟೆಡ್ ಜರ್ನಲ್ಸ್ ಲಿಮಿಟೆಡ್(ಎಜೆಎಲ್) ಒಳಗೊಂಡ ಇಡಿಯ ಹಣ ವರ್ಗಾವಣೆ ಪ್ರಕರಣದಲ್ಲಿ ಅವರ ಮೇಲೆ ಆರೋಪ ಹೊರಿಸಲಾಗಿದೆ.

ದೆಹಲಿ ಪೊಲೀಸರ ಆರ್ಥಿಕ ಅಪರಾಧ ವಿಭಾಗವು ಕರ್ನಾಟಕ ಡಿಸಿಎಂ ಡಿ.ಕೆ.ಶಿವಕುಮಾರ್ ಮತ್ತು ಅವರ ಸಹೋದರ ಡಿ.ಕೆ. ಸುರೇಶ್ ಅವರಿಗೆ ನೋಟಿಸ್ ಜಾರಿ ಮಾಡಿದ್ದು, ನ್ಯಾಷನಲ್ ಹೆರಾಲ್ಡ್ ಮತ್ತು ಯಂಗ್ ಇಂಡಿಯನ್‌ಗೆ ನೀಡಿದ ದೇಣಿಗೆಗಳಿಗೆ ಸಂಬಂಧಿಸಿದ ಹಣಕಾಸಿನ ದಾಖಲೆಗಳನ್ನು ಕೋರಿದೆ. ತನಿಖೆಯು ನಿಧಿ ಮತ್ತು ಆಸ್ತಿ ವರ್ಗಾವಣೆಯಲ್ಲಿನ ಅಕ್ರಮಗಳ ಆರೋಪಗಳಿಗೆ ಸಂಬಂಧಿಸಿದೆ. ಇದನ್ನು ಕಾಂಗ್ರೆಸ್ ರಾಜಕೀಯ ಪ್ರೇರಿತ ಮತ್ತು ಪಕ್ಷದ ನಾಯಕರನ್ನು ಕಿರುಕುಳ ನೀಡುವ ಉದ್ದೇಶ ಹೊಂದಿದೆ ಎಂದು ಬಣ್ಣಿಸಿದೆ.

ಸರ್ಕಾರದ, ಸಿದ್ದರಾಮಯ್ಯ ಅವರ ಬೌದ್ಧಿಕ ದಿವಾಳಿ

ಬೆಂಗಳೂರು, ಜ.8(ಕೆಎಂಶಿ)–ನ್ಯಾಷನಲ್ ಹೆರಾಲ್ಡ್‌ಗೆ ಪ್ರಮುಖ ರಾಷ್ಟ್ರೀಯ ಪತ್ರಿಕೆಗಳಿಗಿಂತ ಜಾಸ್ತಿ ಹಣವನ್ನು



ಕಾಂಗ್ರೆಸ್ ಕೊಟ್ಟಿರುವುದು ಕಾಂಗ್ರೆಸ್ ಸರ್ಕಾರದ ಹಾಗೂ ಸಿದ್ದರಾಮಯ್ಯ ಅವರ ಬೌದ್ಧಿಕ ದಿವಾಳಿತನ ತೋರಿಸುತ್ತದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಟೀಕಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನ್ಯಾಷನಲ್ ಹೆರಾಲ್ಡ್‌ಗೆ 2023–24ರಲ್ಲಿ 1.9 ಕೋಟಿ ರೂ., 2024–25ರಲ್ಲಿ ಸುಮಾರು 1 ಕೋಟಿ ರೂ. ಮಂಜೂರು ಮಾಡಲಾಗಿದೆ. ಪತ್ರಿಕೆ ಕುರಿತ ಹಗರಣ ಕೋರ್ಟಿನಲ್ಲಿದೆ ಎಂದರು. ಇದರ ತಥಾಕಥಿತ ಟ್ರಸ್ಟಿಗಳು, ಎನ್‌ಜಿಒಗಳು, ಮಾಲೀಕರಲ್ಲಿ ತಾಯಿ–ಮಗ ಜಾಮೀನಿನ ಮೇಲೆ ಇದ್ದಾರೆ, ಪತ್ರಿಕೆ ಪ್ರಸಾರ ಸಂಖ್ಯೆ ಬಹುತೇಕ ಶೂನ್ಯವಾಗಿದೆ. ಅದಕ್ಕೆ ಇಷ್ಟು ಹಣ ನೀಡ ಲಾಗಿದೆ. ಇದು ಒಂದು ರೀತಿ ನೇರವಾಗಿ ಗಾಂಧಿ ಕುಟುಂಬಕ್ಕೆ ಕರ್ನಾಟಕ ಸರ್ಕಾರದಿಂದ ದಾನ ಕೊಟ್ಟು ಸಂಪ್ರೀತಗೊಳಿಸುವ ಪ್ರಕ್ರಿಯೆಯಾಗಿದೆ ಎಂದು ಆರೋಪಿಸಿದರು.

ಕ್ರೆಡಲ್‌ನಿಂದ ಸರ್ಕಾರಕ್ಕೆ 77.17 ಕೋಟಿ ಡಿವಿಡೆಂಡ್ ಸಲ್ಲಿಕೆ



ಕ್ರೆಡಲ್ 2024–25ನೇ ಸಾಲಿನಲ್ಲಿ 257.25 ಕೋಟಿ ರೂ. ನಿವ್ವಳ ಲಾಭದ ಶೇ.30ರಷ್ಟು ಡಿವಿಡೆಂಡ್ 77,17,50,000 ರೂ. ಮೊತ್ತದ ಚೆಕ್ ಅನ್ನು ಇಂಧನ ಸಚಿವ ಕೆ.ಜೆ.ಜಾರ್ಜ್, ಸಿಎಂ ಸಿದ್ದರಾಮಯ್ಯ ಅವರಿಗೆ ಕೆಪಿಸಿಎಲ್ ಕಚೇರಿಯಲ್ಲಿ ನೀಡಿದರು.

ಬೆಂಗಳೂರು,ಜ.8– ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವತಿಯಿಂದ 2024–25ನೇ ಸಾಲಿನ ಡಿವಿಡೆಂಡ್ 77.17 ಕೋಟಿ ಅನ್ನು ಗುರುವಾರ ಸರ್ಕಾರಕ್ಕೆ ಸಲ್ಲಿಸಲಾಯಿತು.

ಕ್ರೆಡಲ್ 2024–25ನೇ ಸಾಲಿನಲ್ಲಿ 257.25 ಕೋಟಿ ರೂ. ನಿವ್ವಳ ಲಾಭ ಗಳಿಸಿದ್ದು, ಲಾಭದ ಶೇ.30ರಷ್ಟು ಡಿವಿಡೆಂಡ್ 77,17,50,000 ರೂ. ಮೊತ್ತದ ಚೆಕ್ ಅನ್ನು ಇಂಧನ ಸಚಿವ ಕೆ.ಜೆ.ಜಾರ್ಜ್ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಗುರುವಾರ ಕೆಪಿಸಿಎಲ್ ಕಚೇರಿಯಲ್ಲಿ ನೀಡಿದರು. ಇದೇ ಸಂದರ್ಭದಲ್ಲಿ ಕ್ರೆಡಲ್ ವತಿಯಿಂದ ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ 5 ಕೋಟಿ ಮೊತ್ತದ ಚೆಕ್ ಅನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಚಿವರು ಹಸ್ತಾಂತರಿಸಿದರು. ಈ ಸಂದರ್ಭದಲ್ಲಿ ಕ್ರೆಡಲ್ ಅಧ್ಯಕ್ಷರೂ ಆಗಿರುವ ಶಾಸಕ ಟಿ.ಡಿ.ರಾಜೇಗೌಡ, ಇಂಧನ ಇಲಾಖೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ, ಕ್ರೆಡಲ್ ವ್ಯವಸ್ಥಾಪಕ ನಿರ್ದೇಶಕ ಕೆ.ಪಿ.ರುದ್ರಪ್ಪಯ್ಯ ಹಾಗೂ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಠಾಣೆ ಶೌಚಾಲಯದಲ್ಲಿ ನೇಣು ಬಿಗಿದುಕೊಂಡು ಕಾನ್‌ಸ್ಟೇಬಲ್ ಆತ್ಮಹತ್ಯೆ

ಶಿವಮೊಗ್ಗ: ಪೊಲೀಸ್ ಠಾಣೆಯಲ್ಲೇ ಸಿಬ್ಬಂದಿ ಶವವಾಗಿ ಪತ್ತೆಯಾಗಿರುವ ಘಟನೆ ಶಿವಮೊಗ್ಗದಲ್ಲಿ ವರದಿಯಾಗಿದೆ.



ಜಿಲ್ಲಾ ಕೇಂದ್ರ ಶಿವಮೊಗ್ಗದ ಪಶ್ಚಿಮ ಸಂಚಾರ ಪೊಲೀಸ್ ಠಾಣೆಯ ಶೌಚಾಲಯದಲ್ಲಿ ಹೆಡ್ ಕಾನ್‌ಸ್ಟೇಬಲ್ ಮೊಹಮ್ಮದ್ ಜಕಾರಿಯಾ(55) ಶವ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದೆ. ತಿಂಗಳಿಂದ ರಜೆಯಲ್ಲಿದ್ದ ಜಕಾರಿಯಾ 2 ದಿನಗಳ ಹಿಂದೆ ಕರ್ತವ್ಯಕ್ಕೆ ಮರಳಿದ್ದರು ಎಂದು ಪೊಲೀಸರು ತಿಳಿಸಿದ್ದು, ಡೆತ್‌ನೋಟ್‌ನಲ್ಲಿ ಸಹೋದ್ಯೋಗಿಯ ಹೆಸರನ್ನು ಉಲ್ಲೇಖಿಸಿ, ಅವರು ಕಿರುಕುಳ ನೀಡಿದ್ದಾರೆಂದು ಬರೆದಿದ್ದಾರೆ ಎನ್ನಲಾಗಿದೆ. ದೊಡ್ಡಪೇಟೆ ಪೊಲೀಸ್ ಠಾಣೆಯಲ್ಲಿ ಯುಡಿಆರ್ ಪ್ರಕರಣ ದಾಖಲಾಗಿದೆ.

ಕಾಂಗ್ರೆಸ್ ಪ್ರಚಾರ ಸಮಿತಿ ಸಭೆ...



ಮೈಸೂರು ಜಿಲ್ಲಾ ಗ್ರಾಮಾಂತರ ಕಾಂಗ್ರೆಸ್ ಪ್ರಚಾರ ಸಮಿತಿ ವತಿಯಿಂದ ನೂತನವಾಗಿ ಆಯ್ಕೆಯಾಗಿರುವ 14 ಬ್ಲಾಕ್ ಅಧ್ಯಕ್ಷರು, ಉಸ್ತುವಾರಿಗಳು ಜಲದರ್ಶಿನಿ ಅತಿಥಿ ಗೃಹದಲ್ಲಿ ಪಕ್ಷ ಸಂಘಟನೆ ಬಗ್ಗೆ ಮೈಸೂರು ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಮಾವಿನಹಳ್ಳಿ ರವಿ ಅಧ್ಯಕ್ಷತೆಯಲ್ಲಿ ಗುರುವಾರ ಸಭೆ ನಡೆಸಿದರು. ಮೈಸೂರು ಜಿಲ್ಲಾ ವ್ಯಾಪ್ತಿಯ ತಾಲೂಕು ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

ನಾಳೆ ವಿವಿಧೆಡೆ ವಿದ್ಯುತ್ ವ್ಯತ್ಯಯ



ಮೈಸೂರು: ವಾಜಮಂಗಲ ವಿದ್ಯುತ್ ವಿತರಣಾ ಕೇಂದ್ರ, ವಾಜಮಂಗಲ ಐ.ಪಿ ಹಾಗೂ ವರಕೋಡು ವಿದ್ಯುತ್ ವಿತರಣಾ ಕೇಂದ್ರದ ಐ.ಪಿ ಫೀಡರ್‌ನಲ್ಲಿ ರೀ–ಕಂಡಕ್ಟರಿಂಗ್ ಕಾಮಗಾರಿ ಹಮ್ಮಿಕೊಂಡಿರುವುದರಿಂದ ಜನವರಿ 10ರಂದು ಬೆಳಿಗ್ಗೆ 10ರಿಂದ ಸಂಜೆ 6 ಗಂಟೆಯವರೆಗೆ ವರುಣ, ದಂಡಿಕೆರೆ, ಪಿಲ್ಲಹಳ್ಳಿ, ಬಿ.ಟಿ.ಎ ಎನ್‌ಕ್ಲೇವ್, ವೋಸಂಬಾಯನಹಳ್ಳಿ ಹಾಗೂ ಸುತ್ತ–ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಚೆಸ್ಕಾಂ ಪ್ರಕಟಣೆ ತಿಳಿಸಿದೆ.

ಸಕ್ಕರೆ ಕಾರ್ಖಾನೆ ಬಾಯ್ಲರ್ ಸ್ಫೋಟ

ಸಾವಿನ ಸಂಖ್ಯೆ 8ಕ್ಕೆ ಏರಿಕೆ

ಬೆಳಗಾವಿ: ಇಲ್ಲಿನ ಸಕ್ಕರೆ ಕಾರ್ಖಾನೆಯಲ್ಲಿ ಸಂಭವಿಸಿದ ಬಾಯ್ಲರ್ ಸ್ಫೋಟದಲ್ಲಿ ಗಾಯಗೊಂಡಿದ್ದ ನಾಲ್ವರು ಗುರುವಾರ ಮೃತಪಟ್ಟಿದ್ದು, ದುರಂತದಲ್ಲಿ ಸಾವಿನ ಸಂಖ್ಯೆ ಎಂಟಕ್ಕೆ ಏರಿಕೆಯಾಗಿದೆ.



ಗೋಕಾಕ ತಾಲೂಕಿನ ಗೊಡಚಿನಮಲ್ಕಿ ಗ್ರಾಮದ ಭರತ್ ಬಸಪ್ಪ ಸಾರವಾಡಿ(27), ಗೋಕಾಕದ ರಾಘವೇಂದ್ರ ಗಿರಿಯಾಳ್ (35), ಅಥಣಿಯ ಮಂಜು ತೇರದಾಳ (35), ಬೈಲಹೊಂಗಲದ ಅರವಳ್ಳಿಯ ಮಂಜು ಕಾಜಗಾರ(28) ಹಾಗೂ ಬಾಗಲಕೋಟೆ ಜಿಲ್ಲೆಯ ಮರೇಗುದ್ದಿಯ ಗುರು ತಮ್ಮಣ್ಣವರ್ ಸೇರಿದ್ದಾರೆ. ಬೈಲಹೊಂಗಲ ತಾಲೂಕಿನ ಮರಕುಂಬಿ ಬಳಿಯ ಇನಾಮ್‌ದಾರ್ ಸಕ್ಕರೆ ಕಾರ್ಖಾನೆಯಲ್ಲಿ ಬುಧವಾರ ಮಧ್ಯಾಹ್ನ ಕಬ್ಬಿನ ರಸ ಕುದಿಸಲು ಬಳಸುವ 40 ಅಡಿ ಎತ್ತರದ ಪಾತ್ರೆ ದುರಸ್ತಿ ವೇಳೆ ಸ್ಫೋಟ ಸಂಭವಿಸಿ, ಜಮಖಂಡಿಯ ಅಕ್ಷಯ ಚೋಪಡೆ(45), ನೇಸರಗಿಯ ದೀಪಕ್ ಮುನವಳ್ಳಿ(31), ಖಾನಾಪುರ ತಾಲ್ಲೂಕಿನ ಚಿಕ್ಕಮುನವಳ್ಳಿಯ ಸುದರ್ಶನ ಬನೋಶಿ(25) ಸಾವಿಗೀಡಾಗಿದ್ದರು.

ದುರಸ್ತಿಗೆ ಮುಂಚಿತವಾಗಿ ಘಟಕವನ್ನು ಮುಚ್ಚಲಾಗಿತ್ತು. ಆದಾಗ್ಯೂ, ಕಾರ್ಮಿಕರು ನಿರ್ವಹಣೆಗಾಗಿ ಕರ್ಫ್ಯೂ ಗೋಡೆಯಿಂದ ನಟ್ ಮತ್ತು ಬೋಲ್ಟ್‌ಗಳನ್ನು ತೆಗೆಯುತ್ತಿದ್ದಾಗ, ಬಿಸಿನೀರು ಇದ್ದಕ್ಕಿದ್ದಂತೆ ವಾಲ್ವ್ ಮೂಲಕ ಚಿಮ್ಮಿ ಕೆಳಗೆ ಕೆಲಸ ಮಾಡುತ್ತಿದ್ದವರ ಮೇಲೆ ಬಿದ್ದಿದೆ. ಆಗ ಅವರು ನೋವಿನಿಂದ ಕಿರುಚುತ್ತಿದ್ದರು ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ. ಸಹೋದ್ಯೋಗಿಗಳು ಆಡಳಿತ ಮಂಡಳಿಗೆ ಮಾಹಿತಿ ನೀಡಿದ ಕೂಡಲೇ ಆಂಬ್ಯುಲೆನ್ಸ್ ವ್ಯವಸ್ಥೆ ಮಾಡಿ ಗಾಯಾಳುಗಳನ್ನು ಹತ್ತಿರದ ಆಸ್ಪತ್ರೆಗೆ ಸಾಗಿಸಲಾಗಿದೆ. ಆದರೆ ಮಾರ್ಗಮಧ್ಯೆ ಇಬ್ಬರು ಕಾರ್ಮಿಕರು ಮೃತಪಟ್ಟು, ನಂತರ ಇನ್ನೊಬ್ಬರು ಸಾವಿಗೀಡಾದರು. ಬೆಳಗಾವಿ ಖಾಸಗಿ ಆಸ್ಪತ್ರೆಯಲ್ಲಿದ್ದ ಐವರೂ ಈಗ ಮೃತಪಟ್ಟಿದ್ದು, ಘಟನೆ ಸಂಬಂಧ ತನಿಖೆ ಮುಂದುವರೆದಿದೆ.

ಸಾರ್ವಜನಿಕ ಪ್ರಕಟಣೆ

ಸಾರ್ವಜನಿಕರಿಗೆ ಈ ಮೂಲಕ ತಿಳಿಯಪಡಿಸುವುದೇನೆಂದರೆ, ಈ ಕೆಳಗೆ ವಿವರಿಸಿರುವ ಷೆಡ್ಯೂಲ್ ಸ್ವತ್ತಿನ ಮಾಲೀಕರಾದ ಶ್ರೀ ಶಂಕರ್ ಲಾಲ್ ರವರ ಮಗ, ಶ್ರೀ ಹಿಮ್ಮತ್ ಪ್ರಕಾಶ್ ಜೈನ್, ರವರು ಷೆಡ್ಯೂಲ್ ಸ್ವತ್ತನ್ನು ನನ್ನ ಕಕ್ಷಿದಾರರಿಗೆ ಮಾರಾಟ ಮಾಡಲು ಅಪೇಕ್ಷಿಸಿರುತ್ತಾರೆ. ಅದರಂತೆ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಶುದ್ಧ ಕ್ರಯಕ್ಕೆ ಪಡೆಯಲು ಸಿದ್ಧರಿರುವುದರಿಂದ ಸದರಿ ಸ್ವತ್ತಿನ ಮೇಲೆ ಯಾರಿಗಾದರೂ ಬ್ಯಾಂಕ್ ಮತ್ತು ಆರ್ಥಿಕ ಸಂಸ್ಥೆಗಳನ್ನು ಒಳಗೊಂಡಂತೆ, ಯಾವುದೇ ರೀತಿಯ ಹಕ್ಕು, ಅಧಿಕಾರ, ಹಿತಾಸಕ್ತಿ, ಆಕ್ಷೇಪಣೆ, ಸಿವಿಲ್ ವ್ಯಾಜ್ಯ, ತಂಟೆ–ತಕರಾರುಗಳು ಇದ್ದಲ್ಲಿ ಈ ಪ್ರಕಟಣೆ ಪ್ರಕಟವಾದ ದಿನದಿಂದ **07** (ಏಳು) ದಿನಗಳ ಒಳಗಾಗಿ ತಮ್ಮ ಆಕ್ಷೇಪಣೆಗಳನ್ನು ಲಿಖಿತ ರೂಪದಲ್ಲಿ ಅಥವಾ ಖುದ್ದಾಗಿ ಸೂಕ್ತ ದಾಖಲಾತಿಗಳೊಂದಿಗೆ ಈ ಕೆಳಗೆ ನಮೂದಿಸಿರುವ ಕಛೇರಿ ವಿಳಾಸಕ್ಕೆ ಸಲ್ಲಿಸಬಹುದಾಗಿದೆ. ತಪ್ಪಿದಲ್ಲಿ ನನ್ನ ಕಕ್ಷಿದಾರರು ಷೆಡ್ಯೂಲ್ ಸ್ವತ್ತನ್ನು ಶುದ್ಧಕ್ರಯಕ್ಕೆ ಪಡೆದುಕೊಳ್ಳುತ್ತಾರೆ. ಮೇಲ್ಕಂಡ ಅವಧಿ ನಂತರ ಬರುವ ಆಕ್ಷೇಪಣೆ, ತಂಟೆ–ತಕರಾರುಗಳಿಗೆ ನನ್ನ ಕಕ್ಷಿದಾರರು ಬಾಧ್ಯರಾಗುವುದಿಲ್ಲ ಎಂಬ ಅಂಶವನ್ನು ಈ ಮೂಲಕ ತಿಳಿಯಪಡಿಸಲಾಗಿದೆ.

ಷೆಡ್ಯೂಲ್ ಸ್ವತ್ತಿನ ವಿವರ

ಮೈಸೂರು ಸಿಟಿ, ಕೆ.ಆರ್. ಮೊಹಲ್ಲಾ, ದೇವಾಂಬ ಅಗ್ರಹಾರದಲ್ಲಿರುವ ನಿವೇಶನ ಸಂಖ್ಯೆ **410/1** ಹೊಸ ನಂ. **K 33/1**, ಹಾಲಿ ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಗೆ ಒಳಪಟ್ಟು ಇ–ಖಾತಾ ನಂ. **1-2-512-410/1**, ವಾರ್ಡ್ ನಂ. **1**, ಹಳೆಯ ಮತ್ತು ನಿರ್ದರಣಾ ಸಂಖ್ಯೆ. **410/1 K 33/1** ವುಳ್ಳ ಸ್ವತ್ತಿನ ವಿಸ್ತೀರ್ಣ ಪೂರ್ವ ಪಶ್ಚಿಮ **19.202438** ಮೀಟರ್ ಮತ್ತು ಉತ್ತರ ದಕ್ಷಿಣ **4.572009** ಮೀಟರ್, ಒಟ್ಟು ವಿಸ್ತೀರ್ಣ **87.793720** ಚದರ ಮೀಟರ್ಸ್ ಹೊಂದಿರುವ ಸ್ವತ್ತಿಗೆ ಚಕ್ಕುಬಂದಿ: ಪೂರ್ವಕ್ಕೆ: ರಸ್ತೆ, ಪಶ್ಚಿಮಕ್ಕೆ: ಖಾಸಗಿ ಸ್ವತ್ತಿನ ನಂ. **410/A** ತದನಂತರ ಗಲ್ಲಿ, ಉತ್ತರಕ್ಕೆ: ಖಾಸಗಿ ಸ್ವತ್ತಿನ ನಂ. **409**, ಮತ್ತು ದಕ್ಷಿಣಕ್ಕೆ: ಖಾಸಗಿ ಸ್ವತ್ತಿನ. ನಂ. **410.**

ಸಹಿ/– ಶ್ರೀಲತಾ ದೀಕ್ಷಿತ್, ವಕೀಲರು
ಎಸ್‌ಎಲ್‌ಡಿ ಲಾ ಫರ್ಮ್
ನಂ. 1416, ನಾರಾಯಣಶಾಸ್ತ್ರಿ ರಸ್ತೆ,
ಸಪ್ನ ಬುಕ್ ಹೌಸ್ ಹತ್ತಿರ, ಮೈಸೂರು.
ಮೊ: 9844640641
email: sldlawfirm2021@gmail.com

ಮೈಸೂರು ಮಿತ್ರ ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಆದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.

-ಜಾಹೀರಾತು ವ್ಯವಸ್ಥಾಪಕರು

ತಾಲ್ಲೂಕು ಪಂಚಾಯತ್ ಕಾರ್ಯಾಲಯ, ಹುಣಸೂರು, ಮೈಸೂರು ಜಿಲ್ಲೆ.

E mail ID:- hunsur.tp@gmail.com

ಸಂ:ತಾಪಂಹು/ಇಎಸ್‌ಟಿ/ಸಿ3/2025–26 ದಿನಾಂಕ: 06.01.2026

ಟೆಂಡರ್ ಪ್ರಕಟಣೆ

(ಇ–ಪ್ರಕ್ಯೂರ್‌ಮೆಂಟ್ ಪೋರ್ಟಲ್ ಮುಖಾಂತರ ಮಾತ್ರ)

ತಾಲ್ಲೂಕು ಪಂಚಾಯಿತಿ, ಹುಣಸೂರು ಕಾರ್ಯಾಲಯದ ಸಹಾಯಕ ನಿರ್ದೇಶಕರು (ಗ್ರಾ.ಉ) ರವರ ಕಛೇರಿ ಉಪಯೋಗಕ್ಕೆ ದಿ: 01.02.2026 ರಿಂದ ದಿ: 31.01.2027 ರವರೆಗೆ ಒಂದು ವರ್ಷದ ಅವಧಿಗೆ 01 ಹವಾನಿಯಂತ್ರಿತ ರಹಿತ ವಾಹನವನ್ನು ಹೊರಗುತ್ತಿಗೆ ಆಧಾರದ ಮೇಲೆ ಬಾಡಿಗೆಗೆ ಪಡೆಯಲು ವಿವಿಧ ಸಂಸ್ಥೆಗಳಿಂದ ಇ–ಪ್ರಕ್ಯೂರ್ಮೆಂಟ್ ಮುಖಾಂತರ ಟೆಂಡರ್ ಆಹ್ವಾನಿಸಲಾಗಿದೆ ಟೆಂಡರ್ ನಮೂನೆಗಳಿಗಾಗಿ ಮತ್ತು ಟೆಂಡರ್ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್ http://www.kppp.karnataka.gov.in ನಲ್ಲಿ ನೋಡಬಹುದಾಗಿದೆ.

ಕ್ರಸಂ	ಸಾಮಗ್ರಿಯ ಮಾದರಿ	ಬೇಕಾಗಿರುವ ಸಂಖ್ಯೆ
01	(ಹವಾನಿಯಂತ್ರಿತ ರಹಿತ) NON A/C CAR	01

ಟೆಂಡರ್ ಪ್ರೋಸೆಸಿಂಗ್‌ಗೆ ಇ–ಪೋರ್ಟಲ್‌ನಲ್ಲಿ ನಿಯಮಗಳನ್ವಯ ಇದ್ದು, ಟೆಂಡರ್ ಷರತ್ತು ನಿಬಂಧನೆಗಳು ಹಾಗೂ ಹೆಚ್ಚಿನ ಮಾಹಿತಿಯನ್ನು ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯಿತಿ, ಹುಣಸೂರುರವರ ಕಛೇರಿ ಅಥವಾ http://www.kppp.karnataka.gov.in ಇವರ ವೆಬ್‌ಸೈಟ್‌ನಲ್ಲಿ ನೋಡಬಹುದಾಗಿದೆ.

1) ಟೆಂಡರ್ ದಾಖಲೆಗಳು ಚಾಲ್ತಿಗೆ ಬರುವ ದಿ: 07.01.2026 ರಿಂದ 16.01.2026 **2)** ಟೆಂಡರ್ ಅರ್ಜಿ ಹಾಕಲು ಅಂತಿಮ ದಿ: 16.01.2026 ಸಂಜೆ 4.30 ಗಂಟೆಯವರೆಗೆ. **3)** ತಾಂತ್ರಿಕ ಬಿಡ್ ತೆರೆಯುವ ದಿ: 17.01.2026ರ ಸಂಜೆ 05.00 ಗಂಟೆಯ ನಂತರ. **4)** ಆರ್ಥಿಕ ಬಿಡ್ ತೆರೆಯುವ ದಿ: 17.01.2026 ರ ಸಂಜೆ 05.00 ಗಂಟೆಯ ನಂತರ. **5)** ಒಟ್ಟು ಟೆಂಡರ್ ಮೊತ್ತ ರೂ.4.50.000 + Taxes.

ಸಹಿ/– ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಹುಣಸೂರು.

DIPR/DDMYS/1476/KSMCA/838/2025-26